ಸಂಪುಟ: 21, ಸಂಚಿಕೆ: 277, ಪುಟಗಳು: 8, ಸೋಮವಾರ, 15 ಜುಲೈ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3




### ಸುಭಾಷಿತ

ಮನಸ್ಸಿನ ವಿಕಸವು ಮಾನವನ ಅಸ್ತಿತ್ವದ ಅಂತಿಮ ಗುರಿಯಾಗಿರಬೇಕು.
। ಡಾ.ಬಿ.ಆರ್.ಅಂಬೇಡ್ಕರ್

### ಪಂಚಾಂಗ

(ಸೋಮವಾರ 15, ಜುಲೈ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು
- ಆಷಾಢ ಮಾಸ, ಶುಕ್ಲ ಪಕ್ಷ,
- ವಾರ: ಸೋಮವಾರ, ತಿಥಿ:ನವಮಿ
- ನಕ್ಷತ್ರ: ಸ್ವಾತಿ
- ರಾಹುಕಾಲ: 7:40 ರಿಂದ 9:16
- ಗುಳಿಕಕಾಲ: 2:04 ರಿಂದ 3:40
- ಯಮಗಂಡಕಾಲ: 10:52 ರಿಂದ 12:28

## ಸಂಕ್ಷಿಪ್ತ ಸುದ್ದಿ

### 187 ಕೋಟಿ ಲೂಟಿಗೆ ನಕಲಿ ವ್ಯಕ್ತಿಯನ್ನು ಸೃಷ್ಟಿಸಿ ಹುದ್ದೆ ನೀಡಿದ್ದ ಎಂಡಿ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ



ಕೋಟ್ಯಂತರ ರೂ. ಹಣ ಲೂಟಿ ಮಾಡಲು ನಕಲಿ ಹುದ್ದೆಯನ್ನೇ ಸೃಷ್ಟಿಸಿದ ಘಟನೆ ಈಗ ಬೆಳಕಿಗೆ ಬಂದಿದೆ.

ಹೌದು. ವಾಲ್ಮೀಕಿ ಅಭಿವೃದ್ಧಿ ನಿಗಮ ಬಹುಕೋಟಿ ಹಗರಣ ಬಗೆದಷ್ಟು ಬಯಲಾಗುತ್ತಿದೆ. ಜಾರಿ ನಿರ್ದೇಶನಾಲಯದ ಪ್ರವೇಶದ ಬಳಿಕ ಒಂದೊಂದೇ ಸ್ಫೋಟಕ ಮಾಹಿತಿಗಳು ಹೊರ ಬರುತ್ತಿವೆ. ಪುಟ 2

### ಡಿವೈಡರ್‌ಗೆ ಕಾರು ಡಿಕ್ಕಿ, ಇಬ್ಬರು ಸಾವು



**ಚಿತ್ರದುರ್ಗ:** ಚಾಲಕನ ನಿಯಂತ್ರಣ ತಪ್ಪಿ ಕಾರು ಡಿವೈಡರ್‌ಗೆ ಡಿಕ್ಕಿಯಾದ ಪರಿಣಾಮ ಇಬ್ಬರು ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ. ಚಿತ್ರದುರ್ಗದ ತಳಕು ಹೈವೆ ಬ್ರಿಡ್ಜ್ ಸಮೀಪದಲ್ಲಿ ಅಪಘಾತ ಸಂಭವಿಸಿದೆ. ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ತಳಕು ಗ್ರಾಮದಲ್ಲಿ ದುರ್ಘಟನೆ ನಡೆದಿದೆ. ಬಳ್ಳಾರಿ ಮೂಲದ ಗೋಪಿನಾಥ್ (52), ಲಲಿತಮ್ಮ (47) ಮೃತ ದುರ್ದೈವಿಗಳು. ಬೆಂಗಳೂರಿನಲ್ಲಿ ಉಪನಯನ ಕಾರ್ಯಕ್ರಮ ಮುಗಿಸಿ, ಬಳ್ಳಾರಿಗೆ ತೆರಳುವ ವೇಳೆ ಅಪಘಾತ ನಡೆದಿದೆ. ನಿದ್ರೆಯ ಮಂಪರಿನಲ್ಲಿ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಕಾರು ಡಿಕ್ಕಿಯಾಗಿದೆ ಎನ್ನಲಾಗಿದೆ. ಘಟನೆಯಲ್ಲಿ ಶ್ರೇಯ, ಶ್ರೀನಿವಾಸ್ ಹಾಗೂ ಚಾಲಕ ಸುರೇಶ್ ಸ್ಥಿತಿ ಗಂಭೀರವಾಗಿದೆ. ಗಾಯಾಳುಗಳನ್ನ ಚಳ್ಳಕೆರೆ ಸಾರ್ವಜನಿಕ ಆಸ್ಪತ್ರೆ ರವಾನಿಸಲಾಗಿದೆ. ಸ್ಥಳಕ್ಕೆ ತಳಕು ಪಿಎಸ್ಐ ಲೋಕೇಶ್ ಭೇಟಿ ನೀಡಿ ಪರಿಶೀಲಿಸಿದ್ದಾರೆ.

### ಇಂದಿನಿಂದ ವಿಧಾನ ಮಂಡಲ ಅಧಿವೇಶನ, ರಂಗೇರಲಿರುವ ಕೈ- ಕಮಲ ಕದನ

# ಚಕಮಕಿಗೆ ಅಸ್ತ್ರ- ಪ್ರತ್ಯಸ್ತ್ರಗಳು ಸಜ್ಜು



**ಬೆಂಗಳೂರು:** ವಿಧಾನ ಮಂಡಲದ ಉಭಯ ಸದನಗಳ ಕಲಾಪ ಸೋಮವಾರ (ಜುಲೈ 15) ಆರಂಭವಾಗಲಿದ್ದು, ಒಂಬತ್ತು ದಿನ ನಡೆಯಲಿದೆ. ಆಡಳಿತ ಪಕ್ಷದ ವಿರುದ್ಧ ಸಮರ ಸಾರಲು ಪ್ರತಿಪಕ್ಷಗಳು ಸಜ್ಜಾಗಿವೆ. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟ ಮುಡಾ ಹಗರಣ, ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ, ಬೆಲೆ ಏರಿಕೆ ಸೇರಿದಂತೆ ವಿವಿಧ ವಿಚಾರಗಳನ್ನು ಪ್ರಸ್ತಾವಿಸಿ ಸರ್ಕಾರದ ವಿರುದ್ಧ ಮುಗಿಬೀಳಲಿದೆ. ಸಿದ್ದರಾಮಯ್ಯ ಸರ್ಕಾರ ಕೂಡ ನಿನ್ನೆ ಅಧಿಕಾರಿಗಳ ಸಭೆ ನಡೆಸಿ ಪ್ರತ್ಯುತ್ತರ ನೀಡಲು ಸೂಕ್ತ ಸಿದ್ಧತೆ ಮಾಡಿಕೊಂಡಿದೆ.

**ಅಧಿಕಾರಿಗಳ ಸಭೆ:** ಅಧಿವೇಶನಕ್ಕೆ ಪೂರ್ವಭಾವಿಯಾಗಿ ನಿನ್ನೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಿಎಂ ಸಿದ್ದರಾಮಯ್ಯ, ವಿಧಾನ ಮಂಡಲ ಅಧಿವೇಶನ ಚರ್ಚೆಗೆ ಸಮರ್ಪಕ ಉತ್ತರ ನೀಡಲು ಅಧಿಕಾರಿಗಳಿಗೆ ಸೂಚಿಸಿದರು. ಅಧಿವೇಶನದಲ್ಲಿ ಚರ್ಚೆಯಾಗುವ ವಿಷಯಗಳಿಗೆ ಸಮರ್ಪಕ ಉತ್ತರ ನೀಡಲು ಸಿದ್ಧರಾಗಿರುವಂತೆ, ಅಧಿವೇಶನದಲ್ಲಿ ಖುದ್ದು ಹಾಜರಿದ್ದು ಸಚಿವರಿಗೆ ತಮ್ಮ ಇಲಾಖೆಗಳ ವಿಷಯಗಳ ಕುರಿತ ಮಾಹಿತಿ ಒದಗಿಸಬೇಕು ಎಂದು ಸಿಎಂ ನಿರ್ದೇಶನ ನೀಡಿದರು.

ಸಿಎಂ ನಿನ್ನೆ ಎಲ್ಲ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳ ಸಭೆ ನಡೆಸಿ ವಿವಿಧ ವಿಷಯಗಳ ಕುರಿತು ಚರ್ಚಿಸಿದರು. ವಿವಿಧ ಇಲಾಖೆಗಳಲ್ಲಿ ಚರ್ಚೆಗೆ ಬರುವ ಸಾಧ್ಯತೆ ಇರುವ ವಿಷಯಗಳ ಕುರಿತು ಇಲಾಖಾ ಕಾರ್ಯದರ್ಶಿಗಳಿಂದ ಮುಖ್ಯಮಂತ್ರಿಗಳು ಸವಿಸ್ತಾರವಾಗಿ ಸಿಎಂ ಮಾಹಿತಿ ಪಡೆದರು. ಚರ್ಚೆಯ ಸಾಧ್ಯತೆ ಇರುವ ವಿಷಯಗಳ ಕುರಿತು ದತ್ತಾಂಶಗಳನ್ನು ಸಂಗ್ರಹಿಸಲು ಸಹ ಸೂಚನೆ ನೀಡಿದರು. ಎಲ್ಲ ಕಾರ್ಯದರ್ಶಿಗಳೂ, ಇಲಾಖಾ ಮುಖ್ಯಸ್ಥರು ಅಧಿವೇಶನದಲ್ಲಿ ಹಾಜರಿರಬೇಕು, ಸಚಿವರಿಗೆ ಸಮರ್ಪಕವಾಗಿ ಮಾಹಿತಿ ನೀಡಬೇಕು. ಆಯಾ ಇಲಾಖಾ ಸಚಿವರು ಚರ್ಚೆಯ ವಿಷಯಗಳಿಗೆ ಉತ್ತರಿಸಬೇಕು, ಅಗತ್ಯವಿದ್ದರೆ ನಾನು ಮಧ್ಯಪ್ರವೇಶಿಸುತ್ತೇನೆ ಎಂದು ತಿಳಿಸಿದರು. ಸಭೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯೆಲ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್ ಹಾಗೂ ಇತರ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

**ಸಮರ ಸಾರಲು ಸಜ್ಜಾಗಿರುವ ಮೈತ್ರಿಕೂಟ:** ಸರ್ಕಾರದ ವಿರುದ್ಧ ಮುಗಿಬೀಳಲು ಸಜ್ಜಾಗಿರುವ ಬಿಜೆಪಿ, ಜೆಡಿಎಸ್‌ಗಳು ಮುಡಾ ಹಗರಣ, ವಾಲ್ಮೀಕಿ ನಿಗಮ ಹಗರಣಗಳನ್ನೇ ಪ್ರಮುಖ ಅಸ್ತ್ರವಾಗಿ ಹಿಡಿದು ಸಿಎಂ ಅವರನ್ನು ಟಾರ್ಗೆಟ್ ಮಾಡಲಿವೆ. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ 187 ಕೋಟಿ ಹಗರಣ ಸರ್ಕಾರಕ್ಕೆ ದೊಡ್ಡ ಮಟ್ಟದ ಮುಜುಗರ ತಂದಿದೆ. ಇದು ಈ ಬಾರಿಯ ಸರ್ಕಾರದ ಮೊದಲ ಬಹು ಕೋಟಿ ಹಗರಣ. ಪ್ರಕರಣ ಸಂಬಂಧ ಮಾಜಿ ಸಚಿವ ನಾಗೇಂದ್ರ ಬಂಧನ ಆಗಿದ್ದು, ಇನ್ನೂ ಹಲವರ ಬಂಧನ ಮಾಡುವ ಸಾಧ್ಯತೆ ಇದೆ. ನಿಗಮದ ಅಧ್ಯಕ್ಷ, ಶಾಸಕ ದದ್ದಲ್ ರಾಜೀನಾಮೆ ನೀಡದಿರುವ ಬಗ್ಗೆ ಪ್ರತಿಪಕ್ಷ ಧ್ವನಿ ಎತ್ತಲಿದೆ.

ಇನ್ನು ಮುಡಾ ಹಗರಣ ನಾಲ್ಕುವರೆ, ಐದು ಸಾವಿರ ಕೋಟಿ ರೂಪಾಯಿಗಳ ಹಗರಣ. ಇಲ್ಲಿ ಸ್ವತಃ ಸಿಎಂ ಕುಟುಂಬದ ಮೇಲೆ ಭ್ರಷ್ಟಾಚಾರ ಆರೋಪವಿದೆ. ನಿಯಮ ಬಾಹಿರವಾಗಿ 14 ಬದಲಿ ನಿವೇಶನ ಪಡೆದಿರುವ, ಇತರೆ ರಾಜಕಾರಣಿಗಳ ವಿರುದ್ಧವೂ ಅಕ್ರಮ ಸೈಟ್ ಪಡೆದಿರುವ ಆರೋಪ ಇದೆ. ಪುಟ 2

## ಉಚಿತ ಗೃಹಜ್ಯೋತಿ ವಿದ್ಯುತ್ ಬಳಸುತ್ತಿರೋರಿಗೆ ಶಾಕ್!

**ಬೆಂಗಳೂರು:** ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಚುನಾವಣೆಗೂ ಮುನ್ನ ಐದು ಗ್ಯಾರಂಟಿಗಳನ್ನು ನೀಡುವುದಾಗಿ ಘೋಷಿಸಿತ್ತು. ನಂತರ ಅಧಿಕಾರಕ್ಕೆ ಬರುತ್ತಿದ್ದಂತೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ತಂದಿತ್ತು ಕೂಡ. ಆ ಗ್ಯಾರಂಟಿಗಳ ಪೈಕಿ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆ ಕೂಡ ಪ್ರಮುಖವಾದುದು.

ಗೃಹಜ್ಯೋತಿ ಗ್ಯಾರಂಟಿ ಯೋಜನೆ ಜಾರಿಗೆ ಬರುತ್ತಿದ್ದಂತೆ ರಾಜ್ಯಾದ್ಯಂತ ಮೂಲೆ ಮೂಲೆಯಲ್ಲಿ ಈ ಯೋಜನೆಯ ಪ್ರಯೋಜನವನ್ನು ಪಡೆದು ಈಗಲೂ




ಉಚಿತ ವಿದ್ಯುತ್ ಬಳಕೆ ಮಾಡುತ್ತಿದ್ದಾರೆ. ಆದರೆ ಇದೀಗ ಗೃಹಜ್ಯೋತಿ ಯೋಜನೆಯಲ್ಲಿ ಉಚಿತ ಕರೆಂಟ್ ಬಳಸುತ್ತಿರುವವರಿಗೆ ಶಾಕಿಂಗ್ ನ್ಯೂಸ್ ಹೊರಬಿದ್ದಿದೆ. ಮೀಟರ್ ರೀಡಿಂಗ್ ವೇಳೆ ಗ್ರಾಹಕರು ಎಚ್ಚರದಿಂದ ಇರಬೇಕಾಗಿದ್ದು, ಸ್ವಲ್ಪ ಯಾಮಾರಿದ್ರೂ ಕೂಡ ನಿಮ್ಮ ಮನೆಗೆ ಸಾವಿರ ಸಾವಿರ ಕರೆಂಟ್ ಬಿಲ್ ಬರುತ್ತೆ.

ಹೌದು.. ಸದ್ಯ ರಾಜ್ಯ ಜನತೆಯ ಸ್ಥಿತಿ ದೇವರು ವರ ಕೊಟ್ರೂ ಪೂಜಾರಿ ಕೊಡ್ತಿಲ್ಲ ಅನ್ನುವಂಥ ಪರಿಸ್ಥಿತಿ ನಿರ್ಮಾಣವಾಗಿದ್ದು, ಸರ್ಕಾರ ಉಚಿತ ವಿದ್ಯುತ್ ನೀಡುತ್ತಿದ್ದರೂ ಸಹ ವಿದ್ಯುತ್ ಇಲಾಖೆಯ ಯಡವಟ್ಟಿನಿಂದ ಪುಟ 2

### ಪತ್ನಿಯ ಅನೈತಿಕ ಸಂಬಂಧದ ಶಂಕೆ

## ಡ್ರೋನ್ ಕ್ಯಾಮರಾ ಬಳಸಿ ಸಾಕ್ಷಿ ಸಮೇತ ಪತ್ತೆ ಹಚ್ಚಿದ ಪತಿರಾಯ

**ಚೀನಾ:** ಅಕ್ರಮ ಸಂಬಂಧಗಳು ಸುಖವಾಗಿ ಸಂಸಾರ ನಡೆಸುತ್ತಿರುವರ ಜೀವನಕ್ಕೆ ಕೊಳ್ಳಿ ಇಟ್ಟಂತೆ. ಅದು ಅನೇಕ ದಂಪತಿಗಳನ್ನು ದೂರ ಮಾಡಿದೆ, ಸಾಕಷ್ಟು ಸುಂದರ ಸಂಸಾರಗಳನ್ನು ಒಡೆದು ಹಾಕಿದೆ. ವಿವಾಹೇತರ ಸಂಬಂಧಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿದ್ದು, ಮದುವೆಯಾದ ಗಂಡಸು ಇನ್ನೊಬ್ಬ ಮಹಿಳೆಯ ಜೊತೆ

ಹೆಂಗಸು ಇನ್ನೊಬ್ಬ ಪುರುಷನ ಜೊತೆ ಅಕ್ರಮ ಸಂಬಂಧ ಇಟ್ಟುಕೊಂಡಂತಹ ಸುದ್ದಿಗಳು ಆಗಾಗ್ಗೆ ಕೇಳಿ ಬರುತ್ತಿರುತ್ತವೆ. ಇದೀಗ ಅಂತಹದೇ ಪ್ರಕರಣವೊಂದು ಬೆಳಕಿಗೆ ಬಂದಿದ್ದು, ಪತ್ನಿಯ ಅಕ್ರಮ ಸಂಬಂಧದ ಬಗ್ಗೆ ಶಂಕೆಯನ್ನು ಹೊಂದಿದ್ದ ಪತಿರಾಯ ಡ್ರೋನ್ ಕ್ಯಾಮೆರಾ ಬಳಸಿ



ಆಕೆಯ ಕಳ್ಳಾಟವನ್ನು ರೆಡ್ ಹ್ಯಾಂಡ್ ಆಗಿ ಪತ್ತೆ ಹಚ್ಚಿದ್ದು, ಇದೀಗ ಇದೇ ಸಾಕ್ಷ್ಯದ ಆಧಾರದ ಮೇಲೆ ಆಕೆಗೆ ಡಿವೋರ್ಸ್ ನೀಡಲೂ ಮುಂದಾಗಿದ್ದಾನೆ. ಪುಟ 2

### ನಾಗೇಂದ್ರ ಆದಾಯದ ಮೂಲ ಕೆದಕಲು

## ಮುಂದಾದ ಇಡಿ

**ಬೆಂಗಳೂರು:** ವಾಲ್ಮೀಕಿ ನಿಗಮದಲ್ಲಿ ನಡೆದಿರುವ 187 ಕೋಟಿ ರೂ. ಹಗರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ನಾಗೇಂದ್ರ ಅವರ ಆದಾಯದ ಮೂಲ ಕೆದಕಲು ಜಾರಿ ನಿರ್ದೇಶನಾಲಯ ಮುಂದಾಗಿದೆ.

2023ರ ವಿಧಾನಸಭೆ ಚುನಾವಣೆ ವೇಳೆ ನಾಗೇಂದ್ರ ಸಲ್ಲಿಕೆ ಮಾಡಿರುವ ಅಫಿಡವಿಟ್ ಹಾಗೂ ದಾಳಿ ವೇಳೆ ಸಿಕ್ಕಿದ ಆಸ್ತಿ ಪತ್ರಗಳನ್ನು ತಾಳೆ ಮಾಡಲು ಮಂದಾಗಿದೆ ಎಂಬ ವಿಚಾರ ಮೂಲಗಳಿಂದ ತಿಳಿದು ಬಂದಿದೆ.

**ನಾಗೇಂದ್ರ ಆಸ್ತಿ ಎಷ್ಟಿದೆ?:** ಚುನಾವಣೆ ಸಮಯದಲ್ಲಿ ಒಟ್ಟು 17 ಕೋಟಿ 20 ಲಕ್ಷಕ್ಕೂ ಅಧಿಕ ಆಸ್ತಿಯನ್ನು ನಾಗೇಂದ್ರ ಘೋಷಿಸಿದ್ದರು. ವಾಹನ, ಚಿನ್ನಾಭರಣ ಸೇರಿ 12.35 ಕೋಟಿ ರೂ. ಚರಾಸ್ತಿ, 4.88 ಕೋಟಿ ರೂ. ಸ್ಥಿರಾಸ್ತಿಯನ್ನು ಘೋಷಿಸಿದ್ದರು.



ಬ್ಯಾಂಕ್ ಖಾತೆ, ಇನ್ಶೂರೆನ್ಸ್, ಖಾಸಗಿ ಕಂಪನಿಯಲ್ಲಿ ಹೂಡಿಕೆ ಮಾಡಿರುವ ನಾಗೇಂದ್ರ ಸಿರಗುಪ್ಪ ತಾಲೂಕಿನ ಉಪ್ಪಾರ ಹೊಸಹಳ್ಳಿಯಲ್ಲಿ 4.25 ಎಕರೆ ಜಮೀನು, ಬಳ್ಳಾರಿ ನಗರದ ನೆಹರು ಕಾಲೋನಿಯಲ್ಲಿ ಫ್ಲ್ಯಾಟ್, ಬೆಂಗಳೂರಿನ ಹೆಚ್‌ಎಸ್ ಆರ್ ಲೇಔಟ್‌ನಲ್ಲಿ ಫ್ಲ್ಯಾಟ್, ಬಿಇಎಲ್ ರಸ್ತೆಯಲ್ಲಿ ಫ್ಲ್ಯಾಟ್ ಹೊಂದಿದ್ದಾರೆ.

ತನಿಖೆಯ ವೇಳೆ ಈಗಿನ ಆಸ್ತಿ ಮತ್ತು 2023ರ ಅಫಿಡವಿಟ್‌ನಲ್ಲಿರುವ ಆಸ್ತಿ ತಾಳೆ ಹಾಕಿದಾಗ ವ್ಯತ್ಯಾಸ ಕಂಡುಬಂದಲ್ಲಿ ನಾಗೇಂದ್ರಗೆ ಸಂಕಷ್ಟ ಎದುರಾಗಲಿದೆ.

### ರಾಜ್ಯಾದ್ಯಂತ ಮುಂದಿನ 5 ದಿನ ಭಾರೀ ಮಳೆ

**ಬೆಂಗಳೂರು:** ರಾಜ್ಯದಾದ್ಯಂತ ಮುಂದಿನ 5 ದಿನ ಭಾರೀ ಮಳೆಯ ಎಚ್ಚರಿಕೆಯನ್ನು ಭಾರತೀಯ ಹವಾಮಾನ ಇಲಾಖೆ ನೀಡಿದೆ.ಕರಾವಳಿಯಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಕರಾವಳಿಯ ಮೂರು ಜಿಲ್ಲೆಗಳಿಗೂ ಇಂದು ಹಾಗೂ ನಾಳೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಪುಟ 2



### ಬೆಂಗಳೂರು ವೈಟ್ ಟಾಪಿಂಗ್ ಕಾಮಗಾರಿ

## ಈ ರಸ್ತೆಗಳಲ್ಲಿ ಸಂಚಾರ ನಿರ್ಬಂಧ

**ಬೆಂಗಳೂರು:** ಬೆಂಗಳೂರು ನಗರದ ಕೆಲವೆಡೆ ರಸ್ತೆಗಳಿಗೆ ವೈಟ್ ಟಾಪಿಂಗ್ ಮಾಡಲು ಸರ್ಕಾರ ಮುಂದಾಗಿದ್ದು, ಸುಮಾರು 150 ಕಿಮೀ ವ್ಯಾಪ್ತಿಯ ವೈಟ್ ಟಾಪಿಂಗ್ ಕಾಮಗಾರಿಗೆ ಇಂದು ಚಾಲನೆ ದೊರೆಯಲಿದೆ. ಕಾಮಗಾರಿ ನಡೆಯುವ ಕೆಲ ರಸ್ತೆಗಳಲ್ಲಿ ಸಂಚಾರ ನಿರ್ಬಂಧ ಹೇರಲಾಗಿದ್ದು, ಪರ್ಯಾಯ ಮಾರ್ಗಗಳ ಬಗ್ಗೆ ಸಂಚಾರ ಪೊಲೀಸರು ಮಾಹಿತಿ ನೀಡಿದ್ದಾರೆ.

ಬೆಂಗಳೂರು ಟ್ರಾಫಿಕ್ ಪೊಲೀಸರು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಟ್ರಾಫಿಕ್ ಅಡ್ವೈಸರಿ ಬಿಡುಗಡೆ ಮಾಡಿದ್ದು, ಮಾರ್ಗ ಬದಲಾವಣೆಯ ವಿವರ ಇಲ್ಲಿದೆ.

**ಸಂಚಾರ ನಿರ್ಬಂಧ, ಪರ್ಯಾಯ ರಸ್ತೆಯ ಮಾಹಿತಿ:** ಬಿಬಿಎಂಪಿ ಮೂಲಸೌಕರ್ಯ ಸುಧಾರಣೆ ಕಾರ್ಯದ ದೃಷ್ಟಿಯಿಂದ ಸೇತುರಾವ್ ಸ್ಟ್ರೀಟ್ ರಸ್ತೆ (ಮೈಸೂರು ರಸ್ತೆಯಿಂದ ಗುಂಡೋಪಂತ್ ಸ್ಟ್ರೀಟ್ ವರೆಗೆ) ಮತ್ತು ಪೊಲೀಸ್ ರಸ್ತೆ (ಸೇತುರಾವ್ ಸ್ಟ್ರೀಟ್ ರಸ್ತೆಯಿಂದ ಎ.ಎಸ್. ಚಾರ್ ಸ್ಟ್ರೀಟ್ ರಸ್ತೆವರೆಗೆ) ಮತ್ತು ಎಸ್. ಆರ್. ಕ್ರಾಸ್ ರಸ್ತೆ (ಮೆಟ್ರೊ ಬ್ಯಾಕ್ ರೋಡ್,



ಮೆಟ್ರೊ ಬಿ ಗೇಟ್ ನಿಂದ ಎಸ್.ಆರ್. ರಸ್ತೆ) ಸಂಪೂರ್ಣ ಹದಗೆಟ್ಟಿದೆ. ಆದ್ದರಿಂದ, ಈ ರಸ್ತೆಗಳಲ್ಲಿ ಹೊಸ ಕಾಂಕ್ರೀಟ್ ರಸ್ತೆಯನ್ನು ನಿರ್ಮಿಸುವ ಸಲುವಾಗಿ, ಸುಗಮ ಸಂಚಾರಕ್ಕಾಗಿ ಮಾರ್ಗ ಬದಲಾವಣೆ ಮಾಡಲಾಗಿದೆ ಎಂದು ಬೆಂಗಳೂರು ಸಂಚಾರ ಪೊಲೀಸರು ತಿಳಿಸಿದ್ದಾರೆ. ಪುಟ 2

## ಬೆಂಗಳೂರು ಟ್ರಾಫಿಕ್ ನಿರ್ವಹಣೆಗೆ ಬರಲಿವೆ ಹೆಚ್ಚುವರಿ 750 ಎಐ ಕ್ಯಾಮರಾ

**ಬೆಂಗಳೂರು:** ಟ್ರಾಫಿಕ್ ನಿರ್ವಹಣಾ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲು ಸುಮಾರು ಬೆಂಗಳೂರಿನ 3,000 ಕಡೆಗಳಲ್ಲಿ ಹೆಚ್ಚುವರಿಯಾಗಿ 750 ಕೃತಕ ಬುದ್ಧಿಮತ್ತೆ ಸ್ಮಾರ್ಟ್ ಕ್ಯಾಮರಾಗಳನ್ನು ಅಳವಡಿಸಲಾಗುವುದು ಎಂದು ಟ್ರಾಫಿಕ್ ಪೊಲೀಸ್ ಮೂಲಗಳು ತಿಳಿಸಿವೆ. ಈ ಸ್ಥಳಗಳಲ್ಲಿ ಈಗಾಗಲೇ ಸುಮಾರು 7,500 ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಹೆಚ್ಚುವರಿ ಕ್ಯಾಮರಾಗಳನ್ನು ನಗರದ ಹೊರವಲಯ ಮತ್ತು ಹೊಸ ಟ್ರಾಫಿಕ್ ಸಿಗ್ನಲ್‌ಗಳನ್ನು ಅಳವಡಿಸಲಾಗಿರುವ ಪ್ರಮುಖ ಜಂಕ್ಷನ್‌ಗಳಲ್ಲಿ ಅಳವಡಿಸಲಾಗುತ್ತದೆ.

ಟ್ರಾಫಿಕ್ ನಿರ್ವಹಣೆಗೆ ನೆರವಾಗುವುದು, ಹಿಟ್ ಅಂಡ್ ರನ್ ಪ್ರಕರಣಗಳು, ಮಹಿಳೆಯರಿಗೆ ಕಿರುಕುಳ ಮತ್ತು ಇತರ ಕಾನೂನು ಸುವ್ಯವಸ್ಥೆ ಸಂಬಂಧಿತ ಘಟನೆಗಳ ಮೇಲೆ ನಿರಂತರವಾಗಿ ಕಣ್ಗಾವಲಿರಿಸುವುದು ಇದರ ಹಿಂದಿನ ಉದ್ದೇಶವಾಗಿದೆ ಎಂದು ಹೆಚ್ಚುವರಿ ಪೊಲೀಸ್ ಕಮಿಷನರ್ (ಪೂರ್ವ)



ರಮಣ್ ಗುಪ್ತಾ ತಿಳಿಸಿರುವುದಾಗಿ 'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್' ವರದಿ ಮಾಡಿದೆ. ಇಷ್ಟೇ ಅಲ್ಲದೆ, ಸುರಕ್ಷಿತ ನಗರ ಯೋಜನೆಯ ಭಾಗವಾಗಿ ಬಸ್ ನಿಲ್ದಾಣಗಳು, ರೈಲು ನಿಲ್ದಾಣಗಳು, ವಿಮಾನ ನಿಲ್ದಾಣಗಳು ಮತ್ತು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ 150 ವಾಚ್ ಟವರ್‌ಗಳು ಮತ್ತು ಎಂಟು ಹೈ ಡೆಫಿನಿಷನ್ ಫೇಸ್-ರೆಕಗ್ನಿಷನ್ ಕ್ಯಾಮರಾಗಳನ್ನು ಅಳವಡಿಸಲಾಗುವುದು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿರುವುದಾಗಿ ವರದಿ ಉಲ್ಲೇಖಿಸಿದೆ.

ಹೈ-ಡೆಫಿನಿಷನ್ ಫೇಸ್-ರೆಕಗ್ನಿಷನ್ ಕ್ಯಾಮರಾಗಳು ಸಂಚಾರ ದಟ್ಟಣೆಯನ್ನು ಮೇಲ್ವಿಚಾರಣೆ ಮಾಡಲು ಸಹಾಯ ಮಾಡಲಿವೆ. ವಾಚ್ ಟವರ್‌ಗಳು ಸಾರ್ವಜನಿಕ ಪ್ರದೇಶಗಳ ಸಮರ್ಪಕ ಚಿತ್ರಣ ಒದಗಿಸಲಿವೆ. ಜತೆಗೆ, ಅಧಿಕಾರಿಗಳು ಘಟನೆಗಳಿಗೆ ತ್ವರಿತವಾಗಿ ಪ್ರತಿಕ್ರಿಯಿಸಲು ಅನುವು ಮಾಡಿಕೊಡಲಿದೆ ಎಂದು ಅಧಿಕಾರಿ ಹೇಳಿದ್ದಾರೆ. ಕನಕಪುರ ರಸ್ತೆ, ಹೊಸೂರು ರಸ್ತೆ, ಬನ್ನೇರುಘಟ್ಟ ರಸ್ತೆ ಮತ್ತು ಸರ್ಜಾಪುರ ರಸ್ತೆಯಂತಹ ಪ್ರಮುಖ ಪ್ರದೇಶಗಳು 50 ಹೊಸ ಟ್ರಾಫಿಕ್ ಸಿಗ್ನಲ್‌ಗಳನ್ನು ಒಳಗೊಂಡಿರಲಿದ್ದು, ಈ ಪ್ರದೇಶಗಳಲ್ಲಿಯೂ ಹೊಸ ಕ್ಯಾಮರಾಗಳನ್ನು ಅಳವಡಿಸಲಾಗುತ್ತದೆ ಎಂದು ಉಪ ಪೊಲೀಸ್ ಆಯುಕ್ತ (ಸಂಚಾರ-ದಕ್ಷಿಣ) ಶಿವ ಪ್ರಕಾಶ್ ದೇವರಾಜು ಮಾಹಿತಿ ನೀಡಿದ್ದಾರೆ. ಪುಟ 2

# ಬಹಿರ್ದೆಸೆಗೆ ತೆರಳಿದ ಬಾಲಕಿ ಅನುಮಾನಸದಿ ಸಾವು, ಪೋಷಕರಿಂದ ಕೊಲೆ ಆರೋಪ

**ಬಳ್ಳಾರಿ:** ಬಹಿರ್ದೆಸೆಗೆ ತೆರಳಿದ್ದ 10 ವರ್ಷದ ಬಾಲಕಿ ಅನುಮಾನಾಸ್ಪದವಾಗಿ ಸಾವನ್ನಪಿರುವ ಘಟನೆ ವಿಜಯನಗರ ಜಿಲ್ಲೆ ಹಡಗಲಿ ತಾಲೂಕಿನ ದುಂಗಾವತಿ ತಾಂಡಾದಲ್ಲಿ ಬೆಳಕಿಗೆ ಬಂದಿದೆ. ಅನಸೂಯಾ (10) ಮೃತ ಬಾಲಕಿ. ತಂದೆ ರವಿ ಹಾಗೂ ತಾಯಿ ಲಕ್ಷ್ಮಿ ದಂಪತಿಗೆ ಅನಸೂಯಾ ಒಬ್ಬಳೇ ಮಗಳು. ಬಾಲಕಿಯ ಮೃತ ದೇಹ ಕಂಡು ಪೋಷಕರು ಅನುಮಾನ ವ್ಯಕ್ತಪಡಿಸಿದ್ದಾರೆ. ಹೊಂಡದ ಪಕ್ಕದಲ್ಲಿ ಮೃತ ದೇಹ, ಮತ್ತೊಂದು ಕಡೆ ನೀರಿನ ತಂಬಿಗೆ ಪತ್ತೆಯಾಗಿದೆ. ಇದರಿಂದ ಅನುಮಾನಗೊಂಡ ಪೋಷಕರು ಕೊಲೆ ಆರೋಪ ಮಾಡಿದ್ದಾರೆ. ನನ್ನ ಮಗಳ ಕೊಲೆಯಾಗಿದೆ, ನಮಗೆ ನ್ಯಾಯಾ ಸಿಗಬೇಕೆಂದು ಪೋಷಕರು ಒತ್ತಾಯಿಸಿದ್ದಾರೆ. ಸ್ಥಳಕ್ಕೆ ವಿಜಯನಗರ ಎಸ್ಪಿ ಶ್ರೀಹರಿಬಾಬು ಹಾಗೂ ಶಾಸಕ ಕೃಷ್ಣಾ ನಾಯ್ಕ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ತಂಬ್ರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಬಾಲಕಿಯ ವರದಿ ಬಂದ ಬಳಿಕ ಸತ್ಯಾಸತ್ಯತೆ ಬೇಳಕಿಗೆ ಬರಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.



# ಯಾದಗಿರಿಯಲ್ಲಿ ಕಲುಷಿತ ನೀರು ಸೇವಿಸಿ 9 ಮಂದಿ ಅಸ್ವಸ್ಥ

**ಯಾದಗಿರಿ:** ಜಿಲ್ಲೆಯ ಕಾಕಲವಾರ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ 9 ಮಂದಿ ಅಸ್ವಸ್ಥ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯಲೋಪ ಹಿನ್ನೆಲೆ ಪಿಡಿಒ ಅಮಾನತು ಮಾಡಿ ಸಿಇಒ ಗರೀಮಾ ಪನ್ವಾರ್ ಆದೇಶಿಸಿದ್ದಾರೆ. ಜಿಲ್ಲೆಯ ಗುರುಮಠಕಲ್ ತಾಲೂಕಿನ ಕಾಕಲವಾರ ಗ್ರಾಮ ಪಂಚಾಯತ್ ಪಿಡಿಒ ಮಲ್ಲರೆಡ್ಡಿಯನ್ನು ಅಮಾನತು ಮಾಡಲಾಗಿದೆ. ಕುಡಿಯಲು ಯೋಗ್ಯವಲ್ಲದ ನೀರು ಎಂದು ವರದಿ ಬಂದರೂ ನೀರು ಪೂರೈಕೆ ಮಾಡಿದ್ದು, ಕಲುಷಿತ ನೀರನ್ನು ಸೇವಿಸಿದ 9 ಮಂದಿ ಅಸ್ವಸ್ಥರಾಗಿ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ಗ್ರಾಮದ ಮೂರು ಬೋರ್‌ವೆಲ್‌ಗಳ ನೀರು ಕುಡಿಯಲು ಯೋಗ್ಯವಲ್ಲ ಎಂದು ವರದಿ ಬಂದಿತ್ತು. ಆದರೂ ಪಿಡಿಒ ಮಲ್ಲರೆಡ್ಡಿ ಯೋಗ್ಯವಲ್ಲದ ನೀರನ್ನೇ ಗ್ರಾಮಸ್ಥರಿಗೆ ಕುಡಿಯಲು ಪೂರೈಸಿದ್ದರು. ಈ ಹಿನ್ನೆಲೆ ಕರ್ತವ್ಯಲೋಪ ಆಧಾರದ ಮೇಲೆ ಸಸ್ಪೆಂಡ್ ಮಾಡಿ ಸಿಇಒ ಆದೇಶ ನೀಡಿದ್ದಾರೆ ಘಟನೆ ಆದ ಕೂಡಲೇ ಸಿಇಒ ಗರೀಮಾ ಪನ್ವಾರ್ ಆಸ್ಪತ್ರೆಗೆ ಭೇಟಿ ನೀಡಿ ಅಸ್ವಸ್ಥರ ಆರೋಗ್ಯ ವಿಚಾರಿಸಿದ್ದಾರೆ. ನಂತರ ಗ್ರಾಮಕ್ಕೆ ಭೇಟಿ ನೀಡಿ ಮಾಹಿತಿ ಪಡೆದಿದ್ದರು. ಪಿಡಿಒ ನಿರ್ಲಕ್ಷ್ಯವೇ ಪ್ರಕರಣಕ್ಕೆ ಕಾರಣ ಎಂಬುದನ್ನು ಅರಿತು ಅಮಾನತು ಮಾಡಿದ್ದಾರೆ.



# ಬೆಂಗ್ಳೂರಲ್ಲಿ ಕಸ ತೆಗೆಯಲು 30 ವರ್ಷಕ್ಕೆ ಗುತ್ತಿಗೆ 15 ಸಾವಿರ ಕಿಕ್ ಬ್ಯಾಕ್: ಹೆಚ್‌ಡಿಕೆ ಬಾಂಬ್

**ಮಂಡ್ಯ:** ಬೆಂಗಳೂರಿನಲ್ಲಿ ಕಸ ತೆಗೆಯಲು ಬ್ಲಾಕ್ ಲಿಸ್ಟ್‌ನಲ್ಲಿ ಇರುವ ಗುತ್ತಿಗೆದಾರನಿಗೆ ಸಚಿವರೊಬ್ಬರು ಟೆಂಡರ್ ಕೊಟ್ಟಿದ್ದಾರೆ. 30 ವರ್ಷಕ್ಕೆ ಲೀಸ್‌ಗೆ (ಭೋಗ್ಯ) ಕೊಟ್ಟಿದ್ದಾರೆ. 45 ಸಾವಿರ ಕೋಟಿ ರೂ.ಗೆ ಟೆಂಡರ್ ಕೊಟ್ಟು, 15 ಸಾವಿರ ಕೋಟಿ ರೂ. ಕಿಕ್ ಬ್ಯಾಕ್ ಪಡೆಯಲು ಪೆನ್ನು ಪೇಪರ್ ಪಡೆದವರು ಮುಂದಾಗಿದ್ದಾರೆ ಎಂದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಹೊಸ ಬಾಂಬ್ ಸಿಡಿಸಿದ್ದಾರೆ.



ಮಂಡ್ಯದ ಪಾಂಡವಪುರ ಪಟ್ಟಣದಲ್ಲಿ ತಮಗೆ ನಡೆದ ಅಭಿನಂದನಾ ಹಾಗೂ ಕೃತಜ್ಞತಾ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಕಸ ಎತ್ತಲು ಬ್ಲಾಕ್ ಲಿಸ್ಟ್‌ನಲ್ಲಿ ಇರುವ ಗುತ್ತಿಗೆದಾರನಿಗೆ ಟೆಂಡರ್ ಕೊಟ್ಟಿದ್ದಾರೆ. 30 ವರ್ಷಕ್ಕೆ ಲೀಸ್‌ಗೆ (ಭೋಗ್ಯ) ಕೊಟ್ಟಿದ್ದಾರೆ. ಅದರಲ್ಲೂ 15 ಸಾವಿರ ಕೋಟಿ ರೂ. ಕಿಕ್ ಬ್ಯಾಕ್ ತೆಗೆದುಕೊಂಡಿದ್ದಾರೆ. 45 ಸಾವಿರ ಕೋಟಿ ರೂ.ಗೆ ಟೆಂಡರ್ ಕೊಟ್ಟು, 15 ಸಾವಿರ ಕೋಟಿ ರೂ. ಕಿಕ್ ಬ್ಯಾಕ್ ಪಡೆಯಲು ಪೆನ್ನು ಪೇಪರ್ ಪಡೆದವರು ಮುಂದಾಗಿದ್ದಾರೆ. 30 ವರ್ಷಕ್ಕೆ ನಾವು ನೀವು ಬದುಕಿರುತ್ತೀವೋ ಇಲ್ಲವೋ ಎಂದು ಬಾಂಬ್ ಸಿಡಿಸಿದ್ದಾರೆ.

ಪೇಪರ್ ಪೆನ್ನು ಕೇಳಿದವರಿಗೂ ಮಂಡ್ಯ ಜನ 6 ಸ್ಥಾನ ಕೊಟ್ಟರು. ಈಗ ಏನಾಗಿದೆ, ಕಿಕ್ ಬ್ಯಾಕ್ ತೆಗೆದುಕೊಳ್ಳುವುದರಲ್ಲಿ ಉಪಯೋಗ ಮಾಡ್ತಿದ್ದಾರೆ. ನೀವು ನನಗೆ ಕೊಟ್ಟ ಶಕ್ತಿ ರಾಜ್ಯದ ಅಭಿವೃದ್ಧಿಗೆ ಮುಡಿಪು. ನನಗೆ ಕಾಂಗ್ರೆಸ್ ನಾಯಕರ ಸರ್ಟಿಫಿಕೇಟ್ ಬೇಡ. ಜನರ ಋಣ ತೀರಿಸಿ ಮಣ್ಣಲ್ಲಿ ಮಣ್ಣಾಗುತ್ತೇನೆ ಎಂದು ಭಾವುಕರಾಗಿದ್ದಾರೆ.

ಇದಕ್ಕೂ ಮುನ್ನ ಮಾತನಾಡಿದ ಹೆಚ್‌ಡಿಕೆ, ಅಲ್ಲದೇ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ರೈತರ ಆತ್ಮಹತ್ಯೆ ಹೆಚ್ಚಾಗಿದೆ. ಇದು ನನ್ನ ಮನಸ್ಸಿಗೆ ಹೆಚ್ಚಿನ ನೋವುಂಟು ಮಾಡಿದೆ. ಕೇಂದ್ರ ಸಚಿವನಾದ ನಂತರ ಮಂಡ್ಯದಲ್ಲಿ ಜನತಾ ದರ್ಶನ ಮಾಡಿದೆ. ಅಂದು ಸಂದಾಯವಾದ ಅರ್ಜಿಗಳಲ್ಲಿ 400ಕ್ಕೂ ಹೆಚ್ಚು ಅರ್ಜಿಗಳು ಕಂದಾಯ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳು. ಆರ್ಥಿಕ ನೆರವಿಗೆ ಕೋರಿ 300ಕ್ಕೂ ಹೆಚ್ಚು ಅರ್ಜಿಗಳು, ನಿರುದ್ಯೋಗ ಸಮಸ್ಯೆ ಕುರಿತ 300ಕ್ಕೂ ಹೆಚ್ಚು ಅರ್ಜಿಗಳು ಬಂದಿವೆ. ಮನೆ ಹಾಗೂ ನಿವೇಶನ ಕೋರಿದ ಅರ್ಜಿಗಳು ಬಂದಿವೆ ಎಂದು ತಿಳಿಸಿದ್ದಾರೆ.

ಜನ ನೀಡಿದ ಅರ್ಜಿಗಳ ವಿಲೇವಾರಿಗೆ ಮಂಡ್ಯದಲ್ಲಿ ಡಿಸಿ ಆಗಿ ಕೆಲಸ ಮಾಡಿದ್ದ ಕೃಷ್ಣಯ್ಯ ಅವ್ರನ್ನ ವಿಶೇಷಾಧಿಕಾರಿಯಾಗಿ ನೇಮಕ ಮಾಡಿದ್ದೇನೆ. ಅವರು ನಿಮ್ಮ ಸಮಸ್ಯೆ ಆಲಿಸಿ ನನ್ನ ಗಮನಕ್ಕೆ ತರುತ್ತಾರೆ. ಪ್ರತಿ ಮಂಗಳವಾರ, ಬುಧವಾರ ಸಂಸದರ ಕಚೇರಿಯಲ್ಲಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಜನರಿಗೆ ಭರವಸೆ ನೀಡಿದರು.

# ದರ್ಶನ್, ಪವಿತ್ರಾ ಗೌಡ ಪರ ವಕೀಲರಿಂದ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ, ಪೂಜೆ ಸಲ್ಲಿಕೆ

**ಮಂಗಳೂರು:** ನಟ ದರ್ಶನ್ ಮತ್ತು ಪವಿತ್ರಾ ಗೌಡ ಪರ ವಕೀಲರ ತಂಡ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿ ಮಂಜುನಾಥ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದೆ.

ಬೆಂಗಳೂರು ವಕೀಲ ನಾರಾಯಣ ಸ್ವಾಮಿ ಮತ್ತು ತಂಡ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಭಾನುವಾರ ಭೇಟಿ ನೀಡಿತು. ವಕೀಲರಾದ ರಾಕೇಶ್, ಶಶಾಂಕ್, ಮಂಜುನಾಥ್, ಶಿವಕುಮಾರ್, ಶೇಷಣ್ಣ, ಸೋಮಶೇಖರ್ ಇದ್ದರು.

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ 10 ಕ್ಕೂ ಹೆಚ್ಚು ಮಂದಿ ಜೈಲು ಸೇರಿದ್ದಾರೆ. ಪ್ರಕರಣ ಸಂಬಂಧ ತನಿಖೆ ನಡೆಸುತ್ತಿರುವ ಎಸ್‌ಐಟಿ ತಂಡ ಮಹತ್ವದ ಸಾಕ್ಷ್ಯಗಳನ್ನು ಸಂಗ್ರಹಿಸಿದೆ.

ದರ್ಶನ್ ಜೈಲು ಸೇರಿ ಒಂದು ತಿಂಗಳು ಪೂರ್ಣಗೊಂಡಿದೆ. ಪ್ರಕರಣಕ್ಕೆ ಸಂಬಂಧಿಸಿದ ಸಾಕ್ಷ್ಯಗಳು ಒಂದೊಂದಾಗಿ ಹೊರಬರುತ್ತಿವೆ. ಇದು ಪೂರ್ವನಿಯೋಜಿತ ಕೊಲೆ ಎಂಬುದು ತನಿಖೆಯಿಂದ ಬಹಿರಂಗೊಂಡಿದೆ.

ದರ್ಶನ್ ಜೈಲಿನಿಂದ ಹೊರಬರಲೆಂದು ಅಭಿಮಾನಿಗಳು ಪ್ರಾರ್ಥಿಸುತ್ತಿದ್ದಾರೆ. ಅನೇಕರು ದರ್ಶನ್ ನೋಡಲೇಬೇಕು ಎಂದು ಜೈಲಿನ ಬಳಿ ಬಂದಿದ್ದ ಪ್ರಸಂಗಗಳು ನಡೆದಿವೆ. ಇನ್ನೂ ಕೆಲವರು ದೇವಸ್ಥಾನಗಳಿಗೆ ತೆರಳಿ ದರ್ಶನ್ ಬಿಡುಗಡೆಗೆ ಪ್ರಾರ್ಥಿಸಿದ್ದಾರೆ.





# ಟಿಕೆಟ್ ದರ ಏರಿಸದೇ ಇದ್ದರೆ ಸಂಸ್ಥೆ ಉಳಿಯಲ್ಲ

**ತುಮಕೂರು:** ಕಳೆದ ತ್ರೈಮಾಸಿಕದಲ್ಲಿ 295 ಕೋಟಿ ರೂ. ನಷ್ಟವಾಗಿದೆ. ಟಿಕೆಟ್ ದರ ಏರಿಸದೇ ಇದ್ದರೆ ಕೆಎಸ್‌ಆರ್‌ಟಿಸಿ ಸಂಸ್ಥೆ ಉಳಿಯುವುದಿಲ್ಲ ಎಂದು ಕೆಎಸ್‌ಆರ್‌ಟಿಸಿ ನಿಗಮದ ಅಧ್ಯಕ್ಷ, ಗುಬ್ಬಿ ಶಾಸಕ ಎಸ್. ಆರ್. ಶ್ರೀನಿವಾಸ್ ಹೇಳಿದ್ದಾರೆ.



ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸದ್ಯದಲ್ಲೇ ಕೆಎಸ್‌ಆರ್‌ಟಿಸಿ ಬಸ್ ಟಿಕೆಟ್ ದರ ಹೆಚ್ಚಳ ಮಾಡಲಾಗುವುದು. ಮೊನ್ನೆ ನಿಗಮದ ಮೀಟಿಂಗ್ ಮುಗಿದಿದ್ದು 15-20% ದರ ಹೆಚ್ಚಳ ಮಾಡುವ ಪ್ರಸ್ತಾವನೆಯನ್ನು ಸಿಎಂ ಮುಂದೆ ಇಟ್ಟಿದ್ದೇವೆ ಎಂದು ಮಾಹಿತಿ ನೀಡಿದರು.

ತೈಲ ಬೆಲೆ ಏರಿಕೆ, ಹೊಸ ಬಸ್‌ಗಳ ಖರೀದಿಯಿಂದ ಸಂಸ್ಥೆಗೆ ಹೊರೆಯಾಗಿದೆ. ಅಲ್ಲದೇ ಈ ಬಾರಿ ಸಾರಿಗೆ ಸಂಸ್ಥೆಯ ನೌಕರರ ವೇತನ ಪರಿಷ್ಕರಣೆ ಮಾಡಲಿದ್ದೇವೆ. ಬಿಡಿ ಭಾಗಗಳ ದರ ಏರಿಕೆಯಾಗಿದೆ. ಈ ಎಲ್ಲಾ ಕಾರಣಗಳಿಂದ ಟಿಕೆಟ್ ದರ ಹೆಚ್ಚಳ ಅನಿವಾರ್ಯ ಎಂದು ಶಾಸಕರು ಸಮರ್ಥಿಸಿಕೊಂಡಿದ್ದಾರೆ.

ಕಳೆದ ತ್ರೈಮಾಸಿಕದಲ್ಲಿ ನಿಗಮಕ್ಕೆ 295 ಕೋಟಿ ರೂ. ನಷ್ಟವಾಗಿದೆ. ಪ್ರತಿ ಬಾರಿಯೂ ನಷ್ಟವನ್ನು ಸರಿದೂಗಿಸಿಕೊಡುವಂತೆ ಸರ್ಕಾರವನ್ನು ಕೇಳುವುದು ಸರಿಯಲ್ಲ. ನಷ್ಟವನ್ನು ಸರಿದೂಗಿಸಲು ಹಾಗೂ ಸಂಸ್ಥೆಯನ್ನು ಉಳಿಸಬೇಕಾದರೆ ಟಿಕೆಟ್ ದರ ಹೆಚ್ಚಿಗೆ ಮಾಡಲೇಬೇಕು ಎಂದು ಸಮಜಾಯಿಷಿ ಕೊಟ್ಟಿದ್ದಾರೆ.

ಟಿಕೆಟ್ ದರ ಹೆಚ್ಚಳ ಮಾಡುವುದರಿಂದ ಪುರುಷ ಪ್ರಯಾಣಿಕರಿಗೆ ಹೊರೆಯಾಗುತ್ತದೆ ಎನ್ನುವ ಪ್ರಶ್ನೆಯೇ ಇಲ್ಲ. ಶಕ್ತಿ ಯೋಜನೆಯಲ್ಲಿನ ಮಹಿಳಾ ಪ್ರಯಾಣಿಕರ ಟಿಕೆಟ್ ದರ ಕೂಡ ಹೆಚ್ಚಾಗಲಿದ್ದು ಅದನ್ನು ಸರ್ಕಾರ ಭರಿಸುತ್ತದೆ ಎಂದು ತಿಳಿಸಿದರು.

# ಬಸನಗೌಡ ದದ್ದಲ್‌ಗೆ ಇ.ಡಿ ಬಂಧನ ಭೀತಿ ರಾಯಚೂರಿನಿಂದ ಅವಸರದಲ್ಲಿ ಹೊರಟಿದ್ದೆಲ್ಲಿಗೆ?

**ರಾಯಚೂರು:** ಮಹರ್ಷಿ ವಾಲ್ಮೀಕಿ ನಿಗಮದ 187 ಕೋಟಿ ರೂಪಾಯಿ ಹಗರಣದ ಪ್ರಕರಣ ಹಿನ್ನೆಲೆ ಇ.ಡಿ ಬಂಧನ ಭೀತಿಯಲ್ಲಿರುವ ನಿಗಮದ ಅಧ್ಯಕ್ಷ ಹಾಗೂ ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ರಾತ್ರೋರಾತ್ರಿ ರಾಯಚೂರಿಗೆ ಆಗಮಿಸಿ ಬೆಳಗ್ಗೆಯೇ ನಗರದಿಂದ ಕಾಲ್ಕಿತ್ತಿದ್ದಾರೆ.

ಬೆಳಗ್ಗೆ ಯಾರನ್ನೂ ಭೇಟಿಯಾಗದೆ ಮನೆಯಿಂದ ಅವಸರಲ್ಲಿ ಕಾರು ಹತ್ತಿ ಪ್ರಯಾಣ ಮಾಡಿದ್ದಾರೆ. ಮಾಧ್ಯಮದವರಿಂದ ತಪ್ಪಿಸಿಕೊಂಡು ವೇಗವಾಗಿ ಕಾರಿನಲ್ಲಿ ಹೊರಟು ಹೋಗಿದ್ದಾರೆ. ಮಂತ್ರಾಲಯ ರಸ್ತೆ ಮಾರ್ಗವಾಗಿ ಬೆಂಗಳೂರು ಕಡೆಗೆ ತಮ್ಮ ಆಪ್ತರ ಜೊತೆ ಹೊರಟಿದ್ದಾರೆ.

ಮಾರ್ಗಮಧ್ಯೆ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಗಿಲ್ಲೆಸುಗೂರಿನಲ್ಲಿ ಕೆಲ ಕಾರ್ಯಕರ್ತರನ್ನ ಭೇಟಿಯಾಗಿ ಮುಂದೆ ತೆರಳಿದ್ದಾರೆ. ತಮ್ಮ ಕಾರನ್ನ ಬಿಟ್ಟು ಕಾರ್ಯಕರ್ತನ ಕ್ರೇಟಾ ಕಾರ್‌ನಲ್ಲಿ ಬಸನಗೌಡ ದದ್ದಲ್ ಅಜ್ಞಾತ ಸ್ಥಳಕ್ಕೆ ತೆರಳಿದ್ದಾರೆ.

ವಾಲ್ಮೀಕಿ ನಿಗಮ ಹಗರಣ ಪ್ರಕರಣದಲ್ಲಿ ದದ್ದಲ್‌ಗೆ ಈಗಾಗಲೇ ಜಾರಿ ನಿರ್ದೇಶನಾಲಯ ನೋಟಿಸ್ ನೀಡಿದೆ. ಇ.ಡಿ ಬಂಧನ ಭೀತಿಯಲ್ಲಿರುವ ಶಾಸಕರಿದ್ದಾರೆ. ಪ್ರಕರಣ ಸಂಬಂಧ ಮಾಜಿ ಸಚಿವ ನಾಗೇಂದ್ರರನ್ನು ಬಂಧಿಸಿರುವ ಅಧಿಕಾರಿಗಳು ತೀವ್ರ ವಿಚಾರಣೆ ನಡೆಸುತ್ತಿದ್ದಾರೆ.

# ತಡರಾತ್ರಿ 2 ಗಂಟೆಯವರೆಗೆ ಹೋಟೆಲ್, ಬಾರ್ ರೆಸ್ಟೋರೆಂಟ್ ಓಪನ್‌ಗೆ ಮನವಿ

**ಬೆಂಗಳೂರು:** ತಡರಾತ್ರಿ 2 ಗಂಟೆಯವರೆಗೆ ಬಾರ್, ಪಬ್ ಮತ್ತು ರೆಸ್ಟೋರೆಂಟ್‌ಗಳ ಓಪನ್‌ಗೆ ಬೃಹತ್ ಬೆಂಗಳೂರು ಹೋಟೆಲ್‌ಗಳ ಸಂಘವು ಅಬಕಾರಿ ಸಚಿವರಿಗೆ ಮನವಿ ಮಾಡಿದೆ.

ಪಬ್, ಬಾರ್ ರೆಸ್ಟೋರೆಂಟ್ ಲೈಸೆನ್ಸ್ ನವೀಕರಣಕ್ಕೆ ಆನ್‌ಲೈನ್ ಸಮಸ್ಯೆಯಾಗಿದೆ. ಹೆಚ್ಚುವರಿ ಶುಲ್ಕ ಕಟ್ಟಿದರೂ ಲೈಸೆನ್ಸ್ ನೀಡುತ್ತಿಲ್ಲ ಎಂದು ಹೋಟೆಲ್ ಅಸೋಸಿಯೇಷನ್ ಆರೋಪಿಸಿದೆ. ಅಲ್ಲದೇ ಅಬಕಾರಿ ಇಲಾಖೆಯಲ್ಲಿ ಕಾನೂನು ತೊಡಕಿನ ಆರೋಪವನ್ನೂ ಹೋಟೆಲ್ ಅಸೋಸಿಯೇಷನ್ ಹೊರಿಸಿದೆ. ಕಾನೂನು ಸಬಲೀಕರಣ ಮಾಡದೆ ನಮಗೆ ನೋಟಿಸ್ ಕೊಟ್ಟು ಸಮಸ್ಯೆ ಮಾಡುತ್ತಿದ್ದಾರೆ. ನಗರದಲ್ಲಿ ತಡರಾತ್ರಿ 2 ಗಂಟೆವರೆಗೆ ಹೋಟೆಲ್, ಬಾರ್ ರೆಸ್ಟೋರೆಂಟ್ ಓಪನ್‌ಗೆ ಅನುಮತಿ ನೀಡುವಂತೆ ಬೃಹತ್ ಬೆಂಗಳೂರು ಹೋಟೆಲ್ ಸಂಘಟನೆಗಳು ಅಬಕಾರಿ ಸಚಿವರಲ್ಲಿ ಮನವಿ ಮಾಡಿದೆ.



## ಪ್ರತ್ಯಸ್ತ್ರಗಳು ಸಜ್ಜು

ಇನ್ನು SCP-TSP ಹಗರಣದಲ್ಲಿ ಸರ್ಕಾರದ ಗ್ಯಾರಂಟಿಗೆ ದಲಿತರ ಹಣ ಬಳಕೆ ಮಾಡಿದ ಆರೋಪವಿದೆ. ಅಧಿಕಾರಕ್ಕೆ ಬಂದ ಮೂರೇ ತಿಂಗಳಲ್ಲಿ SC, STಗಳಿಗೆ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ. ಶಕ್ತಿ ಯೋಜನೆಗೆ ಮೊದಲು 11 ಸಾವಿರ ಕೋಟಿ ಹಣ ದುರ್ಬಳಕೆ, ಎರಡನೇ ಬಾರಿ ಶಕ್ತಿ ಯೋಜನೆಗೆ 14 ಸಾವಿರ ಕೋಟಿ ಹಣ ಬಳಕೆ ಮಾಡಲಾಗಿದೆ ಎನ್ನಲಾಗಿದೆ.

ಎರಡು ಸಾವಿರ ಕೋಟಿ ರೂಪಾಯಿ ಮೊತ್ತದ ಅಪೆಕ್ಸ್ ಬ್ಯಾಂಕ್ ಹಗರಣದಲ್ಲಿ, ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರಾಗಿದ್ದಾಗ ಹಾಲಿ ಸಚಿವ ರಾಜಣ್ಣ ಭ್ರಷ್ಟಾಚಾರ ನಡೆಸಿದ್ದಾರೆ ಎಂಬ ಆರೋಪ ಬಂದಿದೆ. ನಿಯಮಬಾಹಿರವಾಗಿ ಸಾಲ ನೀಡಿರುವ ಆರೋಪ, ಬ್ಯಾಂಕ್‌ನಲ್ಲಿ ಠೇವಣಿದಾರ ಅಲ್ಲದವರಿಗೆ, ಸಕ್ಕರೆ ಕಾರ್ಖಾನೆ, ಇತರೆ ಸಂಸ್ಥೆಗಳಿಗೆ ಸಾಲ ನೀಡಿರುವ ಆರೋಪವಿದ್ದು, ಸಚಿವ ಕೆ.ಎನ್ ರಾಜಣ್ಣ ವಿರುದ್ಧ ಕ್ರಮಕ್ಕೆ ಆಗ್ರಹಿಸುವ ಸಂಭವ ಇದೆ.

**ಸರ್ಕಾರದ ಪ್ರತ್ಯುತ್ತರವೇನು?:** ಮುಡಾ ಕೇಸ್ ಪ್ರತಿಯಾಗಿ ಸೂಡಾ ಅಕ್ರಮ ಪ್ರಸ್ತಾಪ ಮಾಡಲು ಕಾಂಗ್ರೆಸ್ ಪ್ಲಾನ್ ಮಾಡಿಕೊಂಡಿದೆ. ಶಿವಮೊಗ್ಗ ಪ್ರಾಧಿಕಾರದಲ್ಲೂ ಸೈಟ್ ಹಂಚಿಕೆ ಗೋಲ್ ಮಾಲ್ ನಡೆದಿದ್ದು, ಬಿಜೆಪಿ ನಾಯಕರು ಹಾಗೂ ಅವರ ಕುಟುಂಬಸ್ಥರು ಶಾಮೀಲು ಆಗಿರುವ ಬಗ್ಗೆ ಮಾಹಿತಿಯಿದೆ ಎಂದು ಮಾಹಿತಿ ಸಂಗ್ರಹಿಸಲಾಗಿದ್ದು, ಈ ಕುರಿತು ಸದನದಲ್ಲಿ ದಾಖಲೆ ಬಿಡುಗಡೆ ಮಾಡಲು ಚಿಂತಿಸಲಾಗಿದೆ.

ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡರ ಕಾಲದಲ್ಲಿ ಮುಡಾ ಸೈಟ್ ಹಂಚಿಕೆ ಅಕ್ರಮ ಆಗಿದೆ. 48 ನಿವೇಶನ ಹಂಚಿಕೆಯ ವೇಳೆಯಲ್ಲಿ ಮಾಜಿ ಸಿಎಂ ಹೆಚ್ಡಿಕೆಗೂ 60 ಸಾವಿರ ಅಡಿ ನಿವೇಶನ ನೀಡಲಾಗಿದೆ. ಈ ಪ್ರಕರಣವನ್ನ ಸ್ವತಃ ಯಡಿಯೂರಪ್ಪ ಅವರೇ ಪರಿಷತ್ ನಲ್ಲಿ ಪ್ರಸ್ತಾಪ ಮಾಡಿದ್ದರು. ಜೊತೆಗೆ ಅಂದಿನ ಸಭಾಪತಿಗೆ ದಾಖಲೆ ಸಹ ನೀಡಿದ್ದರು ಎಂದು ಪ್ರಸ್ತಾಪ ಮಾಡಲು ಕೈ ಪಡೆ ತಯಾರಿ ನಡೆಸಿದೆ.

ವಾಲ್ಮೀಕಿ ನಿಗಮದ ಅಕ್ರಮದ ಪ್ರತಿಯಾಗಿ ದೇವರಾಜ ಅರಸು ಟ್ರಕ್ ಟರ್ಮಿನಲ್ ಅಕ್ರಮ ಪ್ರಸ್ತಾಪ ಮಾಡಲಾಗುತ್ತಿದೆ. ಬಿಜೆಪಿ ಕಾಲದಲ್ಲಿ ಟ್ರಕ್ ಟರ್ಮಿನಲ್ ನಿಗಮದಲ್ಲಿ 200 ಕೋಟಿಗೂ ಹೆಚ್ಚು ಭ್ರಷ್ಟಾಚಾರ ನಡೆದಿದೆ. ಇದಕ್ಕೆ ಪೂರಕವಾಗಿ ವೀರಯ್ಯ ಬಂಧನವಾಗಿದೆ. ವೀರಯ್ಯ ಬಂಧನ ಪ್ರಸ್ತಾಪ ಮಾಡುವ ಮೂಲಕ ಬಿಜೆಪಿಗೆ ತಿರುಗೇಟು ಕೊಡುವ ಲೆಕ್ಕಾಚಾರದಲ್ಲಿ ಕಾಂಗ್ರೆಸ್ ಇದೆ. ಜೊತೆಗೆ ಈ ಹಗರಣದಲ್ಲಿ ಮಾಜಿ ಸಿಎಂ ಬೊಮ್ಮಾಯಿ, ಮಾಜಿ ಸಚಿವ ಶ್ರೀರಾಮುಲು ಹೆಸರು ಉಲ್ಲೇಖ ಮಾಡುವ ಸಾಧ್ಯತೆಯಿದೆ.

**ಇತರ ಆರೋಪಗಳು:** ಇನ್ನು ಸರ್ಕಾರದಲ್ಲಿ ನಿರಂತರ ವರ್ಗಾವಣೆ ಮಾಡ್ತಿರುವ ಆರೋಪಗಳಿದ್ದು, ಪದೇ ಪದೆ ವರ್ಗಾವಣೆ ಮಾಡ್ತಿರುವ ಆರೋಪವಿದೆ. ಸ್ವಪಕ್ಷೀಯರೇ ಇದರ ವಿರುದ್ಧ ಧ್ವನಿ ಎತ್ತಿರೋದು ಸರ್ಕಾರಕ್ಕೆ ಮುಜುಗರ ತಂದಿದೆ. ಹೈನುಗಾರಿಕೆ ಮಾಡುವ ರೈತರಿಗೆ ಕಳೆದ ವರ್ಷದಿಂದ ಬೆಂಬಲ ಬೆಲೆ ತಲುಪಿಲ್ಲ. ಹಾಲಿನ ದರ ಹೆಚ್ಚಳ ಮಾಡಿ ಗ್ರಾಹಕರಿಂದ ಹಣ ಪಡೆಯುತ್ತಿರುವ ಸರ್ಕಾರ ರೈತರಿಗೆ ಕಳೆದ ವರ್ಷದಿಂದ ಒಂದು ಸಾವಿರ ಕೋಟಿ ಪ್ರೋತ್ಸಾಹ ಧನ ಬಾಕಿ ಉಳಿಸಿಕೊಂಡಿದೆ. ಗ್ಯಾರಂಟಿ ಯೋಜನೆ ಸರಿದೂಗಿಸಲು ಹಲವು ರೀತಿ ದರ ಏರಿಕೆ ಮಾಡಿದೆ. ಪೆಟ್ರೋಲ್, ಡೀಸೆಲ್ ಸೆಸ್ ದರ ಹೆಚ್ಚಳ, ಪ್ರಾಪರ್ಟಿ, ಗೈಡ್ ಲೈನ್ಸ್ ವ್ಯಾಲ್ಯು, ಅಬಕಾರಿ ಸುಂಕ ಹೆಚ್ಚಳ, ಇದರಿಂದ ಇತರೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಸಾರ್ವಜನಿಕರ ಆಕ್ರೋಶವನ್ನು ಪ್ರತಿಪಕ್ಷಗಳು ಪ್ರಸ್ತಾವಿಸಲಿವೆ.

ಮೊದಲನೇ ಪುಟದಿಂದ...

## ಶಾಕ್!

ಜನರಿಗೆ ಮಿತಿ ಮೀರಿ ಕರೆಂಟ್ ಬಿಲ್ ಕಟ್ಟಬೇಕಾದ ಪರಿಸ್ಥಿತಿ ಉಂಟಾಗಿದೆ. ಹೀಗಾಗಿ ಯಾವುದೇ ಗ್ರಾಹಕರು ನಮಗೆ 0 ಕರೆಂಟ್ ಬಿಲ್ ಬರ್ತಿದೆ ಎಂದು ನಿರ್ಲಕ್ಷ್ಯ ಮಾಡಬೇಡಿ, ಮೀಟರ್ ರೀಡಿಂಗ್ ಮಾಡುವ ಮುನ್ನ ನಿಮ್ಮ ಉಪಸ್ಥಿತಿ ಇರುವುದು ಉತ್ತಮ, ಇಲ್ಲದಿದ್ದರೆ 0 ಬಿಲ್ ಬರೋರಿಗೆ ಸಾವಿರ ಸಾವಿರ ಬಿಲ್ ಬರೋದು ಪಕ್ಕಾ ಎನ್ನುವ ವಾತಾವರಣ ನಿರ್ಮಾಣವಾಗಿದೆ.

ಯಶವಂತಪುರದ ಏರಿಯಾದಲ್ಲಿ 20ಕ್ಕೂ ಹೆಚ್ಚು ಗ್ರಾಹಕರಿಗೆ ಸಾವಿರಕ್ಕೂ ಹೆಚ್ಚು ಕರೆಂಟ್ ಬಿಲ್ ಬಂದಿದ್ದು, ಗೃಹಜ್ಯೋತಿ ಫಲಾನುಭವಿಗಳಿಗೆ ಬೆಸ್ಕಾಂ ಕರೆಂಟ್ ಬಿಲ್ ಶಾಕ್ ಕೊಟ್ಟಿದೆ. ಕಳೆದೆರಡು ತಿಂಗಳು ಸಾವಿರಕ್ಕೂ ಹೆಚ್ಚು ವಿದ್ಯುತ್ ಬಿಲ್ ಅನ್ನು ಮೀಟರ್ ರೀಡರ್ ಕೊಟ್ಟಿದ್ದು, ತನಗಿಚ್ಚೆ ಬಂದಂತೆ ಯಶವಂತಪುರ ಬೆಸ್ಕಾಂ ಯೂನಿಟ್ ಮೀಟರ್ ರೀಡರ್ ಬಿಲ್ ಕೊಟ್ಟಿದ್ದಾರೆ.

ಬೆಸ್ಕಾಂ ಕಂಪನಿಯ ಮೀಟರ್ ರೀಡರ್ ನಿರ್ಲಕ್ಷ್ಯಕ್ಕೆ ಗೃಹಜ್ಯೋತಿ ಫಲಾನುಭವಿಗಳಿಗೆ ಹೆಚ್ಚುವರಿ ಬಿಲ್ ಬಂದಿದ್ದು, ಕಳೆದ ಒಂಬತ್ತು ತಿಂಗಳಿನಿಂದ 0 ಕರೆಂಟ್ ಬಿಲ್ ಕಟ್ಟುತ್ತಿರುವವರು ಶಾಕ್ ಆಗಿದ್ದಾರೆ. ಈ ತಿಂಗಳು ಬರೋಬ್ಬರಿ 4,273 ರೂ. 1646 ರೂ, 1400 ರೂ. ರೂ. ಕರೆಂಟ್ ಬಿಲ್ ಬಂದಿದೆ. ಹೀಗಾಗಿ ಕರೆಂಟ್ ಬಿಲ್ ನೋಡಿ ಗ್ರಾಹಕರು ಶಾಕ್ ಆಗಿದ್ದು, ಈ ಬಗ್ಗೆ ಯಶವಂತಪುರ ಬೆಸ್ಕಾಂ ಕಚೇರಿಗೆ ಗ್ರಾಹಕರು ದೂರು ನೀಡಿದ್ದು, ಬೆಸ್ಕಾಂ ಅಧಿಕಾರಿಗಳು ಮಾತ್ರ ಪರಿಶೀಲನೆ ಮಾಡ್ತೇನೆ ಎನ್ನುತ್ತಿದ್ದಾರೆ.

## ಮಳೆ

ನಂತರದ ಮೂರು ದಿನ ಆರೆಂಜ್ ಅಲರ್ಟ್ ಘೋಷಿಸಿದೆ.

ಉತ್ತರ ಒಳನಾಡಿಗೆ ಇಂದು ಮತ್ತು ನಾಳೆ ಆರೆಂಜ್ ಅಲರ್ಟ್ ಘೋಷಿಸಿದ್ದು, ದಕ್ಷಿಣ ಒಳನಾಡಿನ ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲಿ ಸಾಧಾರಣ ಅಥವಾ ತುಂತುರು ಮಳೆಯಾಗುವ ಸಾಧ್ಯತೆಯಿದೆ. ನಗರದಲ್ಲಿ ಮುಂದಿನ ಮೂರ್ನಾಲ್ಕು ದಿನ ಮೋಡ ಕವಿದ ವಾತಾವರಣ ಮುಂದುವರಿಯುವ ಸಾಧ್ಯತೆ ಇದೆ.

## ಪತ್ತೆ ಹಚ್ಚಿದ ಪತಿರಾಯಇ

ಈ ಘಟನೆ ಚೀನಾದ ಹುಬೈ ಪ್ರಾಂತ್ಯದ ಶಿಯಾನ್ ಎಂಬಲ್ಲಿ ನಡೆದಿದ್ದು, ಪತ್ನಿಯ ಅಕ್ರಮ ಸಂಬಂಧದ ಬಗ್ಗೆ ಶಂಕೆಯನ್ನು ಹೊಂದಿದ್ದ ಪತಿರಾಯ ಡ್ರೋನ್ ಕ್ಯಾಮರಾ ಬಳಸಿ ಆಕೆಯ ಕಳ್ಳಾಟವನ್ನು ರೆಡ್ ಹ್ಯಾಂಡ್ ಆಗಿ ಪತ್ತೆ ಹಚ್ಚಿದ್ದಾನೆ.

33 ವರ್ಷದ ಜಿಂಗ್ ಕಳೆದ ವರ್ಷದಿಂದ ತನ್ನ ಪತ್ನಿಯ ವಿಚಿತ್ರ ವರ್ತನೆಯಿಂದ ಕಂಗೆಟ್ಟಿದ್ದ ಹಾಗೂ ಆಕೆಯ ನಡವಳಿಕೆಯಲ್ಲಿನ ಬದಲಾವಣೆಗಳನ್ನು ಗಮನಿಸುತ್ತಿದ್ದ. ಅಲ್ಲದೆ ಆಕೆ ಪದೇ ಪದೇ ತವರು ಮನೆಗೆ ಹೋಗುವುದಾಗಿ ಹೇಳಿ ತನ್ನ ಬಾಯ್‌ಫ್ರೆಂಡ್ ಅನ್ನು ಭೇಟಿಯಾಗುತ್ತಿದ್ದಳು. ಆಕೆ ನಿಜವಾಗಿಯೂ ಅಕ್ರಮ ಸಂಬಂಧವನ್ನು ಹೊಂದಿದ್ದಾಳೆಯೇ ಅಥವಾ ಇಲ್ಲವೆ ಎಂದು ತಿಳಿಯಲು ಜಿಂಗ್ ಡ್ರೋನ್ ಕ್ಯಾಮರಾದ ಸಹಾಯ ಪಡೆಯುತ್ತಾನೆ.

ಒಂದು ದಿನ ಪತ್ನಿ ಹೊರಗಡೆ ಹೋದಾಗ ಆಕೆಯ ಹಿಂದೆ ಡ್ರೋನ್ ಕ್ಯಾಮೆರಾವನ್ನೂ ಟ್ರ್ಯಾಕ್ ಮಾಡುತ್ತಾನೆ. ಕ್ಯಾಮೆರಾದಲ್ಲಿ ಪತ್ನಿ ಕಾರಿನಲ್ಲಿ ಬೇರೊಬ್ಬ ಗಂಡಸಿನ ಜೊತೆ ಗುಡ್ಡ ಪ್ರದೇಶಕ್ಕೆ ಹೋಗಿ, ಅಲ್ಲಿ ಕೈಕೈ ಹಿಡಿದು ಪುಟ್ಟ ಮಣ್ಣಿನ ಗುಡಿಸಲಿನ ಒಳಗೆ ಪ್ರವೇಶಿಸಿ ನಂತರ 20 ನಿಮಿಷಗಳ ನಂತರ ಗುಡಿಸಲಿನಿಂದ ಹೊರ ಬಂದು ಆ ವ್ಯಕ್ತಿಯೊಂದಿಗೆಯೇ ಕಛೇರಿಗೆ ಹೋದಂತಹ ದೃಶ್ಯವನ್ನು ಕಂಡು ಜಿಂಗ್ ಶಾಕ್ ಆಗುತ್ತಾನೆ. ಪತ್ನಿ ಆಕೆಯ ಬಾಸ್ ಜೊತೆಗೆಯೇ ಅನೈತಿಕ ಸಂಬಂಧವನ್ನು ಹೊಂದಿದ್ದು, ಈಕೆಯ ಕಳ್ಳಾಟ ಗೊತ್ತಾಗಿ ಜಿಂಗ್ ಇದೀಗ ಈ ಸಾಕ್ಷ್ಯದ ಆಧಾರದ ಮೇಲೆ ತನ್ನ ವಿಚ್ಛೇದನ ನೀಡಲು ಮುಂದಾಗಿದ್ದಾನೆ.

## 750 ಎಐ ಕ್ಯಾಮರಾ

ಈ ಕ್ಯಾಮರಾಗಳು ವೀಡಿಯೊ ಕಣ್ಗಾವಲು ಸುಗಮಗೊಳಿಸಲಿವೆ. ಸಂಚಾರ ನಿಯಮ ಉಲ್ಲಂಘಿಸುವವರಿಗೆ ದಂಡ ವಿಧಿಸಲೂ ನೆರವಾಗಲಿವೆ ಎಂದು ಶಿವ ಪ್ರಕಾಶ್ ಹೇಳಿದ್ದಾರೆ. ನೋ-ಎಂಟ್ರಿ ಜೋನ್‌ಗಳಲ್ಲಿ ಚಾಲನೆ ಮಾಡುವುದು ಅಥವಾ ಫುಟ್‌ಪಾತ್‌ಗಳಲ್ಲಿ ವಾಹನ ನಿಲುಗಡೆ ಮಾಡುವಂತಹ ನಿಯಮ ಉಲ್ಲಂಘನೆಗಳನ್ನು ಸದ್ಯ ಕ್ಯಾಮರಾ ಮೂಲಕ ಪತ್ತೆ ಮಾಡಲಾಗುತ್ತಿಲ್ಲ. ಹೆಚ್ಚುವರಿ ಕ್ಯಾಮರಾಗಳು ಇದಕ್ಕೆ ನೆರವಾಗಲಿವೆ ಎಂದು ಅವರು ತಿಳಿಸಿದ್ದಾರೆ.

## ಸಂಚಾರ ನಿರ್ಬಂಧ

ಮೊದಲ ಹಂತದಲ್ಲಿ, ಎಸ್‌ಆರ್ ರಸ್ತೆಯ ಸಮಯದಲ್ಲಿ (ಮೈಸೂರು ರಸ್ತೆಯಿಂದ ಜೆ.ಪಿ. ಜಂಕ್ಷನ್) ಕಾಮಗಾರಿ ನಡೆಯಲಿದ್ದು, ಎಸ್‌ಆರ್ ರಸ್ತೆ ಮೂಲಕ ಸಂಚರಿಸಿ ಜೆಪಿ ಸ್ಟ್ರೀಟ್‌ಗೆ ಸೇರುವ ವಾಹನಗಳು ಮೈಸೂರು ರಸ್ತೆಯಲ್ಲಿ ಮುಂದುವರಿಯಬೇಕು ಮತ್ತು ಮಾರ್ಕೆಟ್ ವೃತ್ತದಲ್ಲಿ ಎಡ ತಿರುವು ಪಡೆದು ಅವೆನ್ಯೂ ರಸ್ತೆ ಮೂಲಕ ಜೆಟಿ ಸ್ಟ್ರೀಟ್ ರಸ್ತೆಗೆ ತೆರಳಬೇಕು. ಜುಲೈ 29 ರಿಂದ ಎರಡನೇ ಹಂತದ ಕಾಮಗಾರಿ ಆರಂಭವಾಗಲಿದ್ದು ಪೊಲೀಸ್ ರಸ್ತೆ ಮತ್ತು ಎಸ್.ಆರ್. ಕ್ರಾಸ್ ರೋಡ್, ಪೊಲೀಸ್ ರಸ್ತೆ ಮೂಲಕ ಸಾಗುವ ವಾಹನಗಳು ಎಸ್.ಆರ್. ಜೆಪಿ ಸ್ಟ್ರೀಟ್‌ವರೆಗೆ ರಸ್ತೆ ಮತ್ತು ಜೆಪಿ ಸ್ಟ್ರೀಟ್ ರಸ್ತೆಯಲ್ಲಿ ಎಡ ತಿರುವು ಪಡೆದು ಎ.ಎಸ್. ಎ.ಎಸ್ ಚಾರ್ ರಸ್ತೆಯನ್ನು ಸಂಪರ್ಕಿಸಬೇಕು. ಜುಲೈ 31 ರಿಂದ ಆಗಸ್ಟ್ 16 ರ ವರೆಗೆ ಈ ಬದಲಿ ವ್ಯವಸ್ಥೆ ಜಾರಿಯಲ್ಲಿರಲಿದ್ದು, ಸಾರ್ವಜನಿಕರು ಸಹಕರಿಸಬೇಕು ಎಂದು ಸಂಚಾರ ಪೊಲೀಸರು ಮನವಿ ಮಾಡಿದ್ದಾರೆ.

## ಎಂಡಿ

ಕೋಟಿ ಕೋಟಿ ಹಣವನ್ನು ಲೂಟಿ ಹೊಡೆಯಲು ಎಂಡಿ ಪದ್ಮನಾಭ್ ನಕಲಿ ವ್ಯಕ್ತಿಯನ್ನೇ ಸೃಷ್ಟಿಸಿ ನಿಗಮದಲ್ಲಿ ಹುದ್ದೆ ಸಹ ನೀಡಿದ್ದರು. ಈ ನಕಲಿ ವ್ಯಕ್ತಿ 45 ಕೋಟಿ ರೂ. ಹಣ ವ್ಯವಹಾರ ಮಾಡಿದ ವಿಚಾರ ಈಗ ಬೆಳಕಿಗೆ ಬಂದಿದೆ.

**ಲೂಟಿಗಾಗಿ ನಕಲಿ ಹುದ್ದೆ:** ಕೋಟಿ ಕೋಟಿ ಲೂಟಿ ಹೊಡೆಯಲು ಪದ್ಮನಾಭ್ ಜ್ಯೂನಿಯರ್ ಅಕೌಂಟೆಂಟ್ ಹುದ್ದೆಯನ್ನು ಸೃಷ್ಟಿಸಿದ್ದರು. ಈ ಹುದ್ದೆಗೆ ಶಿವಕುಮಾರ್ ಹೆಸರಿನಲ್ಲಿ ಉದ್ಯೋಗಿಯನ್ನು ನೇಮಕ ಮಾಡಲಾಗಿತ್ತು. ಜ್ಯೂನಿಯರ್ ಅಕೌಂಟೆಂಟ್ ಅಂತಾ ಐಡಿ ಕಾರ್ಡ್ ನೀಡಿ ಹಣಕಾಸು ವ್ಯವಹಾರ ನೋಡಿಕೊಳ್ಳುವ ಅಧಿಕಾರ ನೀಡಲಾಗಿತ್ತು. ಅಸಲಿಗೆ ಶಿವಕುಮಾರ್ ಹೆಸರಿನ ವ್ಯಕ್ತಿಯೇ ಇರಲಿಲ್ಲ.

ಹಣಕ್ಕೆ ಕನ್ನ ಹಾಕಲು ಎಂಜಿ ರಸ್ತೆಯ ಯೂನಿಯನ್ ಬ್ಯಾಂಕ್‌ನಲ್ಲಿ ಫೆ. 21ರಂದು 034123030001619 ಖಾತೆ ಓಪನ್ ಆಗುತ್ತದೆ.ಈ ಶಿವಕುಮಾರ್ ಖಾತೆಗೆ ನಿಗಮದಿಂದ 187 ಕೋಟಿ ರೂ. ವರ್ಗಾವಣೆಗೆ ಮನವಿ ಹೋಗುತ್ತದೆ. ಮನವಿ ಮೇರೆಗೆ ನಿಗಮದಿಂದ ಮಾ 5ರಿಂದ ಮೇ 6 ರವರೆಗೆ 187 ಕೋಟಿ ರೂ. ಹಣ ವರ್ಗಾವಣೆಯಾಗುತ್ತದೆ. ಶಿವಕುಮಾರ್ ಖಾತೆಯಿಂದ ಹೈದರಾಬಾದ್‌ನ ಆರ್‌ಬಿಎಲ್ ಬ್ಯಾಂಕ್‌ಗೆ ಹಣ ವರ್ಗಾವಣೆ ಆಗುತ್ತದೆ. ಪದ್ಮನಾಭ್ ಕೃತ್ಯಕ್ಕೆ ಯೂನಿಯನ್ ಬ್ಯಾಂಕ್ ಸಿಬ್ಬಂದಿ ಸಾಥ್ ನೀಡಿದ್ದರಿಂದ ಇಷ್ಟೊಂದು ಹಣವನ್ನು ಲೂಟಿ ಮಾಡಲಾಗಿದೆ.

# ವೈಟ್ ಟಾಪಿಂಗ್ ಕಾಮಗಾರಿ ಚಾಲನೆ ವೇಳೆ ಡಿಕೆ ಶಿವಕುಮಾರ್ ಶೂ ಕಳವು!

**ಬೆಂಗಳೂರು:** ಬೆಂಗಳೂರು ನಗರದ ಕೆಲ ರಸ್ತೆಗಳಿಗೆ ವೈಟ್ ಟಾಪಿಂಗ್ ಮಾಡುವ ಕಾಮಗಾರಿಗೆ ಸೋಮವಾರ ಬೆಳಗ್ಗೆ ಡಿಸಿಎಂ ಡಿಕೆ ಶಿವಕುಮಾರ್ ಚಾಲನೆ ನೀಡಿದರು. ಸದಾಶಿವನಗರದ ಭಾಷ್ಯಂ ಸರ್ಕಲ್ ಬಳಿ ಕಾಮಗಾರಿಗೆ ಚಾಲನೆ ನೀಡಲಾಯಿತು. ಶಾಸಕ ಅಶ್ವತ್ಥ್ ನಾರಾಯಣ, ಬಿಬಿಎಂಪಿಯ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಇದ್ದರು. ಇದೇ ವೇಳೆ, ಚಾಲಾಕಿ ಕಳ್ಳನೊಬ್ಬ ಡಿಕೆ ಶಿವಕುಮಾರ್ ಶೂ ಕಳವಾದ ಘಟನೆಯೂ ನಡೆಯಿತು.



ವೈಟ್ ಟಾಪಿಂಗ್ ಕಾಮಗಾರಿಗೆ ಚಾಲನೆಗೂ ಮುನ್ನ ರಸ್ತೆಗೆ ಪೂಜೆ ನೆರವೇರಿಸಲಾಯಿತು. ಪೂಜೆಯಲ್ಲಿ ಭಾಗಿಯಾಗುವುದಕ್ಕಾಗಿ ಶೂ ಬಿಚ್ಚಿದ್ದ ಡಿಕೆ ಶಿವಕುಮಾರ್‌ಗೆ, ಪೂಜೆ ಮುಗಿಸಿ ಕಾರ್ ಬಳಿ ತೆರಳಿದಾಗ ಅಚ್ಚರಿ ಕಾದಿತ್ತು. ಕೆಲಕಾಲ ಶೂಗಾಗಿ ಹುಡುಕಾಡಿದ ಅವರು ನಂತರ ಕಾರಿನಲ್ಲಿದ್ದ ಬೇರೆ ಶೂ ಧರಿಸಿ ಹೊರಟರು. ರಾಜಧಾನಿಯ ರಸ್ತೆಗಳಿಗೆ ವೈಟ್ ಟಾಪಿಂಗ್ ಟಚ್ ನೀಡಲು ಬಿಬಿಎಂಪಿ ಮುಂದಾಗಿದ್ದು, ಸುಮಾರು 150 ಕಿಮೀ ವ್ಯಾಪ್ತಿಯಲ್ಲಿ ಕಾಮಗಾರಿ ನಡೆಯಲಿದೆ. ಇದೀಗ ನಾಲ್ಕು ಕಡೆ ಕಾಮಗಾರಿಗೆ ಚಾಲನೆ ನೀಡಲಾಗಿದೆ.

**1700 ಕೋಟಿ ರೂ. ವೆಚ್ಚದ ಕಾಮಗಾರಿ:** ವೈಟ್ ಟಾಪಿಂಗ್ ಕಾಮಗಾರಿ 1700 ಕೋಟಿ ರೂಪಾಯಿ ವೆಚ್ಚದಲ್ಲಿ ನಡೆಯಲಿದ್ದು, ಆರಂಭದಲ್ಲಿ 16.62 ಕಿಮೀ ಉದ್ದದ ರಸ್ತೆಗೆ ವೈಟ್ ಟಾಪಿಂಗ್ ಮಾಡಲಾಗುತ್ತಿದೆ. ಮೊದಲಹಂತದಲ್ಲಿ ಬಿಬಿಎಂಪಿ ಪಶ್ಚಿಮ ವಲಯದಲ್ಲಿ 198 ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿ ನಡೆಯಲಿದೆ.

ಬ್ರಾಂಡ್ ಬೆಂಗಳೂರು-ಸುಗಮ ಸಂಚಾರ ಬೆಂಗಳೂರು ಅಡಿ ವೈಟ್ ಟಾಪಿಂಗ್ ಕಾಮಗಾರಿ ಯೋಜನೆ ಹಮ್ಮಿಕೊಳ್ಳಲಾಗಿದ್ದು, ಮಹಾಲಕ್ಷ್ಮೀಪುರ, ಮಲ್ಲೇಶ್ವರ, ಗಾಂಧಿನಗರ, ಚಾಮರಾಜಪೇಟೆ, ಮಕ್ಕಳ ಕೂಟದಲ್ಲಿ ಚಾಲನೆ ನೀಡಲಾಗಿದೆ.

# ವಕ್ಫ್ ಬೋರ್ಡ್‌ನಲ್ಲೂ ಕೋಟ್ಯಂತರ ರೂಪಾಯಿ ಅಕ್ರಮ ವರ್ಗಾವಣೆ

**ಬೆಂಗಳೂರು:** ವಾಲ್ಮೀಕಿ ನಿಗಮ, ಬಾಗಲಕೋಟೆ ಪ್ರವಾಸೋದ್ಯಮ ಇಲಾಖೆಯ ಬಳಿಕ ವಕ್ಫ್ ಬೋರ್ಡ್‌ನಲ್ಲೂ ಕೋಟ್ಯಂತರ ರೂ. ಹಣವನ್ನು ಅಕ್ರಮ ವರ್ಗಾವಣೆ ಮಾಡಿರುವ ವಿಚಾರ ಈಗ ಬೆಳಕಿಗೆ ಬಂದಿದೆ. ಹೌದು. ವಕ್ಫ್ ಬೋರ್ಡ್ ಮಾಜಿ ಸಿಇಒ ಝುಲ್ಫಿಕಾರುಲ್ಲಾ ವಿರುದ್ಧ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಮುಖ್ಯ ಲೆಕ್ಕಾಧಿಕಾರಿ ಮೀರ್ ಅಹಮದ್ ಅಬ್ಬಾಸ್ ಕೊಟ್ಟ ದೂರಿನ ಆಧಾರ ಮೇಲೆ ಎಫ್‌ಐಆರ್ ದಾಖಲಾಗಿದೆ.

**ದೂರಿನಲ್ಲಿ ಏನಿದೆ?:** ವಕ್ಫ್ ಮಂಡಳಿ ಆಸ್ತಿ ಮಾರಾಟ ಸಂಬಂಧ 4 ಕೋಟಿ ರೂ. ಹಣ ಮಂಡಳಿ ಬ್ಯಾಂಕ್ ಖಾತೆಗೆ ಜಮೆಯಾಗಿತ್ತು. ಈ ಹಣವನ್ನು 2016ರಲ್ಲಿ ಚಿಂತಾಮಣಿಯ ವಿಜಯ ಬ್ಯಾಂಕ್‌ಗೆ ವರ್ಗಾವಣೆ ಮಾಡಿದ್ದ ಝುಲ್ಫಿಕಾರುಲ್ಲಾ ಸಿಇಒ ಹೆಸರಿನಲ್ಲಿ ಎರಡು ಚೆಕ್ ಮೂಲಕ ಫಿಕ್ಸೆಡ್ ಡೆಪಾಸಿಟ್ ಮಾಡಿದ್ದರು. ಇದರಿಂದ ವಕ್ಫ್ ಮಂಡಳಿಗೆ 8 ಕೋಟಿ ರೂ.ನಷ್ಟ ಆಗಿದೆ ಎಂದು ದೂರು ನೀಡಲಾಗಿದೆ.

ಸಂಸ್ಥೆಯ ಗಮನಕ್ಕೆ ತರದೇ ಹಣ ವರ್ಗಾವಣೆ ಮಾಡಿ ನಂಬಿಕೆ ದ್ರೋಹ ಎಸಗಿದ್ದಾರೆಂದು ದೂರಿನಲ್ಲಿ ಆರೋಪಿಸಲಾಗಿದೆ.

# ನಾಪತ್ತೆಯಾಗಿದ್ದ ದದ್ದಲ್ ವಿಧಾನಸೌಧದಲ್ಲಿ ಪ್ರತ್ಯಕ್ಷ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ. ಹಗರಣದ ಪ್ರಕರಣದಲ್ಲಿ ಸಿಲುಕಿರುವ ನಿಗಮದ ಅಧ್ಯಕ್ಷ, ಶಾಸಕ ಬಸನಗೌಡ ದದ್ದಲ್ ಇಂದು ವಿಧಾನಸಭಾ ಕಲಾಪಕ್ಕೆ ಹಾಜರಾಗಿದ್ದಾರೆ.

ವಿಧಾನಸಭೆಯಲ್ಲಿ ದದ್ದಲ್ ಕಾಣಿಸಿದ ಬೆನ್ನಲ್ಲೇ ಮಾಧ್ಯಗಳು ಕೇಳಿದ ಪ್ರಶ್ನೆಗೆ, ನನಗೆ ಎಸ್‌ಐಟಿ ನೋಟಿಸ್ ನೀಡಿಲ್ಲ, ಇಡಿಯಿಂದಲೂ ನೋಟಿಸ್ ಬಂದಿಲ್ಲ. ನಾನು ಅಧಿವೇಶನಕ್ಕೆ ಹೋಗುತ್ತಿದ್ದೇನೆ. ಹೆಚ್ಚೇನೂ ಹೇಳುವುದಿಲ್ಲ ಎಂದು ಹೇಳಿ ತೆರಳಿದರು.



ವಿಧಾನಸೌಧಕ್ಕೆ ಆಗಮಿಸಿದ ದದ್ದಲ್ ಈಗ ಸಿಎಂ ಸಿದ್ದರಾಮಯ್ಯ ಅವರನ್ನು ಆಡಳಿತ ಪಕ್ಷದ ಕೊಠಡಿಯಲ್ಲಿ ಭೇಟಿ ಮಾಡಿ ಚರ್ಚಿಸುತ್ತಿದ್ದಾರೆ.

ಈಗಾಗಲೇ ವಿಚಾರಣೆಗೆ ಹಾಜರಾಗುವಂತೆ ಜಾರಿ ನಿರ್ದೇಶನಾಲಯ ದದ್ದಲ್ ಅವರಿಗೆ ನೋಟಿಸ್ ಜಾರಿ ಮಾಡಿದೆ. ಕಲಾಪ ನಡೆಯುವಾಗ ಶಾಸಕರನ್ನು ಬಂಧಿಸಬೇಕಾದರೆ ಸ್ಪೀಕರ್ ಅನುಮತಿ ಕಡ್ಡಾಯ. ಅಧಿವೇಶನ ನಡೆಯುವಾಗ ಬಂಧನಕ್ಕೆ ಸ್ಪೀಕರ್ ಅನುಮತಿ ನೀಡದೇ ಇದ್ದರೆ ಬಂಧನ ಮಾಡಲು ಸಾಧ್ಯವಿಲ್ಲ. ಹೀಗಾಗಿ ಇಡಿಯ ಮುಂದಿನ ನಡೆ ಕುತೂಹಲ ಮೂಡಿಸಿದೆ.

ಸಂಜೆ ಮುಗಿಲು
ಸೋಮವಾರ
15.7.2024


# ಬೇಲೂರಿನಲ್ಲಿ ಪುಷ್ಪಗಿರಿ ಗುರುಗಳಿಗೆ ಗುರುವಂದನಾ

**ಬೇಲೂರು:** ಶಿಲ್ಪಕಲಾ ನಾಡು ಹೊಯ್ಸಳರ ಬೀಡು ಬೇಲೂರಿನಲ್ಲಿ ಇದೇ ಜುಲೈ 18 ಗುರುವಾರ ಬೆಳಿಗ್ಗೆ 10-30 ಕ್ಕೆ ಪಟ್ಟಣದ ಹೃದಯ ಭಾಗದ ವೀರಶೈವ ಕಲ್ಯಾಣ ಮಂಟಪದಲ್ಲಿ ಪುಷ್ಪಗಿರಿ ಜಗದ್ಗುರುಗಳಿಗೆ ಗುರು ಪೂರ್ಣಿಮಾ ಅಂಗವಾಗಿ ಗುರು ವಂದನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀಗಳ ಕೃಪೆಗೆ ಪಾತ್ರರಾಗುವ ಮೂಲಕ ಕಾರ್ಯಕ್ರಮ ಯಶಸ್ವಿ ಕಾರಣಕರ್ತರಾಗಬೇಕು ಎಂದು ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲಾ ಯೋಜನಾಧಿಕಾರಿ ವಿನುತ ಧನಂಜಯ ಹೇಳಿದರು.



ಪಟ್ಟಣದ ವೀರಶೈವ ಕಲ್ಯಾಣ ಮಂಟಪದ ಬಳಿ ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಗುರುವಂದನಾ ಕಾರ್ಯಕ್ರಮದ ಆಹ್ವಾನ ಪತ್ರಿಕೆ ವಿತರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸುಮಾರು 1200 ವರ್ಷಗಳ ಐತಿಹಾಸಿಕ ಹಿನ್ನೆಲೆಯನ್ನು ಹೊಂದಿರುವ ಪುಷ್ಪಗಿರಿ ಮಹಾಸಂಸ್ಥಾನ ಪ್ರಸ್ತುತ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ತನ್ನದೆಯಾದ ಛಾಪು ಮೂಡಿಸಿದೆ. ಇದಕ್ಕೆ ಕಾರಣ ಕಳೆದ 17 ವರ್ಷದ ಹಿಂದೆ ಸಮಾಜ ಸರ್ವತೋಮುಖ ಅಭಿವೃದ್ಧಿಗಾಗಿ ತಮ್ಮನ್ನೆ ತಾವು ತೊಡಗಿಸಿಕೊಂಡು ಪವಿತ್ರ ಗುರು ಪೂರ್ಣಿಮಾ ದಿನ ಸನ್ಯಾಸತ್ವ ಸ್ವೀಕರಿಸಿದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಸೋಮಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ಕಾರ್ಯವೈಖರಿ ನಿಜಕ್ಕೂ ಅಗಮ್ಯವಾಗಿದೆ. ಧಾರ್ಮಿಕವಾಗಿ ಪುಷ್ಪಗಿರಿ ಕ್ಷೇತ್ರವನ್ನು ರಜತಗಿರಿಯಾಗಿ ಮತ್ತು ಭೂಕೈಲಾಸದಂತೆ ಮಾಡಿದಲ್ಲದೆ ಶೈಕ್ಷಣಿಕ, ಸಾಮಾಜಿಕ ಮತ್ತು ಪರಿಸರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅದ್ವಿತೀಯ ಸಾಧನೆ ಮಾಡಿದ್ದಾರೆ ಎಂದ ಅವರು 2020 ರಲ್ಲಿ ಆರಂಭವಾದ ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ರಾಜ್ಯದ ನಾನಾ ಜಿಲ್ಲೆಯಲ್ಲಿ ಸಾವಿರಾರು ಮಹಿಳಾ ಸ್ವ ಸಹಾಯ ಸಂಘವನ್ನು ಸ್ಥಾಪಿಸಿ ಹಣಕಾಸು ವಹಿವಾಟು ಜೊತೆಗೆ ಮಹಿಳಾ ಸಬಲೀಕರಣಕ್ಕೆ ಮುನ್ನುಡಿ ಬರೆಯುತ್ತಿದೆ.ಕಳೆದ 17 ವರ್ಷಗಲ್ಲಿ ಉತ್ತಮ ಸಾದನೆ ಮಾಡುತ್ತಿರು ಪುಷ್ಪಗಿರಿ ಜಗದ್ಗುರುಗಳಿಗೆ ಇದೇ ಜುಲೈ 18 ರಂದು ಬೃಹತ್ ಮಟ್ಟದಲ್ಲಿ ಗುರು ಪೂರ್ಣಿಮಾ ಅಂಗವಾಗಿ ಗುರು ವಂದನೆ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಸರ್ವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಮನವಿ ಮಾಡಿದರು.

ಹಾಸನ ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾ ನಿರ್ದೇಶಕ ಅರೇಹಳ್ಳಿ ಗೀತಾಶಿವರಾಜ್ ಮಾತನಾಡಿ, ಇದೇ ಜುಲೈ 18 ನೇ ಗುರುವಾರ ಬೆಳಿಗ್ಗೆ ಬೇಲೂರು ಪಟ್ಟಣದ ವೀರಶೈವ ಕಲ್ಯಾಣ ಮಂಟಪದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಮುನ್ನ ಪರಮಪೂಜ್ಯ ಜಗದ್ಗುರುಗಳನ್ನು ಪಟ್ಟಣದ ಹೃದಯ ಭಾಗದ ಬಸವೇಶ್ವರ ವೃತ್ತದಿಂದ 101 ಪೂರ್ಣ ಕುಂಬದೊಂದಿಗೆ ಸ್ವಾಗತಿಸಲಾಗುತ್ತದೆ ಎಂದ ಅವರು ಬಳಿಕ ವೇದಿಕೆಯ ಕಾರ್ಯಕ್ರಮ ನಡೆಸಲಾಗುತ್ತದೆ. ಈ ಸಮಾರಂಭದಲ್ಲಿ ನಾಡಿನ ಹರ ಗುರು ಚರಮೂರ್ತಿಗಳು. ಕೇಂದ್ರ ಸಚಿವರು, ರಾಜ್ಯ ಸಚಿವರು, ನೂತನ ಸಂಸದರು, ಶಾಸಕರು ನಾಡಿನ ಸಮಾಜದ ಚಿಂತಕರು ಭಾಗವಹಿಸಲಿದ್ದು ಸರ್ವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕಾಗಿ ವಿನಂತಿ ಗುರುವಂದನಾ ಕಾರ್ಯಕ್ರಮ ಸಂಪೂರ್ಣ ದಾಸೋಹಿಗಳಾದ ಗ್ರಾನೈಟ್ ರಾಜಶೇಖರ ಅವರಿಗೆ ಸಮಾಜದ ಪರವಾಗಿ ಅಭಿನಂದನೆ ಸಲ್ಲಿಸಲಾಗುತ್ತದೆ ಎಂದರು.

> **"ಪುಷ್ಪಗಿರಿ ಜಗದ್ಗುರುಗಳಿಗೆ ಬೇಲೂರಿನಲ್ಲಿ ಹಮ್ಮಿಕೊಂಡ ಗುರುವಂದನಾ ಕಾರ್ಯಕ್ರಮ ಒಂದು ಜಾತಿ, ಧರ್ಮಕ್ಕೆ ಸೀಮಿತವಾಗಿಲ್ಲ, ಸರ್ವರು ಕೂಡ ಈ ಪವಿತ್ರ ಕಾರ್ಯದಲ್ಲಿ ಭಾಗವಹಿಸುವ ಮೂಲಕ ಸಾಮರಸ್ಯ ಬದುಕಿಗೆ ಶ್ರೀಕಾರ ಹಾಕಬೇಕಿದೆ.**
> **-ವಿನುತ ಧನಂಜಯ್**
> ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಯೋಜನಾಧಿಕಾರಿ.

ತುಂಬದೇವರಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ಟಿ.ಪಿ.ಮಲ್ಲೇಶ ಮಾತನಾಡಿ, ಕಳೆದ 17 ವರ್ಷದಿಂದ ಪುಷ್ಪಗಿರಿ ಜಗದ್ಗುರುಗಳು ಪುಷ್ಪಗಿರಿಯನ್ನು ಸುಕ್ಷೇತ್ರವಾಗಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಕಾಯಕಯೋಗಿಯಾಗಿ, ಧರ್ಮರಕ್ಷರಾಗಿ ಅವಿರತವಾಗಿ ಕೆಲಸ ನಿರ್ವಹಿಸುವ ಪುಷ್ಪಗಿರಿ ಶ್ರೀಗಳಿಗೆ ಜುಲೈ 18 ರಂದು ನಡೆಯುವ ಐತಿಹಾಸಿಕ ಕಾರ್ಯಕ್ರಮ ಬೇಲೂರಿನ ಚರಿತ್ರೆ ಪುಟದಲ್ಲಿ ಸೇರಲಿದೆ.ಅಂದಿನ ಕಾರ್ಯಕ್ರಮದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಮತ್ತು ರಕ್ತದಾನ ಶಿಬಿರ ಹಮ್ಮಿಕೊಂಡ ಬಗ್ಗೆ ತಿಳಿಸಿದರು. ರೋಹಿಣಿ ಮಲ್ಲೇಶ್, ಸಾವಿತ್ರಮ್ಮ, ರತ್ನ, ನಯನಾ, ಮೀನಾಕ್ಷಿ ಉಮೇಶ್, ಗೀತಾ ಸೋಮಶೇಖರ, ಭಾರತಿ, ದ್ರಾಕ್ಷಯಿಣಿ ಇನ್ನೂ ಮುಂತಾದವರು ಹಾಜರಿದ್ದರು.

# ರೈತ ಮುಖಂಡರ ಪ್ರತಿಭಟನೆ

**ಚಾಮರಾಜನಗರ :** ಜಿಲ್ಲೆಯ ಹನೂರು ತಾಲ್ಲೂಕಿನ ಸೂಳೇರಿಪಾಳ್ಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆರು ಗ್ರಾಮಗಳಿಗೆ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸಿಲ್ಲ ಎಂದು ಆರೋಪಿಸಿ ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡರು ಪ್ರತಿಭಟನೆ ನಡೆಸಿದರು.

ರೈತ ಸಂಘ ಉಪಾಧ್ಯಕ್ಷ ಗೌಡೇಗೌಡ, ಕಾರ್ಯದರ್ಶಿ ಶೈಲೇಂದ್ರ ನೇತೃತ್ವದಲ್ಲಿ ಸೂಳೇರಿಪಾಳ್ಯ ಗ್ರಾಮದ ಮುಖ್ಯ ರಸ್ತೆಯಿಂದ ಹೊರಟ ಪ್ರತಿಭಟನಾಕಾರರು ಗ್ರಾಮ ಪಂಚಾಯಿತಿ ಮುಂಭಾಗ ಜಮಾವಣೆಗೊಂಡು ತಮ್ಮ ಆಕ್ರೋಶ ಹೊರ ಹಾಕಿದರು.

ಜಿಲ್ಲಾ ಉಪಾಧ್ಯಕ್ಷ ಗೌಡೇಗೌಡ ಮಾತನಾಡಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಸಿಗುವ ಎಲ್ಲಾ ಸೌಲಭ್ಯಗಳ ಮಾಹಿತಿಯನ್ನು ಕಚೇರಿ ನಾಮ ಫಲಕದಲ್ಲಿ ಅಳವಡಿಸಬೇಕು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಡೆಂಗ್ಯೂ ಜ್ವರ ಕಾಣಿಸಿಕೊಂಡರೆ ಪಿ.ಡಿ.ಒ ಹಾಗೂ ಕಾರ್ಯ ದರ್ಶಿಗಳು ಹೊಣೆಗಾರರಾಗುತ್ತೀರಿ ಎಂದು ಎಚ್ಚರಿಕೆ ನೀಡಿದರು.

ರಾಜ್ಯ ರೈತ ಸಂಘ ಹನೂರು ತಾಲ್ಲೂಕು ಚಾಮರಾಜನಗರ ಜಿಲ್ಲೆಗಳಿಗೆ ಸಮರ್ಪಕವಾಗಿ ಸರ್ಕಾರದ ಹಣವನ್ನು ನೀಡುತ್ತಿಲ್ಲ. ಇದರಿಂದ ನಮ್ಮ ಭಾಗದ ರೈತರು ಪ್ರತಿನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ. ಇನ್ನು ಸರ್ಕಾರದಿಂದ ಕೊಡುವ ಹಣಕ್ಕೆ ಕಮಿಷನ್ ಪಡೆಯುತ್ತಿದ್ದಾರೆ. ಸರ್ಕಾರ ನಿಗದಿತ ಸಂಬಳ ನೀಡಿದರು ಕಮಿಷನ್ ಪಡೆಯುತ್ತಿರುವುದು ಎಷ್ಟರಮಟ್ಟಿಗೆ ಸರಿ, ನಾವು ನಿಮಗೆ ದಾಖಲೆ ಸಮೇತ ಮಾಹಿತಿ ನೀಡುತ್ತೇವೆ. ನೀವು ಅವರನ್ನು ಅಮಾನತುಪಡಿಸಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಅಂಚೆ ಕಚೇರಿ ಹಿರಿಯ ಪೋಸ್ಟ್ ಮಾಸ್ಟರ್ ಮಂಜುನಾಥ್ ಮಾತನಾಡಿ, ನಿಮ್ಮ ಸಾಕ್ಷಿ ಹಾಗೂ ದಾಖಲಾತಿಗಳನ್ನು ಉನ್ನತ ಮಟ್ಟದ ಅಧಿಕಾರಿಗಳಿಗೆ ಕಳುಹಿಸಿಕೊಟ್ಟು ತನಿಖೆ ಮಾಡಿಸುತ್ತೇವೆ. ಒಂದು ವೇಳೆ ಕಮಿಷನ್ ಪಡೆದಿರುವುದು ಸಾಬೀತಾದರೆ ಅವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ತಾಲೂಕು ಅಧ್ಯಕ್ಷ ಅಮ್ಮದ್ ಖಾನ್ ಮಾತನಾಡಿ, ಸೂಳೇರಿಪಾಳ್ಯ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಸಪ್ಪನ ದೊಡ್ಡಿ ಕಾಂಚಳ್ಳಿ, ಗುಂಡಾಪುರ, ಪಚ್ಚೆ ದೊಡ್ಡಿ ಗ್ರಾಮದ ಸಾರ್ವಜನಿಕರು ಸಾವಿರಾರು ಖಾತೆಗಳನ್ನು ಹೊಂದಿದ್ದು ವೃದ್ಯಾಪ ವೇತನ, ವಿಧವಾ ವೇತನ, ಅಂಗವಿಕಲ ವೇತನ ಹಾಗೂ ಸರ್ಕಾರದ ವತಿಯಿಂದ ಬರುವ ಬೆಳೆ ಪರಿಹಾರದ ಹಣವನ್ನು ನೀಡಲು ತಿಂಗಳಗಟ್ಟಲೆ ವಿಳಂಬ ಮಾಡುತ್ತಿರುವುದರಿಂದ ಫಲಾನುಭವಿಗಳಿಗೆ ತೊಂದರೆಯಾಗಿದೆ. ಇದಲ್ಲದೆ ಅಂಚೆ ಕಚೇರಿಯ ಸಿಬ್ಬಂದಿಗಳು ಅಸ್ಪಶತೆ ಮಾಡುತ್ತಿದ್ದಾರೆ. ಇವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ರೈತರ ಮನವಿ ಸ್ವೀಕರಿಸಿ ಪಿಡಿಒ ಮಾದೇಶ್ ಮಾತನಾಡಿ, ರೈತ ಮುಖಂಡರು ನೀಡಿರುವ ಮನವಿಯನ್ನು ಆದ್ಯತೆ ಮೇರೆಗೆ ಹಂತ ಹಂತವಾಗಿ ಬಗೆಹರಿಸಲಾಗುವುದು. ನಮ್ಮ ಮಟ್ಟದಲ್ಲಿಯೇ ಬಗೆಹರಿಸುವಂತಹ ಸಮಸ್ಯೆಗಳನ್ನು ಆದಷ್ಟು ಶೀಘ್ರದಲ್ಲಿಯೇ ಬಗೆಹರಿಸುವುದಾಗಿ ಭರವಸೆ ನೀಡಿದರು. ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಶೈಲೇಂದ್ರ, ರೈತ ಮುಖಂಡರಾದ ಬಸವರಾಜು, ವೆಂಕಟೇಶ್ ಭಾಗವಹಿಸಿದ್ದರು.




# ಮಾದಪಟ್ಟಣ ಆಸ್ಪತ್ರೆ ಸೇವೆಯಲ್ಲಿ ಪ್ರಥಮ

## ಗುಂಡ್ಲುಪೇಟೆ ದೇಶಕ್ಕೆ ಮೊದಲು: ಶಾಸಕ ಗಣೇಶ್ ಪ್ರಸಾದ್ ಶ್ಲಾಘನೆ

**ಗುಂಡ್ಲುಪೇಟೆ:** ತಾಲೂಕಿನ ಮಾದಪಟ್ಟಣ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಕೀಯ ಸೇವೆಯಲ್ಲಿ ರಾಜ್ಯಕ್ಕೆ ಮೊದಲ ಸ್ಥಾನ ಗಳಿಸಿದರೆ, ಹೊರರೋಗಿಗಳ ಚಿಕಿತ್ಸೆಗೆ ಗುಂಡ್ಲುಪೇಟೆ ದೇಶಕ್ಕೆ ಮೊದಲಾಗಿದೆ ಎಂದು ಶಾಸಕ ಗಣೇಶ್‌ಪ್ರಸಾದ್ ಶ್ಲಾಘಿಸಿದ್ದಾರೆ.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಆರೋಗ್ಯ ಇಲಾಖೆಯಲ್ಲಿ ಉತ್ತಮ ಸೇವೆಗಳನ್ನು ನೀಡಿ ಪ್ರಶಸ್ತಿ ಗರಿಗಳನ್ನು ಹೊಂದಿರುವುದು ನಮ್ಮ ತಾಲೂಕಿನ ಹಿರಿಮೆ ಎಂದು ಆರೋಗ್ಯ ಇಲಾಖೆಯ ಕಾರ್ಯವನ್ನು ಶಾಸಕರು ಶ್ಲಾಘಿಸಿದರು.

ಆರೋಗ್ಯಾಧಿಕಾರಿ ಈ ಬಗ್ಗೆ ವಿವರವಾಗಿ ತಿಳಿಸಿ ಎಲ್ಲಾ ವೈದ್ಯಕೀಯ ಸೇವೆಯನ್ನು ಜನರಿಗೆ ತಲುಪಿಸಿದ ಮಾದಪಟ್ಟಣ ಪ್ರಾಥಮಿಕ ಆರೋಗ್ಯ ಕೇಂದ್ರ ರಾಜ್ಯಕ್ಕೆ ಮೊದಲಾದರೆ, ಒಬ್ಬ ಹೊರ ರೋಗಿಯು ಒಂದು ಬಾರಿ ಟೋಕನ್ ರಿಜಿಸ್ಟರ್ ಮಾಡಿದರೆ ದೇಶದ ಯಾವುದೇ ಸರ್ಕಾರಿ ಆಸ್ಪತ್ರೆಗೆ ಹೋದರೆ ಅವರ ಆಧಾರ್ ಕಾರ್ಡ್ ನಂಬರ್ ನೀಡಿದರೆ ಸಾಕು ಅವರು ಪಡೆದ ಚಿಕಿತ್ಸೆಯು ಅದರಲ್ಲಿ ಮಾಹಿತಿಯು ಸ್ಟೋರ್ ಆಗಿ ಪದೇ ಪದೇ ಅವರ ಹೆಸರು ವಿಳಾಸವನ್ನು ನೋಂದಾಯಿಸುವುದು ತಪ್ಪುತ್ತದೆ ಆದ್ದರಿಂದ ಅದನ್ನು ಪ್ರತಿ ಹೋರ ರೋಗಿಯ ಮಾಹಿತಿಯನ್ನು ಸಂಗ್ರಹಿಸುವಲ್ಲಿ ನಮ್ಮ ಗುಂಡ್ಲುಪೇಟೆ ಸಾರ್ವಜನಿಕ ಆಸ್ಪತ್ರೆಯಲ್ಲಿ ಮಾಡಿರುವುದಕ್ಕೆ ದೇಶದಲ್ಲಿ ಮೊದಲನೇ ಸ್ಥಾನದಲ್ಲಿದೆ ಎಂದು ತಿಳಿಸಿದರು.

ಬಫರ್ ಝೋನ್ ಅರಣ್ಯ ವಲಯದಲ್ಲಿ 33 ಪ್ರಕರಣಗಳಲ್ಲಿ ಬೆಳೆ ನಷ್ಟ ಪರಿಹಾರ, ಪ್ರಾಣಿಗಳಿಂದ ದನ-ಕರುಗಳಿಗೆ ಹಾನಿ ಉಂಟಾದ ಪ್ರಕರಣದಲ್ಲಿ ಪರಿಹಾರಗಳನ್ನು ಅರಣ್ಯ ಇಲಾಖೆ ನೀಡಿದೆ ಎಂದು ಅರಣ್ಯಾಧಿಕಾರಿ ತಿಳಿಸಿದರು. ಆಗ ಶಾಸಕ ಗಣೇಶ್



ಪ್ರಸಾದ್ ಮಾತನಾಡಿ ಮಾನವ ಪ್ರಾಣಿ ಸಂಘರ್ಷ ತಡೆಗೆ ಸೂಕ್ತ ತಂಡ ರಚಿಸಿ ಯಾವುದೇ ಹಾನಿಗಳು ಆಗದಂತೆ ತಡೆಗಟ್ಟಲು ಸೂಚನೆ ನೀಡಿದರು. ರೈತರಿಗೆ ಆದಷ್ಟು ಬೇಗ ಸೋಲಾರ್ ಫೆನ್ಸ್ ಅಳವಡಿಸಲು ಅನುಮತಿ ನೀಡಬೇಕು ಎಂದರು.

ಕರ್ನಾಟಕ ಗೃಹ ಮಂಡಳಿ ವತಿಯಿಂದ ಪಂಜನಹಳ್ಳಿ ಗ್ರಾಮದ ಮೂರನೇ ಹಂತ ಅಭಿವೃದ್ಧಿ ಹಾಗೂ ಪ್ರಸ್ತುತ ಇರುವ ಮೊದಲನೆಯ ಹಂತದ ಯುಜಿಡಿ ಸೇರಿದಂತೆ ಕುಡಿಯುವ ನೀರನ್ನು ಶೀಘ್ರವೇ ವ್ಯವಸ್ಥೆಯನ್ನು ಮಾಡಬೇಕೆಂದು ತಿಳಿಸಿದರು.

ಬಿಇಓ ರಾಜ್‌ಶೇಖರ್ ಮಾತನಾಡಿ ಶಿಕ್ಷಣ ಇಲಾಖೆಯಲ್ಲಿ ಇತ್ತೀಚಿಗೆ ಶಾಸಕರ ನೇತೃತ್ವದಲ್ಲಿ ಸ್ಪೂರ್ತಿ ಸಿಂಚನ ಎಂಬ ಕಾರ್ಯಕ್ರಮ ಅಡಿಯಲ್ಲಿ 1000 ಎಸ್ ಎಸ್ ಎಲ್ ಸಿ ಮಕ್ಕಳಿಗೆ ನೀಡಿದ ತರಬೇತಿಯು ಉತ್ತಮ ಫಲಿತಾಂಶ ನೀಡಿದೆ. ಅದನ್ನೇ ಮುಂದುವರಿಸಿದರೆ ಮಕ್ಕಳಿಗೆ ಸ್ಪೂರ್ತಿಯಾಗುತ್ತದೆ ಎಂದರು. ಶಾಸಕ ಗಣೇಶ್ ಪ್ರಸಾದ್ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಿ ಅದಕ್ಕೆ ನನ್ನ ಸಂಪೂರ್ಣ ಬೆಂಬಲ ಇದೆ ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಹೇಮಾವತಿ ಮಾತನಾಡಿ ತಾಲೂಕಿನ ಕೋಟೆಕೆರೆ ಮತ್ತು ಯಡವನಹಳ್ಳಿಯಲ್ಲಿ ಅಂಗನವಾಡಿ ನಡೆಸಲು ಬದಲಿ ಖಾಲಿ ನಿವೇಶನ ದೊರಕಿಸಿದರೆ ಅಂಗನವಾಡಿ ಕೇಂದ್ರ ತೆರೆಯಲು ಸೂಕ್ತ ಹಾಗೂ ತಾಲೂಕಿನ 37 ಕಟ್ಟಡಗಳ ರಿಪೇರಿ ಸೇರಿದಂತೆ 27 ಕಟ್ಟಡಗಳಿಗೆ ಶೌಚಾಲಯ ಒದಗಿಸಬೇಕೆಂದು ಶಾಸಕರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪಶು ಇಲಾಖೆಯ 75 ಖಾಲಿ ಹುದ್ದೆಗೆ ಶೀಘ್ರವೇ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಶಾಸಕರಲ್ಲಿ ಎ ಡಿ ಮೋಹನ್ ಕುಮಾರ್ ಮನವಿ ಮಾಡಿದರು. ಕೃಷಿ ಇಲಾಖೆಯ ಎಪಿಎಂಸಿ ಆವರಣದಲ್ಲಿ ಸೂರ್ಯಕಾಂತಿ ಖರೀದಿ ಕೇಂದ್ರ, ತಾಲೂಕಿನಲ್ಲಿ 35 ಶಾಲಾ ಕಟ್ಟಡಗಳು ಸಂಪೂರ್ಣ ಶಿಥಲಗೊಂಡಿದ್ದು ಅದಕ್ಕೆ 5 ಕೋಟಿ ಕ್ರಿಯಾ ಯೋಜನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು ಅದನ್ನು ತ್ವರಿತವಾಗಿ ನೀಡಬೇಕು ಎಂದರು.

ಜೆಜೆಎಂ ನಲ್ಲಿ ಕುಡಿಯುವ ನೀರನ್ನು ಪ್ರತಿ ಮನೆ ಮನೆಗೆ ಗಂಗೆ ಸಂಪರ್ಕಿಸಲು 95 ಪಂಚಾಯಿತಿಗಳಿಗೆ ವರ್ಗಾಯಿಸಿದ್ದು 75 ಲಕ್ಷದ ಅನುದಾನದಲ್ಲಿ ಕುಡಿಯುವ ನೀರಿನ ಬೋರ್ವೆಲ್‌ಗಳನ್ನು ಕೊರೆಸಿ ನೀರನ್ನು ಪೂರೈಸುವುದು ಸೇರಿದಂತೆ ವಿವಿಧ ಇಲಾಖೆಯ ಅಭಿವೃದ್ಧಿ ಕಾರ್ಯಗಳು ಹಾಗೂ ಆಗಬೇಕಾದಂತಹ ಕೆಲಸಗಳನ್ನು ತ್ವರಿತವಾಗಿ ವಿಲೇವಾರಿ ಮಾಡಬೇಕೆಂದು ಶಾಸಕ ಗಣೇಶ್ ಪ್ರಸಾದ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಅಚ್ಚುಕಟ್ಟು ಪ್ರದೇಶದ ಕೊನೆಯ ಭಾಗಕ್ಕೆ ನೀರು ಬಿಡಿ

**ಹೊಸೂರು:** ಕಾವೇರಿ ನಾಲಾ ನೀರಾವರಿ ಅಚ್ಚುಕಟ್ಟು ಪ್ರದೇಶಗಳ ಕೊನೆಯ ಭಾಗಗಳ ರೈತರಿಗೂ ಬೆಳೆ ಬೆಳೆಯಲು ಸಕಾಲದಲ್ಲಿ ನೀರು ತಲುಪುವಂತಾಗಬೇಕು ಎಂದು ಶಾಸಕ ಡಿ.ರವಿಶಂಕರ್ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದರು.

ಚುಂಚನಕಟ್ಟೆ ಸಮೀಪದ ಬಳ್ಳೂರು ಅಣೇಕಟ್ಟೆಯ ಕಾವೇರಿ ನದಿಗೆ ಶಾಸಕ ಡಿ. ರವಿಶಂಕರ್ ಬಾಗಿನ ಅರ್ಪಿಸಿ, ಚಾಮರಾಜ ಎಡದಂಡೆ ನಾಲೆಗೆ ಪೂಜೆ ಸಲ್ಲಿಸುವ ಮೂಲಕ ಕಾಲುವೆಗಳಿಗೆ ನೀರು ಬಿಡುವ ಕಾರ್ಯಕ್ರಮಕ್ಕೆ ಸಾಂಕೇತಿಕವಾಗಿ ಚಾಲನೆ ನೀಡಿ ಮಾತನಾಡಿದ ಅವರು. ಕೃಷಿಕ ರೈತರು ಓಡಾಡುವ ಕೆರೆ, ಕಟ್ಟೆ ಹಾಗೂ ನಾಲಾ ಏರಿಯಾ ರಸ್ತೆಗಳು, ಜಂಗಲ್ ಕಟಿಂಗ್ ಹಾಗೂ ನಾಲೆಯಲ್ಲಿನ ಹೂಳು ತೆಗೆಯುವುದರ ಜತೆಗೆ ಬಂಡ್ ನಿರ್ಮಾಣ, ಪೈಪ್ ಅಳವಡಿಕೆ ಸೇರಿದಂತೆ ರೈತರಿಗೆ ಅನುಕೂಲವಾಗುವಂತ ಕೆಲಸಗಳನ್ನು ತ್ವರಿತವಾಗಿ ಮುಗಿಸಲು ಎಲ್ಲಾ ರೀತಿಯಲ್ಲೂ ನಿಮಗೆ ನಾನು ಸಹಕಾರ ನೀಡಿದ್ದೇನೆ ಹಾಗೆಯೇ ಅಧಿಕಾರಿಗಳು ಕೂಡ ಜವಾಬ್ದಾರಿ ಅರಿತು ಅನ್ನದಾತರ ಸಮಸ್ಯೆಗಳಿಗೆ ಸ್ಪಂದಿಸಬೇಕು ಇಲ್ಲವಾದಲ್ಲಿ ಯಾವುದೇ ಮೂಲಾಜ್ ಇಲ್ಲದೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ತಾಕೀತು ಮಾಡಿದರು.

ಈಗಾಗಲೇ ನಾಲೆಯಲ್ಲಿನ ಹೂಳು ತೆಗೆಯುವ ಕಾರ್ಯ ಆರಂಭವಾಗಿದ್ದು ಒಂದು ವಾರದಲ್ಲಿ ಆ ಕಾರ್ಯ ಪೂರ್ಣಗೊಳ್ಳಲಿದೆ. ಇದರಿಂದ ಕೊನೆಯ



ಭಾಗದ ಹಳ್ಳಿಗಳಾದ ಕನುಗನಹಳ್ಳಿ, ತಿಪ್ಪೂರು, ದೇಗ್ಗನಹಾಳು, ಹೊಸೂರುಕಲ್ಲಹಳ್ಳಿ, ಹಂಪಾಪುರ ಸೇರಿದಂತೆ ಆ ಭಾಗದ ರೈತರ ಕೃಷಿ ಚಟುವಟಿಕೆಗಳಿಗೆ ನೀರು ಸುಗಮವಾಗಿ ಪೂರೈಸಲಾಗುವುದು. ಮೊದಲು ಕೆರೆಕಟ್ಟೆಗಳಿಗೆ ನೀರನ್ನು ಹರಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದ್ದು, ಅಂತೆಯೇ ಎಲ್ಲಾ ಕೆರೆಕಟ್ಟೆಗಳಿಗೆ ನೀರನ್ನು ಬಿಡಲಾಗುತ್ತಿದೆ ಎಂದ, ಅವರು. ಮುಂಗಾರು ಹಂಗಾಮಿನ ಕೃಷಿಗೆ ಯಾವುದೇ ರೀತಿಯಲ್ಲಿ ರೈತರಿಗೆ ತೊಂದರೆಯಾಗದಂತೆ ರೈತರಿಗೆ ಅಗತ್ಯತೆಯ ಕೃಷಿ ಚಟುವಟಿಕೆ ಸಂಬಂಧಿಸಿದ ಪರಿಕರಗಳು. ರಿಯಾಯಿತಿ ದರದಲ್ಲಿ ಉತ್ತಮ ಗುಣಮಟ್ಟದ ಹಲವು ತಳಿಯ ಭತ್ತದ ಬಿತ್ತನೆ ಬೀಜಗಳು ಹಾಗೂ ರಸಗೊಬ್ಬರಗಳನ್ನು ಸಕಾಲದಲ್ಲಿ ರೈತರಿಗೆ ಪೂರೈಸಲು ಇಲಾಖೆಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನೀರಾವರಿ ಇಲಾಖೆಯ ಇ.ಇ ಕುಶ ಕುಮಾರ್, ಎ.ಇ.ಇ ಆಯಾಜ್ ಪಾಷಾ, ಎ.ಇ ಕಿರಣ್, ಪ್ರತಾಪ್ ಸೊಫೀ, ಶಂಕರೇಗೌಡ, ಕನ್ನಿಕಾ, ಸಣ್ಣಪ್ಪ, ತೋಟಪ್ಪನಾಯಕ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉದಯ್ ಶಂಕರ್, ಆಪ್ತ ಸಹಾಯಕ ಮಹದೇವ್, ನವೀನ್, ಪುನೀತ್ ಸೇರಿದಂತೆ ಮತ್ತಿತರರು ಇದ್ದರು.

### ಚರಂಡಿ ನೀರು ತಡೆಯಿರಿ

**ಕೆಲವೆಡೆ ಗ್ರಾಮದ ಚರಂಡಿ ನೀರು ಹಾಗೂ ಇನ್ನಿತರ ಅನುಪಯುಕ್ತ ತ್ಯಾಜ್ಯ ವಸ್ತುಗಳನ್ನು ನಾಲೆಗಳಿಗೆ ಬಿಡುತ್ತಿರುವುದರ ಬಗ್ಗೆ ಹೆಚ್ಚು ದೂರುಗಳು ಕೇಳಿ ಬರುತ್ತಿವೆ, ನಾಲಿಗೆ ಬಿಡುವುದರಿಂದ ನಾಲೆ ನೀರು ಕಲುಷಿತಗೊಂಡು ಸಾಂಕ್ರಾಮಿಕ ರೋಗಗಳು ಮಾರಣಾಂತಿಕ ಕಾಯಿಲೆಗಳು ಹರಡುತ್ತಿವೆ ಅಲ್ಲದೆ ಇತ್ತೀಚಿನ ದಿನಗಳಲ್ಲಿ ಹಲವು ರೀತಿಯ ರೋಗಗಳು ಉಲ್ಬಣವಾಗುತ್ತಿರುವ ಹಿನ್ನಲೆಯಲ್ಲಿ ನೈರ್ಮಲ್ಯದ ಬಗ್ಗೆ ಸರಕಾರದ ಮಟ್ಟದಲ್ಲಿ ಗಂಭೀರವಾಗಿ ಪರಿಗಣಿಸಿದ್ದು ನಾಲೆಗಳಿಗೆ ಚರಂಡಿ ನೀರು ಬಿಡದಂತೆ ತಡೆಯಬೇಕು ಎಂದು ಅಧಿಕಾರಿಗಳಿಗೆ ಶಾಸಕ ಡಿ.ರವಿಶಂಕರ್ ಹೇಳಿದರು.**

# ರೇಸಿಂಗ್ ಬೈಕ್ ಕೊಡಿಸಲಿಲ್ಲ ಎಂದು ಪುತ್ರ ಆತ್ಮಹತ್ಯೆ: ನೊಂದು ರೈಲಿಗೆ ತಲೆ ಕೊಟ್ಟ ತಾಯಿ

**ಹುಬ್ಬಳ್ಳಿ:** ರೇಸಿಂಗ್ ಬೈಕ್ ಕೊಡಿಸಲಿಲ್ಲ ಎಂದು ಮಗ ನೇಣು ಬಿಗಿದುಕೊಂಡು ಆತ್ಮಹತ್ಯೆ ಶರಣಾಗಿದ್ದು, ಇದನ್ನು ಕಂಡ ತಾಯಿ ಕೂಡ ರೈಲು ಹಳಿಗೆ ಬಿದ್ದು ಆತ್ಮಹತ್ಯೆಗೆ ಮಾಡಿಕೊಂಡ ಘಟನೆ ರಾಣೆಬೆನ್ನೂರ ತಾಲೂಕಿನ ಕರೂರ ಗ್ರಾಮದಲ್ಲಿ ನಡೆದಿದೆ. ಧನರಾಜ ಸುರೇಶ ನಾಯಕ (18), ಈತನ ತಾಯಿ ಭಾಗ್ಯಮ್ಮ ನಾಯಕ (43) ಆತ್ಮಹತ್ಯೆ ಮಾಡಿಕೊಂಡವರು. 2 ವರ್ಷದ ಹಿಂದೆ ಸುರೇಶ ಅವರ 14 ವರ್ಷದ ಇನ್ನೋರ್ವ ಪುತ್ರಿ ಅನಾರೋಗ್ಯದಿಂದ ಮೃತಪಟ್ಟಿದ್ದರು. ಇದೀಗ ಪತ್ನಿ, ಪುತ್ರನನ್ನು ಕಳೆದುಕೊಂಡು ದುಃಖದ ಮಡುವಿನಲ್ಲಿ ಮುಳುಗುವಂತಾಗಿದೆ. ಹರಿಹರದಲ್ಲಿ ಡಿಪ್ಲೊಮಾ ವ್ಯಾಸಂಗ ಮಾಡುತ್ತಿದ್ದ ಧನರಾಜ ತನಗೆ ರೇಸಿಂಗ್ ಬೈಕ್ ತೆಗೆದುಕೊಳ್ಳಲು ಹಣ ಬೇಕೆಂದು ತಂದೆ- ತಾಯಿ ಬಳಿ ಬೆಳಗ್ಗೆ ಜಗಳ ತೆಗೆದಿದ್ದ. ಕೂಲಿ ಮಾಡಿಕೊಂಡಿರುವ ತಂದೆ ಸುರೇಶ ಆಯ್ತು ಹೇಗಾದರೂ ಮಾಡಿ ಕೊಡಿಸುತ್ತೇನೆ ಎಂದು ಕೆಲಸಕ್ಕೆ ಹೋಗಿದ್ದರು. ನಂತರ ತಾಯಿ ಮಗನಿಗೆ ಬುದ್ದಿಮಾತು ಹೇಳಿದ್ದರು. ತಾಯಿ ಪಕ್ಕದ ಮನೆಗೆ ಹೋಗಿದ್ದ ವೇಳೆ ಧನರಾಜ ಅಡುಗೆ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಪತಿ ಮನೆಗೆ ಮರಳಿದ ನಂತರ ಘಟನೆ ಬೆಳಕಿಗೆ ಬಂದಿದೆ. ತಾಯಿ ಮನೆಗೆ ಬರುತ್ತಿದ್ದಂತೆ ಮಗನ ಸ್ಥಿತಿ ಕಂಡು ದಿಗ್ಭ್ರಾಂತರಾಗಿದ್ದಾರೆ.

# ವಿಶ್ವ ಜನಸಂಖ್ಯಾ ದಿನಾಚರಣೆ

**ಮಡಿಕೇರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ವತಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ವಿಶ್ವ ಜನಸಂಖ್ಯೆ ದಿನಾಚರಣೆ ನಡೆಯಿತು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಚೇತನ್ ಎಂ.ಯು ಹಾಗೂ ವಿರಾಜಪೇಟೆ ಸರ್ಕಾರಿ ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ.ದಯಾನಂದ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು.ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಚೇತನ್ ಎಂ.ಯು ಮಾತನಾಡಿ 1987ರ ಜುಲೈ 11 ರಂದು ವಿಶ್ವ ಜನಸಂಖ್ಯೆ 500 ಕೋಟಿ ತಲುಪಿದ ಕಾರಣ ಈ ದಿನ ವಿಶ್ವ ಜನಸಂಖ್ಯಾ ದಿನಾಚರಣೆಯನ್ನು ದೇಶಾದ್ಯಂತ ಆಚರಿಸಲಾಗುತ್ತಿದೆ. ಮದುವೆಯಾಗಲು ಗಂಡಿಗೆ 21 ವರ್ಷ ಮತ್ತು ಹೆಣ್ಣಿಗೆ ಕನಿಷ್ಠ 18 ವರ್ಷಗಳು ತುಂಬಿರಬೇಕು. ಮದುವೆಯ ನಂತರ ಕನಿಷ್ಠ 2 ವರ್ಷಗಳವರೆಗೂ ಮೊದಲನೇ ಮಗುವನ್ನು ಪಡೆಯಬಾರದು. ಎರಡು ಮಕ್ಕಳ ನಡುವೆ ಕನಿಷ್ಠ 3 ವರ್ಷಗಳ ಅಂತರವಿರಬೇಕು. 2 ಮಕ್ಕಳನ್ನು ಹೊಂದಿರುವ ದಂಪತಿಗಳು ಶಾಶ್ವತ ಕುಟುಂಬ ಕಲ್ಯಾಣ ವಿಧಾನವನ್ನು ಅಳವಡಿಸಿಕೊಳ್ಳಬೇಕು. ಎಲ್ಲಾ ಅರ್ಹ ದಂಪತಿಗಳು ಕುಟುಂಬ ಕಲ್ಯಾಣ ವಿಧಾನವನ್ನು ಅನುಸರಿಸಿ ಚಿಕ್ಕ ಕುಟುಂಬವನ್ನು ರೂಪಿಸಿಕೊಳ್ಳುವುದು. ಪೋಷಕರು ತಮ್ಮ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಉತ್ತೇಜನ ಕೊಡಬೇಕು. ಕುಟುಂಬ ಕಲ್ಯಾಣ ಕಾರ್ಯಕ್ರಮದಲ್ಲಿ ಪುರುಷರ ಸಹಭಾಗಿತ್ವ ಬಹಳ ಪ್ರಾಮುಖ್ಯವಾದದ್ದು ಎಂದು ತಿಳಿಸಿದರು. ನಂತರ ಸಂಪನ್ಮೂಲ ವ್ಯಕ್ತಿಗಳು ಹಾಗೂ ಅತಿಥಿ ಉಪನ್ಯಾಸಕರಾದ ವಿರಾಜಪೇಟೆ ಸರ್ಕಾರಿ ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ.ದಯಾನಂದ ಅವರು ಮಾತನಾಡಿ ವಿಶ್ವ ಜನಸಂಖ್ಯಾ ದಿನಾಚರಣೆಯ ಉದ್ದೇಶ, ಇತಿಹಾಸ, ಜನಸಂಖ್ಯಾ ಸ್ಫೋಟದಿಂದ ಉಂಟಾಗುವ ಪರಿಣಾಮಗಳು, ವಸತಿ ಮತ್ತು ಆಹಾರ ಸಮಸ್ಯೆ, ನಿರುದ್ಯೋಗ, ಬಡತನ, ಹಸಿವು, ಆರ್ಥಿಕ ಅಸಮಾನತೆ, ಅನಕ್ಷರತೆ, ನೈಸರ್ಗಿಕ ಸಂಪನ್ಮೂಲಗಳ ಕೊರತೆ, ಅನೈರ್ಮಲ್ಯತೆಗೆ ಕಾರಣವಾಗುತ್ತದೆ ಎಂದು ಅಂಕಿ ಅಂಶಗಳ ಮೂಲಕ ಸವಿವರವಾಗಿ ತಿಳಿಸಿಕೊಟ್ಟರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಟಿ.ಎನ್.ಪಾಲಾಕ್ಷ ಮಾತನಾಡಿ ಜನಸಂಖ್ಯಾ ನಿಯಂತ್ರಣಕ್ಕೆ ಸರ್ಕಾರ, ಎನ್‌ಜಿಒ ಹಾಗೂ ಸಮುದಾಯ ಸಂಸ್ಥೆಗಳ ವತಿಯಿಂದ ಜಾಗೃತಿ ಅಭಿಯಾನಗಳು, ವಿಶ್ವ ವಿದ್ಯಾನಿಲಯಗಳ ಸಹಕಾರದಿಂದ ಸಾರ್ವಜನಿಕ ಉಪನ್ಯಾಸಗಳು, ಚರ್ಚೆಗಳು, ಆರೋಗ್ಯ ಶಿಬಿರಗಳು, ಸಮುದಾಯದ ಸಜ್ಜುಗೊಳಿಸುವಿಕೆ ಸಹಕಾರದಿಂದ ಸಾರ್ವಜನಿಕರಿಗೆ ಕುಟುಂಬ ಕಲ್ಯಾಣ ಯೋಜನೆಗಳು, ಸಂತಾನೋತ್ಪತ್ತಿ, ಆರೋಗ್ಯ ಸಂಬಂಧಿತ ಸುಸ್ಥಿರ ಅಭಿವೃದ್ಧಿ ಗುರಿಗಳ ಬಗ್ಗೆ ಆರೋಗ್ಯ ಶಿಕ್ಷಣ ನೀಡಿ ಜನಸಂಖ್ಯಾ ನಿಯಂತ್ರಣಕ್ಕೆ ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು. ಹಿರಿಯ ಪ್ರಾಥಮಿಕ ಸುರಕ್ಷಾಧಿಕಾರಿ ದೇಚಮ್ಮ ಹಾಗೂ ನಗರ ಆರೋಗ್ಯ ಕೇಂದ್ರ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಮೇಲ್ವಿಚಾರಕರು ಹಾಗೂ ಸಿಬ್ಬಂದಿ ಮತ್ತು ತಾಲೂಕು ಆಶಾ ಮೆಂಟರ್ ಹಾಗೂ ತಾಲೂಕು ಮಟ್ಟದ ಆಶಾ ಕಾರ್ಯಕರ್ತೆಯರು ಭಾಗವಹಿಸಿದರು.

# ಇಟ್ನ ಗ್ರಾಪಂ ಅಧ್ಯಕ್ಷರಾಗಿ ಕಾಳಿಂಗನಾಯಕ ಆಯ್ಕೆ

**ಸರಗೂರು:** ಇಟ್ನ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿ ಆರ್.ಕಾಳಿಂಗನಾಯಕ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಗುರುವಾರ ಗ್ರಾಮ ಪಂಚಾಯಿತಿ ಆವರಣದಲ್ಲಿ ನಡೆದ ಚುನಾವಣೆ ಪ್ರಕ್ರಿಯೆಯಲ್ಲಿ ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಾಗಿ ಆರ್. ಕಾಳಿಂಗ ನಾಯಕ ಅವರನ್ನು ಹೊರತುಪಡಿಸಿ ಉಳಿದ ಯಾರು ನಾಮ ಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಅಧ್ಯಕ್ಷರಾಗಿ ಆರ್.ಕಾಳಿಂಗನಾಯಕ ಅವರು ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಶ್ರೀಧರ್ ಮೂರ್ತಿ ಘೋಷಣೆ ಮಾಡಿದರು. ಉಪಾಧ್ಯಕ್ಷೆ ಗೌರಮ್ಮ, ಮಾಜಿ ಅಧ್ಯಕ್ಷ, ಸದಸ್ಯರಾದ ಜಯರಾಮ, ಎಸ್.ಚನ್ನನಾಯಕ, ಸವಿತಾಸಿದ್ದನಾಯಕ, ಗೀತಾ ಬೆಟ್ಟನಾಯಕ, ಶಿವಮ್ಮ ಈರನಾಯಕ, ಗ್ರಾಮದ ಮುಖಂಡರಾದ ಎನ್.ಬಸವನಾಯಕ, ವಿ.ಸಿದ್ದರಾಜು, ಬಿ.ಬಸವರಾಜು, ಮಾಜಿ ಯಜಮಾನ ಲಿಂಗರಾಜು, ಚಾಮನಾಯಕ, ರಾಮನಾಯಕ, ಹೂವಿನ ವ್ಯಾಪಾರಿ ಈರನಾಯಕ, ಕರಿನಾಯಕ, ಬೆಟ್ಟನಾಯಕ, ಪಿಡಿಒ ಚಿನ್ನಸ್ವಾಮಿ ಸೇರಿದಂತೆ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದರು.



# ಸಹಾಯಧನಕ್ಕಾಗಿ ನೋಂದಣಿ

**ಮಂಡ್ಯ:** ಮಂಡ್ಯ ಜಿಲ್ಲೆಯ ಎಲ್ಲಾ ರೇಷ್ಮೆ ಬೆಳೆಗಾರರು ರೇಷ್ಮೆ ಇಲಾಖೆಯಡಿಯಲ್ಲಿ ದೊರೆಯುವ ಸಹಾಯಧನ ಹಾಗೂ ಸೌಲಭ್ಯವನ್ನು ಪಡೆಯಲು ಮತ್ತು ಮಾರುಕಟ್ಟೆಯಲ್ಲಿ ಗೂಡಿನ ವಹಿವಾಟು ಮಾಡಲು ಆನ್‌ಲೈನ್‌ಲ್ಲಿ ರೇಷ್ಮೆ ಬೆಳೆಗಾರರ ಮಾಹಿತಿಯನ್ನು ಪಡೆದು End to End ತಂತ್ರಾಂಶದಲ್ಲಿ ನಮೂದಿಸಬೇಕು. ಜುಲೈ 20 ರೊಳಗೆ ಜಿಲ್ಲೆಯ ರೇಷ್ಮೆ ಬೆಳೆಗಾರರು ಪಹಣಿ ಪ್ರತಿ, ಆಧಾರ್ ಕಾರ್ಡ್ ಪ್ರತಿ, ರೇಷ್ಮೆ ಪಾಸ್ ಬುಕ್ ಪ್ರತಿ, ಬ್ಯಾಂಕ್ ಪಾಸ್ ಬುಕ್ ಪ್ರತಿ, ರೇಷನ್ ಕಾರ್ಡ್ ಪ್ರತಿ, ವೋಟರ್ ಕಾರ್ಡ್ ಪ್ರತಿ, ಮೊಬೈಲ್ ನಂಬರ್, 02 ಭಾವಚಿತ್ರಗಳೊಂದಿಗೆ ನೊಂದಣಿ ಮಾಡಿಸಿಕೊಳ್ಳಬೇಕು ಇಲ್ಲವಾದಲ್ಲಿ ರೇಷ್ಮೆ ಇಲಾಖೆಯಿಂದ ಯಾವುದೇ ಸಹಾಯಧನ ಹಾಗೂ ಸೌಲಭ್ಯವನ್ನು ಪಡೆಯಲು ಸಾಧ್ಯವಿರುವುದಿಲ್ಲವೆಂದು ಎಂದು ಜಿಲ್ಲಾ ಪಂಚಾಯತ್ ರೇಷ್ಮೆ ಉಪನಿರ್ದೇಶಕರು ತಿಳಿಸಿದ್ದಾರೆ.

# ಮಹಿಳೆಯರ ಸಮಸ್ಯೆ ನಿವಾರಣೆಗೆ ಕ್ರಮ

**ಯಳಂದೂರು:** ಮಹಿಳೆಯರಿಗೆ ಸಿಗುವ ಎಲ್ಲಾ ಸವಲತ್ತುಗಳನ್ನು ಅವರಿಗೆ ತಲುಪಿಸುವಲ್ಲಿ ಅಧಿಕಾರಿಗಳ ಶ್ರಮ ವಹಿಸಬೇಕು. ಈ ಇಟ್ಟಿನಲ್ಲಿ ಯಾವುದೇ ಲೋಪವಾಗಬಾರದು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಮಾಹಿತಿ ನೀಡಿದರು.

ಅವರು ಬುಧವಾರ ಸಂಜೆ ತಾಲೂಕಿನ ಬಿಳಿಗಿರಿರಂಗನಬೆಟ್ಟದ ಪುರಾಣಿ ಪೋಡಿಗೆ ಭೇಟಿ ನೀಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಗುಂಬಳ್ಳಿ ಪಿಎಚ್‌ಸಿ ಕೇಂದ್ರ, ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಇಲ್ಲಿ ಮಹಿಳೆಯರಿಗೆ ನೀಡುತ್ತಿರುವ ಸೌಲಭ್ಯದ ಮಾಹಿತಿ ಪಡೆದು, ನಂತರ ಬಿಳಿಗಿರಿರಂಗನಬೆಟ್ಟಕ್ಕೆ ತೆರಳಿ ದೇವರ ದರ್ಶನ ಪಡೆದು ನಂತರ ಕಾಡಿನೊಳಗಿರುವ ಪುರಾಣಿ ಪೋಡಿಗೆ ಭೇಟಿ ನೀಡಿದರು. ಇಲ್ಲಿ ನಮಗೆ ವಿದ್ಯುತ್ ಸಂಪರ್ಕವಿಲ್ಲ, ಕುಡಿಯುವ ನೀರು ಇಲ್ಲ, ಇದ್ದ ಕೆಲವು ಕೈಪಂಪುಗಳಲ್ಲಿ ನೀರು ಬರುತ್ತಿಲ್ಲ. ಇಲ್ಲಿ ಹಾಕಲಾಗಿದ್ದ ಸೋಲಾರ್ ವಿದ್ಯುತ್ ದೀಪಗಳು ಕೆಟ್ಟ 3 ವರ್ಷವೇ ಕಳೆದಿದೆ. ಇದನ್ನು ದುರಸ್ತಿ ಮಾಡಿಲ್ಲ. ನಮಗೆ ಸರಿಯಾದ ರಸ್ತೆ ಸಂಪರ್ಕವಿಲ್ಲ. ನಮಗೆ ಮನೆಗಳನ್ನು ನೀಡಿಲ್ಲ, ನಮ್ಮ ಮನೆಗಳಿಗೆ ಪ್ಲಾಸ್ಟಿಕ್ ಹೊದಿಕೆ ಹಾಕಿ ವಾಸಿಸುವ ಸ್ಥಿತಿ ಇದೆ. ಇಲ್ಲಿ ಮೂಲ ಸೌಲಭ್ಯವಿಲ್ಲದೆ ನಮಗೆ ಕಷ್ಟವಾಗಿದೆ ಎಂದು ದೂರಿದರು.

ಇಲ್ಲಿರುವ ಆಶ್ರಮ ಶಾಲೆಯಲ್ಲಿನ ವಿದ್ಯಾರ್ಥಿಗಳಿಗೆ ಊಟದ ಮೆನುವಿನಲ್ಲಿ ದಿನನಿತ್ಯ ಹಾಲಿನ ಜೊತೆ ಹಾರ್ಲಿಕ್ಸ್, ಬೂಸ್ಟ್, ಬಾದಾಮಿ ಹಾಲು ನೀಡಬೇಕು ಎಂದು ನಿಯಮವಿದೆ. ಆದರೆ ಇಲ್ಲಿನ ಮಕ್ಕಳಿಗೆ ಹಾಲು ನೀಡುತ್ತಿಲ್ಲ ಎಂದು ದೂರು ಬಂದ ಹಿನ್ನೆಲೆಯಲ್ಲಿ ನಾಗಲಕ್ಷ್ಮಿ ಚೌಧರಿ ಕೆಂಡಾಮಂಡಲವಾದರು. ಜಿಲ್ಲಾ ಬುಡಕಟ್ಟು ಕಲ್ಯಾಣಾಧಿಕಾರಿ ಮಂಜುಳಾ, ತಾಲೂಕು ಅಧಿಕಾರಿ ಕೇಶವಮೂರ್ತಿ, ನಿಲಯ ಪಾಲಕ ಬೊಮ್ಮಯ್ಯರನ್ನು ತರಾಟೆಗೆ ತೆಗೆದುಕೊಂಡರು. ರಾಜ್ಯದಲ್ಲಿ ಕ್ಷೀರ ಕ್ರಾಂತಿಯಾಗುತ್ತಿದೆ. ನಿತ್ಯ ಶಾಲಾ ಮಕ್ಕಳಿಗೆ ಹಾಲು ನೀಡುವ ಯೋಜನೆ ರಾಜ್ಯ ಸರ್ಕಾರ ಜಾರಿಗೆ ತಂದಿದೆ. ಆದರೆ ವಸತಿ ಶಾಲೆಯ ಮಕ್ಕಳು ಅದರಲ್ಲೂ ಇಂತಹ ಗ್ರಾಮೀಣ ಭಾಗದ ಕಾಡಿನ ಮಕ್ಕಳಿಗೆ ಪೌಷ್ಠಿಕ ಆಹಾರ ನೀಡುವ ನಿಟ್ಟಿನಲ್ಲಿ ಕೋಟ್ಯಾಂತರ ರೂ. ವ್ಯಯ ಮಾಡಲಾಗುತ್ತಿದೆ. ಈ ಬಗ್ಗೆ ಕೂಡಲೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸೂಕ್ತ ಕಾನೂನು ಕ್ರಮ



ವಹಿಸಬೇಕು. ಜಿಲ್ಲಾಧಿಕಾರಿಗಳ ಸಭೆಯಲ್ಲಿ ಇದರ ಬಗ್ಗೆ ಚರ್ಚೆ ನಡೆಸಲಾಗುವುದು ಎಂದರು.

ನಾನು ಭೇಟಿ ನೀಡುವ ವಿಚಾರ ತಿಳಿದಿದ್ದರೂ, ಸಂಬಂಧಪಟ್ಟ ಅರಣ್ಯ ಇಲಾಖೆಯ ಉನ್ನತ ಅಧಿಕಾರಿಗಳು, ಕೃಷಿ, ತೋಟಗಾರಿಕಾ ಇಲಾಖೆಯ ಅಧಿಕಾರಿಗಳು ಸ್ಥಳದಲ್ಲಿ ಹಾಜರಿಲ್ಲ. ಹುಲಿ ರಕ್ಷಿತ ಅರಣ್ಯದ ನೆಪವೊಡ್ಡಿ ಸೋಲಿಗರಿಗೆ ಮೂಲ ಸೌಲಭ್ಯ ನೀಡದಿರುವುದು ಸರಿಯಲ್ಲ ಈ ಬಗ್ಗೆ ಜಿಲ್ಲಾಧಿಕಾರಿಗಳ ಜೊತೆ ನಾನು ಚರ್ಚೆ ನಡೆಸಿ ಸೂಕ್ತ ಕ್ರಮ ವಹಿಸುತ್ತೇನೆ ಎಂದರು. ಅಂಗನವಾಡಿ ಕೇಂದ್ರ, ಸೋಲಿಗ ಜನಾಂಗದ ಮನೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಂಡರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಂಜುನಾಥ್, ತಹಶೀಲ್ದಾರ್ ಜಯಪ್ರಕಾಶ್, ಸಿಡಿಪಿಒ ಸಕಲೇಶ್ವರ್, ರಜಸ್ವ ನಿರೀಕ್ಷಕ ಯದುಗಿರಿ, ಪಿಡಿಒ ಕಾವ್ಯ, ಶಿವಕುಮಾರ್, ದೈಹಿಕ ಪರಿವೀಕ್ಷಕ ಸೇರಿದಂತೆ ಅನೇಕರು ಇದ್ದರು.

# ಲೋಕಾಯುಕ್ತರೆದುರು ಕಣ್ಣೀರಾದ ದೂರುದಾರರು

**ಮಡಿಕೇರಿ :** ಮಡಿಕೇರಿ ಲೋಕಾಯುಕ್ತ ಡಿವೈಎಸ್‌ಪಿ ಪವನ್ ಕುಮಾರ್ ನಗರದ ತಹಶೀಲ್ದಾರರ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ, ಕುಂದುಕೊರತೆ ಆಲಿಸಿದರು.

ಸಾರ್ವಜನಿಕರೊಬ್ಬರು ಪೊನ್ನಂಪೇಟೆಯಲ್ಲಿ ಐದೂವರೆ ಸೆಂಟ್ ಜಾಗವಿದ್ದು, ಪೌತಿಖಾತೆ ಮಾಡಲು 50 ಸಾವಿರ ರೂ. ಲಂಚದ ಬೇಡಿಕೆ ಇಡುತ್ತಿದ್ದಾರೆ ಎಂದು ಕಣ್ಣೀರು ಸುರಿಸಿದರು.

ನಾನು ಬೆಂಗಳೂರಿನಲ್ಲಿ ವಾಸ ಮಾಡುತ್ತಿದ್ದು, ವಯಸ್ಸಾಗಿದೆ. ಪೊನ್ನಂಪೇಟೆಗೆ ಹೋಗಿ ಬರಲು ತುಂಬಾ ತೊಂದರೆಯಾಗಿದೆ. ಮಗಳ ಮದುವೆ ಮಾಡಬೇಕಿದ್ದು, ತುಂಬಾ ತೊಂದರೆಯಾಗಿದೆ. ಎರಡು ವರ್ಷದಿಂದ ಪೌತಿಖಾತೆ ಮಾಡಿಕೊಡದೆ ಸತಾಯಿಸುತ್ತಿದ್ದಾರೆ ಎಂದು ಅಳಲು ತೋಡಿಕೊಂಡರು. ಈ ಸಂದರ್ಭದಲ್ಲಿ ಮಾತನಾಡಿದ ಲೋಕಾಯುಕ್ತ ಡಿವೈಎಸ್‌ಪಿ ಪವನ್ ಕುಮಾರ್ ಅವರು ನಿಮ್ಮ ಕೆಲಸ ಕಾಲ ಮಿತಿಯಲ್ಲಿ ಆದ್ಯತೆ ಮೇಲೆ ಮಾಡಿಸಿಕೊಡಲಾಗುವುದು ಎಂದು ತಿಳಿಸಿದರು.

ಮತ್ತೊಬ್ಬ ಮಹಾಲಕ್ಷ್ಮಿ ಜಾಗದ ಖಾತೆ ಮಾಡಿಕೊಡದೆ ಒಂದುವರೆ ವರ್ಷದಿಂದ ಅಲೆದಾಡಿಸುತ್ತಿದ್ದಾರೆ. ಜಾಗದ ಖಾತೆ ಮಾಡಿಸಿಕೊಡುವಂತೆ ಲೋಕಾಯುಕ್ತರಲ್ಲಿ ಮನವಿ ಮಾಡಿದರು.

ಈ ಬಗ್ಗೆ ಪೌರಾಯುಕ್ತರಾದ ವಿಜಯ್ ಅವರು ಹೊಸದಾಗಿ ಖಾತೆ ಆಗಬೇಕಿದೆ. ಶೀಘ್ರ ಖಾತೆ ಮಾಡಿಕೊಡಲಾಗುವುದು ಎಂದು ಹೇಳಿದರು.

ಮತ್ತೊಬ್ಬರು ಸೋಮವಾರಪೇಟೆ ತಾಲ್ಲೂಕಿನ ಬಿಳಿಗೇರಿ ಗ್ರಾಮದ ವಸಂತ ಪಿ.ಕೆ. ಅವರು ಜಾಗವನ್ನು ದುರಸ್ತಿ ಮಾಡಿಕೊಡುವಂತೆ ಹಲವು ವರ್ಷಗಳಿಂದ ಸೋಮವಾರಪೇಟೆ ತಾಲ್ಲೂಕು ಕಚೇರಿಯಲ್ಲಿ ಮನವಿ ಮಾಡಿದರೂ ಸಹ ಕೆಲಸಗಳು ಆಗಿಲ್ಲ. ಈ ಸಂಬಂಧ ಕೆಲಸ ಮಾಡಿಸಿಕೊಡುವಂತೆ ಲೋಕಾಯುಕ್ತ ಡಿವೈಎಸ್‌ಪಿ ಅವರಲ್ಲಿ ಮನವಿ ಮಾಡಿದರು. ಈ ಬಗ್ಗೆ ತಕ್ಷಣವೇ ಸ್ಪಂದಿಸಲಾಗುವುದು ಎಂದು ಲೋಕಾಯುಕ್ತ ಡಿವೈಎಸ್‌ಪಿ ಅವರು ಹೇಳಿದರು.



ಮತ್ತೊಬ್ಬ ಮನವಿದಾರರು ಜಾಗದ ಖಾತೆ ಬದಲಾವಣೆ ಮಾಡಿಕೊಡಬೇಕಿದ್ದು, ಈ ಸಂಬಂಧ ಎಷ್ಟೇ ಮನವಿ ಮಾಡಿದರೂ ಸಹ ಇನ್ನೂ ಕೆಲಸವಾಗಿಲ್ಲ ಎಂದು ದೂರಿದರು. ತಮ್ಮ ಕೆಲಸವನ್ನು ಕಾಲಮಿತಿಯಲ್ಲಿ ಮಾಡಿಸಿಕೊಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಲೋಕಾಯುಕ್ತ ಡಿವೈಎಸ್‌ಪಿ ಪವನ್ ಕುಮಾರ್ ಅವರು ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರಿಂದ ದೂರುಗಳು ಬರುವುದು ಕಡಿಮೆಯಾಗಿದೆ. ಇದರಿಂದ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ ಮತ್ತು ಬದಲಾವಣೆಯಾಗುತ್ತಿರುವುದು ಕಂಡುಬರುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು. ಅಧಿಕಾರಿಗಳು ಸಾರ್ವಜನಿಕರಿಗೆ ಸ್ಪಂದಿಸಿದಲ್ಲಿ ಕಲ್ಯಾಣ ರಾಜ್ಯ ನಿರ್ಮಾಣ ಮಾಡಬಹುದು. ಆ ನಿಟ್ಟಿನಲ್ಲಿ ಎಲ್ಲರೂ ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಒಳ್ಳೆಯ ಕೆಲಸ ಮಾಡಿದ್ದಲ್ಲಿ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ದೊರೆಯಲಿದೆ. ಆ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಸಹಕರಿಸಬೇಕು ಎಂದರು. ಕಚೇರಿಯಲ್ಲಿ ಹಾಜರಾತಿ ಬಯೋಮೆಟ್ರಿಕ್ ಅಳವಡಿಸಬೇಕು. ಚಲನವಲನ ವಹಿಯನ್ನು ದಾಖಲಿಸಬೇಕು ಎಂದು ಇದೇ ಸಂದರ್ಭದಲ್ಲಿ ಪವನ್ ಕುಮಾರ್ ಹೇಳಿದರು.

# ಚಾಮರಾಜನಗರದಲ್ಲಿ ರೈತ ಸಂಘದ ಕಾರ್ಯಕರ್ತರ ಪ್ರತಿಭಟನೆ

**ಚಾಮರಾಜನಗರ:** ರೈತರು, ಸಾರ್ವಜನಿಕರು ತಮ್ಮ ಮನವಿ ಹಕ್ಕೊತ್ತಾಯಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮುಖ್ಯಮಂತ್ರಿಗೆ ಸಲ್ಲಿಸಿದ್ದ ಮನವಿ ಪತ್ರಗಳನ್ನು ಕಾರ್ಯಕ್ರಮದ ಸ್ಥಳದಲ್ಲೇ ಬೀಸಾಡಿ ಹೋಗಿರುವುದರ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಸ್ಪಷ್ಟೀಕರಣ ನೀಡಬೇಕೆಂದು ಆಗ್ರಹಿಸಿ ರೈತ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಜಿಲ್ಲಾಡಳಿತ ಭವನದ ಮುಂಭಾಗ ಜಮಾಯಿಸಿದ ಕಾರ್ಯಕರ್ತರು ಉಸ್ತುವಾರಿ ಸಚಿವರಿರಾಗಿ ಕಾಯ್ದು ಕುಳಿತರು. ಈ ಸಂದರ್ಭದಲ್ಲಿ ಬಿಗಿ ಪೊಲೀಸ್ ಬಂದೋ ಬಸ್ತ್ ಮಾಡಲಾಯಿತು. ಸ್ಥಳಾಕ್ಕಾಗಮಿಸಿದ ಎಸ್ಪಿ ಕವಿತಾ, ಅಡಿಷನಲ್ ಎಸ್ಪಿ ಉದೇಶ್ ಕಾರ್ಯಕರ್ತರ ಮನವಿಯನ್ನು ಆಲಿಸಿ, ಪ್ರತಿಭಟನೆ ಮಾಡಬೇಡಿ. ಉಸ್ತುವಾರಿ ಸಚಿವರನ್ನು ಭೇಟಿ ಮಾಡಿಸುತ್ತೇವೆ ಎಂದು ಹೇಳಿ ಜಿಲ್ಲಾಡಳಿತ ಭವನದ ಪ್ರವೇಶ ದ್ವಾರದ ಒಳಗೆ ಕರೆದುಕೊಂಡು ಹೋದರು.

ರೈತ ಮುಖಂಡ ಗುರುಪ್ರಸಾದ್ ಮಾತ ನಾಡಿ, ನಾಡಿನ ಮುಖ್ಯಮಂತ್ರಿಗಳಲ್ಲಿ ತಮ್ಮ ಸಮಸ್ಯೆ ಹೇಳಿಕೊಂಡು ರೈತರು ಮತ್ತು ಸಾರ್ವಜನಿಕರು ನೀಡಿದ ಮನವಿಗಳನ್ನು ಈ ರೀತಿ ಬೀಸಾಡಿ ಹೋಗಿರುವುದು ಎಷ್ಟು ಸರಿ. ಒಂದು ಕಾರ್ಯಕ್ರಮದಲ್ಲಿ ಈ ರೀತಿ ಮನವಿಗಳ ಬಗ್ಗೆ ನಿರ್ಲಕ್ಷ್ಯ ವಹಿಸಿದರೆ, ಇನ್ನು ಇವರು ರೈತ ವಿರೋಧಿ ನೀತಿಯನ್ನು ಅನುಸರಿಸುತ್ತಾರೆ ಎಂದರು.

ಸಚಿವ ಕೆ.ವೆಂಕಟೇಶ್ ಮಾತನಾಡಿ, ಯಾರು ಉದ್ದೇಶ ಪೂರ್ವಕವಾಗಿ ಈ ರೀತಿ ಮಾಡಿಲ್ಲ. ನಮ್ಮ ಸರ್ಕಾರ ಜನಪರವಾದ ಸರ್ಕಾರ, ಈ ಬಗ್ಗೆ ವಿಡಿಯೋ ತುಣುಕಗಳನ್ನು ನೋಡಿ, ಮುಖ್ಯಮಂತ್ರಿಯವರೊಡನೆ ಮಾತ ನಾಡಿ ಈ ಬಗ್ಗೆ ಮಾತನಾಡುತ್ತೇನೆ ಎಂದು ಭರವಸೆ ನೀಡಿ ಕಾರ್ಯಕ್ರಮಕ್ಕೆ ತೆರಳಿದರು. ರೈತ ಸಂಘದ ಮಾಡ್ರಹಳ್ಳಿ ಮಹದೇವಪ್ಪ, ಕುಂದಕೆರೆ ಸಂಪತ್ತು ಹಾಜರಿದ್ದರು.

ಕನ್ನಡಪರ ಕಾರ್ಯಕರ್ತರ ಪ್ರತಿಭಟನೆ: ಕನ್ನಡಪರ ಹೋರಾಟಗಾರರಾದ ಮುರುಳಿ, ಚಾ.ವೆಂ.ಶ್ರೀನಿವಾಸಗೌಡ, ನಿಜಧ್ವನಿ ಗೋವಿಂದರಾಜು, ಕುಮಾರ್ ಇತರರು ರೈತ ಸಂಘದ ಕೆಲ ಕಾರ್ಯಕರ್ತರು ಕನ್ನಡ ವಿರೋಧಿಗಳು ನಮ್ಮ ಕಾರ್ಯಕ್ರಮಕ್ಕೆ ಬರುತ್ತಿರುವ ಸಚಿವರನ್ನು ಬೇಕಂತಲೇ ತಡೆ ಒಡ್ಡುತ್ತಿದ್ದಾರೆ ಎಂದು ಘೋಷಣೆ ಕೂಗುತ್ತಾ ಪ್ರತಿಭಟನೆಗೆ ಮುಂದಾದರು. ತಕ್ಷಣ ಪೊಲೀಸರು ಮಧ್ಯೆ ಪ್ರವೇಶಿಸಿ ಪ್ರತಿಭಟನಾಕಾರರನ್ನು ತಡೆದು ಮನವೊಲಿಸಿ ಕರೆದೊಯ್ದರು.




## ಕೆರೆ,ಕಟ್ಟೆ ನಿರ್ಮಾತೃ ಕೆಂಪೇಗೌಡ ಇಂದಿಗೂ ಪ್ರಸ್ತುತ

**ಮಂಡ್ಯ:** ನಾಡಪ್ರಭು ಕೆಂಪೇಗೌಡರ ದೂರ ದೃಷ್ಟಿಯಿಂದ ಬೆಂಗಳೂರು ಪೇಟೆ ನಿರ್ಮಿಸಿ ಇತಿಹಾಸ ಸೃಷ್ಟಿಸಿರುವುದು ಇಂದಿಗೂ ಪ್ರಸ್ತುತ ಎಂದು ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಅಶೋಕ್ ಜಯರಾಂ ಶ್ಲಾಘಿಸಿದರು. ನಗರದ ಹೊರವಲಯದ ಕಿರಗಂದೂರು ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ನಾಡಪ್ರಭು ಕೆಂಪೇಗೌಡರ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಕೆಂಪೇಗೌಡರ 515ನೇ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬೆಂಗಳೂರು ಅಭಿವೃದ್ಧಿಗೊಳ್ಳಲು ಕೆಂಪೇಗೌಡರ ದೂರದೃಷ್ಟಿಯೇ ಕಾರಣವಾಗಿದೆ, ಹೊರ ರಾಜ್ಯ ಮತ್ತು ದೇಶದಾದ್ಯಂತ ಬದಕನ್ನು ಹರಸಿ ಜನರು ಬಂದು ಜೀವನ ಕಟ್ಟಿಕೊಂಡಿದ್ದಾರೆ, ಬೆಂಗಳೂರು ಎಲ್ಲರಿಗೂ ಆಶ್ರಯ ನೀಡುವ ತಾಣವಾಗಿದೆ, ಇಲ್ಲಿ ವ್ಯಾಪರ ಮತ್ತು ಉದ್ಯೋಗಕ್ಕೆ ಯಾವುದೇ ತೊಂದರೆಯಿಲ್ಲ ಎಂದು ನುಡಿದರು. ನಾಡಪ್ರಭು ಕೆಂಪೇಗೌಡರ ಆಲೋಚನೆಯಿಂದ ಕೃಷಿ, ಕೈಗಾರಿಕೆ ಹಾಗೂ ಎಲ್ಲ ವರ್ಗದವರಿಗೆ ನೆಲೆಯಾಗುವಂತಹ ಸ್ಥಳಗಳನ್ನು ನಿರ್ಮಾಣ ಮಾಡಿರುವುದೇ ವಿಶೇಷವಾಗಿದೆ. ಸಮಾನತೆಯಿಂದ ಆಯಾ ವರ್ಗದವರ ವ್ಯಾಪಾರಕ್ಕೆ ಅನುವು ಮಾಡಿಕೊಟ್ಟು ಪೇಟೆಗಳ ನಿರ್ಮಾನ ಮಾಡಿರುವುದು ಇಲ್ಲಿನ ಮೆಚ್ಚುವ ವಿಷಯ ಎಂದು ತಿಳಿಸಿದರು. ನಾಡಪ್ರಭು ಕೆಂಪೇಗೌಡರ ಕ್ಷೇಮಾಭಿವೃದ್ಧಿ ಸಂಘದಿಂದ ಕ್ರೀಡೆಯನ್ನು ಆಯೋಜಿಸಿದ್ದು ವಿಜೇತರಾದವರಿಗೆ ಬಹುಮಾನವನ್ನು ನೀಡಲಾಯಿತು. ಕಾರ್ಯಕ್ರಮದಲ್ಲಿ ಸಮಿತಿಯ ಅಧ್ಯಕ್ಷ ಸಿ.ಎಲ್.ಶಿವಕುಮಾರ್, ಗ್ರಾ.ಪಂ.ಅಧ್ಯಕ್ಷೆ ರೇಖಾ, ಸದಸ್ಯರಾದ ಚಂದ್ರಶೇಖರ್, ಚಿಕ್ಕಯ್ಯ, ಮುಖ್ಯಶಿಕ್ಷಕ ಮಹದೇವಸ್ವಾಮಿ, ಉಪನ್ಯಾಸಕ ಕೆ.ಪಿ.ಬಾಬು ಸೇರಿದಂತೆ ಹಲವರು ಭಾಗವಹಿಸಿದ್ದರು.



## ಡೆಂಗ್ಯೂ ತಡೆಗೆ ಪರಿಸರ ನೈರ್ಮಲ್ಯತೆ ಕಾಪಾಡಿ

**ಚಿತ್ರದುರ್ಗ:** ಡೆಂಗ್ಯೂ ರೋಗ ಈಗ ಎಲ್ಲೆಡೆ ಆತಂಕ ಸೃಷ್ಟಿ ಮಾಡುತ್ತಿದೆ ಡೆಂಗ್ಯೂ ಹರಡಲು ಮುಖ್ಯ ಕಾರಣ ಸೊಳ್ಳೆಗಳು ಈ ಸೊಳ್ಳೆಗಳನ್ನು ನಿಯಂತ್ರಿಸದಿದ್ದರೆ ಡೆಂಗ್ಯೂ ರೋಗ ಹರಡುವುದನ್ನು ತಡೆಯುವುದು ಕಷ್ಟ ಅದಕ್ಕಾಗಿ ಸೊಳ್ಳೆಗಳು ವಾಸಮಾಡುವ ನಮ್ಮ ಮನೆ ಸುತ್ತಮುತ್ತಲು ಕಸ ಶೇಖರಣೆಯಾಗದಂತೆ ಹಾಗೂ ಯಾವುದೇ ತರಹದ ನೀರು ನಿಲ್ಲದಂತೆ ಎಚ್ಚರವಹಿಸಿ ಸೊಪ್ಪುಗಳು ಮನೆಯ ಹತ್ತಿರ ಸುಳಿಯದಂತೆ ಮನೆಯ ಸುತ್ತಲೂ ತುಳಸಿಗಿಡಗಳನ್ನು ಹೆಚ್ಚಾಗಿ ಬೆಳೆಸಿ ಮತ್ತು ಪ್ರತಿದಿನ 5ರಿಂದ 6 ತುಳಸಿ ಎಲೆಗಳನ್ನು ಜಗಿದು ತಿನ್ನಿ ಇದು ದೇಹದಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಿಸುತ್ತದೆ ಎಂದು ಯೋಗ ಗುರು ರವಿ ಕೆ.ಅಂಬೇಕರ್ ಗ್ರಾಮಸ್ಥರಿಗೆ ಸಲಹೆ ನೀಡಿದರು. ಅವರು ಶನಿವಾರ ಚಿತ್ರದುರ್ಗ ಜಿಲ್ಲಾ ಆಯುಷ್ ಇಲಾಖೆಯ ಸರ್ಕಾರಿ ಪ್ರಾಥಮಿಕ ಆಯುರ್ವೇದ ಚಿಕಿತ್ಸಾಲಯ ಜೆ ಎನ್ ಕೋಟೆ ಇವರು ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಡೆಂಗ್ಯೂ ನಿಯಂತ್ರಣ ಜಾಗೃತಿ ಜಾಥದ ನೇತೃತ್ವ ವಹಿಸಿ ಮಾತನಾಡುತ್ತಾ ಡೆಂಗ್ಯೂ ರೋಗಕ್ಕೆ ಇದುವರೆಗೆ ಯಾವುದೇ ನಿರ್ದಿಷ್ಟ ಔಷಧ ಕಂಡುಹಿಡಿಯಲಾಗಿಲ್ಲ ಸಾಮಾನ್ಯ ಜ್ವರಕ್ಕೆ ನೀಡುವ ಔಷಧ ಮಾತ್ರೆಗಳನ್ನೆ ನೀಡಲಾಗುತ್ತಿದೆ ಅದಕ್ಕಾಗಿ ಯಾರಿಗಾದರೂ ಸಾಮಾನ್ಯ ಜ್ವರ ಬಂದಾಗ ನಿರ್ಲಕ್ಷ್ಯ ತೋರದೆ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿನೀಡಿ ಚಿಕಿತ್ಸೆ ಪಡೆಯಬೇಕು. ದೇಹದಲ್ಲಿ ರೋಗ ನಿರೋಧಕ ಶಕ್ತಿ ಕಡಿಮೆ ಇರುವವರಿಗೆ ಸೊಳ್ಳೆಗಳು ಕಚ್ಚಿದ ತಕ್ಷಣ ಜ್ವರ ಬರುವ ಸಂಭವ ಹೆಚ್ಚು ಅದಕ್ಕಾಗಿ ಪ್ರತಿಯೊಬ್ಬರೂ ತಮ್ಮ ದೇಹದಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಿಸಿಕೊಳ್ಳುವುದು ಅವಶ್ಯಕ ಅದಕ್ಕಾಗಿ ಊಟದ ಜೊತೆಗೆ ಪಪ್ಪಾಯಿಹಣ್ಣು ಸೇವಿಸುವುದರೊಂದಿಗೆ ಪ್ರತಿದಿನ ಯೋಗ ವ್ಯಾಯಾಮ ಮಾಡುವುದು ಅವಶ್ಯಕ ಅದಕ್ಕಾಗಿ ಆಯುಷ್ ಇಲಾಖೆಯು ಜೆ ಎನ್ ಕೋಟೆ ಆಯುರ್ವೇದ ಚಿಕಿತ್ಸಾಲಯ ಸೇರಿದಂತೆ ಹಲವಾರು ಗ್ರಾಮಗಳಲ್ಲಿ ಉಚಿತ ಯೋಗ ತರಬೇತಿ ಕೇಂದ್ರಗಳನ್ನು ತೆರೆಯಲಾಗಿದೆ ಪ್ರತಿಯೊಬ್ಬರೂ ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು. ಇದೇ ಸಂಧರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ ಶ್ರೀಮತಿ ಮಂಜುಳಾ ಟಿ.ಕೆ. ಮಾತನಾಡಿ ಮಕ್ಕಳಿಗೆ ಸೊಳ್ಳೆಗಳ ಕಚ್ಚುವಿಕೆಯಿಂದ ತಪ್ಪಿಸಲು ತುಂಬು ತೋಳಿನ ಬಟ್ಟೆಗಳನ್ನು ತೊಡಿಸಿ ಮಕ್ಕಳಿಗೆ ಆರೋಗ್ಯಕರ ಊಟದ ಜೊತೆಗೆ ಸಾಕಷ್ಟು ದ್ರವ ಪದಾರ್ಥ ಮತ್ತು ನೀರನ್ನು ಕುಡಿಸಿ. ನಿಮ್ಮ ಮಗು ಚೆನ್ನಾಗಿ ನಿದ್ರಿಸುತ್ತಿದೆ ಎಂದು ಖಚಿತಪಡಿಸಿಕೊಳ್ಳಿ ಆರೋಗ್ಯಕರ ಆಹಾರ ಮತ್ತು ಸಾಕಷ್ಟು ವಿಶ್ರಾಂತಿ ಮಕ್ಕಳಲ್ಲಿ ರೋಗನಿರೋಧಕ ಶಕ್ತಿಯನ್ನು ಬಲಪಡಿಸಲು ಮತ್ತು ವೈರಸ್ ಅನ್ನು ನಾಶಮಾಡಲು ಸಹಾಯ ಮಾಡುತ್ತದೆ. ಎಂದು ಅಭಿಪ್ರಾಯ ಪಟ್ಟರು. ಕಾರ್ಯಕ್ರಮದಲ್ಲಿ ಶಾಲೆಯ ದೈಹಿಕ ಶಿಕ್ಷಕ ಕೊಲ್ಲಪ್ಪ ಜಿ. ಸಹಶಿಕ್ಷಕರಾದ ನಾಗರತ್ನಮ್ಮ, ತಬ್ಸುಮ್ ಬಾನು, ಮಂಜುಳಾ ಬಿ ಹೆಚ್ ಪಾಲ್ಗೊಂಡಿದ್ದರು.




### ಶ್ರೀವೀರಭದ್ರ ಚನ್ನಮಲ್ಲ ದೇಶಿಕೇಂದ್ರ ಮಹಾಸ್ವಾಮೀಜಿ ಸಲಹೆ

# ಬದುಕಿನಲ್ಲಿ ದುಂದುವೆಚ್ಚ ಮಾಡ್ಬೇಡಿ



**ವಿಜಯಪುರ:** ರಿಲಯನ್ಸ್ ಗ್ರೂಪ್ ನ ಮುಖೇಶ್ ಅಂಬಾನಿ ಪುತ್ರನ ಮದುವೆಗೆ ಮಾಡಿದ ವೆಚ್ಚದಿಂದ ಇಡೀ ಮುಂಬೈ ನಗರಕ್ಕೆ ಶುದ್ಧ ಕುಡಿಯುವ ನೀರನ್ನು ಒದಗಿಸಬಹುದಾಗಿತ್ತು ಎಂದು ಗೂಳೂರು ಶ್ರೀ ನಿಡುಮಾಮಿಡಿ ಮಠದ ಜಗದ್ಗುರು ಪೀಠಾಧ್ಯಕ್ಷರಾದ ಧರ್ಮಗುರು ಶ್ರೀ ವೀರಭದ್ರ ಚನ್ನಮಲ್ಲ ದೇಶಿಕೇಂದ್ರ ಮಹಾಸ್ವಾಮಿಗಳವರು ತಿಳಿಸಿದರು.

ಅವರು ಇಲ್ಲಿನ ಶ್ರೀನಗರೇಶ್ವರ ಸ್ವಾಮಿ ಜ್ಞಾನ ಮಂದಿರದಲ್ಲಿ ಶ್ರೀ ವೀರಭದ್ರ ಸ್ವಾಮಿ ಗೋಷ್ಠಿ ಅಕ್ಕನ ಬಳಗ ಸೇವಾ ಟ್ರಸ್ಟ್ (ರಿ), ಶ್ರೀ ವೀರೇಶ್ವರ ಚಾರಿಟೇಬಲ್ ಟ್ರಸ್ಟ್ (ರಿ) ಇವರ ಸಂಯುಕ್ತ ಆಶ್ರಯದಲ್ಲಿ 352 ನೆಯ ಮಾಸಿಕ ಶಿವಾನುಭವಗೋಷ್ಠಿ, ವೀರೇಶಶ್ರೀ ಪ್ರಶಸ್ತಿ ವಿತರಣೆ, ಮತ್ತು ಪೂಜ್ಯ ಡಾ. ಶ್ರೀ ಜಚನಿ ಸಂಸ್ಮರಣೆ,ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ, ಸಮಾಜದಲ್ಲಿನ ಬಡವರು ಹಾಗೂ ಅನಾರೋಗ್ಯ ಪೀಡಿತರಿಗೆ ಸಹಾಯಧನ ನೀಡುವಿಕೆ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡುತ್ತಿದ್ದರು.

ಅಂಬಾನಿ ಕುಟುಂಬ ತಮ್ಮ ಮಗನ ಮದುವೆಗೆ 5000 ಕೋಟಿ ಹಣ ವೆಚ್ಚ ಮಾಡಿ ವೈಭವಯುತವಾಗಿ ಸಂಭ್ರಮಿಸಿರುವುದು ಸಮಾಜ ತಲೆತಗ್ಗಿಸುವಂತಹ ವಿಷಯವಾಗಿದ್ದು ಇದನ್ನೇ ಸಮಾಜದ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಬಳಸಬಹುದಾಗಿತ್ತು ಎಂದು ಅಭಿಪ್ರಾಯಪಟ್ಟರು.

ವಿದ್ಯಾರ್ಥಿಗಳು ತಮ್ಮ ಜೀವನಕ್ಕೆ ಯಾರನ್ನು ಮಾದರಿ ಮಾಡಿಕೊಳ್ಳಬೇಕೆಂಬ ಜಿಜ್ಞಾಸೆ ಇದ್ದು, ನಡೆ ನುಡಿ ಎರಡು ಒಂದಾಗಿ ಇರುವಂತವರನ್ನು ಕಂಡುಕೊಳ್ಳಬೇಕಾಗಿದ್ದು, ನಡೆದಂತೆ ನುಡಿಯಬೇಕು ಹಾಗೆಯೇ ನುಡಿದಂತೆ ನಡೆಯಬೇಕಾದಂತಹ ವ್ಯಕ್ತಿಗಳು ದೊರೆಯುವುದು ಕಷ್ಟ ಸಾಧ್ಯವಾಗಿದೆ ಎಂದು ತಿಳಿಸಿದರು.

1937 ರಲ್ಲಿ ಜಚನಿಗಳು ಹಾಗೂ ಧಾರವಾಡದ ಮುರುಗಾಮಠದ ಮೃತ್ಯುಂಜಯ ಅಪ್ಪ ರವರುಗಳು ಅಕ್ಕನ ಬಳಗವನ್ನು ಸ್ಥಾಪಿಸಿದ್ದು ಅದರ ಪರಂಪರೆಯಲ್ಲಿಯೇ ವಿಜಯಪುರದ ಅಕ್ಕನ ಬಳಗವು ನಡೆದು ಬರುತ್ತಿರುವುದು ಸಂತಸಕರ ವಿಷಯವೆಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅನಿಲ್ ಕುಮಾರ್ ರವರು ಮಾತನಾಡಿ, ವಿದ್ಯಾರ್ಥಿಗಳಿಗಾಗಿ ಪೋಷಕರು ತಮ್ಮ ಜೀವನದಲ್ಲಿ ತ್ಯಾಗ ಮಾಡಬೇಕಿದ್ದು, ಅದರಲ್ಲಿಯೂ ಎಸ್ ಎಸ್ ಎಲ್ ಸಿ ಓದುತ್ತಿರುವ ಮಕ್ಕಳ ಮನೆಯಲ್ಲಿನ ಪೋಷಕರು ಟಿವಿ ನೋಡುವುದನ್ನು ಬಿಟ್ಟು ಮಕ್ಕಳೊಂದಿಗೆ ಅಭ್ಯಾಸದಲ್ಲಿ ತೊಡಗಿಕೊಳ್ಳಬೇಕೆಂದು ತಿಳಿಸಿದರು.

ಸಹಕಾರ ಪ್ರಶಸ್ತಿ ಪುರಸ್ಕೃತ ಪಿ ರುದ್ರಪ್ಪ ರವರು ಮಾತನಾಡುತ್ತ ಬದಲಾಗುತ್ತಿರುವ ಕಾಲಮಾನದಲ್ಲಿ ಮೊಬೈಲ್, ಟಿವಿ, ದೂರದರ್ಶನ, ನೆಟ್ವರ್ಕ್, ವಾಟ್ಸಾಪ್, ಇನ್ಸ್ಟಾಗ್ರಾಮ್ ಮುಂತಾದವುಗಳ ಮಧ್ಯೆ ವಿದ್ಯಾರ್ಥಿಗಳು ಪ್ರಾಕೃತಿಕ ಬದುಕನ್ನು ಅನುಭವಿಸದೆ ಯಾಂತ್ರಿಕ ಜೀವನ ನಡೆಸುತ್ತಿದ್ದಾರೆ ಎಂದು, ವಿದ್ಯಾರ್ಥಿಗಳು ಇವುಗಳ ಬಳಕೆ ಮಾಡುತ್ತಿದ್ದರು ಸಹ ಪೋಷಕರು ಅವರುಗಳ ಬಗ್ಗೆ ಗಮನಹರಿಸಬೇಕೆಂದು ತಿಳಿಸಿದರು.

ಕಳೆದ 20 ವರ್ಷಗಳಿಂದ ವೀರೇಶ್ವರ ಚಾರಿಟಬಲ್ ಟ್ರಸ್ಟ್ ವತಿಯಿಂದ ಸುಮಾರು 800ಕ್ಕೂ ಹೆಚ್ಚು ಮಂದಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪಡೆದಿದ್ದು ಅಕ್ಕನ ಬಳಗದ ವೀರಭದ್ರ ಸ್ವಾಮಿ ಘೋಷ್ಠಿಯ 352ನೇ ಚಿಂತನ ಗೋಷ್ಠಿ ಕಾರ್ಯಕ್ರಮ ಎಂಬುದು ಒಂದು ರೀತಿಯಲ್ಲಿ ಗಿನ್ನಿಸ್ ರೆಕಾರ್ಡ್ ಸೇರುವಂತಹದಾಗಿದ್ದು ಇಷ್ಟು ದೀರ್ಘಕಾಲ ಇಂತಹ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದಿರುವ ಬೇರಾವುದೇ ಸಂಘ ಸಂಸ್ಥೆಗಳು ಕಾಣಸಿಗುವುದಿಲ್ಲವೆಂದು ತಿಳಿಸಿದರು..

ವೀರೇಶಶ್ರೀ ಪ್ರಶಸ್ತಿ ಯನ್ನು ಸ್ವೀಕರಿಸಿದ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕವಿ ಶ್ರೀ ಮ. ಸುರೇಶ್ ಬಾಬು (ಸುಜ್ಞಾನಪ್ರಿಯ) ಮಾತನಾಡಿ ಪ್ರತಿಯೊಬ್ಬರ ಬಾಳಲ್ಲಿ ಪ್ರತಿದಿನದಲ್ಲಿ 1440 ವಜ್ರದಂತಹ ಅವಕಾಶ ಇದ್ದು ದಿನಕ್ಕೆ 24 ಗಂಟೆಯಂತೆ ದಿನಕ್ಕೆ 1440 ನಿಮಿಷಗಳು ಇದ್ದು ಅವುಗಳನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವೀರೇಶಶ್ರೀ ಪ್ರಶಸ್ತಿ ಯನ್ನು ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕವಿ ಶ್ರೀ ಮ. ಸುರೇಶ್ ಬಾಬು (ಸುಜ್ಞಾನಪ್ರಿಯ) ರವರಿಗೆ ನೀಡಿ ಗೌರವಿಸಿ ಸನ್ಮಾನಿಸಲಾಯಿತು.

ಸಾಕ್ಷಿ ಮುರುಗ ಟ್ರಸ್ಟ್ ವತಿಯಿಂದ ಬಡ ಮಹಿಳೆಯರಿಗೆ ಸಹಾಯಧನ ವಿತರಿಸಲಾಯಿತು. ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ಹಡಪದ್ ರಾಷ್ಟ್ರೀಯ ಬಸವದಳದ ಮಾ ಜಯದೇವ್ ವೀರೇಶ್ವರ ಚಾರಿಟೇಬಲ್ ಟ್ರಸ್ಟ್ ಲಿಂಗರಾಜು ಹಿರಿಯ ಸಾಹಿತಿ ಬೆ.ಕಾ. ಮೂರ್ತಿಶ್ವರಯ್ಯ ಅಕ್ಕನ ಬಳಗದ ಅಂಬಾಭವಾನಿ ಮೀನಾ ಕುಮಾರಿ,ವಿಮಲಾಂಭ, ವಿ.ವಿಶ್ವನಾಥ್ ,ಕೃಷ್ಣಾನಂದ್ ಮತ್ತಿತರರು ಉಪಸ್ಥಿತರಿದ್ದರು.

# ಸಂವಿಧಾನ ಬಲಪಡಿಸಲು ಬಂದಿದ್ದೇವೆ: ಅಥವಲೇ

**ಕೋಲಾರ:** ಹೊಸ ಸರ್ಕಾರ ಸಂವಿಧಾನ ಬದಲಾಯಿಸಲು ಅಲ್ಲ ಅದನ್ನು ಬಲಪಡಿಸಲು ಬಂದಿದ್ದೇವೆ ಎಂದು ಕೇಂದ್ರ ಸಾಮಾಜಿಕ ನ್ಯಾಯಾಲಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ರಾಮದಾಸ್ ಅಥವಲೇ ಅವರು ಹೇಳಿದರು.

ಇಂದು ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಮಲ್ಲಗಾನಹಳ್ಳಿ ಯಲ್ಲಿ ಡಾ. ಬಿ. ಆರ್ ಅಂಬೇಡ್ಕರ್ ರವರ ಹಾಗೂ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ ಪುತ್ಥಳಿ ಅನಾವರಣ ಮಾಡಿ ನಂತರ ಕೋಲಾರದ ಸರ್ಕಾರಿ ಅಥಿತಿಗೃಹದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಹೊಸ ಸರ್ಕಾರ ಸ್ಪಷ್ಟ ಬಹುಮತ ಪಡೆದಿದೆ. ಪ್ರಧಾನಿ ಮೋದಿ ಅವರ ಜನ ಪ್ರಿಯತೆ ಕಡಿಮೆಯಾಗಿಲ್ಲ. ಚುನಾವಣೆಯಲ್ಲಿ ಅವರ ಜನಪ್ರಿಯತೆಗೆ ಧಕ್ಕೆ ತರಲು ವಿರೋಧಿಗಳು ಪ್ರಯತ್ನಿಸಿದ್ದರು.ಕಾಂಗ್ರೆಸ್ ಕಾಲದಲ್ಲಿ ಆಗದ ಅಭಿವೃದ್ಧಿ ಕೆಲಸಗಳು ಮೋದಿ ಅವರ ಕಾಲದಲ್ಲಿ ಆಗಿವೆ. ಕರ್ನಾಟಕದಲ್ಲೂ ಈ ಬಾರಿ ನಮಗೆ ಉತ್ತಮ ಬೆಂಬಲ ಸಿಕ್ಕಿದೆ. ಮಧ್ಯಪ್ರದೇಶ, ಉತ್ತರಾಖಂಡ, ಹಿಮಾಚಲ ಎಲ್ಲೆಡೆ ಉತ್ತಮ ಬೆಂಬಲ ವ್ಯಕ್ತವಾಯಿತು.

ಮಹರಾಷ್ಟ್ರದಲ್ಲಿ ಕೊಂಚ ಹಿನ್ನಡೆಯಾಯಿತು.ಸಂವಿಧಾನ ಬದಲಾವಣೆ ಮಾಡುತ್ತಾರೆ ಎಂಬ ಸುಳ್ಳು ಸುದ್ದಿ ಹರಡಿಸಿದ ವಿಚಾರ ಪ್ರಭಾವ ಬೀರಿದೆ. ಅಂಬೇಡ್ಕರ್ ಅವರು ಮಹಾರಾಷ್ಟ್ರದ ವರು ಅದಕ್ಕಾಗಿ ಅಲ್ಲಿ ಈ ವಿಚಾರ ಪರಿಣಾಮ ಬೀರಿದೆ. ಆದಾಗ್ಯೂ ಸ್ಪಷ್ಟ ಬಹುಮತದೊಂದಿಗೆ ಸರ್ಕಾರ ರಚನೆ ಮಾಡಿದ್ದೇವೆ. ಮುಂದಿನ ಐದು ವರ್ಷಗಳ ಕಾಲ ಸರ್ಕಾರ ನಿರಾತಂಕವಾಗಿ ನಡೆಯಲಿದೆ. ವಿಪಕ್ಷಗಳು ಸಹ ಇದನ್ನ ಸಾಕ್ಷೀಕರಿಸುತ್ತವೆ.ಪ್ರಧಾನಿ ಮೋದಿ ಅವರು ತುಂಬಾ ಯೋಚಿಸಿ ಕೆಲಸ ಮಾಡುತ್ತಾರೆ.ನಮ್ಮ ಸರ್ಕಾರದಲ್ಲಿ ಯಾವುದೆ ಭಿನ್ನಾಭಿಪ್ರಾಯ ಇಲ್ಲ. ಕಾಂಗ್ರೆಸ್ ಗೆ 99 ಸ್ಥಾನ ಲಭಿಸಿವೆ ಆದ್ರೆ ಬಿಜೆಪಿಗೆ ಮೈತ್ರಿಗೆ 294ಸ್ಥಾನ ಸಿಕ್ಕಿದೆ ಎಂದರು.



ವಿರೋಧ ಪಕ್ಷದವರು ಏನು ಮಾಡಿದರೂ ನಮ್ಮ ಸರ್ಕಾರ 5ವರ್ಷ ಪೂರ್ಣಗೊಳಿಸಲಿದೆ. ವಿರೋಧ ಪಕ್ಷದವರಿಗೆ ಅಧಿಕಾರದ ಆಸೆ ಹೆಚ್ಚಾಗಿದೆ.ಮುಂದಿನ ದಿನಗಳಲ್ಲಿ ಇಂಡಿಯಾ ಒಕ್ಕೂಟದಲ್ಲೂ ಒಡಕು ಉಂಟಾಗಬಹುದಾದ ಸಾಧ್ಯತೆ ದಟ್ಟವಾಗಿದೆ.ಆದರೆ ಚಂದ್ರಬಾಬು ನಾಯ್ಡು, ನಿತೀಶ್ ಕುಮಾರ್, ದೇವೇಗೌಡರು, ಪವನ್ ಕಲ್ಯಾಣ್ ನಮ್ಮ ಜೊತೆಗಿದ್ದಾರೆ. ಸರ್ಕಾರಕ್ಕೆ ಯಾವುದೆ ತೊಂದರೆ ಇಲ್ಲ. ಮನ ಮೋಹನ್ ಸಿಂಗ್ ಸರ್ಕಾರ ಹತ್ತು ವರ್ಷ ಗಳ ಆಡಳಿತ ನೀಡಿದೆ. ಆದರೆ ಅವರು 200 ಸ್ಥಾನಗಳನ್ನು ಮಾತ್ರ ಗೆಲ್ಲಲು ಸಾಧ್ಯವಾಗಿತ್ತು, ನರಸಿಂಹರಾವ್ ನೇತೃತ್ವದ ಸರ್ಕಾರಕ್ಕೂ ಬಹುಮತ ಇರಲಿಲ್ಲ. ಆದರೆ ಎಲ್ಲಾ ಐದು ವರ್ಷ ಸರ್ಕಾರ ಮಾಡಿದ್ದಾರೆ, ನಮಗೆ ಸ್ಪಷ್ಟ ಬಹುಮತ ಇದೆ 5ವರ್ಷ ಸರ್ಕಾರ ನಡೆಸುತ್ತೇವೆ.ನಮ್ಮ ವಿರೋಧಿಗಳಿಗೆ ಹೆಚ್ಚಿನ ಸ್ಥಾನ ಬಂದಿರಬಹುದು. ಆದರೆ ಪ್ರಜಾಪ್ರಭುತ್ವದ ತೀರ್ಪು ಒಪ್ಪಿ ನಡೆಯುತ್ತೇವೆ.ನಮಗೆ ಹಿನ್ನಡೆಯಾಗಲು ಕಾರಣ ಕುರಿತು ಆತ್ಮಾವಲೋಕನ ಮಾಡಲಿದ್ದೇವೆ ಎಂದರು. ಸಂಸದ ಎಂ ಮಲ್ಲೇಶಬಾಬು, ಸಮಾಜಸೇವಕ ಸಿ. ಎಂ ಆರ್. ಶ್ರೀನಾಥ್,ಜಿಲ್ಲಾಧಿಕಾರಿ ಅಕ್ರಂ ಪಾಷ, ಜಿಲ್ಲಾ ರಕ್ಷಣಾಧಿಕಾರಿ ಬಿ. ನಿಖಿಲ್ ಸೇರಿದಂತೆ ಸ್ಥಳೀಯ ಮುಖಂಡರು ಭಾಗಿಯಾಗಿದ್ದರು.

## ಉದ್ಯೋಗ ವಿನಿಮಯ ಕೇಂದ್ರಕ್ಕೆ ವರದಿ ಸಲ್ಲಿಸಿ

**ಮಂಡ್ಯ:** ಮಂಡ್ಯ ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ ಸೂಚಿತ, ಅಸೂಚಿತ ಸ್ಥಾಪನೆ/ ಸಂಸ್ಥೆಗಳು ತಮ್ಮಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಮಾಹಿತಿಯನ್ನು ಸ್ಥಳೀಯ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಕ್ಕೆ ಪ್ರತಿ ತ್ರೈಮಾಸಿಕಾಂತ್ಯಕ್ಕೆ ಸ್ಥಳೀಯ ಉದ್ಯೋಗ ವಿನಿಮಯ ಕೇಂದ್ರಕ್ಕೆ ವರದಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿಯ ದೂ.ಸಂ: 08232-220126 2 9113875775 1 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.



ವಿಜಯಪುರ ಪಟ್ಟಣದ ಸುರಕ್ಷಾ ಟೂರ್ಸ್ ಮತ್ತು ಟ್ರಾವೆಲ್ಸ್ ನ ಬೇಕರಿ ಶಿವಣ್ಣ ಹಾಗೂ ವೀರೇಶ್ ರವರು 32 ಮಂದಿಯ ತಂಡದೊಂದಿಗೆ ಅಮರನಾಥಯಾತ್ರೆ ಕೈಗೊಂಡಿದ್ದು, ಅಮರನಾಥ ಸ್ವಾಮಿಯ ದರ್ಶನವನ್ನು ಯಶಸ್ವಿಯಾಗಿ ಮುಗಿಸಿದರು. ಅಮರನಾಥ ಗುಹೆ ಮುಂಭಾಗದಲ್ಲಿ ವೀರೇಶ್ ರವರು ಪುನೀತ್ ರಾಜಕುಮಾರ್ ರವರ (ಅಪ್ಪು) ಭಾವಚಿತ್ರದ ಕನ್ನಡ ಬಾವುಟವನ್ನು ಹಿಡಿದಿರುವುದು ಹಾಗೂ ಬೇಸ್ಮೆಂಟ್ ಕ್ಯಾಂಪ್ನಲ್ಲಿ 32 ಮಂದಿ ಪ್ರವಾಸಿಗರು ಇರುವುದು.

## ಒಳಚರಂಡಿ ವ್ಯವಸ್ಥೆ ಸರಿಪಡಿಸಿ; ಶಾಸಕ ಟಿ.ಎಸ್.ಶ್ರೀವತ್ಸ

**ಮೈಸೂರು:** 43 ನೇ ವಾರ್ಡ್ ನ ವ್ಯಾಪ್ತಿಯ ಶಾರದದೇವಿ ನಗರ,ಜನತಾ ನಗರ,ಟಿ.ಕೆ ಲೇ ಔಟ್,ನ ಸುತ್ತಮುತ್ತ ಪಾದಯಾತ್ರೆ ಮಾಡಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ಬೆಳ್ಳಗೆ ಯಿಂದ ಸಂಜೆಯವರೆಗೂ ಪಾದಯಾತ್ರೆ ಮಾಡಲಾಯಿತು

ಪಾದಯಾತ್ರೆ ಯಲ್ಲಿ ರಸ್ತೆಯ ಇಕ್ಕೆಲಗಳಲ್ಲಿ ಒಳಚರಂಡಿ ಅವೈಜ್ಞಾನಿಕ ವಾಗಿದ್ದು ಮಳೆ ಬಂದಂತಹ ಸಂಧರ್ಭದಲ್ಲಿ ಸಾರ್ವಜನಿಕರಿಗೆ ಅನಾನುಕೂಲ ವಾಗಲಿದ್ದು ಈ ಕೂಡಲೆ ಸರಿಪಡಿಸಿ ಎಂದು ತಿಳಿಸಿದರು, ಹಾಗೇಯೆ ವ್ಯಾಪ್ತಿಯಲ್ಲಿರುವ ಪಾರ್ಕಗಳಲ್ಲಿ ರಾತ್ರಿಸಮಯ ಪುಂಡ ಯುವಕರ ಹಾವಳಿ ಹೆಚ್ಚಾಗಿದ್ದು ಪೋಲಿಸ್ ಹೆಚ್ಚು ಗಸ್ತುಕೊಡಬೇಕೆಂದರು, ಖಾಲಿ ನಿವೇಶನ ಇರುವ ರೆವಿನ್ಯೂ ಮನೆಗಳ ಸುತ್ತ ಮುತ್ತ ಕಸ ಹಾಕಬಾರದು ಎಂದು ತಿಳಿಸಿದರು,ಕೃಷ್ಣ ಮೂರ್ತಿ ಬಡಾವಣೆಯಲ್ಲಿ ಮರಗಳು ಬೆಳದಿದ್ದು ಕೂಡಲೆ ಟ್ರಿಂ ಮಾಡುವ ಮೂಲಕ ಸರಿಪಡಿಸಬೇಕು ಎಂದರು.

ಸಂಧರ್ಭದಲ್ಲಿ ಶಾಸಕ ಟಿ.ಎಸ್. ಶ್ರೀವತ್ಸ,ಮಾಜಿ ನಗರಪಾಲಿಕೆ ಸದಸ್ಯ ಜಗದೀಶ್,ಮುಖಂಡರಾದ ಜೋಗಿ ಮಂಜು, ಶಿವಣ್ಣ,ಮಧುಕೆಂಚ,ರಮೇಶ್,ಬಸವರಾಜು, ಈರೇಗೌಡ,ಚಂದ್ರಪ್ಪ,ಲೋಹಿತ್,ಶ್ರೀನಿವಾಸ್, ಪೂರ್ಣಿಮಾ, ಕಿಶೋರ್, ಪ್ರದೀಪ್, ಶಿವರಾಜ್ ರಾವ್,ರಮೇಶ್,ಜಯರಾಮ್,ಸತ್ಯಾನಂದ ವಿಟ್ಟು, ಹಾಗೂ ಅಧಿಕಾರಿಗಳು ಇದ್ದರು.



# ರಣಬೈರೇಗೌಡರ ತಂಡ ಪ್ರಥಮ

**ವಿಜಯಪುರ:** ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಆಟದ ಮೈದಾನದಲ್ಲಿ ಕೆಂಪೇಗೌಡ ಯುವಕರ ಬಳಗದಿಂದ ನಡೆದ 3 ನೇ ವರ್ಷದ ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಿಮೆಂಟ್ ನಲ್ಲಿ 25000 ರೂಗಳೊಂದಿಗೆ ಆಕರ್ಷಕ ಟ್ರೋಫಿಯನ್ನು ಪ್ರಥಮ ಬಹುಮಾನವಾಗಿ ರಣಬೈರೇಗೌಡರ ತಂಡ, 15000 ರೂಗಳೊಂದಿಗೆ ಆಕರ್ಷಕ ಟ್ರೋಫಿಯನ್ನು ದ್ವಿತೀಯ ಬಹುಮಾನವಾಗಿ ಬಾಲಗಂಗಾಧರನಾಥ ಸ್ವಾಮೀಜಿ ತಂಡ, 10000 ರೂಗಳೊಂದಿಗೆ ತೃತೀಯ ಬಹುಮಾನವನ್ನು ನ ಕೆಂಪೇಗೌಡ ತಂಡದವರು ಪಡೆದುಕೊಂಡರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ.ಕೆ.ಸುಧಾಕರ್ ಅವರು, ಆಟಗಾರರನ್ನು ಅಭಿನಂದಿಸಿ, ಪಂದ್ಯಶ್ರೇಷ್ಟ ಆಟಗಾರರಿಗೆ ನೆನಪಿನ ಕಾಣಿಕೆಗಳು ವಿತರಣೆ ಮಾಡಿದರು. ಯುವಕರೊಂದಿಗೆ ಕೆಲ ಕಾಲ ಕ್ರಿಕೆಟ್ ಆಟವಾಡುವ ಮೂಲಕ ಸಂಭ್ರಮಿಸಿದರು.

ಈ ವೇಳೆ ಮಾತನಾಡಿದ ಅವರು, ಕ್ರೀಡೆಗಳು, ಯುವಕರಿಗೆ ಸಮಯಸ್ಫೂರ್ತಿ, ಹೊಣೆಗಾರಿಕೆ, ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಲು ಸಹಕಾರಿಯಾಗುತ್ತವೆ. ಜೀವನದಲ್ಲಿ ಬಹಳಷ್ಟು ಒತ್ತಡಗಳು ಬರುತ್ತವೆ. ಒತ್ತಡದಿಂದ ಹೊರಬರುವುದನ್ನು ಕಲಿಸುತ್ತವೆ. ಒತ್ತಡವನ್ನು ಧೈರ್ಯವಾಗಿ ಎದುರಿಸಿದಾಗ ಯಶಸ್ಸು ಕಾಣಲು ಸಾಧ್ಯವಾಗುತ್ತದೆ. ಗ್ರಾಮೀಣ ಭಾಗದಲ್ಲಿ ಆಯೋಜನೆ ಮಾಡಿರುವ ಇಂತಹ ಕ್ರೀಡಾಕೂಟಗಳಿಂದ ಮತ್ತಷ್ಟು ಹೆಚ್ಚಾಗಬೇಕು.ಯುವಕರು ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಮೂಲಕ ಜೀವನದಲ್ಲಿ ಎದುರಾಗುವ ಸಮಸ್ಯೆಗಳ ವಿರುದ್ಧ ಸಂಘಟಿತರಾಗಿ ಹೋರಾಟ ನಡೆಸಲು ಸಜ್ಜಾಗಿ ಎಂದರು.

ಮಾಸ್ ಮಹೇಶ್‌ರವರು ಶ್ರೀ ಓಂಕಾರೇಶ್ವರಸ್ವಾಮಿ ಕ್ರಿಕೆಟ್ ತಂಡದ, ಮೋಹನ್ ಕುಮಾರ್‌ರವರು ಕುವೆಂಪು ತಂಡದ, ಕಾರ್ತಿಕ್ ರವರು ಕೆಂಪೇಗೌಡ ತಂಡದ, ಕೀರ್ತಿರವರು ಕೆಂಗಲ್ ಹನುಮಂತಯ್ಯ ತಂಡದ, ವೇಣುರವರು ರಣಬೈರೇಗೌಡರ ತಂಡದ, ಪ್ರವೀಣ್‌ರವರು ಬಾಲಗಂಗಾಧರನಾಥ ಸ್ವಾಮೀಜಿ ತಂಡದ ಪ್ರಾಯೋಜಕತ್ವವನ್ನು ವಹಿಸಿದ್ದರು.



ಮುಖಂಡರಾದ ಬಾಲೇಪುರ ಸುನೀಲ್, ಕೆ.ಆರ್.ಫೌಂಡೇಷನ್ ಸಂಸ್ಥಾಪಕ ಕುಶಾಲ್ ರಾಜ್ ಗೌಡ, ಸಾಯಿ ಜ್ಯೋತಿ ಇಂಟರ್ ನ್ಯಾಷನಲ್ ಶಾಲೆಯ ಕುಶಾಂತ್ ಗೌಡ, ಆರ್.ಎಂ.ಸಿಟಿ.ಮಂಜುನಾಥ್, ಮಹೇಶ್ ಕುಮಾರ್, ಪುರ ಕಿರಣ್, ಜಯಕರ್ನಾಟಕ ಸಂಘಟನೆ ರಾಜ್ಯ ಜಂಟಿ ಕಾರ್ಯದರ್ಶಿ ಅಶ್ವಥಗೌಡ, ಚಂದೇನಹಳ್ಳಿ ಗೋವಿಂದರಾಜು, ವೆಂಕಟೇಶ್, ನಿತೇಶ್, ವಿಶ್ವನಾಥ್, ರವಿಕುಮಾರ್, ಸುಭಾಷ್, ಪುನೀತ್, ಸುಹಾಸ್, ಶ್ರೀಧರ್, ಮಂಡಿಬೆಲೆ ಪ್ರಜ್ವಲ್ ಗೌಡ, ಹಾಗೂ ಕ್ರೀಡಾಪಟುಗಳು ಹಾಜರಿದ್ದರು.

### ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಸಿ.ರೇಣುಕರಾಜು ಸಲಹೆ

# ಪ್ರಯಾಣಿಕರ ತಂಗುದಾಣ ಲೋಕಾರ್ಪಣೆ

**ಮೈಸೂರು:** ಕೃಷ್ಣರಾಜ ಕ್ಷೇತ್ರದ ವ್ಯಾಪ್ತಿಯಲ್ಲಿ ನೂತನ ಬಸ್ ತಂಗುದಾಣಗಳ ಲೋಕಾರ್ಪಣೆಯನ್ನು ಕೃಷ್ಣರಾಜ ಕ್ಷೇತ್ರದ ಶಾಸಕರಾದ ಟಿ ಎಸ್ ಶ್ರೀವತ್ಸರವರು ಉದ್ಘಾಟಿಸಿದರು.

ಕೃಷ್ಣರಾಜ ಕ್ಷೇತ್ರದಲ್ಲಿ ಸುಮಾರು ಒಂದು ಕೋಟಿ ಇಪ್ಪತ್ತು ಲಕ್ಷ ರೂಗಳ 10 ಬಸ್ ತಂಗುದಾಣ ಗಳನ್ನು ನಿರ್ಮಾಣ ಮಾಡಿಸಿ ಅದನ್ನು ಜನತೆಗೆ ಅನುಕೂಲ ಮಾಡಿಕೊಟ್ಟರು. ಮೊದಲ ಹಂತದಲ್ಲಿ ಜೆ.ಎಲ್.ಬಿ.ರಸ್ತೆ, ಸಿದ್ದಪ್ಪ ವೃತ್ತ,ಹಾರ್ಡಿಂಗ್ ವೃತ್ತ,ಶಾಂತಿ ಸಾಗರ್ ಮುಂತಾದ ಕಡೆ ಸಾಂಪ್ರದಾಯಿಕ ಉದ್ಘಾಟಿಸಲಾಯಿತು

ನಂತರ ಮಾತನಾಡಿದ ಶ್ರೀವತ್ಸ, ತಂಗುದಾಣಗಳು ಸಾರ್ವಜನಿಕರು,ಪ್ರಯಾಣಿಕರು ಅನುಕೂಲ ಪಡೆದುಕೊಳ್ಳಬೇಕು, ಬಸ್ಸು ತಂಗುದಾಣದ ಸುತ್ತಮುತ್ತಲು ಸ್ವಚ್ಛತೆಯನ್ನು ಕಾಪಾಡಿಕೊಡಬೇಕು, ಇದಕ್ಕೆ ಸಮರ್ಪಕವಾಗಿ ವಿದ್ಯುತ್ ಸಂಪರ್ಕ ಇರಬೇಕು ಮತ್ತು ಭಿತ್ತಿ ಪತ್ರ ಅಂಟಿಸಿ ಸಾರ್ವಜನಿಕ ರಿಗೆ ಕಿರಿ ಕಿರಿ ಉಂಟುಮಾಡುವ ಬಿತ್ತಿ ಪತ್ರ ಅಂಟಿಸುವವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು ಬಸ್ ತಗುದಾಣದಲ್ಲಿ ಸಾರಿಗೆ ಇಲಾಖಾ ವತಿಯಿಂದ ದಿನನಿತ್ಯ ಓಡಾಡುವ ಬಸ್ಸುಗಳ ವೇಳಾಪಟ್ಟಿಯನ್ನು ಅಳವಡಿಸಿಕೊಳ್ಳಬೇಕು ಹಾಗೂ ಪ್ರಯಾಣಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಇದರ ನಿರ್ವಹಣೆ ಸರಿಯಾಗಿ ನಡೆಯಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂಧರ್ಭದಲ್ಲಿ ಶಾಸಕರಾದ ಟಿ ಎಸ್ ಶ್ರೀವತ್ಸ ಮಾಜಿ ಮೇಯರ್ ಶಿವಕುಮಾರ್, ಮಾಜಿನಗರ ಪಾಲಿಕೆ ಸದಸ್ಯರಾದ ಸೌಮ್ಯ ಉಮೇಶ್, ರಮೇಶ್, ಹಾಗೂ ಜೋಗಿ ಮಂಜು, ಉಮೇಶ್,ರಾಕೇಶ್ ಗೌಡ, ಜೋಗಪ್ಪ, ಕೃಷ್ಣನಾಯಕ, ಶರತ್ ಭಂಡಾರಿ, ಕಿಶೋರ್, ವಿಜಯ್ ನಾಯಕ್, ನಂದೀಶ್ ನಾಯಕ್, ಅರುಣ್, ಪ್ರದೀಪ್, ಜಯರಾಮ್, ಅನ್ನಪೂರ್ಣಮ್ಮ, ಕೀರ್ತಿ, ಲಿಕಿತ್ ಗೌಡ,ಮಂಜುನಾಥ್ ಮುಂತಾದವರು ಇದ್ದರು.






**ಬೆಂಗಳೂರಿನ ಅಯೋಧ್ಯಾನಗರ ಶಿವಾಚಾರ ವಿದ್ಯಾವರ್ಧಕ ಸಂಘದ ಹಿರಿಯ ವಿದ್ಯಾರ್ಥಿಗಳ ಸಂಘದ ಆಶ್ರಯದಲ್ಲಿ ಬಸವನಗುಡಿಯ ಶ್ರೀನಗರೇಶ್ವರ ಸ್ವಾಮಿ ಕಲ್ಯಾಣ ಮಂಟಪದಲ್ಲಿ ನಡೆದ 16ನೇ ವಾರ್ಷಿಕೋತ್ಸವ ಸವಿ ನೆನಪಿನಲ್ಲಿ 9ನೇ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಸಾಧಕರಾಗಿ ಗುರುತಿಸಲ್ಪಟ್ಟ ವಿಜಯಪುರ ಪಟ್ಟಣದ ನಿವಾಸಿಗಳಾದ ಎ ಎಸ್ ವಿ ಎನ್ ವಿ ವಿದ್ಯಾರ್ಥಿ ನಿಲಯದ ಹಿರಿಯ ವಿದ್ಯಾರ್ಥಿ ಎನ್.ರುದ್ರಮೂರ್ತಿ ರವರನ್ನು ದಂಪತಿ ಸಮೇತರಾಗಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಖ್ಯಾತ ಹೃದ್ರೋಗ ತಜ್ಞರಾದ ಡಾಕ್ಟರ್ ಎಸ್ ಪ್ರಭುದೇವ್. ಹಿರಿಯ ನಟಿ ರಾಜ್ಯ ಚಲನಚಿತ್ರ ಪ್ರಶಸ್ತಿ ವಿಜೇತೆ ಸುಂದರ್ ವೀಣಾ, ಎಎಸ್‌ವಿಎನ್ವಿ ಸಂಘದ ಅಧ್ಯಕ್ಷ ಎಸ್ ಪ್ರಕಾಶ್, ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಬಿ ಕುಮಾರ್, ಕಾರ್ಯದರ್ಶಿ ಸಿ ಗಿರೀಶ್, ನಾ.ಮಲ್ಲಿಕಾರ್ಜುನ ಮತ್ತಿತರರು ಉಪಸ್ಥಿತರಿರುವರು.**

# ಸೇವೆಯಿಂದ ಮನುಷ್ಯನ ಜೀವನ ಸಾರ್ಥಕ

**ಮೈಸೂರು:** ನಗರದ ವಿಜಯನಗರ 4ನೇ ಹಂತದಲ್ಲಿರುವ ಸೇವಾಯಾನ ವೃದ್ಧಾಶ್ರಮಕ್ಕೆ ಇಂದು ಮಾಹೇಶ್ವರಿ ಸಭಾ ಸದಸ್ಯರು ಭೇಟಿ ನೀಡಿ, ಹಿರಿಯ ಚೇತನಗಳಿಗೆ ಅಗತ್ಯವಿರುವ ಡೈನಿಂಗ್ ಟೇಬಲ್, ಎಲೆಕ್ಟ್ರಿಕಲ್ ಗೀಜರ್, ಆಹಾರ ಮತ್ತು ದಿನಸಿ ಆರೋಗ್ಯಕ್ಕೆ ಸಂಬಂಧಪಟ್ಟ ಅನೇಕ ದಿನನಿತ್ಯದ ಪದಾರ್ಥಗಳನ್ನು ವಿತರಿಸಿದರು. ಮಾಹೇಶ್ವರಿ ಸಭಾದ ಅಧ್ಯಕ್ಷರಾದ ನಿರ್ಮಲ್ ಕಾಸತ್ ಮಾತನಾಡಿ, ಸೇವೆಯಿಂದ ಮನುಷ್ಯನ ಜೀವನ ಸಾರ್ಥಕವಾಗುತ್ತದೆ. ತನ್ನಲ್ಲಿರುವ ವಸ್ತುಗಳನ್ನು ಹಾಗೂ ಅಗತ್ಯವಿರುವ ಹಣಕಾಸು ಸೌಲಭ್ಯಗಳನ್ನು ಅವಶ್ಯಕತೆ ಇರುವವರಿಗೆ ಯಾವುದೇ ಫಲಾಪೇಕ್ಷೆ ನಿರೀಕ್ಷಿಸದೇ ನೀಡಿದಾಗ ಜೀವನ ಸಾರ್ಥಕವೆನಿಸುತ್ತದೆ. ನಿರಂತರವಾಗಿ ಸೇವೆ ಮಾಡುವುದು ಮನುಷ್ಯನ ಲಕ್ಷಣವಾಗಬೇಕು. ಇಲ್ಲಿ ನೆಲೆಸಿರುವ ಹಿರಿಯರ ಮುಖದಲ್ಲಿ ಕಾಣುತ್ತಿರುವ ನೆಮ್ಮದಿಯನ್ನು ಕಂಡು ನಮ್ಮ ಮನಸ್ಸು ಸಂತೋಷಗೊಂಡಿದೆ. ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಾಗ ಯಾರಿಂದಲೂ ನಾವು ಪ್ರಶಸ್ತಿ, ಪುರಸ್ಕಾರಗಳನ್ನು ನಿರೀಕ್ಷಿಸಬಾರದು. ಆತ್ಮತೃಪ್ತಿಯೇ ಎಲ್ಲವನ್ನೂ ನೀಡುತ್ತದೆ. ನಾವು ಇಂದು ಮನ ಮೆಚ್ಚುವ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡಾಗ ನೆಮ್ಮದಿಯೊಂದಿಗೆ ಬದುಕಬಹುದೆಂದರು.

ಮಾಹೇಶ್ವರಿ ಸಂಸ್ಥೆಯ ಕಾರ್ಯದರ್ಶಿ ಸಂತೋಷ್ ಮಂತ್ರಿಯವರು ಮಾತನಾಡಿ, ಪ್ರೀತಿ, ವಿಶ್ವಾಸದಿಂದ ಜನರಿಗೆ ಸಹಾಯ, ಸಹಕಾರ ನೀಡುವುದು ಪ್ರತಿಯೊಬ್ಬ ಮನುಷ್ಯನ ಕರ್ತವ್ಯವಾಗಬೇಕು. ವಯಸ್ಸಾದ ಕಾಲದಲ್ಲಿ ಹಿರಿಯರಿಗೆ ಆರೈಕೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸೇವಾಯಾನ ಸಂಸ್ಥೆ ಅಧ್ಯಕ್ಷರಾದ ಪ್ರಭಾಮಣಿಯವರು ಮಾತನಾಡಿ, ಸಂಸ್ಥೆಯ ಕಾರ್ಯಚಟುವಟಿಕೆಗಳ ಬಗ್ಗೆ ವಿವರಿಸಿ, ಅಸಾಯಕರ ಪರವಾಗಿ ಮಿಡಿಯುತ್ತಿರುವ ಒಂದು ಸಾಮಾಜಿಕ ಸಂಸ್ಥೆಯಾಗಿದ್ದು, ಇಲ್ಲಿ ಸೇವೆಗೆ ಹೆಚ್ಚು ಆದ್ಯತೆ, ಸೇವೆಯ ಮೂಲಕ ಪ್ರೀತಿ, ವಿಶ್ವಾಸ, ಅಂತಃಕರಣವನ್ನು ನೀಡುವುದೇ ಮೊದಲ ಗುರಿಯಾಗಿದೆ ಎಂದರು. ಸರ್ಕಾರ ಹಾಗೂ ಕಾರ್ಪೊರೇಟ್ ಕಂಪನಿಗಳು ಇಂದು ಮಾಡದ ಅನೇಕ ಸೇವಾ ಕಾರ್ಯಗಳನ್ನು ಸಾರ್ವಜನಿಕ ವಲಯದಲ್ಲಿ ಖಾಸಗಿ ಸಂಘ-ಸಂಸ್ಥೆಗಳು ಮಾಡುತ್ತಿರುವುದು ಶ್ಲಾಘನೀಯ ವಿಚಾರ ಎಂದು ತಿಳಿಸಿದರು.

ಮಾಹೇಶ್ವರಿ ಸಭಾದ ಸದಸ್ಯರಾದ ಬಿ.ಡಿ.ಲಖಾನಿ, ಕಮಲ್ ಮೂಂದ್ರ, ಆದಿತ್ಯ ಮಾಹೇಶ್ವರಿ, ಜಯಪ್ರಕಾಶ್, ಸೇವೆಯಾನ ಸಂಸ್ಥೆಯ ಧರ್ಮದರ್ಶಿಗಳಾದ ಮಂಜುನಾಥಸ್ವಾಮಿ, ಕಾರ್ಯಕರ್ತರಾದ ಕಿರಣ್, ಶಾಂತಿ ಹಾಗೂ ಸಂಸ್ಥೆಯ ಹಿರಿಯ ಚೇತನಗಳು ಉಪಸ್ಥಿತರಿದ್ದರು.

# ಕ್ವಾರಿಯಲ್ಲಿ ಕಾರ್ಮಿಕನ ಮೃತದೇಹ ಪತ್ತೆ

**ಚಾಮರಾಜನಗರ:** ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ತೆರಕಣಾಂಬಿ ಸಮೀಪದ ಕರಿಕಲ್ಲು ಕ್ವಾರಿಯಲ್ಲಿ ಕಾರ್ಮಿಕನ ಮೃತದೇಹ ಪತ್ತೆಯಾಗಿದೆ. ಚಾಮರಾಜನಗರ ತಾಲ್ಲೂಕಿನ ಕುರುಬರಹುಂಡಿ ಗ್ರಾಮದ ರಘು (36) ಮೃತ ವ್ಯಕ್ತಿ. ಮೃತ ವ್ಯಕ್ತಿ ನಂದಿನಿ ಸ್ಟೋನ್ ಇಂನೆಕ್ಸ್ ಎಂಬ ಹೆಸರಿನ ಯತೀಂದ್ರಕುಮಾರ್ ಜೋಷಿ ಮಾಲೀಕತ್ವದ ಕರಿಕಲ್ಲು



ಕ್ವಾರಿಯಲ್ಲಿ ಡ್ರಿಲ್ಲಿಂಗ್ ಕೆಲಸ ಮಾಡಿಕೊಂಡಿದ್ದರು. ಘಟನಾ ಸ್ಥಳಕ್ಕೆ ಸರ್ಕಲ್ ಇನ್ಸ್‌ಪೆಕ್ಟರ್ ವನರಾಜು, ಪಿಎಸ್ಐ ಈಶ್ವರ್, ಬೆರಳಚ್ಚು ಮತ್ತು ವಿಧಿ ವಿಜ್ಞಾನ ತಜ್ಞರು ಭೇಟಿನೀ ಡಿ ಪರಿಶೀಲಿಸಿದ್ದಾರೆ. ಕಲ್ಲುಬಂಡೆ ಮೇಲೆ ಬಿದ್ದಿದ್ದ ಮೃತ ದೇಹವನ್ನು ಟಾಚಿಯಿಂದ ಕೆಳಗಿಳಿಸಿ ಚಾಮರಾಜನಗರ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ. ತೆರಕಣಾಂಬಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆತ್ಮಹತ್ಯೆ ಶಂಕೆ: ಮದುವೆಯಾಗದೆ ಮನನೊಂದಿದ್ದ ಪುತ್ರ, ಮನಸ್ಸಿಗೆ ಬೇಸರ ಮಾಡಿಕೊಂಡು ಬುಧವಾರ ಕರೆ ಮಾಡಿ ಅಳಲು ತೋಡಿಕೊಂಡಿದ್ದ. ಬಳಿಕ ಮೊಬೈಲ್ ಸ್ವಿಚ್ ಆಫ್ ಆಗಿತ್ತು. ಗ್ರಾಮಸ್ಥರೊಬ್ಬರು ಫೋನ್ ಮಾಡಿ ಮಗ ಕರಿಕಲ್ಲು ಕ್ವಾರಿಯಲ್ಲಿ ಮೃತಪಟ್ಟಿರುವ ವಿಚಾರ ತಿಳಿಸಿದರು. ಅವಿವಾಹಿತನಾಗಿದ್ದ ಕಾರಣ ಜೀವನದಲ್ಲಿ ಜಿಗುಪ್ಸೆಗೊಂಡು ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ತಾಯಿ ಲಕ್ಷ್ಮಮ್ಮ ದೂರಿನಲ್ಲಿ ತಿಳಿಸಿದ್ದಾರೆ.

# ಗ್ರಾಮ ಒನ್ ಕೇಂದ್ರ ತೆರೆಯಲು ಅರ್ಜಿ

**ಮಂಡ್ಯ:** ಗ್ರಾಮ ಒನ್ ಕೇಂದ್ರಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಲುವಾಗಿ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಒನ್ ಕೇಂದ್ರಗಳನ್ನು ತೆರೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 15ಕೊನೆ ದಿನವಾಗಿದೆ. ಈ ಯೋಜನೆಯನ್ನು ಈಗಾಗಲೇ ಜಾರಿಗೊಳಿಸಿ ಯಶಸ್ವಿಯಾಗಿದ್ದು, ಸರ್ಕಾರವು ಈಗ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಗ್ರಾಮ ಪಂಚಾಯಿತ್ತಿ ವ್ಯಾಪ್ತಿಯಲ್ಲಿ ಗ್ರಾಮ ಒನ್ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಯೋಜನೆಯನ್ನು ವಿಸ್ತರಿಸಿದೆ. ಗ್ರಾಮ ಒನ್' ಇದು ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಸೇವಾ ಸಿಂಧು ಯೋಜನೆ ಅಡಿಯಲ್ಲಿ ರೂಪಿಸಲಾಗಿದೆ. ಸರ್ಕಾರದ ಸೇವೆಗಳನ್ನು ಮನೆಬಾಗಿಲಿಗೆ ತಲುಪಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದ್ದು, ಈ ಯೋಜನೆ ಅಡಿಯಲ್ಲಿ ನಾಗರೀಕ ಸೇವೆಗಳನ್ನು ಪಡೆಯಬಹುದಾಗಿದೆ. ಅರ್ಜಿಯನ್ನು https://kal-mys.gramaone.karnataka.gov.in/index.php/applicant-registration-initial-step ವೆಬ್ ಸೈಟ್ ಮೂಲಕ ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜು ತಿಳಿಸಿದ್ದಾರೆ.

# ಕಾನೂನು ಪದವೀಧರರಿಂದ ಅರ್ಜಿ

**ಮಂಡ್ಯ:** ಮಂಡ್ಯ ಜಿಲ್ಲೆಯಲ್ಲಿರುವ ಹಿಂದುಳಿದ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಗೆ ಹಿಂದುಳಿದ ವರ್ಗಗಳ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ತರಬೇತಿ ನೀಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು ಜುಲೈ 15 ರಿಂದ ಆಗಸ್ಟ್ 15 ರೊಳಗೆ ಮಂಡ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ಅಧಿಕಾರಿಗಳ ಕಚೇರಿಗೆ ಸಲ್ಲಿಸಬಹುದು. ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ದೂ. ಸಂ:-08232-220835 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಇಂದು ಉದ್ಯೋಗ ಮೇಳ

**ಮಂಡ್ಯ:** ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಹಾಗೂ ಪಿ.ಇ.ಎಸ್ ಇಂಜಿನಿಯರಿಂಗ್ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಕೌಶಲ್ಯ ದಿನ ಹಾಗೂ ದಿ. ಕೆ.ವಿ ಶಂಕರೇಗೌಡ, ಜನ್ಮದಿನದ ಅಂಗವಾಗಿ ಜುಲೈ 15 ರಂದು ಪಿ.ಇ.ಎಸ್ ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ಉಚಿತ ಉದ್ಯೋಗ ಮೇಳ ನಡೆಯಲಿದೆ. ಮೇಳದಲ್ಲಿ ಮಂಡ್ಯ ಜಿಲ್ಲೆಯ ಸ್ಥಳೀಯ ಹಾಗೂ ಮೈಸೂರು ಮತ್ತು ಬೆಂಗಳೂರಿನ 30ಕ್ಕೂ ಹೆಚ್ಚು ಹೆಸರಾಂತ ಕಂಪನಿಗಳು ಭಾಗವಹಿಸಲಿದ್ದು, ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ (ಯಾವುದೇ ಟ್ರೇಡ್), ಡಿಪ್ಲಮೋ (ಯಾವುದೇ ಟ್ರೇಡ್), ಹಾಗೂ ಯಾವುದೇ ಪದವಿ ಉತ್ತೀರ್ಣರಾದ 18 ರಿಂದ 35 ವರ್ಷದೊಳಗಿನ ಆಸಕ್ತ ಅಭ್ಯರ್ಥಿಗಳು ಸಂದರ್ಶನದಲ್ಲಿ ಹಾಜರಾಗಿ ಉದ್ಯೋಗ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-295124, 8660061488, 9164642684,, 8970646629 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಮಂಡ್ಯ:** ಬೆಂಗಳೂರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಮತ್ತು ಮಂಡ್ಯ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳಲ್ಲಿ 2024-25 ನೇ ಸಾಲಿಗೆ ವಿಶೇಷ ವರ್ಗದ 6 ನೇ ತರಗತಿಯ ಆಂಗ್ಲ ಮಾಧ್ಯಮಕ್ಕೆ ವಿಶೇಷ ವರ್ಗದ ವಿದ್ಯಾರ್ಥಿಗಳು ನೇರ ಪ್ರವೇಶಾತಿ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿಶೇಷ ವರ್ಗದ ವಿದ್ಯಾರ್ಥಿಗಳು ಅರ್ಜಿಯನ್ನು ವಸತಿ ಶಾಲೆಗಳಲ್ಲಿ ಜುಲೈ 11 ರಿಂದ https://kries karnataka.gov.in ವೆಬ್ ಸೈಟ್ ಮೂಲಕ ಸಲ್ಲಿಸಬಹುದು.

# ಮನವಿಪತ್ರ ಎಸೆದು ಹೋದ ಸಿಎಂ

**ಚಾಮರಾಜನಗರ:** ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಮರಾಜನಗರಕ್ಕೆ ಆಗಮಿಸಿದ್ದ ವೇಳೆ ರೈತ ಸಂಘ ಸೇರಿದಂತೆ ಇತರೆ ಸಂಘ ಸಂಸ್ಥೆಗಳು ನೀಡಿದ್ದ ಮನವಿ ಪತ್ರಗಳನ್ನು ಅಲ್ಲಿಯೇ ಎಸೆದು ಹೋಗಿರುವುದು ಸಿಎಂ ವಿರುದ್ಧ ಸಾರ್ವಜನಿಕ ವಲಯದಲ್ಲಿ ಭಾರಿ ಆಕ್ರೋಶ ವ್ಯಕ್ತವಾಗಿದೆ.



ಜು.10 ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಮತದಾರರಿಗೆ ಕೃತಜ್ಞತಾ ಸಭೆ ಆಯೋಜಿಸಲಾಗಿತ್ತು. ಸಭೆಯಲ್ಲಿ ಸಿಎಂ ಸೇರಿದಂತೆ ಸಚಿವರು, ಶಾಸಕರು, ಸಂಸದರು ಭಾಗವಹಿಸಿದ್ದರು. ಈ ವೇಳೆ ಹಲವು ಸಂಘ ಸಂಸ್ಥೆಗಳು, ಸಂಘಟನೆಗಳು ತಮ್ಮ ಹಕ್ಕೊತ್ತಾಯಗಳನ್ನು ಒಳಗೊಂಡ ಮನವಿ ಪತ್ರಗಳನ್ನು ಸಿಎಂಗೆ ಸಲ್ಲಿಸಲು ಆಗಮಿಸಿದ್ದರು.

ಕಾರ್ಯಕ್ರಮ ಮುಗಿದ ಬಳಿಕ ಸಿಎಂ ಸಿದ್ದರಾಮಯ್ಯ ಅವರಿಗೆ ತಮ್ಮ ಹಕ್ಕೊತ್ತಾಯಗಳನ್ನು ಒಳಗೊಂಡ ಮನವಿ ಪತ್ರಗಳನ್ನು ಈ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಲ್ಲಿಸಿ ತೆರಳಿದ್ದರು. ಆದರೆ, ಸ್ವೀಕರಿಸಿದ್ದ ಮನವಿ ಪತ್ರಗಳನ್ನು ವೇದಿಕೆ ಬಳಿಯೇ ಎಸೆಯಲಾಗಿದೆ. ವೇದಿಕೆ ಬಳಿ ಎಸೆದಿರುವ ಮನವಿ ಪತ್ರಗಳು ಯಾರ ಗಮನಕ್ಕೂ ಬಂದಿಲ್ಲ. ಕಾರ್ಯಕ್ರಮಕ್ಕೆ ಅಳವಡಿಸಲಾಗಿದ್ದ ಶಾಮಿಯಾನವನ್ನು ಇನ್ನೂ ತೆರವುಗೊಳಿಸಿಲ್ಲ. ಈ ವೇಳೆ ಸಾರ್ವಜನಿಕರು ವೇದಿಕೆ ಬಳಿ ತೆರಳಿ ನೋಡಿದಾಗ ಮನವಿ ಪತ್ರಗಳು ಎಸರದಿರುವುದು ಗಮನಕ್ಕೆ ಬಂದಿದೆ. ಮನವಿ ಪತ್ರಗಳನ್ನು ಎಸೆದಿರುವುದನ್ನು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡಲಾಗಿದ್ದು ಸಿಎಂ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ. ಸಿಎಂ ಕಾಟಾಚಾರಕ್ಕೆ ಮನವಿ ಪತ್ರಗಳನ್ನು ಸ್ವೀಕರಿಸಿ ಹೋಗಿದ್ದಾರೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಮ್ಮ ಸಮಸ್ಯೆಗಳನ್ನು ಬಗೆಹರಿಸುತ್ತಾರೆ ಎಂಬ ಉದ್ದೇಶದಿಂದ ಮನವಿ ಪತ್ರಗಳನ್ನು ನೀಡಿದರೆ ಅದನ್ನು ಅಲ್ಲಿಯೇ ಎಸೆದು ಹೋದರೆ ಹೇಗೆ? ಇವರು ಜನರ ಸಮಸ್ಯೆಗಳನ್ನು ಬಗೆಹರಿಸುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಸಿಎಂ ವಿರುದ್ಧ ರೈತರ ಪ್ರತಿಭಟನೆ

**ರೈತರು - ತಮ್ಮ ಹಕ್ಕೊತ್ತಾಯಗಳನ್ನು ಈ ಈಡೇರಿಸುವಂತೆ ಒತ್ತಾಯಿಸಿ ಮುಖ್ಯಮಂತ್ರಿಗೆ ಸಲ್ಲಿಸಿದ್ದ ಮನವಿ ಪತ್ರಗಳನ್ನು ಬೀಸಾಡಿ ಹೋಗಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಯಿತು. ಜಿಲ್ಲಾಡಳಿತ ಭವನದ ಮುಖ್ಯಗೇಟ್ ಬಳಿ ಜಮಾಯಿಸಿದ ಪ್ರತಿಭಟನಾ ಕಾರರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕೆಲಕಾಲ ಪ್ರತಿಭಟನೆ ನಡೆಸಿದರು. ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ರೈತರು ನೀಡಿದ ಮನವಿ ಪತ್ರಗಳನ್ನು ನಿಮ್ಮ ಕಚೇರಿಗೆ ತೆಗೆದುಕೊಂಡು ಹೋಗಿದ್ದರೆ ಕೂಡಲೇ ಅದನ್ನು ಪತ್ರಿಕೆಗೆ ಬಿಡುಗಡೆ ಮಾಡಬೇಕು. ರೈತರ ಬಗ್ಗೆ ಮಾತನಾಡಲು ನಿಮಗೆ ನಾಚಿಕೆಯಾಗಬೇಕು. ಮನವಿ ಪತ್ರಗಳನ್ನು ತೆಗೆದುಕೊಂಡು ಹೋಗಿ ಸಮಸ್ಯೆ ಬಗೆಹರಿಸಬೇಕಾಗಿತ್ತು. ಆದರೆ, ಮನವಿ ಪತ್ರಗಳನ್ನು ಕಸದ ಬುಟ್ಟಿಗೆ ಬೀಸಾಡಲಾಗಿದೆ ಎಂದು ಆರೋಪಿಸಿದರು.**

### ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಸಲಹೆ

# ಕೆಂಪೇಗೌಡರ ಆದರ್ಶ ಅನುಸರಿಸಿ

**ಚಾಮರಾಜನಗರ:** ನಾಡಪ್ರಭು ಕೆಂಪೇಗೌಡ ರವರ ದೂರದೃಷ್ಟಿ ಫಲವಾಗಿ ಬೆಂಗಳೂರು ವಿಶ್ವಮಟ್ಟದಲ್ಲಿ ಗುರುತಿಸಿ ಕೊಂಡು ಬೃಹತ್ ನಗರವಾಗಿ ಬೆಳೆದಿದೆ ಎಂದು ಪಶುಸಂಗೋಪನೆ ಮತ್ತು ರೇಷ್ಮೆ ಸಚಿವ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಹೇಳಿದರು.

ಚಾಮರಾಜನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ವರನಟ ಡಾ.ರಾಜ್ ಕುಮಾರ್ಜಿಲ್ಲಾ ರಂಗಮಂದಿರದಲ್ಲಿ ಅಖಿಲ ಕರ್ನಾಟಕ ಕನ್ನಡ ಮಹಾಸಭಾ ರಾಜ್ಯ ಘಟಕದ ವತಿಯಿಂದ ನಡೆದ ನಾಡಪ್ರಭು ಕೆಂಪೇಗೌಡರ ಜಯಂತ್ಯುತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಬೆಂಗಳೂರಿನ ನಿರ್ಮಾತೃ ಕೆಂಪೇಗೌಡರು ದೂರದೃಷ್ಟಿಯುಳ್ಳ ನಾಯಕರಾಗಿದ್ದು, ಎಲ್ಲ ವರ್ಗದ ಸಮಾಜಗಳಿಗೆ ಅನೇಕ ಕೊಡುಗೆಗಳನ್ನು ನೀಡಿದ್ದಾರೆ. ಹಾಗಾಗಿ ಬೆಂಗಳೂರು ನಗರ ಶಾಂತಿಯುತವಾಗಿ ಬೃಹತ್ ನಗರವಾಗಿ ಬೆಳೆದು ವಿಶ್ವಮಟ್ಟದಲ್ಲಿ ಗುರುತಿಸಿಕೊಂಡಿದೆ ಎಂದರು.

ಕೆಂಪೇಗೌಡರಿಗೆ ಬೆಂಗಳೂರು ನಗರವನ್ನು ವಾಣಿಜ್ಯ ಕೇಂದ್ರವನ್ನಾಗಿ ಮಾಡಬೇಕೆಂಬ ಮಹಾದಾಸೆಯಾಯಿತು. ಅದರಂತೆ ಆಯಾಯ ಕುಲ ಕಸುಬಿನ ಜನರಿಗೆ ಅನುಗುಣವಾಗಿ ಪೇಟೆಗಳನ್ನು ಮಾಡಿದರು. ಇಂದು ಬೆಂಗಳೂರು ಎಲ್ಲ ವರ್ಗದ ಜನರಿಗೂ ಕೆಲಸ ಕೊಡುವ ಮೂಲಕ ಆಶ್ರಯ ಕೊಟ್ಟಿದೆ. ಜನರು ಇಲ್ಲಿ ಬದುಕು ಕಟ್ಟಿಕೊಂಡಿದ್ದಾರೆ ಎಂದರು. ನಮ್ಮ ಸರ್ಕಾರ ಕೂಡ ಕೆಂಪೇಗೌಡರ ಬಗ್ಗೆ ವಿಶೇಷ ಕಾಳಜಿ ವಹಿಸಿದೆ ಎಂದರು.

ಮಾಜಿ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಹಾಲಿಎಂಎಸ್ಐಎಲ್ ಅಧ್ಯಕ್ಷ, ಶಾಸಕ ಸಿ.ಪುಟ್ಟರಂಗಶೆಟ್ಟಿ ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿ, ನಾಡಿನ ಜನತೆ ಕೆಂಪೇಗೌಡರನ್ನು ಸ್ಥರಿಸುವ ಕೆಲಸ ಆಗಬೇಕಿದೆ ಎಂದರು. ಕೊಳ್ಳೇಗಾಲ ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿ, ಕೆಂಪೇಗೌಡರು ಬೆಂಗಳೂರು ಸ್ಥಾಪಿಸುವ ಮೂಲಕ ನಾಡಿನ ಅಭಿವೃದ್ಧಿಗೆ ಕಾರಣೀಭೂತರಾಗಿದ್ದಾರೆ. ಅವರ ಬದುಕು ಎಲ್ಲರಿಗೂ ಆದರ್ಶವಾಗಿದೆ ಎಂದರು.




ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಮಾತನಾಡಿ, ಕೆಂಪೇಗೌಡರು ಸರ್ವ ಜಾತಿ, ಧರ್ಮಗಳಿಗೆ ಕೊಡುಗೆ ನೀಡಿದ್ದಾರೆ. ಒಕ್ಕಲಿಗ ಸಮಾಜ ಕೆಂಪೇಗೌಡ ಭಾವಚಿತ್ರವನ್ನು ಪ್ರತಿಮನೆ ಯಲ್ಲೂ ಅಳವಡಿಸಿಕೊಂಡು ಅವರನ್ನು ಸ್ಮರಿಸುವ ಕೆಲಸ ಆಗಬೇಕಿದೆ ಎಂದರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವವರನ್ನು ಸನ್ಮಾನಿಸಲಾಯಿತು. ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಗುಂಡ್ಲುಪೇಟೆ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್, ಚಾಮರಾ ಜನಗರ ವಿಶ್ವವಿದ್ಯಾನಿಲಯದ ಉಪಕುಲಪತಿ ಪ್ರೊ. ಎಂ.ಆರ್.ಗಂಗಾಧರ್ ಮಾತನಾಡಿದರು. ಮಾಜಿ ಶಾಸಕ ಆರ್.ನರೇಂದ್ರ ಅಧ್ಯಕ್ಷತೆ ವಹಿಸಿದ್ದರು. ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಪ್ರಾಸ್ತಾವಿಕ ಭಾಷಣ ಮಾಡಿದರು. ಜಿಲ್ಲಾ ಪೊಲೀಸ್ ವರಿಷ್ಠಾ ಧಿಕಾರಿ ಡಾ.ಬಿ.ಟಿ ಕವಿತ, ಮೈಸೂರು ಚಾಮುಂಡಿಬೆಟ್ಟ ಪ್ರಧಾನ ಅರ್ಚಕ ಡಾ. ಎನ್.ಶಶಿಶೇಖರ್ ದೀಕ್ಷಿತ್, ಕಾಡಾಧ್ಯಕ್ಷ ಪಿ.ಮರಿಸ್ವಾಮಿ, ಚೂಡಾಧ್ಯಕ್ಷ ಮಹಮ್ಮದ್ ಅಸ್ಗರ್, ??? ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಸಮಿತಿ ಅಧ್ಯಕ್ಷ ಹೆಚ್.ವಿ.ಚಂದ್ರು, ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ರಾಜ್ಯಾಧ್ಯಕ್ಷ ಸಿ.ಜಿ.ಗಂಗಾಧರ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಕೆ.ವಿ.ಶ್ರೀಧರ್, ಡಾ.ಎಂ.ಬಿ ಮಂಜೇಗೌಡ, ಮಹಾಸಭಾದ ಗೌರವಾಧ್ಯಕ್ಷ ಶಾ.ಮುರಳಿ, ಪ್ರಧಾನ ಕಾರ್ಯದರ್ಶಿ ಚಾ.ವೆಂ.ರಾಜ್ ಗೋಪಾಲ್, ನಗರಸಭಾ ಮಾಜಿ ಅಧ್ಯಕ್ಷ ಸುರೇಶ್ ನಾಯಕ, ನಗರ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಕೆ.ಪುಟ್ಟಸ್ವಾಮಿಗೌಡ, ಆರ್.ಜಯರಾಂ, ಒಕ್ಕಲಿಗರ ಸಂಘದ ನಿರ್ದೇಶಕ ಹಾಗೂ ಪ್ರಥಮ ದರ್ಜೆ ಗುತ್ತಿಗೆದಾರ ವಡಗೆರೆ ಎ. ಕುಮಾರ್, ಕೆ.ಬಿ.ಚಿನ್ನಸ್ವಾಮಿ, ಪಣ್ಯದಹು ಂಡಿರಾಜು, ಮಹೇಶ್ ಗೌಡ, ನಿಜಧ್ವನಿ ಗೋವಿಂದ ರಾಜು, ಅರುಣ್ ಕುಮಾರ್ಗೌಡ, ಚಾ.ರಾ. ಕುಮಾರ್, ಲಿಂಗರಾಜು, ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ಪದಾಧಿಕಾರಿಗಳು ಹಾಜರಿದ್ದರು.

# ಜಾಗಿನಕೆರೆಯಲ್ಲಿ ಶ್ವಾನಗಳ ಓಟದ ಸ್ಪರ್ಧೆ

**ಕೆ.ಆರ್.ಪೇಟೆ:** ತಾಲೂಕಿನ ಜಾಗಿನಕೆರೆ ಗ್ರಾಮದಲ್ಲಿ ಸ್ಥಳೀಯ ಯುವಕರ ತಂಡವು ಡ್ಯಾನ್ಸರ್ ದೊಡ್ಡಮ್ಮ ರೇಸಿಂಗ್ ಕ್ಲಬ್ ವತಿಯಿಂದ ಆಯೋಜಿಸಿದ್ದ ಶ್ವಾನಗಳ ಓಟದ ಸ್ಪರ್ಧೆಗೆ ಮಂಡ್ಯ ಹಾಲು ಒಕ್ಕೂಟದ ನಿರ್ದೇಶಕ ಡಾಲು ರವಿ ಚಾಲನೆ ನೀಡಿದರು.



ರಾಜ್ಯದ ವಿವಿಧ ಭಾಗಗಳಿಂದ ಸುಮಾರು 50ಕ್ಕೂ ಶ್ವಾನಗಳು ಓಟದ ಸ್ಪರ್ಧೆಯಲ್ಲಿ ಭಾಗವಹಿಸಿದ್ದವು. ಸ್ಪರ್ಧೆಗೆ ಚಾಲನೆ ನೀಡಿದ ಮಾತನಾಡಿದ ಡಾಲು ರವಿ ಅವರು ಮನುಷ್ಯನಿಗೂ, ಶ್ವಾನಗಳಿಗೂ ಅವಿನಾಭಾವ ಸಂಬಂಧವಿದೆ. ಮನುಷ್ಯನ ಬದುಕಿನ ಜೊತೆಗೆ ಶ್ವಾನಗಳು ಸಹ ಹೆಜ್ಜೆ ಹಾಕುತ್ತವೆ. ಶ್ವಾನಗಳು ಎಷ್ಟು ನಿಯತ್ತಿನ ಪ್ರಾಣಿಗಳೆಂದರೆ ತನ್ನನ್ನು ಸಾಕಿದ ಒಡೆಯ ಕಷ್ಟದಲ್ಲಿದ್ದರೆ ಆತನ ಕಷ್ಟಕ್ಕೆ ಸ್ಪಂದಿಸುವ ಗುಣ ಹೊಂದಿರುತ್ತವೆ. ತನ್ನನ್ನು ಸಾಕಿರುವ ಮಾಲೀಕನ ಮನೆಯನ್ನು ಕಳ್ಳರಿಂದ ರಕ್ಷಣೆ ಮಾಡುತ್ತಿದೆ. ಸಾಕುಪ್ರಾಣಿಗಳ ಮೇಲೆ ಕಾಡು ಪ್ರಾಣಿಗಳು ದಾಳಿ ಮಾಡುವುದನ್ನು ತಡೆಯುತ್ತದೆ. ಅಕಸ್ಮಾತ್ ತನ್ನನ್ನು ಸಾಕಿದ ಮಾಲೀಕ ಸತ್ತು ಹೋದರೆ ವಾರಗಟ್ಟಲೆ ಆಹಾರ ಸೇವಿಸದೆ ಮಾಲೀಕನ ಅಗಲಿಕೆಗೆ ದುಃಖ ವ್ಯಕ್ತಪಡಿಸುವ ಮಾನವೀಯ ಗುಣಗಳನ್ನು ಶ್ವಾನಗಳು ಹೊಂದಿರುತ್ತವೆ ಎಂದರು. ಇದಲ್ಲದೆ ಪೊಲೀಸ್ ಇಲಾಖೆಯು ಕ್ರಿಮಿನಲ್ ಅಪರಾಧಿಗಳನ್ನು ಪತ್ತೆ ಹೆಚ್ಚಲು ಶ್ವಾನಗಳನ್ನು ಬಳಕೆ ಮಾಡುತ್ತಿದ್ದು, ಇದರಿಂದ ನೈಜ ಅಪರಾಧಿಗಳನ್ನು ಶ್ವಾನಗಳು ತಮಗಿರುವ ವಿಶೇಷಕ ಗ್ರಹಿಕೆ ಶಕ್ತಿಯಿಂದ ಪತ್ತೆ ಮಾಡುತ್ತವೆ. ಇಂತಹ ವಿಶೇಷ ಗುಣಗಳನ್ನು ಹೊಂದಿರುವ ಪಳಗಿದ ಸಾಕು ಶ್ವಾನಗಳ ಓಟದ ಸ್ಪರ್ಧೆಯನ್ನು ಆಯೋಜಿಸುವ ಮೂಲಕ ಈ ಭಾಗದ ಸಾರ್ವಜನಿಕರಿಗೆ ವಿಶೇಷ ಮನರಂಜನೆ ಒದಗಿಸುತ್ತಿರುವ ಜಾಗಿನಕೆರೆ ಯುವಕರ ತಂಡವು ಗ್ರಾಮದ ಡ್ಯಾನ್ಸರ್ ದೊಡ್ಡಮ್ಮ ರೇಸಿಂಗ್ ಕ್ಲಬ್ ವತಿಯಿಂದ ಆಯೋಜಿಸಿರುವ ಕಾರ್ಯವು ಶ್ಲಾಘನೀಯವಾದುದು ಎಂದು ಡಾಲು ರವಿ ಹೇಳಿದರು. ಈ ಸಂದರ್ಭದಲ್ಲಿ ಪಶುವೈದ್ಯರಾದ ಡಾ.ರವಿಕುಮಾರ್, ಮುಖಂಡರಾದ ಜಾಗಿನಕೆರೆ ಅಂಬರೀಶ್, ಡೈರಿ ಅಶೋಕ್, ಕೈಗೋನಹಳ್ಳಿ ಜಯರಾಂ, ದೀಪಕ್, ಯಶವಂತ್, ರಾಜೇಶ್, ದರ್ಶನ್ ಕೋಡಿಹಳ್ಳಿ ಸಾಗರ್ ಕೂಚಹಳ್ಳಿ, ಕೌಶಿಕ್, ಕದಬಳ್ಳಿ, ಸಾಗರ್ ಗೊರವಿ, ಜಾಗಿನಕೆರೆ ಡೈರಿ ಅಶೋಕ್, ತಮ್ಮಣ್ಣ ಮತ್ತಿತರರು ಕಾರ್ಯಕ್ರಮದ ನೇತೃತ್ವ ವಹಿಸಿದ್ದರು.ಮತ್ತಿತರರು ಉಪಸ್ಥಿತರಿದ್ದರು.

ಸ್ಪರ್ಧೆಯಲ್ಲಿ ವಿಜೇತ ಶ್ವಾನಗಳ ವಿವರ: ರಾಜ್ಯದ ವಿವಿಧ ಭಾಗಗಳಿಂದ ಸುಮಾರು 50ಕ್ಕೂ ಹೆಚ್ಚು ಶ್ವಾನಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದವು. ಈ ಪೈಕಿ ಕೋಡಹಳ್ಳಿ ದರ್ಶನ್ ಅವರ ಶ್ವಾನ ಪ್ರಥಮ ಸ್ಥಾನ, ಬೊಮ್ಮರಳ್ಳಿ ಆಕಾಶ್ ಅವರ ಶ್ವಾನ ದ್ವಿತೀಯ ಸ್ಥಾನ, ಹೊನ್ನಾವರದ ರಾಘು ಶ್ವಾನ ತೃತೀಯ ಸ್ಥಾನ, , ಚೇತನ್ ಅವರ ಶ್ವಾನ ನಾಲ್ಕನೇ ಬಹುಮಾನ ಪಡೆದುಕೊಂಡವು ಎಲ್ಲರಿಗೂ ಬಹುಮಾನದ ಜೊತೆಗೆ ಟ್ರೋಫಿಯನ್ನು ವಿತರಣೆ ಮಾಡಲಾಯಿತು. ಶ್ವಾನಗಳ ಓಟದ ಸ್ಪರ್ಧೆಯನ್ನು ನೋಡಲು ತಾಲ್ಲೂಕಿನ ವಿವಿಧ ಭಾಗಗಳಿಂದ ಸಾವಿರಾರು ಮಂದಿ ಭಾಗವಹಿಸಿದ್ದರು. ಜನರನ್ನು ನಿಯಂತ್ರಿಸಿ, ಸ್ಪರ್ಧೆಗಳನ್ನು ಸಮರ್ಪಕವಾಗಿ ನಡೆಸುವಲ್ಲಿ ಆಯೋಜಕರು ಸಾಕಷ್ಟು ಪ್ರಯಾಸಪಟ್ಟರು. ಕೊನೆಯ ಯಾವುದೇ ಗೊಂದಲವಿಲ್ಲದಂತೆ ಶ್ವಾನಗಳ ಓಟದ ಸ್ಪರ್ಧೆ ಯಶಸ್ವಿಯಾಗಿ ನಡೆಯಿತು.

# 7ನೇ ವೇತನ ವರದಿ ಜಾರಿಗೆ ಸಿಎಂ ಮನವಿ

**ಚಾಮರಾಜನಗರ:** ರಾಜ್ಯ 7ನೇ ವೇತನ ಆಯೋಗವು ರಾಜ್ಯ ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸುವಂತೆ ಆಗ್ರಹಿಸಿ ಚಾಮರಾಜನಗರ ಜಿಲ್ಲಾ ಸರ್ಕಾರಿ ನೌಕರರ ಸಂಘದ ವತಿಯಿಂದ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರಕ್ಕೆ ಖಾಸಗಿ ಕಾರ್ಯಕ್ರಮಕ್ಕೆ ಡಾ. ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣಕ್ಕೆ ಬುಧವಾರ ಆಗಮಿಸಿದ್ದ ಮುಖ್ಯಮಂತ್ರಿಗಳಿಗೆ ಸರ್ಕಾರಿ ನೌಕರರ ಸಂಘದ ಸದಸ್ಯರು ಮನವಿ ಮಾಡಿದರು. ನಂತರ ವಿವರಿಸಿದ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ಸರ್ಕಾರವು 7ನೇ ವೇತನ ಆಯೋಗಕ್ಕೆ ನಿಗದಿ ಪಡಿಸಿದ 6 ತಿಂಗಳ ಅವಧಿಯೊಳಗೆ ವರದಿಯನ್ನು ಪಡೆಯದೇ 19-03-23 ರಿಂದ 06-11-23 ರಿಂದ 6 ತಿಂಗಳು ಸೇರಿದಂತೆ 2 ಭಾರಿ ಅವಧಿಯನ್ನು ವಿಸ್ತರಿಸಲಾಗಿದೆ. ನಂತರ ಬೆಳವಣಿಗೆಗೆಯಲ್ಲಿ ಮುಖ್ಯಮಂತ್ರಿಗಳು ಕೂಡ 7ನೇ ವೇತನ ಜಾರಿಗೊಳಿಸುವುದಾಗಿ

ಭರವಸೆ ನೀಡಿದ್ದರು. ಇದುವರೆಗೂ ಆ ಕಾರ್ಯ ಜಾರಿಯಾಗಿರುವುದಿಲ್ಲ ಆದರಿಂದ ಶೀಘ್ರವಾಗಿ 3 ಬೇಡಿಕೆಗಳನ್ನು ಜಾರಿಗೊಳಿಸಲು ಸರ್ಕಾರ ಮುಂದಾಗಬೇಕಿದೆ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಮಹದೇವಸ್ವಾಮಿ, ಕೋಶಾಧ್ಯಕ್ಷ ಮಹದೇವಯ್ಯ ಇತರರು ಇದ್ದರು.



# ಎನ್.ಸಿ.ನಾರಾಯಣಸ್ವಾಮಿಗೆ ಸನ್ಮಾನ

**ಕೋಲಾರ:** ಆರೋಗ್ಯ ಇಲಾಖೆಯಲ್ಲಿ ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ವಿವಿಧ ಹಂತದ ಉನ್ನತ ಅಧಿಕಾರಿಯಾಗಿ ಉತ್ತಮ ಸೇವೆಯನ್ನು ಸಲ್ಲಿಸಿರುವುದಲ್ಲದೆ ಗ್ರಾಮೀಣ ಭಾಗದ ಸಾಮಾನ್ಯ ಬಡ ಜನತೆಗೆ ಉತ್ತಮ ಆರೋಗ್ಯ ಸೇವೆಯನ್ನು ಸಲ್ಲಿಸಿರುವುದನ್ನು ಗುರ್ತಿಸಿ ರಾಜ್ಯ ಸರ್ಕಾರ ಇತ್ತೀಚಿಗೆ ಜರುಗಿದ ರಾಷ್ಟ್ರ ಮಟ್ಟದ ವೈದ್ಯರ ದಿನಾಚರಣೆಯ ಅಂಗವಾಗಿ ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಸನ್ಮಾನ್ಯ ದಿನೇಶ್ ಗುಂಡೂರಾವ್ ರವರು ರಾಜ್ಯ ಸರ್ಕಾರದ ಪ್ರತಿಷ್ಠಿತ ಬಿ.ಸಿ.ರಾಯ್ ಶ್ರೇಷ್ಠ ವೈದ್ಯ ಪ್ರಶಸ್ತಿಯನ್ನು ನೀಡಿ ನರಸಾಪುರದ ಡಾ|| ಎನ್.ಸಿ. ನಾರಾಯಣಸ್ವಾಮಿ ರವರನ್ನು ಅಭಿನಂದಿಸಿದ್ದಾರೆ. ಇದರ ಅಂಗವಾಗಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಎಸ್.ಸಿ./ಎಸ್.ಟಿ. ಶಿಕ್ಷಕರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಟಿ. ನಾಗರಾಜ್ ರವರು ರಾಜ್ಯ ಸರ್ಕಾರದ ಪ್ರತಿಷ್ಠಿತ ಬಿ.ಸಿ.ರಾಯ್ ಶ್ರೇಷ್ಠ ವೈದ್ಯ ಪ್ರಶಸ್ತಿ ಪುರಸ್ಕೃತರಾದ ಡಾ|| ಎನ್.ಸಿ. ನಾರಾಯಣಸ್ವಾಮಿ ಅವರನ್ನು ಸನ್ಮಾನಿಸಿ ಅಭಿನಂದನೆಗಳನ್ನು ಸಲ್ಲಿಸಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರಾದ ಎಂ.ಟಿ.ಬಿ. ಶ್ರೀನಿವಾಸ್, ಸೂಲೂರು ಆಂಜಿನಪ್ಪ, ನರಸಾಪುರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮುನಿರಾಜು, ನರಸಾಪುರ



ಸೊಸೈಟಿ ಅಧ್ಯಕ್ಷ ಕಲ್ಲಹಳ್ಳಿ ಮುನಿರಾಜು, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ನಾಗರಾಜು, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ನಾರಾಯಣಸ್ವಾಮಿ, ಕನ್ನಡ ಸೇನೆ ತಾಲ್ಲೂಕು ಅಧ್ಯಕ್ಷ ಎನ್.ಸಿ.ಶಿವಚಂದ್ರಯ್ಯ, ಹಿರಿಯ ಮುಖಂಡರಾದ ಭಾನುಪ್ರಕಾಶ್, ಮಾಜಿ ಎಸ್.ಡಿ.ಎಂ.ಸಿ. ಅಧ್ಯಕ್ಷರಾದ ಪಾನಿಪುರಿ ವೆಂಕಟೇಶ್, ಕಾಲೇಜು ಪ್ರಾಂಶುಪಾಲರಾದ ನಾರಾಯಣಸ್ವಾಮಿ, ಶಿಕ್ಷಕ ಮುಖಂಡರಾದ ಎಂ.ಕೊಳ್ಳಪ್ಪ, ಯಲ್ಲಪ್ಪ, ಎನ್.ಎಂ.ಮುನಿರಾಜು, ನಿವೃತ್ತ ಶಿಕ್ಷಕರಾದ ಮುನಿನಾರಾಯಣಪ್ಪ, ರಾಜಶೇಖರಯ್ಯ ಹಾಜರಿದ್ದರು.

### ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ. ಎಚ್. ಕೆ. ಎಸ್. ಸ್ವಾಮಿ ಅಭಿಮತ

# ಸೊಳ್ಳೆ ಓಡಿಸುವ ನೆಪದಲ್ಲಿ ಹೊಗೆ ಹಾಕುವುದು ಮಾಲಿನ್ಯಕಾರಕ

**ಚಿತ್ರದುರ್ಗ:** ಪ್ರತಿಯೊಂದು ಗ್ರಾಮಗಳಲ್ಲಿ, ಅಂಗಡಿ ಮುಂಭಾಗದಲ್ಲಿ, ಹೊರಾಂಗಣದಲ್ಲಿ ಕುಳಿತ ಜನರು, ಸೊಳ್ಳೆಗಳಿಂದ ಮುಕ್ತಿ ಪಡೆಯಲು, ಪ್ಲಾಸ್ಟಿಕ್ ಕಸಗಳನ್ನ ಗುಡ್ಡೆ ಹಾಕಿಕೊಂಡು, ಬೆಂಕಿ ಹಾಕಿ, ಹೊಗೆಯಿಂದ ಸೊಳ್ಳೆಗಳನ್ನು ಓಡಿಸಲು ಪ್ರಯತ್ನಿಸುವುದು, ಪರಿಸರಕ್ಕೆ ಮಾರಕ ಮತ್ತು ಜನರ ಆರೋಗ್ಯಕ್ಕೂ ಸಹ ಅಪಾಯಕಾರಕ ಎಂದು ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ. ಎಚ್. ಕೆ. ಎಸ್. ಸ್ವಾಮಿ ವಿನಂತಿಸಿಕೊಂಡಿದ್ದಾರೆ.

ಎಲ್ಲಾ ಕಸಗಳಿಗೂ ಬೆಂಕಿ ಹಾಕುವುದರಿಂದ ಸೊಳ್ಳೆಗಳು ನಿರ್ನಾಮವಾಗುವುದಿಲ್ಲ, ಕೊಚ್ಚೆ ನೀರು, ಮಳೆ ನೀರು ಸಂಗ್ರಹವಾದ ಕಡೆ, ಸೊಳ್ಳೆಗಳು ಉತ್ಪಾದನೆಯಾಗಿ, ಹಲವಾರು ರೋಗಗಳನ್ನ ಹರಡುತ್ತಿದೆ, ಕೊಚ್ಚೆ ಮತ್ತು ನಿಂತ ನೀರನ್ನು ನಾವು ಸರಿಪಡಿಸುವುದರ ಬಗ್ಗೆ ಯೋಚಿಸಬೇಕು ಹೊರತು, ಮನೆ ಮುಂದೆ ಇರುವ ಎಲ್ಲಾ ಪ್ಲಾಸ್ಟಿಕ್ ಕಸಗಳನ್ನ ಗುಡ್ಡೆ ಹಾಕಿಕೊಂಡು, ಅದಕ್ಕೆ ಬೆಂಕಿ ಹಚ್ಚಿ, ಸೊಳ್ಳೆಗಳನ್ನು ಓಡಿಸುತ್ತೇವೆ ಎಂಬುದು ವೈಜ್ಞಾನಿಕವಾಗಿ ಸರಿಯಲ್ಲ. ಆ ಪ್ಲಾಸ್ಟಿಕ್ ಸುಟ್ಟ ಹೊಗೆಯನ್ನ ಸೇವನೆ ಮಾಡಿದ ಮನುಷ್ಯನಿಗೂ, ಸಹ ಡಯಾಕ್ಸಿನ್ ಎಂಬ ವಿಷಕಾರಿ ಅನಿಲ ದೇಹವನ್ನು ಒಕ್ಕೂ, ಮುಂದೆ ಕ್ಯಾನ್ಸರ್ ಅಂತ ಮಾರಕರ ರೋಗವನ್ನ ತಂದು ಒಡ್ಡುತ್ತದೆ. ಹಾಗಾಗಿ ಜನರು ಪ್ಲಾಸ್ಟಿಕ್‌ಗೆ ಬೆಂಕಿ ಹಾಕುವುದು, ಕಸದ ಗುಡ್ಡೆಗಳಿಗೆ ಬೆಂಕಿ ಹಾಕುವುದು ಮಾಡದೆ, ವಾಯುಮಾಲಿನ್ಯದ ಬಗ್ಗೆ ಅರಿವನ್ನ ಮೂಡಿಸಿಕೊಂಡು, ಪರಿಸರವನ್ನ ಸ್ವಚ್ಛವಾಗಿಟ್ಟುಕೊಳ್ಳುವುದರ ಬಗ್ಗೆ ಗಮನ ಹರಿಸಬೇಕು ಎಂದಿದ್ದಾರೆ.

ಪ್ರತಿ ಮದುವೆಮನೆಗಳಲ್ಲೂ ಸಹ, ಒಲೆ ಹಚ್ಚಲು ಪ್ಲಾಸ್ಟಿಕ್ ಕವರ್‌ಗಳನ್ನ ಮತ್ತು ಎಣ್ಣೆ ಕವರ್ ಗಳನ್ನ ಒಲೆಗಳಿಗೆ ಹಾಕಿ, ಬೆಂಕಿ ಹಚ್ಚುವುದನ್ನ ರೂಢಿ



ಮಾಡಿಕೊಳ್ಳುತ್ತಿದ್ದಾರೆ. ಇದರಿಂದಾಗುವ ಅನಾಹುತದ ಬಗ್ಗೆ ಜನಜಾಗೃತಿ ಮೂಡಿಸಬೇಕಾಗಿದೆ. ಗಿಡಗಂಟೆಗಳನ್ನ ಸ್ವಚ್ಛ ಮಾಡಿದ ನಂತರ, ಅವುಗಳನ್ನ ಒಂದು ಗುಂಡಿ ತೋಡಿ, ಅದರಲ್ಲಿ ಅವುಗಳನ್ನು ಹೂತ ಹಾಕಿ, ಮೇಲ್ಗಡೆ ಸ್ವಲ್ಪ ಮಣ್ಣನ್ನು ಹಾಕಿ, ನೀರು ಸಿಂಪಡಿಸಿ, ಸಗಣಿ ನೀರನ್ನು ಸಿಂಪಡಿಸಿ, ಗೊಬ್ಬರವನ್ನಾಗಿ ಮಾಡುವ ವಿಧಾನಗಳನ್ನು ನಾವು ಕಲಿತುಕೊಳ್ಳಬೇಕಾಗಿದೆ. ಸಾವಯವ ಕೃಷಿಯಲ್ಲಿ, ಹಸಿರು ಎಲೆಗಳನ್ನು ಕೊಳೆಯುವಂತೆ ಮಾಡಿ, ಗೊಬ್ಬರ ಮಾಡುವುದು ಅನುಭವಸ್ಥರಿಂದ ತಿಳಿದು, ಅದೇ ರೀತಿ ಮನೆ ಮುಂದೆ ಕಸಗಡ್ಡಿಗಳನ್ನು, ಸಹ ಸಣ್ಣ ಸಣ್ಣ ಗುಂಡಿಗಳಲ್ಲಿ ಹೂತ ಹಾಕಿ, ಮಣ್ಣು ಮುಚ್ಚಿ, ಗೊಬ್ಬರ ಮಾಡಿಕೊಳ್ಳಬಹುದು. ಎಲ್ಲಾ ಕಸಗಳನ್ನು ಗುಡ್ಡೆ ಹಾಕಿ, ಅದರಲ್ಲಿ ಟೈರ್‌ಗಳು, ಪ್ಲಾಸ್ಟಿಕ್ ಚಪ್ಪಲಿಗಳು. ರಬ್ಬರಿನ ತ್ಯಾಜ್ಯಗಳನ್ನ, ಬೆಂಕಿ ಹಾಕುವುದರಿಂದ, ಎಲ್ಲಾ ರಾಸಾಯನಿಕಗಳು ನಿಶ್ಚಿತವಾಗಿ ಬರುವ ಹೊಗೆಯಲ್ಲಿ ವಿಷಕಾರಿ ಅನಿಲವನ್ನು ವಾಯುಮಂಡಲಕ್ಕೆ ತಲುಪಿಸುತ್ತವೆ ಹಾಗಾಗಿ ವಾಯು ಮಾಲಿನ್ಯ ಮಾಡಿಕೊಳ್ಳದ ಹಾಗೆ ನಾವು ಸೊಳ್ಳೆಗಳನ್ನ ನಿಗ್ರಹಿಸುವುದರ ಬಗ್ಗೆ ಯೋಜನೆಗಳನ್ನ ಹಾಕಿಕೊಳ್ಳಬೇಕಾಗಿದೆ. ತಿಳುವಳಿಕೆ ಇರುವ ವಿದ್ಯಾವಂತರು ಸಹ, ಕಸಕ್ಕೆ ಬೆಂಕಿ ಹಾಕುವ ದೃಶ್ಯ ಎಲ್ಲಾ ಶಾಲಾ-ಕಾಲೇಜುಗಳ ಮುಂದೆ ಸಹ ನೋಡಲು ಸಿಗುತ್ತದೆ. ಆದಷ್ಟು ಶೀಘ್ರವಾಗಿ ನಾವು ವಾಯುಮಾಲಿನ್ಯ ತಡೆಯುವುದರ ಬಗ್ಗೆ ಹೆಚ್ಚಿನ ಕ್ರಮಗಳನ್ನು ಜರುಗಿಸಿ, ಹೊಗೆ ಹಾಕುವುದನ್ನು ತಡೆಯಬೇಕಾಗಿದೆ ಎಂದರು.

ದೆಹಲಿಯ ಸುತ್ತಮುತ್ತ ಎಲ್ಲ ರೈತರು ಜಮೀನಿನಲ್ಲಿ ಕಳೆನಾಶಕಾಗಿ ಹೊಗೆ ಹಾಕಿದ್ದರಿಂದ, ದಿಲ್ಲಿನಲ್ಲಿ ವಾಯುಮಾಲಿನ ಹೆಚ್ಚಿನ ಮಟ್ಟದಾಗಿ ತಲುಪಿದೆ. ಇದರ ಅನುಭವವನ್ನು ನಾವು ಶಿಕ್ಷಣದಲ್ಲಿ ಪಡೆದುಕೊಂಡು, ನಮ್ಮ ಸುತ್ತಮುತ್ತಲಿನ ವಾತಾವರಣವನ್ನು ಚೆನ್ನಾಗಿ ಇಟ್ಟುಕೊಳ್ಳಬೇಕೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

ಜಿಲ್ಲಾಡಳಿತ ಈ ರೀತಿ ಹೊಗೆ ಹಾಕುವುದನ್ನು ತಡೆಯುವುದರ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಬೇಕಾಗಿದೆ, ಪ್ರತಿ ಅಂಗಡಿಯವರು ಬೆಳಗ್ಗೆ ಎದ್ದ ತಕ್ಷಣ ಕಸ ಗುಡಿಸಿ, ಗುಡ್ಡೆ ಹಾಕಿ ಬಂಕಿ ಹಾಕಿಯೇ ಮುಂದಿನ ಕೆಲಸ ಪ್ರಾರಂಭ ಮಾಡುತ್ತಿದ್ದಾರೆ, ಇಂತಹ ಕಡೆ ನಾವು ಹೆಚ್ಚಿನ ಜಾಗೃತಿ ಮೂಡಿಸುವ ಕೆಲಸವಾಗಬೇಕ. ದಂಡ ಹಾಕುವುದರಿಂದ ಬದಲಾವಣೆ ಸಾದ್ಯವಿಲ್ಲ, ತಿಳುವಳಿಕೆ ಹೆಚ್ಚಿಸುವುದರಿಂದ ಮಾತ್ರ ಸಾದ್ಯ ಎಂದಿದ್ದಾರೆ.

# ಸಂಜೆ ಟಿಪ್ಸ್



## ಮಾರುಕಟ್ಟೆಯಲ್ಲಿ ಸದ್ದು ಮಾಡಿರುವ CMF Phone

ಬಿಡುಗಡೆ ಆಗಿ ಮೊದಲ ಸೇಲ್ನ ಜಸ್ಟ್ 3 ಗಂಟೆಯಲ್ಲಿ ದಾಖಲೆಯ 1,00,000 ಯೂನಿಟ್ ಮಾರಾಟ ಕಂಡಿರುವ CMF Phone 1 ಸ್ಮಾರ್ಟ್ಫೋನ್ ಸದ್ಯ ಮಾರುಕಟ್ಟೆಯಲ್ಲಿ ಭರ್ಜರಿ ಸದ್ದು ಮಾಡುತ್ತಿದೆ. ನಥಿಂಗ್ ಸಂಸ್ಥೆಯ ಸಬ್ ಬ್ರ್ಯಾಂಡ್ ಆಗಿರುವ ಅಒಈ ಪರಿಚಯಿಸಿರುವ ಈ ಫೋನ್ ಡಿಸೈನ್ ಹಾಗೂ ಪ್ರೈಸ್ಟ್ಯಾಗ್ನಿಂದ ಈಗಾಗಲೇ ಮೊಬೈಲ್ ಪ್ರಿಯರ ಚಿತ್ತ ಸೆಳೆದಿದೆ. ಅಂದಹಾಗೆ ಈ ಮೊಬೈಲ್ ಇದೇ ಜುಲೈ 17 ರಂದು ಫ್ಲಿಪ್ಕಾರ್ಟ್ ಇ ಕಾಮರ್ಸ್ ಪ್ಲಾಟ್ಫಾರ್ಮ್ ಮೂಲಕ ಮತ್ತೆ ಮಾರಾಟ ಪ್ರಾರಂಭ ಮಾಡಲಿದೆ. ಹೌದು, CMF ಸಂಸ್ಥೆಯ CMF Phone 1 ಸ್ಮಾರ್ಟ್ಫೋನ್ ಇದೇ ಜುಲೈ 17 ರಂದು ಫ್ಲಿಪ್ಕಾರ್ಟ್ ಇ ಕಾಮರ್ಸ್ ಮೂಲಕ ಮತ್ತೊಮ್ಮೆ ಮಾರಾಟ ಪ್ರಾರಂಭ ಮಾಡಲಿದೆ. ಈ ಫೋನ್ 5000 mAh ಸಾಮರ್ಥ್ಯದ ಬ್ಯಾಟರಿ ಬ್ಯಾಕ್ಅಪ್ ಹೊಂದಿದ್ದು, ಅಲ್ಲದೇ ಇದರ ಪ್ರಾಥಮಿಕ ಕ್ಯಾಮೆರಾವು 50 ಮೆಗಾ ಪಿಕ್ಸೆಲ್ ಸೆನ್ಸಾರ್ ಸೌಲಭ್ಯದಲ್ಲಿ ಇದೆ. ಇನ್ನು ಈ ಮೊಬೈಲ್ನ ಪ್ರಾರಂಭಿಕ ವೇರಿಯಂಟ್ ಬೆಲೆಯು 15,999ರೂ. ಗಳು ಆಗಿದೆ.

ಅಲ್ಲದೇ ಗ್ರಾಹಕರು ಈ ಫೋನ್ ಬ್ಲ್ಯಾಕ್, ಲೈಟ್ ಗ್ರೀನ್, ಬ್ಲೂ ಮತ್ತು ಆರೆಂಜ್ ಕಲರ್ ಆಯ್ಕೆಯಲ್ಲಿ ಈ ಫೋನ್ ಖರೀದಿಸಬಹುದು. ಇನ್ನು ಈ ಮೊಬೈಲ್ ಸೆಲ್ಫಿ ಕ್ಯಾಮೆರಾವು 16 ಮೆಗಾ ಪಿಕ್ಸೆಲ್ ಸೆನ್ಸಾರ್ ಸಾಮರ್ಥ್ಯದಲ್ಲಿ ಇದೆ. ಅಲ್ಲದೇ ಇದು 33W ಫಾಸ್ಟ್ ಚಾರ್ಜಿಂಗ್ ಸೌಲಭ್ಯವನ್ನು ಪಡೆದಿದೆ.

CMF Phone 1 ಮೊಬೈಲ್ 6.7 ಇಂಚಿನ ಫುಲ್ ಹೆಚ್ಡಿ+ ಅಮೋಲೆಡ್ ಡಿಸ್ಪ್ಲೇ ಅನ್ನು ಪಡೆದುಕೊಂಡಿದ್ದು, ಇದು 2000ಟಿಣ ಬ್ರೈಟ್ನೆಸ್ ಸಾಮರ್ಥ್ಯ ಪಡೆದಿದೆ. ಅಲ್ಲದೇ 120ಊದ ರಿಫ್ರೆಶ್ ರೇಟ್ ಆಯ್ಕೆ ಒಳಗೊಂಡಿದ್ದು, ಈ ಮೊಬೈಲ್ ಮೀಡಿಯಾ ಟೆಕ್ ಡೈಮೆನ್ಸಿಟಿ 7300 ಚಿಪ್ಸೆಟ್ ಪ್ರೊಸೆಸರ್ ಸಾಮರ್ಥ್ಯದಲ್ಲಿ ಕೆಲಸ ಮಾಡಲಿದೆ. ಅಲ್ಲದೇ ಇದು ಇತ್ತೀಚಿನ ಆಂಡ್ರಾಯ್ಡ್ 14 ಓಎಸ್ ಬೆಂಬಲ ಸಹ ಪಡೆದುಕೊಂಡಿದೆ.

## ಚೊಂಗೆ ಕಿಚಡಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಅಕ್ಕಿ, ತೊಗರಿ ಬೆಳೆ, ಈರುಳ್ಳಿ, ಕೊತ್ತಂಬರಿ, ಹಸಿ ಮೆಣಸಿನಕಾಯಿ, ಕರಿಬೇವು, ಚಕ್ಕೆ, ಲವಂಗ, ಬೆಳ್ಳುಳ್ಳಿ ಎಳಸು, ಉಪ್ಪು, ಅರಿಶಿಣ, ಎಣ್ಣೆ, ತುಪ್ಪ

### ಮಾಡುವ ವಿಧಾನ

ಅಕ್ಕಿ ಮತ್ತು ತೊಗರಿ ಬೆಳೆಯನ್ನು ಒಂದು ಪಾತ್ರೆಯಲ್ಲಿ ಬೆರೆಸಿ, ತೊಳೆಯಬೇಕು. ಕೊಬ್ಬರಿ, ಲವಂಗ, ಚಕ್ಕೆ, ಬೆಳ್ಳುಳ್ಳಿಯನ್ನು ಮಿಕ್ಸಿಗೆ ಹಾಕಿ ರುಬ್ಬಿಕೊಳ್ಳಬೇಕು. ಕುಕ್ಕರನ್ನು ಒಲೆ ಮೇಲಿಟ್ಟು, ಎಣ್ಣೆ, ಸ್ವಲ್ಪ ತುಪ್ಪ ಹಾಕಿ, ಕಾಯ್ದ ನಂತರ ಸಾಸಿವೆ, ಜೀರಿಗೆ, ಕರಿಬೇವು, ದೊಡ್ಡ ಗಾತ್ರದಲ್ಲಿ ಹೆಂಚಿದ ಈರುಳ್ಳಿ, ಹಸಿ ಮೆಣಸಿನಕಾಯಿ, ಅರಿಶಿಣ ಹಾಕಿ ಸ್ವಲ್ಪ ಕಂದು ಬಣ್ಣಕ್ಕೆ ಬರುವವರೆಗೆ ಚೆನ್ನಾಗಿ ಬೇಯಿಸಬೇಕು. ನಂತರ ತೊಳೆದಿಟ್ಟ ಅಕ್ಕಿ ಮತ್ತೆ ಬೆಳೆಯನ್ನು ಕುಕ್ಕರ್ಗೆ ಹಾಕಿ ಸರಿಯಾಗಿ ಮಿಕ್ಸ್ ಮಾಡಬೇಕು. ನಂತರ ರುಬ್ಬಿಟ್ಟುಕೊಂಡ ಕೊಬ್ಬರಿಯನ್ನು ಅದಕ್ಕೆ ಹಾಕಿ ಚೆನ್ನಾಗಿ ಎಲ್ಲವನ್ನು ಮಿಕ್ಸ್ ಮಾಡಿಕೊಂಡು ಕುಕ್ಕರ್ ಬಾಯಿ ಹಾಕಿ ಮೂರು ವಿಜಲ್ ಕೂಗಿಸಿದರೇ ಕಿಚಡಿ ರೆಡಿ.

## ಮದುವೆಗೆ ಬಂದವರಿಗೆ 2 ಕೋಟಿ ಮೌಲ್ಯದ ವಾಚ್ ಗಿಫ್ಟ್ ನೀಡಿದ ಅಂಬಾನಿ





ವಿಶ್ವದ ಶ್ರೀಮಂತ ಉದ್ಯಮಿ ಮುಖೇಶ್ ಅಂಬಾನಿ ಹಾಗೂ ನೀತಾ ಅಂಬಾನಿ ಮಗ ಅನಂತ್ ಅಂಬಾನಿ ಮದುವೆ ಜು.12ರಂದು ಸಖತ್ ಅದ್ದೂರಿಯಾಗಿ ನಡೆದಿದೆ. ಸಿನಿಮಾ ಮಂದಿ, ರಾಜಕೀಯ ಗಣ್ಯರು, ಕ್ರಿಕೆಟ್ ತಾರೆಯರು ಸೇರಿದಂತೆ ಸಾಕಷ್ಟು ಮಂದಿ ಅನಂತ್ ಹಾಗೂ ರಾಧಿಕಾ ಮದುವೆಯಲ್ಲಿ ಭಾಗಿಯಾಗಿ ನವ ಜೋಡಿಗೆ ಶುಭ ಹಾರೈಸಿದ್ದಾರೆ.

ಅನಂತ್ ಮದುವೆಗೆ ಆಗಮಿಸಿದ ಸ್ಟಾರ್ಸ್ಗೆ ಅಂಬಾನಿ ದುಬಾರಿ ವಾಚ್ ಅನ್ನು ರಿಟರ್ನ್ ಗಿಫ್ಟ್ ಆಗಿ ನೀಡಿದ್ದಾರೆ.

ಅನಂತ್ ಹಾಗೂ ರಾಧಿಕಾ ಮದುವೆಯಲ್ಲಿ ಸ್ಟಾರ್ಸ್ ನಾಯಕರಿಗೆ ಅನಂತ್ ಅಂಬಾನಿ ಐಷಾರಾಮಿ ವಾಚ್ಗಳನ್ನು ನೀಡಿದ್ದಾರೆ. ಬಾಲಿವುಡ್ ನಟರಾದ ಶಾರುಖ್ ಖಾನ್, ರಣವೀರ್ ಸಿಂಗ್ ಸೇರಿದಂತೆ ಅನೇಕರಿಗೆ ಈ ದುಬಾರಿ ವಾಚ್ಗಳನ್ನು ನೀಡಲಾಗಿದ್ದು, ಈ ವಾಚ್ಗಳ ಬೆಲೆ ಒಂದೂವರೆಯಿಂದ ಎರಡುಕೋಟಿ ರೂ ಇದೆ.

ಅಂಬಾನಿ ನೀಡಿದ ಉಡುಗೊರೆಯ ವಾಚ್ ಗಳು ಆಡೆಮರ್ಸ್ ಪಿಗುಯೆಟ್ ಕಂಪನಿಯದ್ದಾಗಿದೆ. 9.5 ಮಿಮೀ ದಪ್ಪವಿರುವ ಕೈಗಡಿಯಾರ ಇದಾಗಿದೆ. 41 ಎಂಎಂ 18 ಕ್ಯಾರಟ್ನ ಚಿನ್ನದ ವಾಚ್ಗಳಾಗಿವೆ. ವಾಚ್ನಲ್ಲಿ ವಾರ, ದಿನ, ದಿನಾಂಕ ಇನ್ನಿತರ ಮಾಹಿತಿಯನ್ನು ತಿಳಿಸಲಾಗುತ್ತದೆ.

**ಪೂಜಾರಿ ಯಾರು?:** ಇದೀಗ ಅನಂತ್ ಮತ್ತು ರಾಧಿಕಾ ಮದುವೆ ಮಾಡಿಸಿದ ಪೂಜಾರಿಯವರ ಬಗ್ಗೆ ಈಗ ಬಿಸಿ ಬಿಸಿ ಚರ್ಚೆ ನಡೆಯುತ್ತಿದೆ. ಆ ಪೂಜಾರಿ ಯಾರು? ಈತನಿಗೆ ಎಷ್ಟು ದಕ್ಷಿಣೆ ನೀಡಿದ್ದಾರೆ..? ಎಂಬ ಪ್ರಶ್ನೆಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿವೆ. ಖ್ಯಾತ



ಜ್ಯೋತಿಷಿ, ಪುರೋಹಿತ, ಪಂಡಿತ್ ಚಂದ್ರಶೇಖರ್ ಶರ್ಮಾ ಅವರು ಅನಂತ್ ಅಂಬಾನಿ ಮದುವೆ ಮಾಡಿಸಿದ್ದಾರೆ. ಚಂದ್ರಶೇಖರ್ ಶರ್ಮಾ ಅವರು ಅಂಬಾನಿ ಕುಟುಂಬದಲ್ಲಿನ ಜರುಗುವ ಅನೇಕ ಪೂಜಾ ಕಾರ್ಯಕ್ರಮಗಳು ಮತ್ತು ಶುಭ ಕಾರ್ಯಗಳನ್ನು ಮಾಡಿಕೊಡುತ್ತಾರೆ. ಗುಜರಾತ್ನ ಜಮಾನಗರದಲ್ಲಿ ನಡೆದ ಅನಂತ್ ಅಂಬಾನಿ ಅವರ ವಿವಾಹ ಪೂರ್ವ ಸಮಾರಂಭದಲ್ಲಿ ಚಂದ್ರಶೇಖರ ಶರ್ಮಾ ಉಪಸ್ಥಿತರಿದ್ದರು.

ಗಣೇಶ ಚತುರ್ಥಿ ಆಚರಣೆ ಸೇರಿದಂತೆ ಅಂಬಾನಿ ಕುಟುಂಬದ ಪ್ರತಿ ಸಂಭ್ರಮಾಚರಣೆಯಲ್ಲಿ ಈ ಗುರೂಜಿ ಇರುತ್ತಾರೆ. ಕೆಲವು ದಿನಗಳ ಹಿಂದೆ ಮುಂಬೈ ಇಂಡಿಯನ್ಸ್ ತಂಡದೊಂದಿಗೆ ಕಾಣಿಸಿಕೊಂಡಿದ್ದರು. ಸಾಮಾನ್ಯವಾಗಿ ಪಂಡಿತ್ ಚಂದ್ರಶೇಖರ ಶರ್ಮಾ ಅವರು ರೂ. 25,000 ಶುಲ್ಕ ಪಡೆಯುತ್ತಾರೆ. ಆದರೆ, ಅನಂತ್ ಅಂಬಾನಿ ಅವರ ವಿವಾಹ ಮಹೋತ್ಸವಕ್ಕೆ ಇವರಿಗೆ ಲಕ್ಷಗಟ್ಟಲೇ ದಕ್ಷಿಣೆ ನೀಡಲಾಗಿದೆ ಎಂದು ವರದಿಯಾಗಿದೆ. ಜೊತೆಗೆ ಅವರಿಗೆ ಐಷಾರಾಮಿ ವಸತಿ ಹಾಗೂ ದುಬಾರಿ ಉಡುಗೊರೆಗಳನ್ನು ನೀಡಲಾಗಿತ್ತು

## ಈ ಎಲ್ಲಾ ಕಾಯಿಲೆಗಳಿಗೆ ಏಲಕ್ಕಿ ರಾಮಬಾಣ



### ಹೆಲ್ತ್ ಟಿಪ್ಸ್

ಏಲಕ್ಕಿ ಅಂದ್ಮೇಲೆ ಅದು ಎಲ್ಲರ ಅಡುಗೆ ಮನೆಗಳಲ್ಲಿ ಸ್ಥಾನ ಪಡೆದಿರುತ್ತೆ . ಒಂದು ಪುಟ್ಟ ಏಲಕ್ಕಿ ನಿಮ್ಮ ದೇಹದ ಅದೆಷ್ಟೋ ಆರೋಗ್ಯದ ಸಮಸ್ಯೆಗಳಿಗೆ ಪರಿಹಾರ ನೀಡಬಲ್ಲದು .

ಈಗಿನ ಕಾಲದಲ್ಲಿ ಹೃದಯದ ಸಮಸ್ಯೆಯಿಂದ ಬಳಲುವವರೇ ಹೆಚ್ಚು. ಇದರಿಂದಾಗಿ ಹೃದಯದ ಬಡಿತ ಕಡಿಮೆಯಾಗುತ್ತಾ ಹೋಗುತ್ತದೆ.

ಆದರೆ ಹೃದಯ ಬಡಿತವನ್ನ ಸರಿದೂಗಿಸೋಕೆ ಏಲಕ್ಕಿ ಸಹಕಾರಿ ಅನ್ನೋ ವಿಚಾರ ನಿಮಗೆ ಗೊತ್ತಿದೆಯೇ..? ಏಲಕ್ಕಿಯಲ್ಲಿರುವ ಪೊಟ್ಯಾಷಿಯಂ, ಕ್ಯಾಲ್ಸಿಯಂ ಹಾಗೂ ಮ್ಯಾಗ್ನೇಷಿಯಂ ಅಂಶ ನಿಮ್ಮ ಹೃದಯದ ಆರೋಗ್ಯವನ್ನ ಕಾಪಾಡಲಿದೆ. ಶ್ವಾಸಕೋಶದ ಆರೋಗ್ಯಕ್ಕೂ ಏಲಕ್ಕಿ ಸಹಾಯಕ, ಅಸ್ತಮಾ, ಶೀತ, ಕೆಮ್ಮಿನಿಂದ ಬಳಲುತ್ತಿರುವವರು ಏಲಕ್ಕಿಯನ್ನ ಸೇವಿಸಿದ್ರೆ ತುಂಬಾನೇ ಒಳ್ಳೆಯದು.

ಏಲಕ್ಕಿ ಸೇವನೆಯಿಂದ ರಕ್ತದೊತ್ತಡ ಕೂಡ ಸರಿಯಾಗಲಿದೆ. ದೇಹದಲ್ಲಿ ಅನೇಕ ಕಾಯಿಲೆಗಳು ಆರಂಭವಾಗೋದೇ ಅಧಿಕ ರಕ್ತದೊತ್ತಡದಿಂದ. ಹೀಗಾಗಿ ದಿನಕ್ಕೆ 3 ಏಲಕ್ಕಿಗಳನ್ನ ಸೇವಿಸಿದ್ರೆ ನಿಮ್ಮ ರಕ್ತದೊತ್ತಡ ಕಂಟ್ರೋಲ್ನಲ್ಲಿ ಇರಲಿದೆ.

ಅನೇಕರಿಗೆ ಬಾಯಿಯಲ್ಲಿ ವಾಸನೆ ಬರೋದ್ರಿಂದ ಸಾರ್ವಜನಿಕ ಪ್ರದೇಶಗಳಲ್ಲಿ ಮಾತನಾಡೋಕೆ ಹಿಂಜರಿಯುತ್ತಾರೆ. ಅಂತವರು ಏಲಕ್ಕಿ ಸೇವನೆ ಮಾಡಿದ್ರೆ ಈ ಸಮಸ್ಯೆ ಮಾಯವಾಗಲಿದೆ. ಇದರ ಜೊತೆಯಲ್ಲಿ ಮಲಬದ್ಧತೆ ಹಾಗೂ ಲೈಂಗಿಕ ಕ್ರಿಯೆಯ ಎಲ್ಲಾ ಸಮಸ್ಯೆಗಳಿಗೂ ಏಲಕ್ಕಿ ಪರಿಹಾರ ನೀಡಲಿದೆ.

## ಹೇರ್ ಕಲರ್ ಸಮಸ್ಯೆಯೇ

### ಬ್ಯೂಟಿ ಟಿಪ್ಸ್

ಸ್ಟೈಲ್ ಲುಕ್ಗಾಗಿ ಹೇರ್ ಕಲರ್ ಮಾಡಿಸುತ್ತೇವೆ. ಆದರೆ ಈ ಹೇರ್ ಕಲರ್ನಿಂದಾಗಿ ಕೆಲವೊಮ್ಮೆ ಕೂದಲಿನ ನೈಜ ಸೌಂದರ್ಯ ಹಾಳಾಗಿ ಹೋದ ಉದಾಹರಣೆಗಳು ಎಷ್ಟೋ ಇವೆ.ಹೇರ್ ಕಲರ್ ಮಾಡಿ ನಿಮ್ಮ ಕೂದಲು ಡ್ಯಾಮೇಜ್ ಆಗಿದ್ದರೆ ಕೆಲ ಟಿಪ್ಸ್ ಗಳನ್ನು ಪಾಲಿಸಿ ಕೂದಲಿನ ಆರೋಗ್ಯ ಮತ್ತು ಸೌಂದರ್ಯ ಮರಳಿ ಪಡೆಯಬಹುದು.

ಹೇರ್ ಕಲರ್ ಮಾಡಿ ಕೂದಲು ರಫ್ ಆಗಿದೆಯೇ?

ಕೂದಲಿಗೆ ಬೆಣ್ಣೆ ಹಾಕಿ ಮಸಾಜ್ ಮಾಡಿ. ಇಲ್ಲದಿದ್ದರೆ ಪ್ರತಿದಿನ ಆಲೀವ್ ಎಣ್ಣೆಯಿಂದ ಮಸಾಜ್ ಮಾಡಿ.

ವಾರಕ್ಕೊಮ್ಮೆ ಒಂದು ಬೌಲ್ನಲ್ಲಿ ಮೊಟ್ಟೆಯ ಬಿಳಿ ಭಾಗ, ಜೇನು ಹಾಗೂ ತೆಂಗಿನೆಣ್ಣೆ ಹಾಕಿ ಮಿಕ್ಸ್ ಮಾಡಿ ತಲೆಗೆ ಹಚ್ಚಿ ಅರ್ಧ ಗಂಟೆಯ ಬಳಿಕ ತೊಳೆಯಿರಿ.

ಈ ರೀತಿ ಮಾಡುತ್ತಾ ಬಂದರೆ ಕೂದಲಿನ ಸೌಂದರ್ಯ ಮರಳಿ ಪಡೆಯಬಹುದು.

ಕೂದಲು ಕವಲೊಡೆದಿದ್ದರೆ

ಹೇರ್ ಕಲರ್ನಲ್ಲಿರುವ ಕೆಮಿಕಲ್ನಿಂದಾಗಿ ಕೂದಲು ಕವಲೊಡೆಯುವುದು ಸಹಜ. ಇದಕ್ಕೆ ಸೂಕ್ತ ಪರಿಹಾರವೆಂದರೆ ಒಳ್ಳೆಯ ಶ್ಯಾಂಪೂ ಬಳಸಬೇಕು.



ಡೀಪ್ ಮಾಯಿಶ್ಚರೈಸರ್ ಕಂಡೀಷನರ್ ಹಾಕಿ ಕೂದಲಿನ ಆರೈಕೆ ಮಾಡಿ. ಕೂದಲಿನ ಬುಡದ ಆರೈಕೆಗಾಗಿ ಮೊಟ್ಟೆ, ಸೂರ್ಯಕಾಂತಿ ಬೀಜ, ಸಿಹಿಗೆಣಸು, ಪ್ರೊಟೀನ್, ವಿಟಮಿನ್ ಸಿ, ಒಮೆಗಾ 3 ಇರುವ ಆಹಾರಗಳನ್ನು ನಿಮ್ಮ ಆಹಾರ ಕ್ರಮದಲ್ಲಿ ಸೇರಿಸಿ.

## ಜಿಯೋಸಿನಿಮಾದಲ್ಲಿ ಪ್ಯಾರಿಸ್ ಒಲಿಂಪಿಕ್ಸ್-2024 ಸಂಪೂರ್ಣ ಉಚಿತವಾಗಿ ನೇರಪ್ರಸಾರ

ಪ್ಯಾರಿಸ್ ಒಲಿಂಪಿಕ್ಸ್-2024ರ ಅಧಿಕೃತ ಪ್ರಸಾರ ಮತ್ತು ಡಿಜಿಟಲ್ ಪಾಲುದಾರನಾಗಿರುವ ವಯಾಕಾಮ್18, ಭಾರತದಲ್ಲಿ 20 ಏಕಕಾಲಿಕ ಫೀಡ್ಗಳು ಮತ್ತು ಒಲಿಂಪಿಯನ್ನಳ ಬಳಗದೊಂದಿಗೆ ಅತಿ ದೊಡ್ಡ ಮತ್ತು ಸಮಗ್ರ ಒಲಿಂಪಿಕ್ಸ್ ಪ್ರಸ್ತುತಿಯನ್ನು ಘೋಷಿಸುತ್ತಿದೆ. ಜುಲೈ 26ರಂದು ಆರಂಭವಾಗಲಿರುವ ಒಲಿಂಪಿಕ್ಸ್ ಕ್ರೀಡಾಕೂಟದ ಎಲ್ಲ ಕ್ರೀಡಾಸ್ಪರ್ಧೆಗಳನ್ನು ಸ್ಪೋರ್ಟ್ಸ್ 18 ನೆಟ್ವರ್ಕ್ನಲ್ಲಿ ನೇರಪ್ರಸಾರ ಮಾಡಲಿದೆ. ಇದೇ ವೇಳೆ ಜಿಯೋಸಿನಿಮಾದಲ್ಲಿ ಉಚಿತವಾಗಿ ನೇರಪ್ರಸಾರ ಮಾಡಲಿದೆ. ಇದುವರೆಗಿನ ಅತ್ಯಂತ ಸಮಗ್ರವಾದ ಒಲಿಂಪಿಕ್ಸ್ ಪ್ರಸ್ತುತಿಯನ್ನು ವರ್ಧಿಸಲು ಬಹು ಕ್ರೀಡಾ ವಿಭಾಗಗಳಲ್ಲಿ ಮಾಜಿ ಚಾಂಪಿಯನ್ನಗಳು ಹಾಜರಿರಲಿದ್ದಾರೆ. ' ದಮ್ಲುಗಾ ಕೆ... ಹೈಶಾ ' ಪ್ರಚಾರ ವಿಡಿಯೋದ ಮೂಲಕ ಹಿಂದೆಂದೂ ಕಂಡಿರದ ಒಲಿಂಪಿಕ್ಸ್ನ ಭರವಸೆಯನ್ನು ನೀಡುವ ಅಭಿಯಾನವನ್ನೂ ಆರಂಭಿಸಲಾಗಿದೆ.

ಮೊದಲ ಬಾರಿಗೆ ಭಾರತದಲ್ಲಿ ಒಲಿಂಪಿಕ್ಸ್ ಕವರೇಜ್ ಅನ್ನು ಜಿಯೋಸಿನಿಮಾದಲ್ಲಿ 20 ಏಕಕಾಲೀನ ಫೀಡ್ಗಳಲ್ಲಿ ಉಚಿತವಾಗಿ ಪ್ರಸ್ತುತಪಡಿಸಲಾಗುತ್ತದೆ. ಅಭಿಮಾನಿಗಳು ತಮ್ಮ ಆದ್ಯತೆಯ ಸ್ಪರ್ಧೆ ಮತ್ತು ಭಾರತೀಯರ ಪ್ರದರ್ಶನಗಳನ್ನು ತಮ್ಮ ಆದ್ಯತೆಯ ಆಧಾರದಲ್ಲಿ ಯಾವುದೇ ಸಮಯದಲ್ಲಿ, ಎಲ್ಲಿಯಾದರೂ ವೀಕ್ಷಿಸಲು ಅನುವು ಮಾಡಿಕೊಡಲಾಗುತ್ತದೆ. ಪ್ರಸ್ತುತಿಯು 17 ಕ್ರೀಡಾವಾರು ಫೀಡ್ಗಳನ್ನು ಮತ್ತು ಮೂರು ಕ್ಯುರೇಟೆಡ್ ಫೀಡ್ಗಳನ್ನು ಹೊಂದಿರುತ್ತದೆ. ಎಲ್ಲವೂ 4ಕೆನಲ್ಲಿ ಲಭ್ಯವಿದೆ. ಕ್ಯುರೇಟೆಡ್ ಫೀಡ್ಗಳು ಇಂಗ್ಲಿಷ್, ಹಿಂದಿ, ತಮಿಳು ಮತ್ತು ತೆಲುಗು ಭಾಷೆಯ ವೀಕ್ಷಕವಿವರಣೆಯೊಂದಿಗೆ ಭಾರತೀಯ ಫೀಡ್ಗಳನ್ನು ಒಳಗೊಂಡಿರುತ್ತವೆ.

ಹಿಂದೆಂದೂ ನೋಡಿರದ ಪ್ರಯತ್ನದಲ್ಲಿ, ಮಹಿಳಾ ಕ್ರೀಡಾಪಟುಗಳ ಫೀಡ್ ಸಂಪೂರ್ಣ ಕ್ರೀಡಾಕೂಟದಲ್ಲಿ ಮಹಿಳಾ ಒಲಿಂಪಿಯನ್ನಳ ಪ್ರಯಾಣವನ್ನು ಪ್ರತ್ಯೇಕವಾಗಿ ಸೆರೆಹಿಡಿಯುತ್ತದೆ. ಕ್ಯುರೇಟೆಡ್ ಫೀಡ್ಗಳು ಇಂಗ್ಲಿಷ್ ಮತ್ತು ಹಿಂದಿಯಲ್ಲಿ ಜಾಗತಿಕ ಕ್ರೀಡಾಸ್ಪರ್ಧೆಗಳ ಫೀಡ್ಗಳನ್ನು ಸಹ ಒಳಗೊಂಡಿರುತ್ತವೆ. ಇದರಿಂದಾಗಿ ಪ್ಯಾರಿಸ್ ಒಲಿಂಪಿಕ್ಸ್-2024ರಲ್ಲಿ ವಿಶ್ವದ ಅತ್ಯುತ್ತಮ ಕ್ರೀಡಾಪಟುಗಳ ಸ್ಪರ್ಧೆಗಳನ್ನು ಹಿಂಬಾಲಿಸಲು ವೀಕ್ಷಕರಿಗೆ ಅವಕಾಶ ನೀಡುತ್ತದೆ.

ಸ್ಪೋರ್ಟ್ಸ್18-1, ಸ್ಪೋರ್ಟ್ಸ್18--1ಎಚ್ಡಿ, ಸ್ಪೋರ್ಟ್ಸ್18-2 ಚಾನಲ್ಗಳು ಭಾರತ ಕೇಂದ್ರೀಕೃತ




ಸ್ಪರ್ಧೆಗಳನ್ನು ನೇರಪ್ರಸಾರ ಮಾಡುತ್ತವೆ. ಸ್ಪೋರ್ಟ್ಸ್18-3ರಲ್ಲಿ ಜಾಗತಿಕ ಕ್ರೀಡಾತಾರೆಯರ ಸ್ಪರ್ಧೆಗಳು ನೇರಪ್ರಸಾರ ಕಾಣಲಿವೆ. ಸ್ಪೋರ್ಟ್ಸ್18-1 ಮತ್ತು ಸ್ಪೋರ್ಟ್ಸ್18-1ಎಚ್ಡಿ ಚಾನಲ್ಗಳು ತಮಿಳು ಮತ್ತು ತೆಲುಗು ಜತೆಗೆ ಇಂಗ್ಲಿಷ್ನಲ್ಲಿ ಸ್ಪರ್ಧೆಗಳನ್ನು ನೇರಪ್ರಸಾರ ಮಾಡಲಿವೆ. ಭಾಷೆಗಳ ಆಯ್ಕೆಯ ಬಟನ್ಗಳೂ ಲಭ್ಯವಿರಲಿವೆ. ಸ್ಪೋರ್ಟ್ಸ್18-2ರಲ್ಲಿ ಹಿಂದಿ ವೀಕ್ಷಕವಿವರಣೆಯೊಂದಿಗೆ ಸ್ಪರ್ಧೆಗಳು ನೇರಪ್ರಸಾರ ಕಾಣಲಿವೆ.

ಭಾರತೀಯರ ಮೇಲೆ ಮೀಸಲಾದ ಕ್ಯಾಮರಾ ಫೀಡ್ನೊಂದಿಗೆ ಉದ್ಘಾಟನಾ ಸಮಾರಂಭದ ಕವರೇಜ್ ನೀಡಲಾಗುತ್ತದೆ. ಈ ಮೂಲಕ ಭಾರತೀಯ ತಂಡದ ಸಂಪೂರ್ಣ ನೋಟವನ್ನು ನೀಡಲಾಗುತ್ತದೆ. ಹೆಚ್ಚುವರಿಯಾಗಿ, ಭಾರತೀಯರ ಪದಕ ಗೆಲುವಿನ ಕ್ಷಣಗಳಲ್ಲಿ ಅವರ ಕುಟುಂಬದ ಸದಸ್ಯರ ನೇರ ಸಂದರ್ಶನದೊಂದಿಗೆ ಸ್ಟುಡಿಯೋದಲ್ಲಿರುವ ಕ್ರೀಡಾತಜ್ಞರ ಕವರೇಜ್ಗಳನ್ನು ವೀಕ್ಷಕರು ಆನಂದಿಸಲು ಸಾಧ್ಯವಾಗುತ್ತದೆ.

'ನಮ್ಮ ಕ್ರೀಡಾಪಟುಗಳು ಉನ್ನತ ಸಾಧನೆಯ ಮೇಲೆ ಕಣ್ಣಿಟ್ಟಿರುವ ಸಮಯದಲ್ಲಿ ವೀಕ್ಷಕರನ್ನೇ ಕೇಂದ್ರಬಿಂದುವಾಗಿಟ್ಟುಕೊಂಡು ಪ್ಯಾರಿಸ್ ಒಲಿಂಪಿಕ್ಸ್-2024ರ ನಮ್ಮ ಪ್ರಸ್ತುತಿಯನ್ನು ರೂಪಿಸಲಾಗಿದೆ. ಭಾರತದಲ್ಲಿ ಮೊದಲ ಬಾರಿಗೆ ಒಲಿಂಪಿಕ್ಸ್ ಪ್ರಸ್ತುತಿಯು ಭಾರತೀಯರಿಗೆ ಮೀಸಲಾದ ಫೀಡ್, ಮಹಿಳಾ ಕ್ರೀಡಾಪಟುಗಳ ಫೀಡ್ ಮತ್ತು ಜಾಗತಿಕ ಕ್ರೀಡಾಸ್ಪರ್ಧೆಗಳ ಫೀಡ್ಗಳನ್ನು ಹೊಂದಿರುತ್ತದೆ. ಇದು ಕ್ರೀಡಾಕೂಟವನ್ನು ವೀಕ್ಷಿಸುವಾಗ ಅಭಿಮಾನಿಗಳಿಗೆ ನೇರ ಅನುಭವದೊಂದಿಗೆ ಹೆಚ್ಚಿನ ಸ್ವಾಯತ್ತತೆಯನ್ನು ನೀಡುತ್ತದೆ' ಎಂದು ವಯಾಕಾಮ್ 18-ಸ್ಪೋರ್ಟ್ಸ್ಕಂಟೆಂಟ್ಮುಖ್ಯಸ್ಥ ಸಿದ್ಧಾರ್ಥ್ ಶರ್ಮಾ ಹೇಳಿದ್ದಾರೆ.

ಭಾರತದ ಮೊದಲ ಮಹಿಳಾ ಕುಸ್ತಿ ಒಲಿಂಪಿಕ್ ಪದಕ ವಿಜೇತೆ ಸಾಕ್ಷಿ ಮಲಿಕ್ (2016ರ ರಿಯೋ ಒಲಿಂಪಿಕ್ಸ್), 2008ರ ಬೀಜಿಂಗ್ ಒಲಿಂಪಿಕ್ಕಂಚಿನ ಪದಕ ವಿಜೇತ ಬಾಕ್ಸರ್ ವಿಜೇಂದರ್ ಸಿಂಗ್ ಅವರೊಂದಿಗೆ ನಾಲ್ಕು ಬಾರಿಯ ಒಲಿಂಪಿಯನ್ ಮತ್ತು ಆರು ಬಾರಿಯ ಗ್ರ್ಯಾಂಡ್ ಸ್ಲಾಮ್ ವಿಜೇತೆ ಮತ್ತು ಡಬ್ಲ್ಯುಟಿಎ ಶ್ರೇಯಾಂಕದಲ್ಲಿ ವಿಶ್ವ ನಂಬರ್ ಒನ್ ಸ್ಥಾನ ಪಡೆದ ಮೊದಲ ಭಾರತೀಯ ಮಹಿಳೆ ಎನಿಸಿರುವ ಸಾನಿಯಾ ಮಿರ್ಜಾ, ಕಾಮನ್ವೆಲ್ತ್ ಮತ್ತು ಏಷ್ಯನ್ ಗೇಮ್ಸ್ ಚಿನ್ನದ ಪದಕ ವಿಜೇತ ಸೋಮದೇವ್ ದೇವವರ್ಮನ್, ವಿಶ್ವದ ನಂ. 7 ಲಾಂಗ್ ಜಂಪರ್ ಮತ್ತು ಕಾಮನ್ವೆಲ್ತ್ ಗೇಮ್ಸ್ ಪದಕ ವಿಜೇತ ಮುರಳಿ ಶ್ರೀಶಂಕರ್ ಅವರು ಒಲಿಂಪಿಕ್ಸ್ ಸಮಯದಲ್ಲಿ ವಯಾಕಾಮ್18ರಲ್ಲಿ ಕ್ರೀಡಾ ಪರಿಣತರಾಗಿ ಸಂಪೂರ್ಣ ಹೊಸ ಅವತಾರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ಸ್ಟುಡಿಯೋ ಲೈನ್ಅಪ್ನಲ್ಲಿ ಭಾರತೀಯ ಪುರುಷರ ಹಾಕಿ ತಂಡದ ಮಾಜಿ ನಾಯಕ ವೀರೇನ್ ರಸ್ಕಿನ್ಹಾ, ಕಾಮನ್ವೆಲ್ತ್ ಗೇಮ್ಸ್ ಚಿನ್ನದ ಪದಕ ವಿಜೇತ ಷಟ್ಲರ್ ಪಾರುಪಳ್ಳಿ ಕಶ್ಯಪ್, ಅನೇಕ ಏಷ್ಯನ್ ಗೇಮ್ಸ್ ಪದಕ ವಿಜೇತ ಮತ್ತು ವಿಶ್ವ ಡಬಲ್ಸ್ ಚಾಂಪಿಯನ್ಶಿಪ್ ಚಿನ್ನದ ಪದಕ ವಿಜೇತ ಸ್ಕ್ವಾಷ್ ಆಟಗಾರ ಸೌರವ್ ಘೋಷಾಲ್ ಮತ್ತು ಎರಡು ಬಾರಿಯ ಒಲಿಂಪಿಯನ್ಆರ್ಚರ್ಅತನು ದಾಸ್ವಯಾಕಾಮ್ 18ರಲ್ಲಿ ಕಾಣಿಸಿಕೊಳ್ಳಲಿದ್ದಾರೆ.



### ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಖರ್ಚಿನ ಬಗ್ಗೆ ನಿಯಂತ್ರಣ ಅಗತ್ಯ, ಕೆಲಸದಲ್ಲಿ ಒತ್ತಡ ಜಾಸ್ತಿ, ದೂರ ಪ್ರಯಾಣ, ವಿರೋಧಿಗಳಿಂದ ತೊಂದರೆ.

**ವೃಷಭ:** ನೂತನ ವ್ಯವಹಾರಗಳಲ್ಲಿ ಆಸಕ್ತಿ, ಹಿತ ಶತ್ರುಗಳಿಂದ ತೊಂದರೆ, ಸ್ಥಳ ಬದಲಾವಣೆ, ರಾಜ ವಿರೋಧ.

**ಮಿಥುನ:** ಸ್ತ್ರೀ ಲಾಭ, ಮಕ್ಕಳಿಗೆ ಅನಾರೋಗ್ಯ, ಗುರಿ ಸಾಧಿಸಲು ಶ್ರಮ ಪಡುವಿರಿ, ಅಕಾಲ ಭೋಜನ, ಬಾಕಿ ವಸೂಲಿ.

**ಕಟಕ:** ಆಪ್ತರನ್ನು ದ್ವೇಷಿಸುವಿರಿ, ನೆಮ್ಮದಿ ಇಲ್ಲದ ಜೀವನ, ಪುಣ್ಯಕ್ಷೇತ್ರ ದರ್ಶನ, ಮಾತಿನಿಂದ ಅನರ್ಥ.

**ಸಿಂಹ:** ಎಲ್ಲಿ ಹೋದರು ಅಶಾಂತಿ, ಗುರು ಹಿರಿಯರಲ್ಲಿ ಭಕ್ತಿ, ಅಲಸ್ಯ ಮನೋಭಾವ, ಆದಾಯಕ್ಕಿಂತ ಖರ್ಚು ಜಾಸ್ತಿ.

**ಕನ್ಯಾ:** ಅಲ್ಪ ಕಾರ್ಯ ಸಿದ್ಧಿ, ದೃಷ್ಟಿ ದೋಷದಿಂದ ತೊಂದರೆ, ಚಂಚಲ ಮನಸ್ಸು, ದೂರಲೋಚನೆ, ಸಲ್ಲದ ಅಪವಾದ.

**ತುಲಾ:** ಸಜ್ಜನ ವಿರೋಧ, ಧನವ್ಯಯ, ಕೋಪ ಜಾಸ್ತಿ, ಮನೋವ್ಯಥೆ, ಸ್ತ್ರೀ ಸಂಬಂಧ ವ್ಯವಹಾರಗಳಲ್ಲಿ ಎಚ್ಚರ.

**ವೃಶ್ಚಿಕ:** ಅಧಿಕಾರಿಗಳಲ್ಲಿ ಕಲಹ, ಅನಾರೋಗ್ಯ, ಕೆಲಸ ಕಾರ್ಯಗಳಲ್ಲಿ ವಿಘ್ನ, ಆಕಸ್ಮಿಕ ಧನವ್ಯಯ.

**ಧನಸ್ಸು:** ಹಿರಿಯರಿಂದ ಬೋಧನೆ, ಸ್ಥಳ ಬದಲಾವಣೆ, ಉನ್ನತ ಶಿಕ್ಷಣದಲ್ಲಿ ಯಶಸ್ಸು, ಹಣಕಾಸಿನ ಪರಿಸ್ಥಿತಿ ಉತ್ತಮ.

**ಮಕರ:** ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ, ಮಾತಿನ ಮೇಲೆ ನಿಗಾ ಇರಲಿ, ಹಿತ ಶತ್ರು ಭಾದೆ, ಮನಸ್ಸಿನಲ್ಲಿ ದುಗುಡ.

**ಕುಂಭ:** ಕಾರ್ಯ ಬದಲಾವಣೆ, ಖಾಸಗಿ ಕಂಪನಿಯಿಂದ ಸಹಾಯ, ಕಪ್ಪು ಬಣ್ಣದ ವ್ಯಕ್ತಿಯಿಂದ ಸಹಾಯ, ತಾಳ್ಮೆ ಅಗತ್ಯ.

**ಮೀನ:** ಅನ್ಯರಿಗೆ ಉಪಕಾರ ಮಾಡುವಿರಿ, ಉದ್ಯೋಗದಲ್ಲಿ ಹೆಚ್ಚಿನ ಜವಾಬ್ದಾರಿ, ಅವಕಾಶಗಳು ಕೈ ತಪ್ಪುವುದು.

## ವಿಶ್ವ ಯುವ ಕೌಶಲ್ಯ ದಿನಾಚರಣೆ

ವಿಶ್ವ ಯುವ ಕೌಶಲ್ಯ ದಿನವನ್ನು ಪ್ರತಿ ವರ್ಷ ಜುಲೈ 15 ರಂದು ಆಚರಿಸಲಾಗುತ್ತದೆ. ವಿಶ್ವಸಂಸ್ಥೆಯು ತನ್ನ ಅಸ್ತಿತ್ವವನ್ನು ಘೋಷಿಸಿದ ನಂತರ ಇದನ್ನು 2014 ರಿಂದ ಆಚರಿಸಲಾಗುತ್ತದೆ. ಗ.ಓ. ಪ್ರಕಾರ, ವಿಶ್ವ ಯುವ ಕೌಶಲ್ಯ ದಿನದ ಉದ್ದೇಶವು ಉದ್ಯೋಗ, ಯೋಗ್ಯ ಕೆಲಸ ಮತ್ತು ಉದ್ಯಮಶೀಲತೆಗಾಗಿ ಕೌಶಲ್ಯಗಳೊಂದಿಗೆ ಯುವಜನರನ್ನು ಸಜ್ಜುಗೊಳಿಸುವ ಕಾರ್ಯತಂತ್ರದ ಪ್ರಾಮುಖ್ಯತೆಯನ್ನು ಆಚರಿಸುವುದು. ದಿನದ ಗೌರವಾರ್ಥ ಕಾರ್ಯಕ್ರಮಗಳು ಯುವಜನರಿಗೆ ಶೈಕ್ಷಣಿಕ ಸಂಸ್ಥೆಗಳು, ಉದ್ಯೋಗದಾತರು, ನೀತಿ ನಿರೂಪಕರು ಮತ್ತು ಅಭಿವೃದ್ಧಿ ಪಾಲುದಾರರೊಂದಿಗೆ ಸಂವಾದಕ್ಕೆ ಸ್ಥಳಾವಕಾಶವನ್ನು ಒದಗಿಸುವ ಅವಕಾಶಗಳನ್ನು ಒಳಗೊಂಡಿರುತ್ತದೆ. ಯುವಕರಿಗೆ ಸಹಾಯ ಮಾಡುವ ಅತ್ಯುತ್ತಮ ಮಾರ್ಗವೆಂದರೆ ಅವರಿಗೆ ಶಿಕ್ಷಣಕ್ಕೆ ಪ್ರವೇಶವನ್ನು ನೀಡುವುದು ಮತ್ತು ಇತರವು ಇದನ್ನು ಮಾಡಲು ಅವರಿಗೆ ಸಹಾಯ ಮಾಡಲು ಅನೇಕ ವಿದ್ಯಾರ್ಥಿವೇತನಗಳು ಲಭ್ಯವಿದೆ. ಜಗತ್ತು ನಿಧಾನವಾಗಿ ಸುಸ್ಥಿರ ಅಭಿವೃದ್ಧಿಗೆ ಬದಲಾಗುತ್ತಿರುವ ಹಿನ್ನೆಲೆಯಲ್ಲಿ ಯುವಕರ ಕೌಶಲ್ಯವು ಹೆಚ್ಚು ಮಹತ್ವದ್ದಾಗಿದೆ.

ಎರಡನೆಯ ಮಹಾಯುದ್ಧದ ನಂತರದ ಸಮಯದಲ್ಲಿ, ಯುನೈಟೆಡ್ ನೇಷನ್ಸ್ ಅನ್ನು ಅಕ್ಟೋಬರ್ 24, 1945 ರಂದು ಸ್ಥಾಪಿಸಲಾಯಿತು, ಅದರ ಚಾರ್ಟರ್ ಅನ್ನು ಚೀನಾ, ಫ್ರಾನ್ಸ್, ಯುಎಸ್ಎಸ್ಆರ್, ಯುಕೆ ಮತ್ತು ಯುನೈಟೆಡ್ ಸ್ಟೇಟ್ಸ್ ಮತ್ತು ಇತರ ಸಹಿಗಳೊಂದಿಗೆ ಅನುಮೋದಿಸಿದ ನಂತರ. ಸಂಘಟನೆಯ ಗುರಿ ಯಾವಾಗಲೂ ಜಾಗತಿಕ ಶಾಂತಿ ಮತ್ತು ಭದ್ರತೆಯನ್ನು ಕಾಪಾಡಿಕೊಳ್ಳುವುದು, ಮಾನವೀಯ ಬೆಂಬಲವನ್ನು ನೀಡುವುದು, ಮಾನವ ಹಕ್ಕುಗಳನ್ನು ರಕ್ಷಿಸುವುದು ಮತ್ತು ಅಂತರರಾಷ್ಟ್ರೀಯ ಕಾನೂನನ್ನು ಎತ್ತಿಹಿಡಿಯುವುದು. ಎರಡನೆಯ ಮಹಾಯುದ್ಧದ ಮೊದಲು ವಿಘಟಿತವಾದ ಲೀಗ್ ಆಫ್ ನೇಷನ್ಸ್ನ ಉತ್ತರಾಧಿಕಾರಿಯಾಗಿ ಇದನ್ನು ರಚಿಸಲಾಯಿತು.ಅದರ ಕಾರ್ಯನಿರ್ವಹಣೆಯ ವರ್ಷಗಳಲ್ಲಿ, ವಿಶ್ವಸಂಸ್ಥೆಯು ಜಾಗತಿಕ ರಾಜಕೀಯದ ಸಕ್ರಿಯ ಭಾಗವಾಗಿದೆ. ಇದು ಅಂತರರಾಷ್ಟ್ರೀಯ ಸಂಬಂಧಗಳಲ್ಲಿನ ಬದಲಾವಣೆಗಳೊಂದಿಗೆ ತನ್ನ ಕಾರ್ಯಚಟುವಟಿಕೆಯನ್ನು ಮಾರ್ಪಡಿಸಿದೆ: ಜಾಗತಿಕ ದಕ್ಷಿಣದ ವಸಾಹತುಶಾಹಿಯ ಮುಖಾಂತರ, ಶೀತಲ ಸಮರದ ಅಂತ್ಯ, ಯುಎಸ್ ಪ್ರಾಬಲ್ಯ, ಹವಾಮಾನ ಬದಲಾವಣೆ, ನಿರಾಶ್ರಿತರ ಬಿಕ್ಕಟ್ಟುಗಳು ಇತ್ಯಾದಿ. ಇಂದು, ಯು.ಎನ್. ಅದರ 17 ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು. 2014 ರಲ್ಲಿ, ಯುಎನ್ ವಿಶ್ವ ಯುವ ಕೌಶಲ್ಯ ದಿನವನ್ನು ಘೋಷಿಸಿತು. ಈ ದಿನದ ಉದ್ದೇಶವು ಯುವಜನರ ಉದ್ಯೋಗ ಮತ್ತು ಉದ್ಯಮಶೀಲತೆಗೆ ಅಗತ್ಯವಾದ ಕೌಶಲ್ಯಗಳು ಮತ್ತು ಭವಿಷ್ಯಕ್ಕಾಗಿ ಅವರ ಕಾರ್ಯತಂತ್ರದ ಪ್ರಾಮುಖ್ಯತೆಯ ಮೇಲೆ ಸ್ವಲ್ಪ ಬೆಳಕು ಚೆಲ್ಲುವುದಾಗಿದೆ. ಈ ದಿನವು ನೀತಿ ಪಾಲುದಾರರು, ಉದ್ಯೋಗದಾತರು, ಅಭಿವೃದ್ಧಿ ಪಾಲುದಾರರು ಮತ್ತು ವೃತ್ತಿಪರ ಮತ್ತು ತರಬೇತಿ ಶೈಕ್ಷಣಿಕ ಕಾರ್ಯಕ್ರಮಗಳಿಗೆ ವಿಶ್ವವು ಸುಸ್ಥಿರ ಅಭಿವೃದ್ಧಿ ಮಾದರಿಯಾಗಿ ಪರಿವರ್ತನೆಗೊಳ್ಳುತ್ತಿರುವಾಗ ಅಗತ್ಯವಿರುವ ಕೌಶಲ್ಯಗಳ ಕುರಿತು ಯುವ ಜನರೊಂದಿಗೆ ಸಂವಾದ ನಡೆಸಲು ಒಂದು ಅನನ್ಯ ಅವಕಾಶವಾಗಿದೆ.

# ನನ್ನ ಹತ್ಯೆಗೆ ಎರಡು ಪ್ರಯತ್ನ ನಡೆದಿತ್ತು: ಎಲಾನ್ ಮಸ್ಕ್



**ವಾಷಿಂಗ್ಟನ್:** ಕಳೆದ 8 ತಿಂಗಳಲ್ಲಿ ತಾನು ಎರಡು ಹತ್ಯೆಯ ಪ್ರಯತ್ನಗಳನ್ನು ಎದುರಿಸಿರುವುದಾಗಿ ಟೆಸ್ಲಾ ಮಾಲಕ ಎಲಾನ್ ಮಸ್ಕ್ ಹೇಳಿದ್ದು, ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹತ್ಯೆಯ ಯತ್ನವನ್ನು ಖಂಡಿಸಿದ್ದಾರೆ.

ಹತ್ಯೆ ಪ್ರಯತ್ನದಲ್ಲಿ ಗುಪ್ತಚರ ಸೇವೆಯ ವೈಫಲ್ಯ ಎದ್ದುಕಾಣುತ್ತಿದೆ.

ಅಧಿಕಾರಿಗಳು ಸಂಪೂರ್ಣ ಅಸಮರ್ಥರಾಗಿದ್ದಾರೆ ಅಥವಾ ಉದ್ದೇಶಪೂರ್ವಕ ವರ್ತನೆ ಇದಾಗಿರಬಹುದು ಎಂದವರು ಟೀಕಿಸಿದ್ದಾರೆ. ಹತ್ಯೆಯ ಪ್ರಯತ್ನದಿಂದ ಪಾರಾದ ರಿಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿ ಡೊನಾಲ್ಡ್ ಟ್ರಂಪ್‌ರನ್ನು ಬೆಂಬಲಿಸುವುದಾಗಿ ಮಸ್ಕ್ ಹೇಳಿದ್ದಾರೆ.

'ಅಪಾಯದ ಕ್ಷಣಗಳು ಮುಂದಿವೆ. ಕಳೆದ 8 ತಿಂಗಳಲ್ಲಿ ಇಬ್ಬರು ವ್ಯಕ್ತಿಗಳು (ಪ್ರತ್ಯೇಕ ಸಂದರ್ಭಗಳಲ್ಲಿ) ನನ್ನನ್ನು ಕೊಲ್ಲಲು ಪ್ರಯತ್ನಿಸಿದ್ದಾರೆ. ಟೆಕ್ಸಾಸ್‌ನಲ್ಲಿರುವ ಟೆಸ್ಲಾ ಕೇಂದ್ರಕಚೇರಿಯ ಸಮೀಪ ಅವರನ್ನು ಗನ್‌ಗಳ ಸಹಿತ ಬಂಧಿಸಲಾಗಿದೆ' ಎಂದು ಅವರು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

ಟ್ರಂಪ್ ಅವರ ಪ್ರಚಾರ ಕಾರ್ಯಕ್ಕೆ ದೇಣಿಗೆ ನೀಡುವ ಮೂಲಕ ಮುಂದಿನ ಅಧ್ಯಕ್ಷರಾಗಿ ಅವರನ್ನು ಬೆಂಬಲಿಸುವುದಾಗಿ ಮಸ್ಕ್ ಹೇಳಿದ್ದಾರೆ. 2022ರಲ್ಲೂ ತನ್ನ ಹತ್ಯೆಗೆ ಪ್ರಯತ್ನ ನಡೆದಿತ್ತು. ತಾನಿರುವ ಸ್ಥಳದ ಮಾಹಿತಿಯನ್ನು ವರದಿಗಾರರು ಶೇರ್ ಮಾಡಿಕೊಳ್ಳುವ ಮೂಲಕ 'ಹತ್ಯೆ ಸಂಚಿಗೆ ಸಹಕರಿಸುತ್ತಿದ್ದರು. ತನ್ನ ಖಾಸಗಿ ಜೆಟ್ ವಿಮಾನದ ಪ್ರಯಾಣದ ಮಾಹಿತಿಗಳನ್ನು ಪಡೆದಿದ್ದರು' ಎಂದು ಮಸ್ಕ್ ಆರೋಪಿಸಿದ್ದು ಈ ವರದಿಗಾರರ ಖಾತೆಗಳನ್ನು 'ಎಕ್ಸ್'ನಿಂದ ನಿಷೇಧಿಸಲಾಗಿದೆ ಎಂದಿದ್ದಾರೆ.

# ಜರ್ಮನಿಯಲ್ಲಿ ಗುಂಡಿನ ದಾಳಿ: ಮೂವರ ಸಾವು

**ಜರ್ಮನಿ:** ನೈಋತ್ಯ ಜರ್ಮನಿಯಲ್ಲಿ ಭಾನುವಾರ ಕೌಟುಂಬಿಕ ವಿವಾದಕ್ಕೆ ಸಂಬಂಧಿಸಿದ ಗುಂಡಿನ ದಾಳಿಯಲ್ಲಿ ಒಂದೇ ಕುಟುಂಬದ ಮೂವರು ಸಾವನ್ನಪ್ಪಿದ್ದು, ಇಬ್ಬರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರಲ್ಲಿ ಶಂಕಿತ ಶೂಟರ್, ಇನ್ನೊಬ್ಬ ಪುರುಷ ಮತ್ತು ಮಹಿಳೆ ಸೇರಿದ್ದಾರೆ ಎಂದು ಪೊಲೀಸ್ ವಕ್ತಾರ ರವೋನಾ ಡಾಟ್ಲಿಂಗ್ ಅಸೋಸಿಯೇಟೆಡ್ ಪ್ರೆಸ್‌ಗೆ ತಿಳಿಸಿದ್ದಾರೆ.

ಮಧ್ಯಾಹ್ನದ ಸ್ವಲ್ಪ ಸಮಯದ ನಂತರ ಸ್ಟಟ್‌ಗಾರ್ಟ್ ಮತ್ತು ಲೇಕ್ ಕಾನ್ಸ್ಟನ್ಸ್ ನಡುವಿನ ಅಲ್ಬ್‌ಸ್ಟಡ್ ಪಟ್ಟಣದಲ್ಲಿ ಪೊಲೀಸರನ್ನು ಸ್ಥಳಕ್ಕೆ ಕರೆಸಲಾಯಿತು ಎಂದು ಅವರು ಹೇಳಿದರು.

ಒಂದೇ ಕುಟುಂಬದಲ್ಲಿ ಶೂಟಿಂಗ್ ನಡೆದಿದ್ದು, ತನಿಖೆ ನಡೆಯುತ್ತಿದೆ ಮತ್ತು ಗುಂಡಿನ ದಾಳಿಯ ಉದ್ದೇಶದ ಬಗ್ಗೆ ಯಾವುದೇ ಮಾಹಿತಿ ಇಲ್ಲ ಎಂದು ಅವರು ಹೇಳಿದರು. ಗಾಯಗೊಂಡ ಇಬ್ಬರು ಮಹಿಳೆಯರನ್ನು ಹೆಲಿಕಾಪ್ಟರ್‌ಗಳಲ್ಲಿ ಆಸ್ಪತ್ರೆಗೆ ಕರೆದೊಯ್ಯಲಾಗಿದೆ ಎಂದು ಡಾಟ್ಲಿಂಗ್ ಹೇಳಿದರು.




## ರಾಹುಲ್ ವಿರುದ್ಧ ಬಿಜೆಪಿ ಕಿಡಿ



**ಅಮೆರಿಕ:** ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಕೆಲವೇ ದಿನಗಳು ಬಾಕಿ ಇರುವ ಹೊತ್ತಿನಲ್ಲೇ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮೇಲೆ ಗುಂಡಿನ ದಾಳಿ ನಡೆಸಿ, ಹತ್ಯೆಗೆ ಯತ್ನಿಸಿದ ಪ್ರಕರಣವು ಜಗತ್ತಿನಾದ್ಯಂತ ಸುದ್ದಿಯಾಗಿದೆ. ಇದೀಗ ಇದೇ ವಿಚಾರವನ್ನಿಟ್ಟುಕೊಂಡು ಬಿಜೆಪಿ ವಿಪಕ್ಷ ನಾಯಕ ರಾಹುಲ್ ಗಾಂಧಿಯವರ ಹಳೆಯ ಹೇಳಿಕೆಯನ್ನು ಪ್ರಸ್ತಾಪಿಸಿ ವಾಗ್ದಾಳಿ ನಡೆಸಿದೆ. ಬಿಜೆಪಿ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವಿಯಾ ಅವರು ಎಕ್ಸ್‌ನಲ್ಲಿ ಪೋಸ್ಟ್‌ವೊಂದನ್ನು ಮಾಡಿದ್ದು, ಟ್ರಂಪ್ ಮೇಲಿನ ದಾಳಿಯನ್ನು ಖಂಡಿಸಿದ್ದಾರೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿಯವರ ಮೇಲಿನ ಹಿಂಸಾಚಾರಕ್ಕೆ ಪ್ರೋತ್ಸಾಹಿಸಿ ಈ ಹೊಂದೆ ರಾಹುಲ್ ಗಾಂದಿ ನೀಡಿದ್ದ ಹೇಳಿಕೆಯನ್ನೂ ಅವರು ಪ್ರಸ್ತಾಪಿಸಿದ್ದಾರೆ. 'ಸದಾ ಪ್ರಧಾನಿ ನರೇಂದ್ರ ಮೋದಿಯವರ ವಿರುದ್ಧದ ಹಿಂಸಾಚಾರವನ್ನು ಸಮರ್ಥಿಸಿಕೊಳ್ಳುವ ಮತ್ತು ಪ್ರೋತ್ಸಾಹಿಸುವ ರಾಹುಲ್ ಗಾಂಧಿ ಮೂರನೇ ಬಾರಿ ಸೋಲುಂಡಿದ್ದಾರೆ. ಪಂಜಾಬ್‌ನಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಪ್ರಧಾನಿ ನರೇಂದ್ರ ಮೋದಿಯವರನ್ನು ಫ್ಲೈ ಓವರ್ನ ಕೆಳಗೆ ಕೆಲಗಂಟೆಗಳ ಕಾಲ ತಡೆದ ಘಟನೆಯನ್ನು ಹೇಗೆ ಮರೆಯಲು ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

## ಕಾಶ್ಮೀರದಲ್ಲಿ ಮೊಹರಂ ಮೆರವಣಿಗೆಗೆ ಅನುಮತಿ ನೀಡಿದ ಆಡಳಿತ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಆಡಳಿತವು ಸತತ ಎರಡನೇ ವರ್ಷವೂ ಶ್ರೀನಗರ ನಗರದ ಸಾಂಪ್ರದಾಯಿಕ ಮಾರ್ಗದಿಂದ 8ನೇ ಮೊಹರಂ ಮೆರವಣಿಗೆಗೆ ನಿರ್ದಿಷ್ಟ ಪ್ರದೇಶಗಳಲ್ಲಿ ಅನುಮತಿ ನೀಡಿದೆ. ಆದಾಗ್ಯೂ, ಲಾಲ್ ಚೌಕ್‌ನ ಅಬಿ ಗುಜಾರ್‌ನಿಂದ ಝಡಿಬಲ್ ಡೌನ್‌ಟೌನ್‌ವರೆಗೆ ಮೆರವಣಿಗೆಗಳನ್ನು ನಿಷೇಧಿಸಲಾಗಿದೆ. ಮೆರವಣಿಗೆಯು ನಗರದ ಗುರುಬಜಾರ್ ಮೂಲಕ ಸಾಗುತ್ತದೆ, ಇದು ಕರಣ್ ನಗರ ಪ್ರದೇಶದಲ್ಲಿ ದಾಲ್ ಗೇಟ್ ವರೆಗೆ ಇದೆ. ಶೋಕಾಚರಣೆಯ ಸಮಯದಲ್ಲಿ ಹಲವಾರು ನಿರ್ದೇಶನಗಳನ್ನು ಅನುಸರಿಸಲು ಶೋಕವನ್ನು ಕೇಳಲಾಗಿದೆ. ನಗರದಲ್ಲಿ ಮುಹರಂ ಮೆರವಣಿಗೆಗಳನ್ನು 90 ರ ದಶಕದಲ್ಲಿ ನಿಷೇಧಿಸಲಾಯಿತು, ಆದರೆ ಗವರ್ನರ್ ಆಡಳಿತವು ಮೂರು ದಶಕಗಳ ನಂತರ 2023 ರಲ್ಲಿ ನಿಷೇಧವನ್ನು ತೆಗೆದುಹಾಕಿತು. ಆಡಳಿತದ ಈ ಕ್ರಮವನ್ನು ಕಾಶ್ಮೀರಿ ಶಿಯಾಗಳು ಶ್ಲಾಘಿಸಿದರು, ಆದರೆ ಅವರು ನಗರದ ಅಬಿ ಗುಜಾರ್‌ನಲ್ಲಿ ಜಾದಿಬಾಲ್‌ಗೆ ಮೆರವಣಿಗೆಗೆ ಅನುಮತಿ ನೀಡಬೇಕೆಂದು ಒತ್ತಾಯಿಸಿದರು. ಗುರು ಬಜಾರ್ ಅಥವಾ ಅಬಿ ಗುಜಾರ್‌ನಿಂದ ಮೆರವಣಿಗೆಗಳನ್ನು ಮಾಡಲು ಪ್ರಯತ್ನಿಸಿದಾಗ ಶೋಕತಪ್ತರು ನಿಷೇಧದ ಸಮಯದಲ್ಲಿ ಪೊಲೀಸರ ಕೋಪವನ್ನು ಎದುರಿಸಬೇಕಾಯಿತು. ಆದರೆ, ಕಳೆದ ವರ್ಷ, ಪೊಲೀಸರು ಮತ್ತು ನಾಗರಿಕ ಆಡಳಿತವು ಗುರುಬಜಾರ್‌ನಿಂದ ದಲ್ಗೇಟ್‌ವರೆಗೆ ಮೆರವಣಿಗೆಗೆ ಅನುಕೂಲ ಮಾಡಿಕೊಟ್ಟಿತು. ಜಿಲ್ಲಾ ಮ್ಯಾಜಿಸ್ಟ್ರೇಟ್‌ಶ್ರೀನಗರ ಡಾ.ಬಿಲಾಲ್ ಮೋಹಿ-ಉದ್-ದೀನ್ ಭಟ್ ಹೊರಡಿಸಿದ ಆದೇಶದ ಪ್ರಕಾರ, ಶಿಯಾ ಮುಖಂಡರ ಮನವಿಯ ಮೇರೆಗೆ ಸರ್ಕಾರವು 8ನೇ ಮೊಹರಂನಲ್ಲಿ ಮೆರವಣಿಗೆಗೆ ಅನುಮತಿ ನೀಡಲು ನಿರ್ಧರಿಸಿದೆ.

## ನಾಯಿಗಳ ರೇಪ್: ವಿಜ್ಞಾನಿಗೆ ಜೈಲು ಶಿಕ್ಷೆ!!



**ಬ್ರಿಟನ್:** ಸುಮಾರು 60ಕ್ಕೂ ಹೆಚ್ಚು ನಾಯಿಗಳ ಮೇಲೆ ಅತ್ಯಾಚಾರ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬ್ರಿಟನ್‌ನನ ಪ್ರಾಣಿಶಾಸ್ತ್ರಜ್ಞರೊಬ್ಬರಿಗೆ ಆಸ್ಟ್ರೇಲಿಯಾದ ನ್ಯಾಯಾಲಯವೊಂದು 249 ವರ್ಷಗಳ ಜೈಲು ಶಿಕ್ಷೆಯನ್ನು ವಿಧಿಸಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆಯಡಂ ಬ್ರಿಟ್ಟನ್ ಕಳೆದ ವರ್ಷ ತಪ್ಪೊಪ್ಪಿಕೊಂಡಿದ್ದ. ಇದೀಗ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬ್ರಿಟ್ಟನ್ನ ವಕೀಲ ಹೊಸ ಅರ್ಜಿಯನ್ನು ಸಲ್ಲಿಕೆ ಮಾಡಿದ್ದು, ಪ್ರಕರಣದ ವಿಚಾರಣೆಯನ್ನು ಆಗಸ್ಟ್‌ಗೆ ಮುಂದೂಡಲಾಗಿದೆ. ಬ್ರಿಟ್ಟನ್‌ನ ಮಾನಸಿಕ ಸ್ಥಿತಿಗೆ ಸಂಬಂಧಿಸಿದಂತೆ ಅರ್ಜಿ ಸಲ್ಲಿಕೆ ಮಾಡಿ ರುವ ಆತನ ವಕೀಲ, ಮನಶಾಸ್ತ್ರಜ್ಞರ ಬಳಿ ಬ್ರಿಟ್ಟನ್ 30 ಗಂಟೆಗಳ ಕಾಲ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾನೆ. ಅವನ ಮಾನಸಿಕ ಸ್ಥಿತಿ ಸರಿಯಿಲ್ಲ. ಹೀಗಾಗಿ ಮತ್ತೊಮ್ಮೆ ಶಿಕ್ಷೆಯ ಬಗ್ಗೆ ಚಿಂತನೆ ನಡೆಸಬೇಕು ಎಂದು ಅವರು ಕೋರಿದ್ದಾರೆ.

**ಏನಿದು ಪ್ರಕರಣ?:** ಸುಮಾರು 60ಕ್ಕೂ ಹೆಚ್ಚು ನಾಯಿಗಳಿಗೆ ಹಿಂಸೆ ಮಾಡಿರು ವುದಲ್ಲದೇ, ಅವುಗಳನ್ನು ಕೊಲೆ ಮಾಡಿದ್ದಾನೆ. ಅಲ್ಲದೇ ಕೊಲೆ ಮಾಡುತ್ತಿರು ವುದನ್ನು ವೀಡಿಯೋ ಮಾಡಿಟ್ಟುಕೊಂಡಿ ದ್ದಾನೆ ಎಂಬ ಆರೋಪಗಳನ್ನು ಬ್ರಿಟ್ಟನ್ ಮೇಲೆ ಹೊರಿಸಲಾಗಿದೆ.





# 46 ವರ್ಷಗಳ ಬಳಿಕ ತೆರೆದ ಪುರಿ ಜಗನ್ನಾಥ 'ರತ್ನಭಂಡಾರ'ದ ಬಾಗಿಲು

**ಭುವನೇಶ್ವರ:** 46 ವರ್ಷಗಳ ಬಳಿಕ ಪುರಿ ಜಗನ್ನಾಥ ದೇವಾಲಯದ ರತ್ನ ಭಂಡಾರದ ಬಾಗಿಲು ತೆರೆದಿದೆ. ಇಂದು ಮಧ್ಯಾಹ್ನ 1:28 ರತ್ನ ಭಂಡಾರ ತೆರೆಯಲಾಯಿತು ಎಂದು ಮುಖ್ಯಮಂತ್ರಿ ಕಚೇರಿ ತಿಳಿಸಿದೆ.

12ನೇ ಶತಮಾನದ ಪುರಿ ಜಗನ್ನಾಥ ದೇವಾಲಯದಲ್ಲಿರುವ ರತ್ನ ಭಂಡಾರವು ಆಭರಣಗಳು ಹಾಗೂ ಇತರೆ ಬೆಲೆಬಾಳುವ ವಸ್ತುಗಳನ್ನು ಒಳಗೊಂಡಿದೆ. ಮೊದಲು ಹೊರ ಖಜಾನೆ ತೆರೆಯಲಾಗಿದೆ. ನಂತರ ಒಳ ಖಜಾನೆ ತೆರೆಯಲಾಗುತ್ತದೆ. ಎಲ್ಲವನ್ನೂ ಸ್ಟ್ಯಾಂಡರ್ಡ್ ಆಪರೇಟಿಂಗ್ ಕಾರ್ಯವಿಧಾನದ ಪ್ರಕಾರ ನಡೆಸಲಾಗುತ್ತಿದೆ. ಉನ್ನತ ಮಟ್ಟದ ಸಮಿತಿ ಮತ್ತು ಅದರ ಸದಸ್ಯರು ಹೊರಬಂದ ನಂತರ ವಿವರಗಳನ್ನು ನೀಡುತ್ತಾರೆ ಎಂದು ಪುರಿ ಎಸ್‌ಪಿ ಪಿನಾಕ್ ಮಿಶ್ರಾ ತಿಳಿಸಿದ್ದಾರೆ. ಬೆಲೆಬಾಳುವ ವಸ್ತುಗಳನ್ನು ತಾತ್ಕಾಲಿಕ ಸ್ಟ್ರಾಂಗ್ ರೂಮ್‌ಗೆ ಸ್ಥಳಾಂತರಿಸಲು ವಿಶೇಷ ಪೆಟ್ಟಿಗೆಗಳನ್ನು ದೇವಸ್ಥಾನಕ್ಕೆ ತರಲಾಯಿತು.

ಒರಿಸ್ಸಾ ಹೈಕೋರ್ಟ್‌ನ ನ್ಯಾಯಮೂರ್ತಿ ಬಿಸ್ವನಾಥ್ ರಾತ್ ನೇತೃತ್ವದ ಉನ್ನತ ಮಟ್ಟದ ಸಮಿತಿಯು ಈ ಪ್ರಕ್ರಿಯೆಗೆ ಹಸಿರು ನಿಶಾನೆ ತೋರಿತು. ಸರ್ಕಾರದ ಅನುಮೋದನೆಯನ್ನು ಪಡೆದ ನಂತರ, ದಾಸ್ತಾನುಗಳಿಗೆ ಮಾರ್ಗದರ್ಶನ ನೀಡಲು ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳನ್ನು ಸ್ಥಾಪಿಸಲಾಯಿತು. ಜಗನ್ನಾಥ ದೇವಸ್ಥಾನದ ಆಡಳಿತವು ಅದರ ಮುಖ್ಯ ಆಡಳಿತಾಧಿಕಾರಿ ನೇತೃತ್ವದಲ್ಲಿ ಕಾರ್ಯಾಚರಣೆಯನ್ನು ನೋಡಿಕೊಳ್ಳುತ್ತಿದೆ. ಪುರಿ ಜಿಲ್ಲಾಡಳಿತದ ಬಳಿಯಿದ್ದ ನಕಲಿ ಕೀ ಬಳಸಿ ಖಜಾನೆ ತೆರೆಯಲಾಗಿದೆ. ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ, ವೈದ್ಯಕೀಯ ತಂಡ ಮತ್ತು ಉರಗ ತಜ್ಞರ ತಂಡದ ಸದಸ್ಯರು ಸಹ ಸ್ಟ್ಯಾಂಡ್‌ಬೈನಲ್ಲಿ ಇದ್ದರು.

# 4 ವರ್ಷಗಳಲ್ಲಿ 8 ಕೋಟಿ ಉದ್ಯೋಗ ಸೃಷ್ಟಿ ಲೆಕ್ಕಕೊಟ್ಟ ಮೋದಿ ವಿರುದ್ಧ ಖರ್ಗೆ ಕಿಡಿ!

**ನವದೆಹಲಿ:** ಕಳೆದ 4 ವರ್ಷಗಳಲ್ಲಿ ಸುಮಾರು 8 ಕೋಟಿ ಹೊಸ ಉದ್ಯೋಗಗಳನ್ನು ದೇಶದಲ್ಲಿ ಸೃಷ್ಟಿಸಲಾಗಿದೆ ಎಂಬ ಪ್ರಧಾನಿ ನರೇಂದ್ರ ಮೋದಿ ಹೇಳಿಕೆಯನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತೀವ್ರವಾಗಿ ಖಂಡಿಸಿದ್ದಾರೆ. ನಿರುದ್ಯೋಗದ ಬಗ್ಗೆ ನಕಲಿ ನಿರೂಣೆಗಳನ್ನು ಹರಡುತ್ತಾ ಸುಳ್ಳಿನ ಜಾಲವನ್ನೇ ಹೆಣೆಯುತ್ತಿದ್ದೀರಿ ಎಂದು ವಾಗ್ದಾಳಿ ನಡೆಸಿದ್ದಾರೆ. ಮುಂಬೈನಲ್ಲಿ ಪ್ರಧಾನಿ ಮೋದಿ 29,000 ಕೋಟಿ ರೂ. ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಕಾರ್ಯಕ್ರಮದಲ್ಲಿ ಆರ್‌ಬಿಐ ವರದಿ ಉಲ್ಲೇಖಿಸಿ ಮಾತನಾಡಿದ್ದರು. ಉದ್ಯೋಗ ಸೃಷ್ಟಿಯ ಕುರಿತು ಇತ್ತೀಚೆಗೆ ಭಾರತೀಯ ರಿಸರ್ವ್ ಬ್ಯಾಂಕ್ ವರದಿ ನೀಡಿದೆ. ಕಳೆದ 3-4 ವರ್ಷದಲ್ಲಿ ಸುಮಾರು 8 ಕೋಟಿ ಹೊಸ ಉದ್ಯೋಗಗಳನ್ನು (ಎಂಥಾ) ದೇಶದಲ್ಲಿ ಸೃಷ್ಟಿಸಲಾಗಿದೆ ಎಂದು ಹೇಳಿದ್ದರು. ಈ ಹೇಳಿಕೆಯನ್ನು ಖರ್ಗೆ ಖಂಡಿಸಿದ್ದಾರೆ. ಅಲ್ಲದೇ ಪ್ರಧಾನಿ ಮುಂದೆ ಮೂರು ಪ್ರಶ್ನೆಗಳನ್ನೂ ಇಟ್ಟಿದ್ದಾರೆ.

**ಮೋದಿ ಮುಂದಿಟ್ಟ ಮೂರು ಪ್ರಶ್ನೆ:** ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ಅವರು, ನರೇಂದ್ರ ಮೋದಿಜೀ



ನಮಗೆ ಮೂರು ಪ್ರಶ್ನೆಗಳಿವೆ. ರಾಷ್ಟ್ರೀಯ ನೇಮಕಾತಿ ಏಜೆನ್ಸಿಯ ಕಳೆದ 4 ವರ್ಷಗಳಿಂದ ಒಂದೇ ಒಂದು ಪರೀಕ್ಷೆಯನ್ನೂ ನಡೆಸಿಲ್ಲ, ಏಕೆ? ಎನ್‌ಆರ್‌ಎಗೆ 1,517.57 ಕೋಟಿ ರೂ. ಹಣ ನೀಡಿದ್ದರೂ ಕಳೆದ 4 ವರ್ಷಗಳಲ್ಲಿ ಕೇವಲ 58 ಕೋಟಿ ರೂ. ಮಾತ್ರ ಬಳಕೆಯಾಗಿದೆ ಏಕೆ? ಎನ್‌ಆರ್‌ಎ ಅನ್ನು ಸರ್ಕಾರಿ ಉದ್ಯೋಗಗಳಿಗೆ ನೇಮಕಾತಿ ನಡೆಸಲು ಒಂದು ಸಂಸ್ಥೆಯಾಗಿ ರಚಿಸಲಾಗಿದೆ. ಆದ್ರೆ ಸರ್ಕಾರ ಎಸ್ಸಿ, ಎಸ್ಟಿ, ಒಬಿಸಿ ಮತ್ತು ಇಡಬ್ಲ್ಯೂಎಸ್ (ಆರ್ಥಿಕ ದುರ್ಬಲ ವರ್ಗ) ಯುವಜನರ ಮೀಸಲಾತಿ ಹಕ್ಕನ್ನು ಕಸಿದುಕೊಳ್ಳಲು ಉದ್ದೇಶಪೂರ್ವಕವಾಗಿಯೇ ರಾಷ್ಟ್ರೀಯ ನೇಮಕಾತಿ ಏಜೆನ್ಸಿಯನ್ನು ನಿಷ್ಕ್ರಿಯಗೊಳಿಸಲಾಗಿದೆಯೇ? ಎಂದು ಮೂರು ಪ್ರಶ್ನೆಗಳನ್ನು ಮುಂದಿಟ್ಟಿದ್ದಾರೆ. ಸದ್ಯ ಈ ಬಗ್ಗೆ ಮೋದಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

**ಪ್ರಧಾನಿ ಮೋದಿ ಹೇಳಿದ್ದೇನು?:** ಉದ್ಯೋಗ ಸೃಷ್ಟಿಯ ಕುರಿತು ಇತ್ತೀಚೆಗೆ ಭಾರತೀಯ ರಿಸರ್ವ್ ಬ್ಯಾಂಕ್ ವರದಿ ನೀಡಿದೆ. ಕಳೆದ 3-4 ವರ್ಷದಲ್ಲಿ ಸುಮಾರು 8 ಕೋಟಿ ಹೊಸ ಉದ್ಯೋಗಗಳನ್ನು ದೇಶದಲ್ಲಿ ಸೃಷ್ಟಿಸಲಾಗಿದೆ. ಆರ್‌ಬಿಐ ನೀಡಿದ ಈ ಅಂಕಿ-ಅಂಶಗಳು ಸುಳ್ಳು ಸುದ್ದಿ ಹರಡುವವರು, ಅಜೆಂಡಾ ಬಿತ್ತುವವರನ್ನು ಸುಮ್ಮನಾಗಿಸಿವೆ. ಯಾರು ಹೂಡಿಕೆ, ಮೂಲ ಸೌಕರ್ಯ ಹಾಗೂ ದೇಶದ ಅಭಿವೃದ್ಧಿಯನ್ನು ವಿರೋಧಿಸುತ್ತಿದ್ದರೋ, ಅವರೆಲ್ಲರ ಬಣ್ಣ ಈಗ ಬಯಲಾಗಿದೆ. ಇಂತಹ ಪಿತೂರಿಗಳನ್ನು ದೇಶದ ಜನ ತಿರಸ್ಕರಿಸುತ್ತಿದ್ದಾರೆ ಎಂದು ಪ್ರತಿಪಕ್ಷಗಳಿಗೆ ಕುಟುಕಿದ್ದರು.

3ನೇ ಅವಧಿಯಲ್ಲಿ ನಮ್ಮ ಕೆಲಸವು ಇನ್ನಷ್ಟು ಕ್ಷಿಪ್ರವಾಗುತ್ತದೆ, ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗುತ್ತದೆ ಎಂಬುದಾಗಿ ಹೇಳಿದ್ದೆ. ಅದರಂತೆ ಈಗ ವೇಗವಾಗಿ ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲಾಗುತ್ತಿದೆ ಎಂದು ಶ್ಲಾಘಿಸಿದ್ದರು.

## ಎಕ್ಸ್‌ಫಾಲೋವರ್ಸ್: ಮೋದಿ ಭಾರತದಲ್ಲೇ ನಂಬರ್ ಒನ್!

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ 100 ಮಿಲಿಯನ್‌ಗಿಂತಲೂ ಹೆಚ್ಚು ಹಿಂಬಾಲಕರನ್ನು ಹೊಂದುವ ಮೂಲಕ ಭಾರತದಲ್ಲೇ ನಂಬರ್ ಒನ್ ಆಗಿದ್ದಾರೆ. ಎಕ್ಸ್‌ನಲ್ಲಿ ವಿವಿಧ ರಾಜಕಾರಣಿಗಳಿಗೆ ಹೋಲಿಸಿದರೆ ಪ್ರಧಾನಿ ಮೋದಿಗೆ ಹೆಚ್ಚು ಅನುಯಾಯಿಗಳ ಸಂಖ್ಯೆ ಅಧಿಕವಾಗಿದೆ. ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ 26.4 ಮಿಲಿಯನ್, ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ 27.5 ಮಿಲಿಯನ್, ಸಮಾಜವಾದಿ ಪಕ್ಷದ ಅಖಿಲೇಶ್ ಯಾದವ್ 19.9 ಮಿಲಿಯನ್ ಮತ್ತು ಪಶ್ಚಿಮ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ 7.4 ಮಿಲಿಯನ್ ಅನುಯಾಯಿಗಳನ್ನು ಹೊಂದಿದ್ದಾರೆ. ರಾಷ್ಟ್ರೀಯ ಜನತಾ ದಳದ ಮುಖ್ಯಸ್ಥ ಲಾಲು ಪ್ರಸಾದ್ ಯಾದವ್ 6.3 ಮಿಲಿಯನ್, ಅವರ ಪುತ್ರ, ತೇಜಸ್ವಿ ಯಾದವ್ 5.2 ಮಿಲಿಯನ್ ಅನುಯಾಯಿಗಳನ್ನು ಹೊಂದಿದ್ದರೆ, ಎನ್ಸಿಪಿ ಮುಖ್ಯಸ್ಥ ಶರದ್ ಪವಾರ್ 2.9 ಮಿಲಿಯನ್ ಹಿಂಬಾಲಕರನ್ನು ಹೊಂದಿದ್ದಾರೆ. ಪ್ರಸ್ತುತ 38.1 ಮಿಲಿಯನ್ ಹಿಂಬಾಲಕರನ್ನು ಹೊಂದಿರುವ ಯುಎಸ್ ಅಧ್ಯಕ್ಷ ಜೋ ಬೈಡನ್, ದುಬೈನ ಶೇಖ್ ಮೊಹಮ್ಮದ್ (11.2 ಮಿಲಿಯನ್) ಮತ್ತು ಪೋಪ್ ಫ್ರಾನ್ಸಿಸ್ (18.5 ಮಿಲಿಯನ್) ಸೇರಿದಂತೆ ಇತರ ವಿಶ್ವ ನಾಯಕರಿಗಿಂತ ಮೋದಿ ಬಹಳ ಮುಂದಿದ್ದಾರೆ.

# ಗೀತಂ ವಿಶ್ವವಿದ್ಯಾಲಯವು 15 ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ 1218 ಪದವೀಧರರ ಗೌರವ

**ಬೆಂಗಳೂರು:** ಗೀತಂ ಡೀಮ್ಡ್-ಟು-ಬಿ-ಯೂನಿವರ್ಸಿಟಿ ತನ್ನ 15 ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದೊಂದಿಗೆ ತನ್ನ ಶೈಕ್ಷಣಿಕ ಕ್ಯಾಲೆಂಡರ್‌ನಲ್ಲಿ ಒಂದು ಮೈಲಿಗಲ್ಲನ್ನು ದಾಖಲಿಸಿದೆ. ಈ ಕಾರ್ಯಕ್ರಮವು ಗೀತಂ ನಿಂದ ಪದವಿ ಪಡೆದ 1218 ವಿದ್ಯಾರ್ಥಿಗಳ ಸಾಧನೆಗಳನ್ನು ಆಚರಿಸಿತು.

ಈ ಸಂದರ್ಭದಲ್ಲಿ ವಂದೇ ಭಾರತ್ ಎಕ್ಸ್‌ಪ್ರೆಸ್‌ನ ರೂವಾರಿ ಇಂಜಿನಿಯರ್ ಶ್ರೀ ಸುಧಾಂಶು ಮಣಿ, ಗೀತಮ್ (ಡೀಮ್ಡ್ ಟು ಬಿ) ವಿಶ್ವವಿದ್ಯಾಲಯದ ಅಧ್ಯಕ್ಷ ಶ್ರೀ ಎಂ ಶ್ರೀಭರತ್ ಮತ್ತು ಗೀತಮ್ (ಡೀಮ್ಡ್ ಟು ಬಿ) ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ.ದಯಾನಂದ ಸಿದ್ದವಟ್ಟಂ ಉಪಸ್ಥಿತರಿದ್ದರು.ತಂತ್ರಜ್ಞಾನ, ವಿಜ್ಞಾನ ಮತ್ತು ನಿರ್ವಹಣೆ ಸೇರಿದಂತೆ ವಿವಿಧ ಕ್ಷೇತ್ರಗಳಿಂದ ಅವರ ಅಸಾಧಾರಣ ಶೈಕ್ಷಣಿಕ ಸಾಧನೆಗಳು ಮತ್ತು ಕೊಡುಗೆಗಳನ್ನು ಗುರುತಿಸಿ ಅತ್ಯುತ್ತಮ ವಿದ್ಯಾರ್ಥಿಗಳಿಗೆ ಚಿನ್ನದ ಪದಕಗಳನ್ನು ನೀಡಲಾಯಿತು. ಅಲ್ಲದೆ ಹೆಸರಾಂತ ನೃತ್ಯಗಾರ್ತಿ ಮತ್ತು ಪದ್ಮಶ್ರೀ ಪುರಸ್ಕೃತರಾದ




ಶ್ರೀಮತಿ ಲೀಲಾ ಸ್ಯಾಮ್ಸನ್ ಮತ್ತು ಜಲ ಸಂರಕ್ಷಣೆಗೆ ಹೆಸರುವಾಸಿ ಆಗಿರುವ ತಜ್ಞ ಭಾರತದ ಲೇಕ್ಮ್ಯಾನ್ ಎಂದೇ ಪರಿಚಿತರಾಗಿರುವ ಶ್ರೀ ಆನಂದ್ ಮಲ್ಲಿಗವಾಡ್ ಅವರಿಗೆ ಗೌರವ ಡಾಕ್ಟರೇಟ್ ಪದವಿಗಳನ್ನು ಪ್ರಧಾನ ಮಾಡಲಾಯಿತು.ಈ ಸಮಾರಂಭದಲ್ಲಿ ಮಾತನಾಡಿದ ಗೀತಂ ವಿಶ್ವವಿದ್ಯಾಲಯದ ಅಧ್ಯಕ್ಷ ಶ್ರೀ ಎಂ. ಶ್ರೀಭರತ್ ಅವರು ವಿದ್ಯಾರ್ಥಿ-ಕೇಂದ್ರಿತ ವಿಧಾನದ ಪ್ರಾಮುಖ್ಯತೆಯನ್ನು ಒತ್ತಿ ಹೇಳೀದರಲ್ಲದೆ ಗೀತಂ ನಲ್ಲಿ,ನಾವು 360-ಡಿಗ್ರಿ ಕಲಿಕೆಯ ಅನುಭವವನ್ನು ಒದಗಿಸಲು ಬದ್ಧರಾಗಿದ್ದೇವೆ. ವಿದ್ಯಾರ್ಥಿಗಳು ತಮ್ಮ ಉತ್ತಮವಾದ ಕಲಿಕಾ ಜೀವನಕ್ಕೆ ಸೂಕ್ತವಾದ ವಾತಾವರಣವನ್ನು ಸೃಷ್ಟಿಸುವುದು ನಮ್ಮ ಉದ್ದೇಶವಾಗಿದೆ. ಸಂಶೋಧನೆ ಮಾಡಿ, ಜಗತ್ತಿನಲ್ಲಿ ಬದಲಾವಣೆಯನ್ನು ತರಲು ಸಿದ್ಧವಾಗಿರುವ ಸಹಾನುಭೂತಿಯುಳ್ಳ, ನುರಿತ ವೃತ್ತಿಪರರಾಗಿ ಹೊರಹೊಮ್ಮಲು ನಾನು ಪ್ರತಿಯೊಬ್ಬ ವಿದ್ಯಾರ್ಥಿಯು ಲಭ್ಯವಿರುವ ಎಲ್ಲಾ ಅವಕಾಶಗಳನ್ನು ಯಶಸ್ವಿಯಾಗಿ ಬಳಸಿಕೊಳ್ಳಲು ಪ್ರೋತ್ಸಾಹಿಸುತ್ತೇನೆ, ಯಥಾಸ್ಥಿತಿಗೆ ಸವಾಲು ಹಾಕಿ ನಮ್ಮಲ್ಲಿ ಸಕಾರಾತ್ಮಕ ಬದಲಾವಣೆಯನ್ನು ಉಂಟುಮಾಡುವ ನಾವೀನ್ಯಕಾರರು ಮತ್ತು ನಾಯಕರಾಗಲು ಪ್ರಯತ್ನಿಸಬೇಕೆಂದು ಕರೆ ನೀಡಿದರು. ಎಂಜಿನಿಯರ್ ಶ್ರೀ ಸುಧಾಂಶು ಮಣಿ ಅವರು ಮಾತನಾಡಿ ಸಾಂಪ್ರದಾಯಿಕ ಶಿಕ್ಷಣವನ್ನು ಮೀರಿ ಕಲಿಯಬೇಕಾದ ಪ್ರಾಮುಖ್ಯತೆಯನ್ನು ಒತ್ತಿಹೇಳಿದರು, -ಸಾಂಸ್ಕೃತಿಕ ಸಾಮರ್ಥ್ಯದಿಂದ ಆಧುನಿಕ ಕೌಶಲ್ಯಗಳು ಅತ್ಯುನ್ನತವಾಗಿರುವ ಯುಗದಲ್ಲಿ, ಭವಿಷ್ಯವು ಈ ಕ್ಷೇತ್ರಗಳಲ್ಲಿ ಪ್ರವೀಣತೆ ಹೊಂದಿರುವ ಉದ್ಯೋಗಿಗಳನ್ನು ಬಯಸುತ್ತದೆ. ಶಿಕ್ಷಣ ಸಂಸ್ಥೆಗಳು ಇವರ ಸಾಮರ್ಥ್ಯವನ್ನು ಬೆಳೆಸಲು ಆದ್ಯತೆ ನೀಡಬೇಕು. ಹೆಚ್ಚುತ್ತಿರುವ ಅಂತರ್ಸಂಪರ್ಕಿತ ಜಗತ್ತಿನಲ್ಲಿ ವಿದ್ಯಾರ್ಥಿಗಳು ಯಶಸ್ವಿಯಾಗಲು ಕೇವಲ ಜ್ಞಾನವನ್ನು ಪಡೆದುಕೊಳ್ಳುವುದರ ಬಗ್ಗೆ ಅಲ್ಲ ಆದರೆ ಈ ಹಿನ್ನೆಲೆಯಲ್ಲಿ ನಾವೀನ್ಯತೆ ಮತ್ತು ಉದ್ಯಮಶೀಲತೆಯನ್ನು ಬೆಳೆಸುವಲ್ಲಿ ಗೀತಂ ನ ಬದ್ಧತೆ ಶ್ಲಾಘನೀಯವಾಗಿದೆ ಎಂದು ಅವರು ಹೇಳಿದರು.

# ಟ್ರಂಪ್ ಹತ್ಯಾ ಯತ್ನಕ್ಕೆ ವ್ಯಾಪಕ ಖಂಡನೆ



**ವಾಷಿಂಗ್ಟನ್:** ಪೆನ್ಸಿಲ್ವೇನಿಯಾದ ಬಟ್ಲರ್‌ನಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡುತ್ತಿದ್ದ ಅಮೆರಿಕ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹತ್ಯೆಗೆ ನಡೆದ ಪ್ರಯತ್ನವನ್ನು ಮಾಜಿ ಅಧ್ಯಕ್ಷ ಬರಾಕ್ ಒಬಾಮ, ಅಧ್ಯಕ್ಷ ಜೋ ಬೈಡನ್, ಉದ್ಯಮಿಗಳಾದ ಜೆಫ್ ಬೆಝೋಸ್, ಬಿಲ್ ಆಕ್ಮನ್, ಎಲಾನ್ ಮಸ್ಕ್ ಸಹಿತ ಪ್ರಮುಖರು ಖಂಡಿಸಿದ್ದಾರೆ.

'ನಮ್ಮ ಪ್ರಜಾಪ್ರಭುತ್ವದಲ್ಲಿ ರಾಜಕೀಯ ಹಿಂಸಾಚಾರಕ್ಕೆ ಖಂಡಿತಾ ಜಾಗವಿಲ್ಲ. ಏನಾಯಿತು ಎಂದು ನಮಗೆ ಇನ್ನೂ ನಿಖರವಾಗಿ ತಿಳಿದಿಲ್ಲವಾದರೂ ಮಾಜಿ ಅಧ್ಯಕ್ಷ ಟ್ರಂಪ್ ಗಂಭೀರ ಗಾಯಗೊಂಡಿಲ್ಲ ಎಂದು ನಾವು ನಿರಾಳರಾಗಬೇಕು' ಎಂದು ಒಬಾಮಾ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

'ಹೆಜ್ಫಂಡ್' ಸ್ಥಾಪಕ ಬಿಲ್ ಆಕ್ಮನ್, ಟೆಸ್ಲಾ ಮಾಲಕ ಎಲಾನ್ ಮಸ್ಕ್, ಗೂಗಲ್ ಸಿಇಒ ಸುಂದರ್ ಪಿಚೈ, 'ಓಪನ್ ಎಐ' ಸಿಇಒ ಸ್ಯಾಮ್ ಆಲ್ಟ್‌ಮನ್, ಅಮೆರಿಕನ್ ಉದ್ಯಮಿ ವಿವೇಕ್ ರಾಮಸ್ವಾಮಿ ಮುಂತಾದವರು ದಾಳಿಯನ್ನು ಖಂಡಿಸಿದ್ದು ಟ್ರಂಪ್‌ಅನ್ನು ಬೆಂಬಲಿಸುವುದಾಗಿ ಘೋಷಿಸಿದ್ದಾರೆ.

## ನಾನು ಮತ್ತು ಟ್ರಂಪ್ ಶತ್ರುಗಳಲ್ಲ – ಬೈಡನ್

**ಯುಎಸ್:** ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲಿನ ಗುಂಡಿನ ದಾಳಿ ನಂತರ ಯುಎಸ್‌ನ ರಾಜಕೀಯ ಹಿಂಸಾಚಾರದ ಅಪಾಯಗಳ ಬಗ್ಗೆ ಅಧ್ಯಕ್ಷ ಜೋ ಬೈಡನ್ ಎಚ್ಚರಿಕೆ ನೀಡಿದ್ದಾರೆ. ಜೊತೆಗೆ ನಾವಿಬ್ಬರೂ ಸೈದ್ಧಾಂತಿವಾಗಿ ಭಿನ್ನಾಭಿಪ್ರಾಯ ಹೊಂದಿರುವವರಷ್ಟೇ, ಶತ್ರುಗಳಲ್ಲ ಎಂದು ಜೋ ಬೈಡನ್ ಟ್ರಂಪ್ ಬಗ್ಗೆ ಹೇಳಿದ್ದಾರೆ.

ರಾಷ್ಟ್ರೀಯ ಭಾಷಣದಲ್ಲಿ ಜೋ ಬೈಡನ್ ಮಾತನಾಡಿ, ನಾವು ಎಂದಿಗೂ ಹಿಂಸಾಚಾರಕ್ಕೆ ಇಳಿಯಬಾರದು. ಅಮೆರಿಕದಲ್ಲಿ ಈ ರೀತಿಯ ಹಿಂಸಾಚಾರಕ್ಕೆ ಜಾಗವಿಲ್ಲ. ಈ ಹಿಂಸಾಚಾರವನ್ನು ಸಾಮಾನ್ಯೀಕರಿಸಲು ನಾವು ಅನುಮತಿಸುವುದಿಲ್ಲ ಎಂದು ಹೇಳಿದರು.

ಜನವರಿ 6 ರಂದು ಹಿಂಸಾತ್ಮಕ ಗುಂಪಿನಿಂದ ಕ್ಯಾಪಿಟಲ್ ಮೇಲೆ ದಾಳಿ, ಸದನದ ಮಾಜಿ ಸ್ಪೀಕರ್ ನ್ಯಾನ್ಸಿ ಪೆಲೋಸಿಯ ಸಂಗಾತಿಯ ಮೇಲೆ ದಾಳಿ, ಚುನಾವಣಾ ಅಧಿಕಾರಿಗಳ ಮೇಲೆ ಬೆದರಿಕೆ, ಹಾಲಿ ಗವರ್ನರ್ ವಿರುದ್ಧ ಅಪಹರಣದ ಸಂಚು ಹಾಗೂ ಈಗ ಡೊನಾಲ್ಡ್ ಟ್ರಂಪ್ ಹತ್ಯೆಗೆ ಯತ್ನ ಈ ರೀತಿಯ ಹಿಂಸಾಚಾರಕ್ಕೆ ಅಮೆರಿಕದಲ್ಲಿ ಯಾವುದೇ ವಿನಾಯಿತಿ ಇಲ್ಲ ಎಂದು ಬೈಡನ್ ತಿಳಿಸಿದರು.

# ಟ್ರಂಪ್ ಮೇಲಿನ ದಾಳಿಯ ಜವಾಬ್ದಾರಿ ವಹಿಸಿಕೊಂಡ NRF!

**ನವದೆಹಲಿ:** ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲೆ ಪೆನ್ಸಿಲ್ವೇನಿಯಾದಲ್ಲಿ ದಾಳಿ ನಡೆದಿದೆ. ರಿಪಬ್ಲಿಕನ್ ಪಕ್ಷದ ನಾಯಕ ಮತ್ತು ಅಧ್ಯಕ್ಷೀಯ ಅಭ್ಯರ್ಥಿ ಟ್ರಂಪ್ ಹತ್ಯೆಯ ಉದ್ದೇಶದಿಂದ ನಡೆದ ಈ ದಾಳಿಯಲ್ಲಿ ಗಾಯಗೊಂಡಿದ್ದರು.

ಚಿತ್ರಗಳು ಮತ್ತು ವೀಡಿಯೊಗಳಲ್ಲಿ, ಅವರ ಕಿವಿಯಿಂದ ರಕ್ತಸ್ರಾವವಾಗುತ್ತಿರುವುದನ್ನು ಕಾಣಬಹುದು.

ವಿಶ್ವದ ಅತ್ಯಂತ ಶಕ್ತಿಶಾಲಿ ದೇಶವಾದ ಅಮೆರಿಕದ ಪ್ರಭಾವಿ ನಾಯಕರಲ್ಲಿ ಒಬ್ಬರಾದ ಟ್ರಂಪ್ ಅವರನ್ನು ಹತ್ಯೆ ಮಾಡುವ ಪ್ರಯತ್ನವು ಜಗತ್ತನ್ನು ಬೆಚ್ಚಿಬೀಳಿಸಿದೆ. ಈಗ ಅಫ್ಘಾನಿಸ್ತಾನದ ಭಯೋತ್ಪಾದಕ ಸಂಘಟನೆ ಈ ದಾಳಿಯ ಜವಾಬ್ದಾರಿಯನ್ನು ವಹಿಸಿಕೊಂಡಿದೆ. ತನ್ನನ್ನು ಅಫ್ಘಾನ್ ಭಯೋತ್ಪಾದಕ ಸಂಘಟನೆ ಎನ್‌ಆರ್‌ಎಫ್ (ನ್ಯಾಷನಲ್ ರೆಸಿಸ್ಟೆನ್ಸ್ ಫೋರ್ಸ್) ಕಮಾಂಡರ್ ಎಂದು ವಿವರಿಸುವ ವ್ಯಕ್ತಿ ವೀಡಿಯೊವನ್ನು ಬಿಡುಗಡೆ ಮಾಡಿದ್ದಾನೆ ಮತ್ತು ಟ್ರಂಪ್ ಮೇಲಿನ ದಾಳಿಯ ಜವಾಬ್ದಾರಿಯನ್ನು ವಹಿಸಿಕೊಂಡಿದ್ದಾನೆ.

ಅಫ್ಘಾನಿಸ್ತಾನದಲ್ಲಿ ಸಕ್ರಿಯವಾಗಿರುವ ಭಯೋತ್ಪಾದಕ ಸಂಘಟನೆ ಎನ್‌ಆರ್‌ಎಫ್ ಡೊನಾಲ್ಡ್ ಟ್ರಂಪ್ ಮೇಲಿನ ದಾಳಿಯ ಜವಾಬ್ದಾರಿಯನ್ನು ವಹಿಸಿಕೊಂಡಿದೆ. ಇದರ ವೀಡಿಯೊವನ್ನು ಎನ್‌ಆರ್‌ಎಫ್ ಬಿಡುಗಡೆ ಮಾಡಿದ್ದು, ಇದು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಅದರಲ್ಲಿ, ತನ್ನನ್ನು ಎನ್‌ಆರ್‌ಎಫ್‌ನ ಕಮಾಂಡರ್ ಎಂದು ವಿವರಿಸುವ ವ್ಯಕ್ತಿಯೊಬ್ಬರು ಟ್ರಂಪ್ ಮೇಲಿನ ದಾಳಿಯ ಜವಾಬ್ದಾರಿಯನ್ನು ತೆಗೆದುಕೊಳ್ಳುವ ಬಗ್ಗೆ ಮಾತನಾಡುತ್ತಿದ್ದಾರೆ. ಇನ್ನೊಬ್ಬ ಮುಖವಾಡ ಧರಿಸಿದ ವ್ಯಕ್ತಿ ಅವನೊಂದಿಗೆ ಕುಳಿತಿರುವುದನ್ನು ವೀಡಿಯೊದಲ್ಲಿ ಕಾಣಬಹುದು.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ತಮಿಳು ನಟ ಧನುಷ್‌ಗೆ ಹಾಟ್ ಬೆಡಗಿ ತೃಪ್ತಿ ದಿಮ್ರಿ ನಾಯಕಿ



ಬಾಲಿವುಡ್‌ನ ಹಾಟ್ ಬೆಡಗಿ ತೃಪ್ತಿ ದಿಮ್ರಿ ಈಗ ಹೊಸ ಚಿತ್ರವೊಂದಕ್ಕೆ ಆಯ್ಕೆಯಾಗಿದ್ದಾರೆ. ತಮಿಳು ನಟ ಧನುಷ್ ನಟಿಸಲಿರುವ ಬಾಲಿವುಡ್ ಚಿತ್ರದಲ್ಲಿ 'ಅನಿಮಲ್' ಸುಂದರಿ ತೃಪ್ತಿ ಹೀರೋಯಿನ್ ಆಗಿದ್ದಾರೆ.

'ಅನಿಮಲ್' ಸಿನಿಮಾದಲ್ಲಿ ರಣ್‌ಬೀರ್ ಕಪೂರ್ ಜೊತೆ ತೃಪ್ತಿ ದಿಮ್ರಿ ಹಸಿ ಬಿಸಿ ದೃಶ್ಯಗಳಲ್ಲಿ ನಟಿಸಿದ್ದರು. ಈ ಸಿನಿಮಾದ ಸಕ್ಸಸ್ ನಂತರ ಸೌತ್ ಮತ್ತು ಬಾಲಿವುಡ್ ನಲ್ಲಿ ನಟಿಗೆ ಬೇಡಿಕೆ ಹೆಚ್ಚಾಗಿದೆ. ಈಗ ಮತ್ತೊಂದು ಬಂಪರ್ ಆಫರ್ ಅನ್ನು ನಟಿ ಗಿಟ್ಟಿಸಿಕೊಂಡಿದ್ದಾರೆ. ಆನಂದ್ ಎಲ್ ರೈ ನಿರ್ದೇಶನದ ಹೊಸ ಚಿತ್ರದಲ್ಲಿ ತಮಿಳು ನಟ ಧನುಷ್‌ಗೆ ತೃಪ್ತಿ ನಾಯಕಿಯಾಗ್ತಿದ್ದಾರೆ. ಇದೊಂದು ದುರಂತ ಪ್ರೇಮ ಕಥೆಯಾಗಿದ್ದು, ತೃಪ್ತಿ ಪಾತ್ರಕ್ಕೆ ಪ್ರಾಮುಖ್ಯತೆ ಇದೆ. ಎಂದೂ ನಟಿಸಿರದ ವಿಭಿನ್ನ ಪಾತ್ರಕ್ಕೆ ನಟಿ ಜೀವ ತುಂಬಲಿದ್ದಾರೆ.

ಇನ್ನೂ 'ಪುಷ್ಪ 2' ಸಿನಿಮಾದಲ್ಲಿ ಅಲ್ಲು ಅರ್ಜುನ್ ಜೊತೆ ತೃಪ್ತಿ ಸ್ಪೆಷಲ್ ಹಾಡಿಗೆ ಹೆಜ್ಜೆ ಹಾಕಿದ್ದಾರೆ. ಕಾರ್ತಿಕ್ ಆರ್ಯನ್ ಜೊತೆಗಿನ ಹೊಸ ಸಿನಿಮಾ ಸೇರಿದಂತೆ ಹಲವು ಪ್ರಾಜೆಕ್ಟ್‌ಗಳು ನಟಿಯ ಕೈಯಲ್ಲಿವೆ.

# ಶ್ರೀಲೀಲಾ ನಟಿಸಲಿರುವ ಬಾಲಿವುಡ್ ಸಿನಿಮಾ ಏನಾಯ್ತು?



ಕನ್ನಡತಿ ಶ್ರೀಲೀಲಾ ಇದೀಗ ಬಾಲಿವುಡ್ ಅಂಗಳಕ್ಕೆ ಲಗ್ಗೆ ಇಟ್ಟಿದ್ದಾರೆ. ತೆಲುಗು ಸಿನಿಮಾಗಳ ಜೊತೆ ಬಾಲಿವುಡ್ನಲ್ಲಿಯೂ ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ವರುಣ್ ಧವನ್ ಜೊತೆ ನಟಿ ಸಿನಿಮಾ ಮಾಡ್ತಾರೆ ಎಂದು ಸುದ್ದಿ ವೈರಲ್ ಆಗಿತ್ತು. ಬಳಿಕ ಏನಾಯ್ತು ಎಂದು ಮಾಹಿತಿ ಸಿಕ್ಕಿರಲಿಲ್ಲ. ಇದೀಗ ನಟಿಯ ಚೊಚ್ಚಲ ಹಿಂದಿ ಸಿನಿಮಾ ಬಗ್ಗೆ ಮಾಹಿತಿ ಸಿಕ್ಕಿದೆ.

ಹೊಸ ಸಿನಿಮಾದಲ್ಲಿ ವರುಣ್ ಧವನ್, ಮೃಣಾಲ್ ಠಾಕೂರ್ ಜೊತೆ ಶ್ರೀಲೀಲಾ ಕೂಡ ಲೀಡ್ ರೋಲ್ನಲ್ಲಿ ಕಾಣಿಸಿಕೊಳ್ತಿದ್ದಾರೆ. ಇದೇ ಜುಲೈ ಅಂತ್ಯದಿಂದ ಸಿನಿಮಾ ಶೂಟಿಂಗ್ ಶುರುವಾಗಲಿದೆ.

ಡೇವಿಡ್ ಧವನ್ ನಿರ್ಮಾಣದಲ್ಲಿನ ಈ ಸಿನಿಮಾಗೆ ಕ್ರೇಜಿ ಆಗಿರುವ ಟೈಟಲ್ ಇಡಲಾಗಿದೆ. 'ಹೈ ಜವಾನಿ ತೋ ಇಷ್ಕ್ ಹೋನಾ ಹೈ' ಎಂದು ಶೀರ್ಷಿಕೆ ಇಡಲಾಗಿದೆ. ಶ್ರೀಲೀಲಾ ಮೊದಲ ಬಾರಿಗೆ ಬಾಲಿವುಡ್ ಸಿನಿಮಾದಲ್ಲಿ ನಟಿಸುತ್ತಿರುವ ಕಾರಣ, ಅವರಿಗೆ ಈ ಚಿತ್ರ ಸ್ಪೆಷಲ್ ಪ್ರಾಜೆಕ್ಟ್ ಆಗಿದೆ.

ವರುಣ್ ಧವನ್ಗೆ ಜೋಡಿಯಾಗಿ ಶ್ರೀಲೀಲಾ, ಮೃಣಾಲ್ ಠಾಕೂರ್ ನಟಿಸುತ್ತಿರುವ ಕಾರಣ ಸಿನಿಮಾ ಬಗ್ಗೆ ಫ್ಯಾನ್ಸ್ಗೆ ಭಾರೀ ನಿರೀಕ್ಷೆಯಿದೆ.ಹಾಟ್ ಹುಡುಗಿಯರ ಜೊತೆ ವರುಣ್ ರೊಮ್ಯಾನ್ಸ್ ನೋಡಲು ಫ್ಯಾನ್ಸ್ ಕಾಯ್ತಿದ್ದಾರೆ. ಅಂದಹಾಗೆ, ನಿತಿನ್ ಜೊತೆ ರಾಬಿನ್ಹುಡ್, ಪವನ್ ಕಲ್ಯಾಣ್ ಜೊತೆಗಿನ ಸಿನಿಮಾ ಸೇರಿದಂತೆ ಹಲವು ಪ್ರಾಜೆಕ್ಟ್‌ಗಳಲ್ಲಿ ಶ್ರೀಲೀಲಾ ಬ್ಯುಸಿಯಾಗಿದ್ದಾರೆ.



# ಕಿರುತೆರೆಗೆ ಎಂಟ್ರಿ ಕೊಟ್ಟ ಮಳೆ ಹುಡುಗಿ ಪೂಜಾ ಗಾಂಧಿ

'ಮುಂಗಾರು ಮಳೆ' ನಟಿ ಪೂಜಾ ಗಾಂಧಿ ಅಭಿಮಾನಿಗಳಿಗೆ ಸಿಹಿಸುದ್ದಿ ಕೊಟ್ಟಿದ್ದಾರೆ. ಮತ್ತೆ ನಟನೆಗೆ ಮರಳಿದ್ದಾರೆ. 'ನಿನಗಾಗಿ' ಎನ್ನುತ್ತಾ ಪೂಜಾ ಗಾಂಧಿ ಟಿವಿ ಪರದೆಗೆ ಎಂಟ್ರಿ ಕೊಟ್ಟಿದ್ದಾರೆ.

ಸಿನಿಮಾ ನಟಿಯ ಕಥೆ ಹೊಂದಿರುವ 'ನಿನಗಾಗಿ' ಸೀರಿಯಲ್‌ನಲ್ಲಿ ಸೂಪರ್ ಸ್ಟಾರ್ ರಚನಾ ಎಂಬ ಪಾತ್ರದಲ್ಲಿ 'ಬಿಗ್ ಬಾಸ್' ಖ್ಯಾತಿಯ ದಿವ್ಯಾ ಉರುಡುಗ ನಟಿಸುತ್ತಿದ್ದಾರೆ. ಈ ಧಾರಾವಾಹಿಯಲ್ಲಿ ಕಿಶನ್ ಬಿಳಗಲಿ ಕೂಡ ನಟಿಸುತ್ತಿದ್ದಾರೆ. ಸಾಕಷ್ಟು ತಿರುವು ಪಡೆದು ಮುನ್ನುಗ್ಗುತ್ತಿರುವ ಈ ಸೀರಿಯಲ್‌ಗೆ ಪೂಜಾ ಗಾಂಧಿ ವಿಶೇಷ ಪಾತ್ರವೊಂದಕ್ಕೆ ಜೀವ ತುಂಬಿದ್ದಾರೆ.



ಸದ್ಯ ಪೂಜಾ ಗಾಂಧಿ ಜೊತೆಗಿನ ಸುಂದರ ಫೋಟೋಗಳನ್ನು ದಿವ್ಯಾ ಉರುಡುಗ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. 'ಮುದ್ದು ಕನ್ನಡತಿ' ಎಂದು ದಿವ್ಯಾ ಕ್ಯಾಪ್ಷನ್ ನೀಡಿದ್ದಾರೆ. ಈ ಸೀರಿಯಲ್ ನಲ್ಲಿ ನಟಿಸುತ್ತಿರುವ ಸಹಕಲಾವಿದರು ಕೂಡ ಫೋಟೋಗೆ ಪೋಸ್ ಕೊಟ್ಟಿದ್ದಾರೆ. ಈ ಪೋಸ್ಟ್ ನೋಡಿ ಬಳಿಕ ಎಪಿಸೋಡ್ ನೋಡಲು ಕಾತರದಿಂದ ಕಾಯ್ತಿದ್ದಾರೆ ಅಭಿಮಾನಿಗಳು.

ಅಂದಹಾಗೆ, ಮುಂಗಾರು ಮಳೆ, ಮಿಲನಾ, ಕೃಷ್ಣ, ಅನು, ತಾಜ್‌ಮಹಲ್ ಸೇರಿದಂತೆ ಹಲವು ಸಿನಿಮಾಗಳಲ್ಲಿ ಪೂಜಾ ಗಾಂಧಿ ನಟಿಸಿದ್ದಾರೆ. 'ಬಿಗ್ ಬಾಸ್ ಸೀಸನ್ 3'ರಲ್ಲಿ ಪೂಜಾ ಸ್ಪರ್ಧಿಯಾಗಿ ಕಾಣಿಸಿಕೊಂಡಿದ್ದರು.

ಆಂಗ್ಲರ ಕನಸು ನುಚ್ಚುನೂರು

# ಸ್ಪೇನ್ ಯುರೋ ಕಪ್ ಚಾಂಪಿಯನ್ಸ್

ಯುರೋ ಕಪ್ ಫುಟ್‌ಬಾಲ್ ಫೈನಲ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡವನ್ನು ಮಣಿಸಿ ಸ್ಪೇನ್ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಬರ್ಲಿನ್‌ನ ಒಲಿಂಪಿಯಾ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯವು ರಣರೋಚಕ ಹೋರಾಟಕ್ಕೆ ಸಾಕ್ಷಿಯಾಗಿತ್ತು. ಪಂದ್ಯದ ಆರಂಭದಲ್ಲೇ ಆಕ್ರಮಣಕಾರಿ ಆಟಕ್ಕೆ ಮುಂದಾದ ಸ್ಪೇನ್ ಪಡೆಯು ಸತತ ದಾಳಿಯ ಮೂಲಕ ಇಂಗ್ಲೆಂಡ್ ಮೇಲೆ ಒತ್ತಡ ಹೇರುವಲ್ಲಿ ಯಶಸ್ವಿಯಾಗಿದ್ದರು. ಪರಿಣಾಮ ಮೊದಲಾರ್ಧದ ಅರ್ಧ ಭಾಗವನ್ನು ಇಂಗ್ಲೆಂಡ್ ರಕ್ಷಣಾತ್ಮಕ ಆಟಕ್ಕೆ ಕಳೆದರು.



ಇತ್ತ ಮೊದಲಾರ್ಧದಲ್ಲಿ ಸ್ಪೇನ್ ಚೆಂಡಿನ ಮೇಲೆ ಹಿಡಿತ ಸಾಧಿಸಿದ್ದರೂ, ಆಂಗ್ಲರ ರಕ್ಷಣಾ ಕೋಟೆಯನ್ನು ಬೇಧಿಸಲು ಮಾತ್ರ ಸಾಧ್ಯವಾಗಲಿಲ್ಲ. ಪರಿಣಾಮ ಮೊದಲಾರ್ಧವು ಯಾವುದೇ ಗೋಲುಗಳಿಲ್ಲದೇ ಅಂತ್ಯವಾಯಿತು.

**ದ್ವಿತೀಯಾರ್ಧದ ಜಿದ್ದಾಜಿದ್ದು:** ದ್ವಿತೀಯಾರ್ಧದಲ್ಲಿ ಉಭಯ ತಂಡಗಳ ಮುನ್ಪಡೆ ಆಟಗಾರರು ಆಕ್ರಮಣಕಾರಿ ಆಟಕ್ಕೆ ಒತ್ತು ನೀಡಿದ್ದರು. ಅದರಲ್ಲೂ ರಣ ಉತ್ಸಾಹದಲ್ಲಿ ಕಾಣಿಸಿಕೊಂಡ ಸ್ಪೇನ್ ಪಡೆಯ ಫಾರ್ವರ್ಡ್ ಆಟಗಾರರಾದ ಅಲ್ವಾರೊ ಮೊರಾಟಾ, ಡ್ಯಾನಿ ಓಲ್ಮೋ, ಫೆರಾನ್ ಟೊರೆಸ್ ಮತ್ತು ಲ್ಯಾಮಿನ್ ಯಮಲ್ ಉತ್ತಮ ಹೊಂದಾಣಿಕೆಯ ಆಟ ಪ್ರದರ್ಶಿಸಿದರು.

ಈ ಹೊಂದಾಣಿಕೆಯ ಆಟದ ಫಲವಾಗಿ ಪಂದ್ಯದ 47ನೇ ನಿಮಿಷದಲ್ಲಿ ಮೊದಲ ಯಶಸ್ಸು ಪಡೆಯಿತು. ಮೊರಾಟಾ ನೀಡಿದ ಅತ್ಯುತ್ತಮ ಪಾಸ್ ಅನ್ನು ಲೆಫ್ಟ್ ವಿಂಗ್ ಮೂಲಕ ಮುನ್ನುಗ್ಗಿ ಬಂದು ನಿಕೋ ವಿಲಿಯಮ್ಸ್ ಗೋಲಾಗಿ ಪರಿವರ್ತಿಸಿದರು.

ಈ ಗೋಲಿನ ಬಳಿಕ ಇಂಗ್ಲೆಂಡ್ ಫಾರ್ವರ್ಡ್ ಆಟಗಾರರಾದ ಹ್ಯಾರಿ ಕೇನ್, ಸಾಕಾ ಮತ್ತು ಬೆಲ್ಲಿಂಗ್‌ಹ್ಯಾಮ್ ಸತತವಾಗಿ ಸ್ಪೇನ್ ಪೋಸ್ಟ್‌ನತ್ತ ದಾಳಿ ನಡೆಸಿದರು/ ಆದರೆ ಯಶಸ್ಸು ಮಾತ್ರ ದಕ್ಕಲಿಲ್ಲ. ಅದರಲ್ಲೂ ಸ್ಪೇನ್ ತಂಡದ ರಕ್ಷಣಾ ಪಡೆಯು ಆಂಗ್ಲರನ್ನು ಕಟ್ಟಿಹಾಕಲು ಅದ್ಭುತ ಯೋಜನೆ ರೂಪಿಸಿದ್ದರು. ಪರಿಣಾಮ ಹಲವು ಬಾರಿ ಗೋಲು ಬಲೆಯತ್ತ ಸಾಗಿದರೂ ನಿರಾಸೆ ಅನುಭವಿಸಬೇಕಾಯಿತು.

ಆದರೆ 73ನೇ ನಿಮಿಷದಲ್ಲಿ ಬೆಲ್ಲಿಂಗ್‌ಹ್ಯಾಮ್ ನೀಡಿದ ಉತ್ತಮ ಪಾಸ್ ಅನ್ನು ಗೋಲಾಗಿಸುವಲ್ಲಿ ಕೋಲ್ ಪಾಲ್ಮರ್ ಕೊನೆಗೂ ಯಶಸ್ವಿಯಾದರು. ಈ ಗೋಲಿನೊಂದಿಗೆ ಪಂದ್ಯವು 1-1 ಸಮಬಲದೊಂದಿಗೆ ಸಾಗಿತು. ಅಲ್ಲದೆ ಅಂತಿಮ ನಿಮಿಷಗಳ ವೇಳೆ ಉಭಯ ತಂಡಗಳ ನಡುವೆ ಜಿದ್ದಾಜಿದ್ದಿನ ಪೈಪೋಟಿ ಏರ್ಪಟಿತು.

ಈ ಹಂತದಲ್ಲಿ ಸ್ಪೇನ್ ತಂಡದ ಮುನ್ಪಡೆಯಲ್ಲಿ ಕೆಲ ಬದಲಾವಣೆವನ್ನು ಮಾಡಲಾಯಿತು. ಈ ಬದಲಾವಣೆಯಿಂದಾಗಿ ಇಂಗ್ಲೆಂಡ್‌ಗಿಂತ ಸ್ಪೇನ್ ಆಟಗಾರರು ರಣ ಉತ್ಸಾಹದಲ್ಲಿ ಕಾಣಿಸಿಕೊಂಡರು. ಅದರಲ್ಲೂ 86ನೇ ನಿಮಿಷದಲ್ಲಿ ಗೋಲು ಬಲೆಯತ್ತ ತೂರಿಬಂದ ಚೆಂಡನ್ನು ಸ್ಲೈಡ್ ಕಿಕ್‌ನೊಂದಿಗೆ ಗೋಲಾಗಿಸುವಲ್ಲಿ ಮಿಡ್ ಫೀಲ್ಡರ್ ಆಟಗಾರ ಮೈಕೆಲ್ ಒಯರ್ಜಾಬಲ್ ಯಶಸ್ವಿಯಾದರು.

86ನೇ ನಿಮಿಷದಲ್ಲಿ 2-1 ಗೋಲುಗಳ ಅಂತರದಿಂದ ಮುನ್ನಡೆ ಸಾಧಿಸಿದ ಸ್ಪೇನ್ ತಂಡವು ಅಂತಿಮ ಕ್ಷಣದಲ್ಲಿ ರಕ್ಷಣಾತ್ಮಕ ಆಟಕ್ಕೆ ಮುಂದಾದರು. ಆದರೆ ಪಂದ್ಯವನ್ನು ಡ್ರಾಗೊಳಿಸಲು ಇನ್ನಿಲ್ಲದ ಪ್ರಯತ್ನ ನಡೆಸಿದ ಇಂಗ್ಲೆಂಡ್‌ಗೆ ಹಲವು ಅವಕಾಶಗಳು ದೊರೆತರೂ ಚೆಂಡನ್ನು ಗೋಲು ಬಲೆಯೊಳಗೆ ತಲುಪಿಸುವಲ್ಲಿ ವಿಫಲರಾದರು.

ಅದರಲ್ಲೂ ಪಂದ್ಯದ 90ನೇ ನಿಮಿಷದಲ್ಲಿ ಸಿಕ್ಕ ಪೆನಾಲ್ಟಿ ಕಾರ್ನರ್ ಅನ್ನು ಗೋಲಾಗಿಸುವಲ್ಲಿ ಇಂಗ್ಲೆಂಡ್ ಆಟಗಾರರು ಸರ್ವ ಪ್ರಯತ್ನ ನಡೆಸಿದ್ದರು. ಆದರೆ ಗೋಲು ಬಲೆಯ ಲೈನ್‌ನಲ್ಲಿ ನಿಂತು ಡ್ಯಾನಿ ಓಲ್ಮೋ ಹೆಡ್ ಮಾಡುವ ಮೂಲಕ ಚೆಂಡನ್ನು ತಡೆದರು. ಈ ಅದ್ಭುತ ಸೇವ್ ಸ್ಪೇನ್ ತಂಡವನ್ನು ಚಾಂಪಿಯನ್ ಪಟ್ಟಕ್ಕೇರಿಸಿತು ಎಂದರೆ ತಪ್ಪಾಗಲಾರದರು. ಅದರಂತೆ ಅಂತಿಮವಾಗಿ 2-1 ಅಂತರದಿಂದ ಇಂಗ್ಲೆಂಡ್ ತಂಡವನ್ನು ಮಣಿಸಿ ಸ್ಪೇನ್ ಪಡೆಯು ಯುರೋ ಕಪ್ 2024ರ ಚಾಂಪಿಯನ್ ಆಗಿ ಹೊರಹೊಮ್ಮಿದರು.

**ಇಂಗ್ಲೆಂಡ್ ಕನಸು ನುಚ್ಚುನೂರು:** ಇಂಗ್ಲೆಂಡ್ ತಂಡವು ಈವರೆಗೆ ಯುರೋ ಕಪ್ ಗೆದ್ದಿಲ್ಲ. 2021ರ ಫೈನಲ್ ನಲ್ಲಿ ಇಟಲಿ ವಿರುದ್ಧ 3-2 ಅಂತರದಿಂದ ಸೋತಿದ್ದ ಆಂಗ್ಲರು, ಈ ಬಾರಿ ಕೂಡ ಸೋಲೊಪ್ಪಿಕೊಂಡಿದ್ದಾರೆ. ಈ ಮೂಲಕ ಚೊಚ್ಚಲ ಬಾರಿ ಯುರೋ ಕಪ್ ಗೆಲ್ಲುವ ಅವಕಾಶವನ್ನು ಕೈಚೆಲ್ಲಿಕೊಂಡಿದ್ದಾರೆ.

# ಸತತ 2ನೇ ಬಾರಿಗೆ ಅಲ್ಕರಾಜ್‌ಗೆ ವಿಂಬಲ್ಡನ್ ಕಿರೀಟ



ಸತತ 10 ವರ್ಷಗಳ ಕಾಲ ವಿಂಬಲ್ಡನ್ ಸೆಂಟರ್ ಕೋರ್ಟ್‌ನಲ್ಲಿ ಸೋಲಿಲ್ಲದ ಸರದಾರನಾಗಿ ಅರ್ಭಟಿಸಿದ್ದ ನೊವಾಕ್ ಜೊಕೊವಿಕ್‌ಗೆ ಸತತ 2ನೇ ಬಾರಿಗೆ ಸೋಲಾಗಿದೆ. ಕಾರ್ಲೋಸ್ ಅಲ್ಕರಾಜ್ ಮತ್ತೆ ಚಾಂಪಿಯನ್ ಆಗಿದ್ದಾರೆ.

ಭಾನುವಾರ ಲಂಡನ್‌ನ ವಿಂಬಲ್ಡನ್ ಸೆಂಟರ್ ಕೋರ್ಟ್‌ನಲ್ಲಿ ನಡೆದ ಪುರುಷರ ಸಿಂಗಲ್ಸ್ ಫೈನಲ್ ಪಂದ್ಯದಲ್ಲಿ ಕಾರ್ಲೋಸ್ ಅಲ್ಕರಾಜ್ ಸತತ 2ನೇ ಬಾರಿಗೆ ವಿಂಬಲ್ಡನ್ ಕಿರೀಟ ಮುಡಿಗೇರಿಸಿಕೊಂಡಿದ್ದಾರೆ.

ಕಳೆದ ವರ್ಷ ಸಹ ಅಲ್ಕರಾಜ್, ನೊವಾಕ್ ಜೊಕೊವಿಕ್ ಅವರನ್ನೇ ಮಣಿಸಿ ಚೊಚ್ಚಲ ವಿಂಬಲ್ಡನ್ ಕಿರೀಟಕ್ಕೆ ಮುತ್ತಿಟ್ಟಿದ್ದರು. ಈ ಬಾರಿಯೂ ಜೊಕೊವಿಕ್ ಅವರನ್ನೇ ಸೋಲಿಸಿ ಚಾಂಪಿಯನ್ ಆಗಿ ಹೊರಹೊಮ್ಮಿದ್ದು ವಿಶೇಷ. 6-2, 6-2, 7-6 (7/4) ಸೆಟ್‌ಗಳಲ್ಲಿ ಮಣಿಸುವ ಮೂಲಕ ಚಾಂಪಿಯನ್ ಪಟ್ಟವನ್ನು ತಮ್ಮ ಹೆಸರಿನಲ್ಲೇ ಅಲ್ಕರಾಜ್ ಉಳಿಸಿಕೊಂಡಿದ್ದಾರೆ.

ಮೊದಲ ಎರಡು ಸುತ್ತಿನಲ್ಲಿ ಹಿಡಿತ ಸಾಧಿಸಿದ್ದ ಅಲ್ಕರಾಜ್ 6-2, 6-2 ಸೆಟ್‌ಗಳಲ್ಲಿ ಮುನ್ನಡೆ ಕಾಯ್ದುಕೊಂಡರು. ಕೊನೆಯ ಸುತ್ತಿನಲ್ಲಿ ತೀವ್ರ ಪೈಪೋಟಿ ಹೊರತಾಗಿಯೂ 7-6 ಸೆಟ್‌ನಲ್ಲಿ ಜೊಕೊವಿಕ್ ಅವರನ್ನ ಸೋಲಿಸುವಲ್ಲಿ ಯಶಸ್ವಿಯಾದರು.

**3ನೇ ಗ್ರ್ಯಾಂಡ್‌ಸ್ಲಾಮ್ ಕಿರೀಟ:** ಇದು ಅಲ್ಕರಾಜ್ ಗೆದ್ದ 3ನೇ ಗ್ರ್ಯಾಂಡ್ ಸ್ಲ್ಯಾಮ್ ಟ್ರೋಫಿಯೂ ಸಹ ಆಗಿದೆ. 2022ರ ಯುಎಸ್ ಓಪನ್ ಟೂರ್ನಿಯಲ್ಲಿ ತಮ್ಮ ಚೊಚ್ಚಲ ಗ್ರ್ಯಾಂಡ್ ಸ್ಲ್ಯಾಮ್ ಕಿರೀಟ ಜಯಿಸಿದ್ದರು. ಬಳಿಕ 2023ರಲ್ಲಿ ಆಲ್ ಇಂಗ್ಲೆಂಡ್ ಟೆನ್ನಿಸ್ ಕ್ಲಬ್‌ನ ಸೆಂಟರ್ ಕೋರ್ಟ್‌ನಲ್ಲಿ ನಡೆದ ಪಂದ್ಯದಲ್ಲಿ ಜೊಕೊವಿಕ್ ವಿರುದ್ಧ 2ನೇ ಗ್ರ್ಯಾಂಡ್ ಸ್ಲ್ಯಾಮ್ ಕಿರೀಟ ಗೆದ್ದುಕೊಂಡಿದ್ದರು.

# ತನಿಖೆಗೆ ಏಕಸದಸ್ಯ ವಿಚಾರಣಾ ಆಯೋಗ ರಚಿಸಿ ಸರ್ಕಾರ ಆದೇಶ!

**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣದ ತನಿಖೆ ನಡೆಸಲು ನಿವೃತ್ತ ನ್ಯಾಯಾಧೀಶರ ನೇತೃತ್ವದ ಏಕಸದಸ್ಯ ವಿಚಾರಣಾ ಆಯೋಗ ರಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ವಿಧಾನ ಮಂಡಲ ಅಧಿವೇಶನಕ್ಕೆ ಮುನ್ನಾ ದಿನವೇ ನಿವೃತ್ತ ನ್ಯಾಯಾಧೀಶರಾದ ಪಿ.ಎನ್ ದೇಸಾಯಿ ನೇತೃತ್ವದ ಏಕಸದಸ್ಯ ವಿಚಾರಣಾ ಆಯೋಗ ರಚಿಸಿ ಸರ್ಕಾರ ಆದೇಶಿಸಿದೆ. ಅಲ್ಲದೇ ಸಂಪೂರ್ಣಾ ತನಿಖಾ ವರದಿಯನ್ನು 6 ತಿಂಗಳ ಒಳಗೆ ಸಲ್ಲಿಸುವಂತೆ ವಿಚಾರಣಾ ಆಯೋಗಕ್ಕೆ ಸರ್ಕಾರ ಗಡುವು ನೀಡಿದೆ.

ರಾಜ್ಯ ಸರ್ಕಾರದ ಆದೇಶದಲ್ಲಿ ಏನಿದೆ?



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆ ವಿಷಯದಲ್ಲಿ ಆರೋಪಗಳು ಸರ್ಕಾರದ ಗಮನಕ್ಕೆ ಬಂದಿರುವುದಲ್ಲದೇ, ಈ ಕುರಿತು ದಿನ ಪತ್ರಿಕೆಗಳಲ್ಲಿ ಹಾಗೂ ಮಾಧ್ಯಮಗಳಲ್ಲಿಯೂ ಸಹ ವರದಿಯಾಗಿರುತ್ತದೆ. ಈ ಪ್ರಕರಣದಲ್ಲಿ ವಿಚಾರಣೆ ನಡೆಸುವುದು ಸೂಕ್ತವೆಂದು ಮನಗಂಡು, ವಿಚಾರಣಾ ಆಯೋಗ ಕಾಯ್ದೆ 1952 ನಿಯಮ 3ರ ಉಪನಿಯಮ (1) ಅನ್ವಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಿಂದ ವಿಚಾರಣೆ ನಡೆಸಲು ವಿಚಾರಣಾ ಆಯೋಗ ರಚಿಸಲು ಸರ್ಕಾರ ತೀರ್ಮಾನಿಸಿದೆ.

ಈ ಹಿನ್ನೆಲೆಯಲ್ಲಿ ಆರೋಪಗಳ ಬಗ್ಗೆ, ವಿಚಾರಣೆಯನ್ನು ನಡೆಸಲು ವಿಚಾರಣಾ ಆಯೋಗ ಕಾಯ್ದೆ 1952 ನಿಯಮ 3ರ ಉಪನಿಯಮ (1) ಅನ್ವಯ ಪ್ರದತ್ತವಾದ ಅಧಿಕಾರದನ್ವಯ ಸರ್ಕಾರವು ನಿವೃತ್ತ ನ್ಯಾಯಾಧೀಶರಾದ ಪಿ.ಎನ್.ದೇಸಾಯಿ, ಅವರ ನೇತೃತ್ವದಲ್ಲಿ ಏಕಸದಸ್ಯ ವಿಚಾರಣಾ ಆಯೋಗ ರಚಿಸಿದೆ.

ಸದರಿ ವಿಚಾರಣಾ ಆಯೋಗವು ವಿಚಾರಣಾ ಆಯೋಗ ಕಾಯ್ದೆ 1952 ನಿಯಮ ಹಾಗೂ ಸಿವಿಲ್ ಪ್ರೊಸೀಜರ್ ಕೋಡ್ 1952 ನಲ್ಲಿನ ಅವಕಾಶದ ಅಡಿ ವಿಚಾರಣೆ ನಡೆಸಲು ಎಲ್ಲಾ ಅಧಿಕಾರ ಹೊಂದಿರುತ್ತದೆ. ತನಿಖೆಯನ್ನು 6 ತಿಂಗಳೊಳಗಾಗಿ ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸಬೇಕೆಂದು ಸರ್ಕಾರವು ಅಪೇಕ್ಷಿಸುತ್ತದೆ. ವಿಚಾರಣಾ ಆಯೋಗದ ಉಲ್ಲೇಖ ನಿಯಮಗಳನ್ನು ಪ್ರತ್ಯೇಕವಾಗಿ ಹೊರಡಿಲಾಗುತ್ತದೆ.

ಈ ವಿಚಾರಣಾ ಆಯೋಗಕ್ಕೆ ಸಮಗ್ರ ಮಾಹಿತಿ / ದಾಖಲೆಗಳನ್ನು ಒದಗಿಸಿ ಆಯೋಗವು ವಿಚಾರಣೆಯನ್ನು ಪೂರ್ಣಗೊಳಿಸಲು ಹಾಗೂ ತಾಂತ್ರಿಕ ಸಲಹೆಗಾರರು/ಆರ್ಥಿಕ ಸಲಹೆಗಾರರು/ ಆಡಳಿತಾತ್ಮಕ ಸಲಹೆಗಾರರನ್ನು ಒದಗಿಸಲು ನಗರಾಭಿವೃದ್ಧಿ ಇಲಾಖೆ ಹಾಗೂ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ಸಹಕರಿಸತಕ್ಕದ್ದು. ವಿಚಾರಣಾ ಆಯೋಗಕ್ಕೆ ಸಂಬಂಧಪಟ್ಟಂತೆ ನಗರಾಭಿವೃದ್ಧಿ ಇಲಾಖೆಯ ಮತ್ತು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಆಯೋಗವು ಕಾಲಾನುಕಾಲಕ್ಕೆ ವಿಚಾರಣೆಗಾಗಿ ಅಪೇಕ್ಷಿಸುವ ಎಲ್ಲಾ ಕಡತಗಳು/ ದಾಖಲಾತಿಗಳು/ ಇತ್ಯಾದಿಗಳನ್ನು ಒದಗಿಸತಕ್ಕದ್ದು ಹಾಗೂ ವಿಚಾರಣೆ ಸಂದರ್ಭದಲ್ಲಿ ಹಾಜರಿದ್ದು, ವಿಚಾರಣಾ ಆಯೋಗದೊಂದಿಗೆ ಸಂಪೂರ್ಣವಾಗಿ ಸಹಕರಿಸತಕ್ಕದ್ದು ಎಂದು ಆದೇಶ ಪ್ರತಿಯಲ್ಲಿ ತಿಳಿಸಿದೆ.

## ಕಾವೇರಿ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ವರೆಗೂ ಹೋಗೋಣ

# ರಾಜ್ಯ ಸರ್ಕಾರಕ್ಕೆ ಆರ್. ಅಶೋಕ್ ಬೆಂಬಲ!

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸರ್ವಪಕ್ಷಗಳ ಸಭೆಯಲ್ಲಿ ತಮಿಳುನಾಡಿಗೆ ಪ್ರತಿನಿತ್ಯ 1 ಟಿಎಂಸಿ ನೀರಿಗೆ ಬದಲಾಗಿ, ಜುಲೈ 31ರ ವರೆಗೆ 8 ಸಾವಿರ ಕ್ಯುಸೆಕ್ ನೀರು ಹರಿಸಲು ತೀರ್ಮಾನ ಕೈಗೊಳ್ಳಲಾಗಿದೆ. ಈ ಕುರಿತು ಪ್ರತಿಪಕ್ಷ ನಾಯಕ ಆರ್. ಅಶೋಕ್ ಸೇರಿದಂತೆ ಇತರ ನಾಯಕರು ಪ್ರತಿಕ್ರಿಯಿಸಿದ್ದಾರೆ.

ಸಭೆಯ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಆರ್. ಅಶೋಕ್, ಅಗತ್ಯವಿದ್ದರೆ ಕಾವೇರಿ ನೀರಿನ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ವರೆಗೂ ಹೋಗೋಣ ಅಂತ ಸಲಹೆ ಕೊಟ್ಟಿರುವುದಾಗಿ ತಿಳಿಸಿದ್ದಾರೆ.

**ಸುಪ್ರೀಂ ವರೆಗೂ ಹೋಗೋಣ:** ಕಳೆದ ವರ್ಷ ಬರಗಾಲ ಇತ್ತು, ಈಗೇನೋ ಅಲ್ಪಸ್ವಲ್ಪ ಮಳೆ ಬಂದು ನೀರು ಬಂದಿದೆ. ಇಂಥ ಸಮಯದಲ್ಲಿ ಕಾವೇರಿ ನಿರ್ವಹಣಾ ಸಮಿತಿ ಆದೇಶ ಆಘಾತ ತಂದಿದೆ. ಇಂತಹ ಸಮಯದಲ್ಲಿ ನೀರು ಬಿಡುವುದು ಸರಿಯಲ್ಲ ಅಂತ ಹೇಳಿದ್ದೇವೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಬಳಿ ಮೇಲ್ಮನವಿ ಹಾಕಿ ಅಂದಿದ್ದೇವೆ, ಬೇಕಾದ್ರೆ ಕಾವೇರಿ ವಿಚಾರದಲ್ಲಿ ಸುಪ್ರೀಂ ಕೋರ್ಟ್ ವರೆಗೂ ಹೋಗೋಣ ಅಂತ ಸಲಹೆ ಕೊಟ್ಟಿದ್ದೇವೆ.



ಆದರೆ ಸಿಎಂ, ಎಜಿ ಅವರೆಲ್ಲ ಏಕಾಏಕಿ ಆಗಲ್ಲ ಅಂದರೆ ಹಿನ್ನಡೆ ಆಗಲಿದೆ, ಅಲ್ಪಸ್ವಲ್ಪ ಬಿಡೋಣ ಅಂದಿದ್ದಾರೆ. ಜೊತೆಗೆ ನೀರಿನ ಪ್ರಮಾಣ ಕಡಿಮೆ ಮಾಡಲು ಮನವಿ ಮಾಡುವಂತೆ ಪ್ರಧಿಕಾರದ ಬಳಿ ಮನವಿ ಮಾಡುವುದಾಗಿ ಸಿಎಂ ಹೇಳಿದ್ದಾರೆಂದು ತಿಳಿಸಿದ್ದಾರೆ.

**ಮೊದಲು ಕುಚಿಕುಗಳ ಮನವೊಲಿಸಲಿ:** ಇನ್ನು ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಮಾತನಾಡಿ, ತಮಿಳುನಾಡಿನಲ್ಲಿ ಇಂಡಿ ಒಕ್ಕೂಟದ ಸರ್ಕಾರ ಇದೆ. ಅವರನ್ನು ಕಾಂಗ್ರೆಸ್ ಮನವೊಲಿಸಲಿ. ಆಗ ಕೇಂದ್ರವೂ ಬೇಡ, ಸುಪ್ರೀಂ ಕೋರ್ಟೂ ಬೇಡ. ಜಗಳ ಇಲ್ಲದೆಯೇ ಸಮಸ್ಯೆ ಬಗೆಹರಿಸಬಹುದು. ತಮಿಳುನಾಡು ಸರ್ಕಾರ ಇವರ ಕುಚಿಕು, ಹಾಗಾಗಿ ಮೊದಲು ಅವರ ಮನವೊಲಿಸಲಿ. ಕೇಂದ್ರಕ್ಕೆ ನಿಯೋಗ ಅಗತ್ಯವೇ ಇರಲ್ಲ ಎಂದು ಕುಟುಕಿದ್ದಾರೆ.

ಸರ್ವ ಪಕ್ಷ ಸಭೆಗೆ ಇವರು ಆಹ್ವಾನ ಕೊಟ್ಟಿದ್ದು ಒಂದು ದಿನದ ಹಿಂದೆ. ಆದರೂ ನಾವು ಬಂದಿದ್ದೇವೆ, ಅಭಿಪ್ರಾಯ ಹೇಳಿದ್ದೇವೆ. ಮುಂಚಿತವಾಗಿ ಆಹ್ವಾನ ಬಂದಿದ್ದಿದ್ರೆ, ಎಲ್ಲರೂ ಸಮಯ ಸರಿ ಮಾಡಿಕೊಂಡು ಬರುತ್ತಿದ್ದರು. ಇನ್ಮುಂದೆಯಾದರೂ ಇಂತಹ ಸಭೆಗಳಿಗೆ ಮುಂಚಿತವಾಗಿ ಆಹ್ವಾನ ಕೊಡಲಿ ಎಂದು ಸಿ.ಟಿ ರವಿ ಸಲಹೆ ನೀಡಿದ್ದಾರೆ.

**ತಮಿಳಿನಾಡಿನವರು ಸಮರ್ಥವಾಗಿ ವಾದಿಸಿದ್ದಾರೆ:** ಜೆಡಿಎಸ್ ಶಾಸಕ ಜಿ.ಟಿ ದೇವೇಗೌಡ ಮಾತನಾಡಿ, ಕಾವೇರಿ ಪ್ರಾಧಿಕಾರದಲ್ಲಿ ಸಮರ್ಥವಾಗಿ ವಾದ ಮಾಡುವಲ್ಲಿ ನಮ್ಮವರು ವಿಫಲರಾಗಿದ್ದಾರೆ. ತಮಿಳಿನಾಡಿನವರು ಸಮರ್ಥವಾಗಿ ವಾದ ಮಾಡಿದ್ದರಿಂದ ಅವರ ಪರವಾಗಿ ತೀರ್ಪು ಬರ್ತಿದೆ. ಕಬಿನಿಯಲ್ಲಿ ನೀರು ತುಂಬಿದೆ ಡ್ಯಾಮ್ ಸುರಕ್ಷತೆ ದೃಷ್ಟಿಯಿಂದ ನೀರು ಬಿಟ್ಟಿದ್ದೇವೆ. ನೀರಿಲ್ಲದಿದ್ದಾಗ ಏನು ಮಾಡಬೇಕು ಅನ್ನೋದರ ಬಗ್ಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದಲ್ಲಿ ಕೇಳಬೇಕು. ಸಮರ್ಥವಾಗಿ ಕಾವೇರಿ ಪ್ರಾಧಿಕಾರದಲ್ಲಿ ವಾದವನ್ನ ಮಂಡಿಸಬೇಕು. ಅದಕ್ಕಾಗಿ ಮೇಲ್ಮನವಿ ಸಲ್ಲಿಸಲು ಸಲಹೆ ನೀಡಿದ್ದೇವೆ ಎಂದು ವಿವರಿಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com